# ಅಕ್ಕಮಹಾದೇವಿ ವಚನಗಳು

1
ಅಂಗ ಕ್ರಿಯಾಲಿಂಗವ ವೇಧಿಸಿ,
ಅಂಗ ಲಿಂಗದೊಳಗಾಯಿತ್ತು.
ಮನ ಅರಿವ ಬೆರಸಿ, ಜಂಗಮ ಸೇವೆಯ ಮಾಡಿ,
ಮನ ಜಂಗಮಲಿಂಗದೊಳಗಾಯಿತ್ತು.
ಭಾವ ಗುರುಲಿಂಗದೊಳಗೆ ಬೆರಸಿ, ಮಹಾಪ್ರಸಾದವ ಭೋಗಿಸಿ,
ಭಾವ ಗುರುಲಿಂಗದೊಳಗಾಯಿತ್ತು.
ಚೆನ್ನಮಲ್ಲಿಕಾರ್ಜುನಾ,
ನಿಮ್ಮ ಒಲುಮೆಯಿಂದ ಸಂದಳಿದು
ಸ್ವಯಲಿಂಗಿಯಾದೆನಯ್ಯಾ ಪ್ರಭುವೆ.
2
ಅಂಗದಲ್ಲಿ ಆಚಾರವ ತೋರಿದ
ಆ ಆಚಾರವೇ ಲಿಂಗವೆಂದರುಹಿದ.
ಪ್ರಾಣದಲ್ಲಿ ಅರಿವ ನೆಲೆಗೊಳಿಸಿದ
ಆ ಅರಿವೆ ಜಂಗಮವೆಂದು ತೋರಿದ.
ಚೆನ್ನಮಲ್ಲಿಕಾರ್ಜುನನ ಹೆತ್ತ ತಂದೆ ಸಂಗನಬಸವಣ್ಣನು
ಎನಗೀ ಕ್ರಮವನರುಹಿದನಯ್ಯ ಪ್ರಭುವೆ.
3
ಅಂಗದ ಭಂಗವ ಲಿಂಗಮುಖದಿಂದ ಗೆಲಿದೆ.
ಮನದ ಭಂಗವ ಅರುಹಿನ ಮುಖದಿಂದ ಗೆಲಿದೆ.
ಜೀವದ ಭಂಗವ ಶಿವಾನುಭಾವದಿಂದ ಗೆಲಿದೆ.
ಕರಣದ ಕತ್ತಲೆಯ ಬೆಳಗನುಟ್ಟು ಗೆಲಿದೆ.
ಜವ್ವನದ ಹೊರಮಿಂಚಿನಲ್ಲಿ ನಿಮ್ಮ ಕಣ್ಣಿಂಗೆ ತೋರುವ
ಕಾಮನ ಸುಟ್ಟುರುಹಿದ ಭಸ್ಮವ ನೋಡಯ್ಯಾ ?
ಚೆನ್ನಮಲ್ಲಿಕಾರ್ಜುನ,
ಕಾಮನಕೊಂದು ಮನಸಿಜನಾಗುಳುಹಿದಡೆ
ಮನಸಿಜನ ತಲೆಯ ಬರಹವ ತೊಡೆದೆನು.

4
ಅಂಗದೊಳಗೆ ಅಂಗವಾಗಿ, ಅಂಗವ ಲಿಂಗೈಕ್ಯವ ಮಾಡಿದೆ.
ಮನದೊಳಗೆ ಮನವಾಗಿ, ಮನವ ಲಿಂಗೈಕ್ಯವ ಮಾಡಿದೆ.
ಭಾವದೊಳಗೆ ಭಾವವಾಗಿ, ಭಾವವ ಲಿಂಗೈಕ್ಯವ ಮಾಡಿದೆ.
ಅರಿವಿನೊಳಗೆ ಅರಿವಾಗಿ, ಅರಿವ ಲಿಂಗೈಕ್ಯವ ಮಾಡಿದೆ.
ಜ್ಞಾನದೊಳಗೆ ಜ್ಞಾನವಾಗಿ, ಜ್ಞಾನವ ಲಿಂಗೈಕ್ಯವ ಮಾಡಿದೆ.
ಕ್ರೀಗಳೆಲ್ಲವ ನಿಲಿಸಿ ಕ್ರಿಯಾತೀತವಾಗಿ,
ನಿಃಪತಿ ಲಿಂಗೈಕ್ಯವ ಮಾಡಿದೆ.

Downloaded from: **http://www.lingayatreligion.com**

ನಾನೆಂಬುದ ನಿಲಿಸಿ, ನೀನೆಂಬುದ ಕೆಡಿಸಿ,
ಉಭಯವ ಲಿಂಗೈಕ್ಯವ ಮಾಡದೆ.
ಚೆನ್ನಮಲ್ಲಿಕಾರ್ಜುನಯ್ಯನೊಳಗೆ ನಾನಳಿದೆನಾಗಿ,
ಲಿಂಗವೆಂಬ ಘನವು ಎನ್ನಲ್ಲಿ
ಅಳಿಯಿತ್ತು ಕಾಣಾ ಸಂಗನಬಸವಣ್ಣಾ.
5
ಅಂಗ, ಲಿಂಗವ ವೇಧಿಸಿ, ಅಂಗ ಲಿಂಗದೊಳಗಾಯಿತ್ತು.
ಮನ, ಲಿಂಗವ ವೇಧಿಸಿ, ಮನ ಲಿಂಗದೊಳಗಾಯಿತ್ತು.
ಭಾವ, ಲಿಂಗವ ವೇಧಿಸಿ, ಭಾವ ಲಿಂಗದೊಳಗಾಯಿತ್ತು.
ಚೆನ್ನಮಲ್ಲಿಕಾರ್ಜುನಾ,
ನಿಮ್ಮ ಒಲುಮೆಯ ಸಂಗದಲ್ಲಿರ್ದು ಸ್ವಯಲಿಂಗವಾಯಿತ್ತು.
6
ಅಂಗವ ಲಿಂಗಮುಖದಲ್ಲಿ ಅರ್ಪಿಸಿ,
ಅಂಗ ಅನಂಗವಾಯಿತ್ತು.
ಮನವ ಅರಿವಿಂಗರ್ಪಿಸಿ, ಮನ ಲಯವಾಯಿತ್ತು.
ಭಾವವ ತೃಪ್ತಿಗರ್ಪಿಸಿ, ಭಾವ ಬಯಲಾಯಿತ್ತು.
ಅಂಗ ಮನ ಭಾವವಳಿದ ಕಾರಣ
ಕಾಯ ಅಕಾಯವಾಯಿತ್ತು.
ಎನ್ನ ಕಾಯದ ಸುಖಭೋಗವ ಲಿಂಗವೆ ಭೋಗಿಸುವನಾಗಿ,
ಶರಣಸತಿ ಲಿಂಗಪತಿಯಾದೆನು.
ಇದು ಕಾರಣ, ಚೆನ್ನಮಲ್ಲಿಕಾರ್ಜುನನೆಂಬ ಗಂಡನ
ಒಳಹೊಕ್ಕು ಬೆರಸಿದೆನು.
7
ಅಂಗವಿಕಾರಸಂಗವ ಮರೆದು,
ಲಿಂಗವನೊಡಗೂಡುತಿಪ್ಪವರ ತೋರಾ ಎನಗೆ.
ಕಾಮವಿಕಾರಕತ್ತಲೆಯಳಿದು,
ಭಕ್ತಿಪ್ರಾಣವಾಗಿಪ್ಪವರ ತೋರಾ ಎನಗೆ.
ತ್ರಿಕರಣ ಶುದ್ಧವಾಗಿ ನಿಮ್ಮ ನೆರೆ ನಂಬಿದ
ಸದ್ಭಕ್ತರ ತೋರಾ ಎನಗೆ ಚೆನ್ನಮಲ್ಲಿಕಾರ್ಜುನಾ.
8
ಅಂಗಸಂಗದಲ್ಲಿ ಲಿಂಗಸಂಗಿಯಾದೆನು.
ಲಿಂಗಸಂಗದಲ್ಲಿ ಅಂಗಸಂಗಿಯಾದೆನು.
ಉಭಯಸಂಗವನೂ ಅರಿಯದೆ ಪರಿಣಾಮಿಯಾದೆನು.
ನುಡಿಯ ಗಡಣವ ಮರೆದು ತೆರಹಿಲ್ಲದಿದ್ದೆನು.
ಎನ್ನ ದೇವ ಚೆನ್ನಮಲ್ಲಿಕಾರ್ಜುನನ ಬೆರಸಿದ ಬಳಿಕ
ಎನ್ನ ನಾನು ಏನೆಂದೂ ಅರಿಯೆನಯ್ಯಾ.
9
ಅಂಗೈಯೊಳಗಣ ಲಿಂಗವ ಪೂಜಿಸುತ್ತ,
ಮಂಗಳಾರತಿಗಳನು ತೊಳಗಿ ಬೆಳಗುತ್ತಲಿರ್ದ ನೋಡಯ್ಯಾ.

Downloaded from: **http://www.lingayatreligion.com**

ಕಂಗಳ ನೋಟ, ಕರುವಿಟ್ಟ ಭಾವ, ಹಿಂಗದ ಮೋಹ
ತೆರಹಿಲ್ಲದಿರ್ದ ನೋಡಯ್ಯಾ,
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮನಗಲದ ಪೂಜೆ ಅನುವಾಯಿತ್ತೆನಗೆ.
10
ಅಂದೂ ನೀನೆ, ಇಂದೂ ನೀನೆ, ಏಂದೂ ನೀನೆ, ಕೇಳಾ ತಂದೆ.
ನಿನ್ನ ಬೆಂಬಳಿವಿಡಿದ ಹಳೆಮಗಳಾನಯ್ಯ
ಅಂದೂ ಇಂದೂ ಎಂದೂ ನಿನ್ನ ನಂಬಿದ ಒಲವಿನ ಶಿಶು ನಾನಯ್ಯ.
ಒಂದಲ್ಲದೆ ಎರಡಯೆನಯ್ಯಾ.
ಎನ್ನ ತಂದೆ ಕೇಳಾ, ಚೆನ್ನಮಲ್ಲಿಕಾರ್ಜುನಾ
ನಿಮ್ಮ ಎಂಜಲನುಂಬ ಹಳೆಯವಳಾನಯ್ಯಾ.
11
ಅಕ್ಕ ಕೇಳಕ್ಕಾ, ನಾನೊಂದು ಕನಸ ಕಂಡೆ.
ಚಿಕ್ಕ ಚಿಕ್ಕ ಕೆಂಜೆಡೆಗಳ ಸುಲಿಪಲ್ಲ ಗೊರವನು
ಬಂದೆನ್ನ ನೆರೆದ ನೋಡವ್ವಾ.
ಆತನನಪ್ಪಿಕೊಂಡು ತಳವೆಳಗಾದೆನು.
ಚೆನ್ನಮಲ್ಲಿಕಾರ್ಜುನನ ಕಂಡು
ಕಣ್ಣಮುಚ್ಚಿ ತೆರೆದು ತಳವೆಳಗಾದೆನು.
12
ಅಕ್ಕ ಕೇಳೌ, ನಾನೊಂದು ಕನಸ ಕಂಡೆ.
ಅಕ್ಕಿ ಅಡಕೆ ಓಲೆ ತೆಂಗಿನಕಾಯ ಕಂಡೆ.
ಚಿಕ್ಕ ಚಿಕ್ಕ ಜಡೆಗಳ ಸುಲಿಪಲ್ಲ ಗೊರವನು
ಭಿಕ್ಷಕ್ಕೆ ಮನೆಗೆ ಬಂದುದ ಕಂಡೆನವ್ವಾ.
ಮಿಕ್ಕು ಮೀರಿ ಹೋಹನ ಬೆಂಬತ್ತಿ ಕೈವಿಡಿದೆನು.
ಚೆನ್ನಮಲ್ಲಿಕಾರ್ಜುನನ ಕಂಡು ಕಣ್ದೆರೆದೆನು.

13
ಅಕ್ಕಟಕ್ಕಟಾ, ಸಂಸಾರದ ಹಗರಣ ಬಂದಾಡಿತ್ತಲ್ಲಾ ?
ಅಪ್ಪಾ ಬೊಪ್ಪಾ ಎಂಬ ಚೋಹವು
ಅದು ಮೊಟ್ಟಮೊದಲಲ್ಲಿ ಬಂದಾಡಿತ್ತು.
ತುಪ್ಪುಳು ತೊಡೆದಂತೆ ಮೀಸೆಯ ಚೋಹವು
ಅದು ನಟ್ಟನಡುವೆ ಬಂದಾಡಿತ್ತು.
ಮುಪ್ಪು ಮುಪ್ಪು ಎಂಬ ಚೋಹವು
ಅದು ಕಟ್ಟಕಡೆಯಲಿ ಬಂದಾಡಿತ್ತು.
ನಿಮ್ಮ ನೋಟವು ತೀರಲೊಡನೆ
ಜಗದಾಟವು ತೀರಿತ್ತು ಕಾಣಾ ಚೆನ್ನಮಲ್ಲಿಕಾರ್ಜುನಾ.
14
ಅಕ್ಕಿಯಿಲ್ಲದ ತುಷಕ್ಕೆ ಅಗ್ಘವಣಿಯನೆರೆದಡೆ
ಅದೆಂದಿಂಗೆ ಬೆಳೆದು ಫಲವಪ್ಪುದಯ್ಯಾ

Downloaded from: **http://www.lingayatreligion.com**

ಅರಿವಿಲ್ಲದವರಿಗೆ ಆಚಾರವಿದ್ದಡೆ
ಅರಕೆಗೆಟ್ಟು ಸುಖವೆಂದಪ್ಪುದಯ್ಯಾ
ಹೊರೆದ ಪರಿಮಳ ಸ್ಥಿರವಾಗಬಲ್ಲುದೆ
ಎನ್ನದೇವ ಚೆನ್ನಮಲ್ಲಿಕಾರ್ಜುನನನರಿಯದವರಿಗೆ
ಆಚಾರವಿಲ್ಲ ಕಾಣಿರಣ್ಣಾ
15
ಅಗ್ನಿ ಸರ್ವವ್ಯಾಪಕನಾಗಿರುವಂತೆ,
ಚಿದ್ವಹ್ನಿರೂಪನಾದ ಶಿವನು ಸರ್ವವ್ಯಾಪಕನಾಗಿರ್ಪನು.
ಹೃದಯಕಮಲವು ಮುಕುರದೋಪಾದಿಯಲ್ಲಿ ಪ್ರಕಾಶಿಸುತಿರ್ದಪುದು.
ಆ ಕನ್ನಡಿಯೋಪಾದಿಯ ಹೃದಯಕಮಲದಲ್ಲಿ
ವ್ಯಾಪಕನಾದ ಶಿವನು,
ಆತ್ಮನೆನಿಸಿಕೊಂಡು ಪ್ರತಿಬಿಂಬಿಸುತಿರ್ದಪನು.
ವೇದೋಪನಿಷದ್ಗಾಯತ್ರಿ ಪ್ರಸಿದ್ಧವಾದೀ ರಹಸ್ಯವ
ಗುರೂಪದೇಶದಿಂ ತಿಳಿವುದಯ್ಯ
ಶ್ರೀ ಚೆನ್ನಮಲ್ಲಿಕಾರ್ಜುನದೇವಾ.
16
ಅಘಟಿತ ಘಟಿತನ ಒಲವಿನ ಶಿಶು
ಕಟ್ಟಿದೆನು ಜಗಕ್ಕೆ ಬಿರಿದನು.
ಕಾಮ ಕ್ರೋಧ ಲೋಭ ಮೋಹ ಮದ ಮತ್ಸರಂಗಳಿಗೆ
ಇಕ್ಕಿದೆನು ಕಾಲಲಿ ತೊಡರನು.
ಗುರುಕೃಪೆಯೆಂಬ ತಿಗುರನಿಕ್ಕಿ
ಮಹಾಶರಣೆಂಬ ತಿಲಕವನಿಕ್ಕಿ
ನಿನ್ನ ಕೊಲುವೆ ಗೆಲುವೆ ಶಿವಶರಣೆಂಬ ಅಲಗ ಕೊಂಡು.
ಬಿಡು ಬಿಡು ಕರ್ಮವೆ, ನಿನ್ನ ಕೊಲ್ಲದೆ ಮಾಣೆನು.
ಕೆಡಹಿಸಿಕೊಳ್ಳದೆನ್ನ ನುಡಿಯ ಕೇಳಾ.
ಕೆಡದ ಶಿವಶರಣೆಂಬ ಅಲಗನೆ ಕೊಂಡು
ನಿನ್ನ ಕೊಲುವೆ ಗೆಲುವೆ ನಾನು.
ಬ್ರಹ್ಮಪಾಶವೆಂಬ ಕಳನನೆ ಸವರಿ,
ವಿಷ್ಣು ಮಾಯೆಯೆಂಬ ಎಡೆಗೋಲನೆ ನೂಕಿ,
ಎನ್ನೊಡೆಯ ಚೆನ್ನಮಲ್ಲಿಕಾರ್ಜುನಯ್ಯ
ತಲೆದೂಗಲಿ ಕಾದುವೆನು ನಾನು.
17
ಅತ್ತೆ ಮಾಯೆ, ಮಾವ ಸಂಸಾರಿ,
ಮೂವರು ಮೈದುನರು ಹುಲಿಯಂತವದಿರು,
ನಾಲ್ವರು ನಗೆವೆಣ್ಣು ಕೇಳು ಕೆಳದಿ.
ಐವರು ಭಾವದಿರನೊಯ್ವ ದೈವವಿಲ್ಲ.
ಆರು ಪ್ರಜೆಯತ್ತಿಗೆಯರ ಮೀರಲಾರೆನು.
ತಾಯೆ, ಹೇಳುವಡೆ ಏಳು ಪ್ರಜೆ ತೊತ್ತಿರ ಕಾಹು.
ಕರ್ಮವೆಂಬ ಗಂಡನ ಬಾಯ ಟೊಣೆದು,

Downloaded from: **http://www.lingayatreligion.com**

ಹಾದರವನಾಡುವೆನು ಹರನಕೊಡೆ.
ಮನವೆಂಬ ಸಖಿಯ ಪ್ರಸಾದದಿಂದ
ಅನುಭಾವವ ಕಲಿತೆನು ಶಿವನೊಡನೆ
ಕರಚೆಲುವ ಶ್ರೀಶೈಲ ಚೆನ್ನಮಲ್ಲಿಕಾರ್ಜುನನೆಂಬ
ಸಜ್ಜನ ಗಂಡನ ಮಾಡಿಕೊಂಡೆ.
18
ಅನ್ನವ ನೀಡುವವರಿಂಗೆ ಧಾನ್ಯವೆಸೆವ ಲೋಕ.
ಅರ್ಥವ ಕೊಡುವವರಿಂಗೆ ಪಾಷಾಣವೆಸೆವ ಲೋಕ.
ಹೆಣ್ಣು ಹೊನ್ನು ಮಣ್ಣು ಮೂರನೂ
ಕಣ್ಣಿನಲಿ ನೋಡಿ, ಕಿವಿಯಲಿ ಕೇಳಿ,
ಕೈಯಲಿ ಮುಟ್ಟಿ, ಮಾಡುವ ಭಕ್ತಿ
ಸಣ್ಣವರ ಸಮಾರಾಧನೆಯಾಯಿತ್ತು.
ತನ್ನನಿತ್ತು ತುಷ್ಟಿವಡೆವರನೆನಗೆ ತೋರಾ
ಶ್ರೀಗಿರಿ ಚೆನ್ನಮಲ್ಲಿಕಾರ್ಜುನಾ.
19
ಅನಿಮಿಷನಲ್ಲಮಯ್ಯ, ಮರುಳಶಂಕರಯ್ಯ,
ಕೋಲಶಾಂತಯ್ಯ, ಮಾದಾರ ಧೂಳಯ್ಯ,
ಮಿಂಡಮಲ್ಲಿನಾಥ, ಚೆನ್ನಬಸವಣ್ಣ,
ಚೇರಮರಾಯ, ತೆಲುಗ ಜೊಮ್ಮಣ್ಣ, ಕಿನ್ನರಯ್ಯ,
ಹಲಾಯುಧ, ದಾಸಿಮಯ್ಯ, ಭಂಡಾರಿ, ಬಸವರಾಜ ಮುಖ್ಯವಾದ
ಚೆನ್ನಮಲ್ಲಿಕಾರ್ಜುನನ ಶರಣರಿಗೆ ನಮೋ ನಮೋ ಎಂಬೆನು.
20
ಅನುತಾಪದೊಡಲಿಂದೆ ಬಂದ ನೋವನುಂಬವರು
ಒಡಲೊ, ಪ್ರಾಣವೊ, ಆರು ಹೇಳಾ
ಎನ್ನೊಡಲಿಂಗೆ ನೀನು ಪ್ರಾಣವಾದ ಬಳಿಕ
ಎನ್ನ ಒಡಲ ಸುಖ ದುಃಖವಾರ ತಾಗುವುದು ಹೇಳಯ್ಯಾ ?
ಚೆನ್ನಮಲ್ಲಿಕಾರ್ಜುನಯ್ಯಾ,
ಎನ್ನ ನೊಂದ ನೋವು, ಬೆಂದ ಬೇಗೆ,
ನಿಮ್ಮ ತಾಗದೆ ಹೋಹುದೆ ಅಯ್ಯಾ
21
ಅಪಾರ ಘನಗಂಭೀರದ ಅಂಬುದಿಯಲ್ಲಿ
ತಾರಾಪಥವಂ ನೋಡಿ ನಡೆಯೆ,
ಭೈತ್ರದಿಂದ ದ್ವೀಪ ದ್ವೀಪಾಂತರಕ್ಕೆ
ಸಕಲ ಪದಾರ್ಥವನೆಯ್ದಿಸುವುದು,
ಎನ್ನ ದೇವ ಚೆನ್ನಮಲ್ಲಿಕಾರ್ಜುನಯ್ಯನ
ಸಮೀಪ ತೂರ್ಯಸಂಭಾಷಣೆಯನರಿದಡೆ
ಮುನ್ನಿನಲ್ಲಿಗೆಯ್ದಿಸುವುದು.
22
ಅಮೃತವನುಂಬ ಶಿಶುವಿಂಗೆ ವಿಷವನೂಡುವರೆ ಅಯ್ಯಾ

Downloaded from: **http://www.lingayatreligion.com**

ನೆಳಲ ತಂಪಿನಲ್ಲಿ ಬೆಳೆದ ಸಸಿಗೆ ಉರಿಯ ಬೇಲಿಯ ಕಟ್ಟುವರೆ ಅಯ್ಯಾ
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಕರುಣದ ಕಂದನೊಡನೆ
ಸೂನೆಗಾರರ ಮಾತನಾಡಿಸುವರೆ ಅಯ್ಯಾ
23
ಅಮೇಧ್ಯದ ಮಡಿಕೆ, ಮೂತ್ರದ ಕುಡಿಕೆ,
ಎಲುವಿನ ತಡಿಕೆ, ಕೀವಿನ ಹಡಿಕೆ
ಸುಡಲೀ ದೇಹವ ; ಒಡಲುವಿಡಿದು ಕೆಡದಿರು,
ಚೆನ್ನಮಲ್ಲಿಕಾರ್ಜುನನನರಿಯದ ಮರುಳೆ.
24
ಅಯ್ಯಾ, ಕತ್ತಲೆಯ ಕಳೆದುಳಿದ ಸತ್ಯಶರಣರ
ಪರಿಯನೇನೆಂಬೆನಯ್ಯಾ
ಘನವನೊಳಕೊಂಡ ಮನದ ಮಹಾನುಭಾವಿಗಳ
ಬಳಿವಿಡಿದು ಬದುಕುವೆನಯ್ಯಾ.
ಅಯ್ಯಾ, ನಿನ್ನಲ್ಲಿ ನಿಂದು ಬೇರೊಂದರಿಯದ
ಲಿಂಗಸುಖಿಗಳ ಸಂಗದಲ್ಲಿ ದಿನವ ಕಳೆಯಿಸಯ್ಯಾ
ಚೆನ್ನಮಲ್ಲಿಕಾರ್ಜುನಾ.
25
ಅಯ್ಯಾ, ಚಿದಂಗ ಚಿದ್ಘನಲಿಂಗ
ಶಕ್ತಿ ಭಕ್ತಿ ಹಸ್ತ ಮುಖ ಪದಾರ್ಥ ಪ್ರಸಾದ
ಎಂಬಿವಾದಿಯಾದ ಸಮಸ್ತ ಸಕೀಲಂಗಳ ನೆಲೆ ಕಲೆಯರಿಯದೆ,
ಜಿಹ್ವಾಲಂಪಟಕ್ಕೆ ಆಹ್ವಾನಿಸಿ, ಗುಹ್ಯಾಲಂಪಟಕ್ಕೆ ವಿಸರ್ಜಿಸಿ,
ಸಕಲೇಂದ್ರಿಯಮುಖದಲ್ಲಿ ಮೋಹಿಯಾಗಿ,
ಸದ್ಗುರುಕರುಣಾಮೃತರಸ ತಾನೆಂದರಿಯದೆ
ಬರಿದೆ ಭಕ್ತ ಮಾಹೇಶ್ವರ ಪ್ರಸಾದಿ ಪ್ರಾಣಲಿಂಗಿ ಶರಣ ಐಕ್ಯ
ಗುರುಚರಪರವೆಂದು ಬೊಗಳುವ ಕುನ್ನಿಗಳ ನೋಡಿ
ಎನ್ನ ಮನ ಬೆರಗು ನಿಬ್ಬೆರಗು ಆಯಿತ್ತಯ್ಯಾ,
ಚೆನ್ನಮಲ್ಲಿಕಾರ್ಜುನಾ.
26
ಅಯ್ಯಾ, ತನ್ನ ತಾನರಿಯಬೇಕಲ್ಲದೆ,
ತನ್ನಲ್ಲಿ ಅರಿವು ಸ್ವಯವಾಗಿರಲು ಅನ್ಯರಲ್ಲಿ ಕೇಳಲುಂಟೆ
ಚೆನ್ನಮಲ್ಲಿಕಾರ್ಜುನಾ,
ನೀನರಿವಾಗಿ ಎನಗೆ ಮುಂದುದೋರಿದ ಕಾರಣ
ನಿಮ್ಮಿಂದ ನಿಮ್ಮನರಿವೆನು.
27
ಅಯ್ಯಾ, ನಿನ್ನ ಮುಟ್ಟಿ ಮುಟ್ಟದೆನ್ನ ಮನ ನೋಡಾ.
ಬಿಚ್ಚಿ ಬೀಸರವಾಯಿತ್ತೆನ್ನ ಮನ.
ಹೊಳಲ ಸುಂಕಿಗನಂತೆ ಹೊದಕುಳಿಗೊಂಡಿತ್ತೆನ್ನ ಮನ.
ಎರಡೆಂಬುದ ಮರೆದು ಬರಡಾಗದೆನ್ನ ಮನ.

Downloaded from: **http://www.lingayatreligion.com**

ನೀನು ಆನಪ್ಪ ಪರಿಯೆಂತು ಹೇಳಾ, ಚೆನ್ನಮಲ್ಲಿಕಾರ್ಜುನಾ ?
28
ಅಯ್ಯಾ, ನಿಮ್ಮ ಅನುಭಾವಿಗಳ ಸಂಗದಿಂದ
ಎನ್ನ ತನು ಶುದ್ಧವಾಯಿತ್ತು.
ಅಯ್ಯಾ, ನಿಮ್ಮ ಅನುಭಾವಿಗಳ ಸಂಗದಿಂದ
ಎನ್ನ ಮನ ಶುದ್ಧವಾಯಿತ್ತು.
ಅಯ್ಯಾ, ನಿಮ್ಮ ಅನುಭಾವಿಗಳ ಸಂಗದಿಂದ
ಎನ್ನ ಪ್ರಾಣ ಶುದ್ಧವಾಯಿತ್ತು.
ಅಯ್ಯಾ, ನಿಮ್ಮ ಅನುಭಾವಿಗಳು
ಎನ್ನ ಒರೆದೊರೆದು ಆಗುಮಾಡಿದ ಕಾರಣ
ಚೆನ್ನಮಲ್ಲಿಕಾರ್ಜುನಯ್ಯಾ, ನಿಮಗಾನು ತೊಡಿಗೆಯಾದೆನು.

29
ಅಯ್ಯಾ, ನಿಮ್ಮ ಶರಣರ ಕೂಡಿದ
ಸುಖವನುಪಮೆಗೆ ತರಬಾರದಯ್ಯಾ.
ಅಯ್ಯಾ, ನಿಮ್ಮ ಮಹಂತರ ಕೂಡಿ ಅಗಲುವ ಧಾವತಿಗಿಂತ
ಸಾವುದೇ ಕರಲೇಸಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮನರುಹಿದ ಮಹಿಮರನಗಲಿ
ಆನು ನಿಲ್ಲಲಾರೆನಯ್ಯಾ.
30
ಅಯ್ಯಾ, ನಿಮ್ಮ ಶರಣರ ಬರವಿಂಗೆ
ಗುಡಿ ತೋರಣವ ಕಟ್ಟುವೆ.
ಅಯ್ಯಾ, ನಿಮ್ಮ ಶರಣರ ಬರವಿಂಗೆ
ಮುಡುಹಿನಲ್ಲಿ ಪಟ್ಟವ ಕಟ್ಟುವೆ.
ಅಯ್ಯಾ, ನಿಮ್ಮ ಶರಣರೆನ್ನ ಮನೆಗೆ ಬಂದಡೆ,
ಅವರ ಶ್ರೀಪಾದವನೆನ್ನ ಹೃದಯದಲ್ಲಿ ಬಗೆದಿಟ್ಟುಕೊಂಬೆ,
ಕಾಣಾ ಚೆನ್ನಮಲ್ಲಿಕಾರ್ಜುನಾ.
31
ಅಯ್ಯಾ, ನಿಮ್ಮ ಶರಣರು ಮೆಟ್ಟಿದ ಧರೆ ಪಾವನವಯ್ಯಾ.
ಅಯ್ಯಾ, ನಿಮ್ಮ ಶರಣರಿದ್ದ ಪುರವೆ ಕೈಲಾಸಪುರವಯ್ಯಾ.
ಅಯ್ಯಾ, ನಿಮ್ಮ ಶರಣರು ನಿಂದುದೆ ನಿಜನಿವಾಸವಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣ ಬಸವಣ್ಣನಿದ್ದ ಕ್ಷೇತ್ರ ಅವಿಮುಕ್ತ ಕ್ಷೇತ್ರವಾಗಿ,
ಆನು ಸಂಗನಬಸವಣ್ಣನ ಶ್ರೀಪಾದಕ್ಕೆ
ನಮೋ ನಮೋ ಎನುತಿರ್ದೆನು.
32
ಅಯ್ಯಾ, ನಿಮ್ಮ ಸಜ್ಜನ ಸದ್ಭಕ್ತರ ಕಂಡೆನಾಗಿ,
ಎನ್ನ ಕಂಗಳ ಪಟಲ ಹರಿಯಿತ್ತಿಂದು.

Downloaded from: **http://www.lingayatreligion.com**

ಅಯ್ಯಾ, ನಿಮ್ಮ ಸಜ್ಜನಸದ್ಭಕ್ತರ ಶ್ರೀಚರಣಕ್ಕೆರಗಿದೆನಾಗಿ,
ಎನ್ನ ಹಣೆಯ ಲಿಖಿತ ತೊಡೆಯಿತ್ತಿಂದು.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣ ಸಂಗನಬಸವಣ್ಣನ ಪಾದವ ಕಂಡು
ಮಿಗೆ ಮಿಗೆ ನಮೋ ನಮೋ ಎನುತಿರ್ದೆನಯ್ಯಾ.
33
ಅಯ್ಯಾ, ನೀನು ಕೇಳಿದಡೆ ಕೇಳು, ಕೇಳದಡೆ ಮಾಣು
ಆನು ನಿನ್ನ ಹಾಡಿದಲ್ಲದೆ ಸೈರಿಸಲಾರೆನಯ್ಯಾ.
ಅಯ್ಯಾ, ನೀನು ನೋಡಿದಡೆ ನೋಡು, ನೋಡದಡೆ ಮಾಣು
ಆನು ನಿನ್ನ ನೋಡಿ ಹಿಗ್ಗಿ ಹಾರೈಸಿದಲ್ಲದೆ ಸೈರಿಸಲಾರೆನಯ್ಯಾ.
ಅಯ್ಯಾ, ನೀನು ಮಚ್ಚಿದೆಡೆ ಮಚ್ಚು, ಮಚ್ಚದಡೆ ಮಾಣು
ಆನು ನಿನ್ನನಪ್ಪಿದಲ್ಲದೆ ಸೈರಿಸಲಾರೆನಯ್ಯಾ.
ಅಯ್ಯಾ, ನೀನು ಒಲಿದಡೆ ಒಲಿ, ಒಲಿಯದಡೆ ಮಾಣು
ಆನು ನಿನ್ನ ಪೂಜಿಸಿದಲ್ಲದೆ ಸೈರಿಸಲಾರೆನಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ, ಆನು ನಿಮ್ಮನರ್ಚಿಸಿ ಪೂಜಿಸಿ
ಹರುಷದೊಳೋಲಾಡುವೆನಯ್ಯಾ.

34
ಅಯ್ಯಾ, ನೀನೆನ್ನ ಮೊರೆಯನಾಲಿಸಿದಡಾಲಿಸು,
ಆಲಿಸದಿರ್ದಡೆ ಮಾಣು.
ಅಯ್ಯಾ, ನೀನೆನ್ನ ದುಃಖವ ನೋಡಿದಡೆ ನೋಡು,
ನೋಡದಿರ್ದಡೆ ಮಾಣು.
ನಿನಗಿದು ವಿಧಿಯೆ ?
ನೀನೊಲ್ಲದಡೆ ಆನೊಲಿಸುವ ಪರಿಯೆಂತಯ್ಯಾ ?
ಮನವೆಳಸಿ ಮಾರುವೋಗಿ ಮರೆವೊಕ್ಕಡೆ
ಕೊಂಬ ಪರಿಯೆಂತಯ್ಯಾ ಚೆನ್ನಮಲ್ಲಿಕಾರ್ಜುನಾ ?ಆಲಿಸದಿರ್ದಡೆ ಮಾಣು.
ಅಯ್ಯಾ, ನೀನೆನ್ನ ದುಃಖವ ನೋಡಿದಡೆ ನೋಡು,
ನೋಡದಿರ್ದಡೆ ಮಾಣು.
ನಿನಗಿದು ವಿಧಿಯೆ ?
ನೀನೊಲ್ಲದಡೆ ಆನೊಲಿಸುವ ಪರಿಯೆಂತಯ್ಯಾ ?
ಮನವೆಳಸಿ ಮಾರುವೋಗಿ ಮರೆವೊಕ್ಕಡೆ
ಕೊಂಬ ಪರಿಯೆಂತಯ್ಯಾ ಚೆನ್ನಮಲ್ಲಿಕಾರ್ಜುನಾ ?
35
ಅಯ್ಯಾ, ಪರಾತ್ಪರ ಸತ್ಯ ಸದಾಚಾರ
ಗುರುಲಿಂಗಜಂಗಮದ ಶ್ರೀಚರಣವನು
ಹಿಂದೆ ಹೇಳಿದ ಅಚ್ಚಪ್ರಸಾದಿಯೋಪಾದಿಯಲ್ಲಿ
ನಿರ್ವಂಚಕತ್ವದಿಂದ ಗುರುಲಿಂಗಜಂಗಮಕ್ಕೆ
ಅರ್ಥಪ್ರಾಣಾಭಿಮಾನವ ಸಮರ್ಪಿಸಿ,
ಒಪ್ಪುತ್ತು ಅಷ್ಟವಿಧಾರ್ಚನೆ ಷೋಡಶೋಪಚಾರದಿಂದ

Downloaded from: **http://www.lingayatreligion.com**

ಅರ್ಚನೆಯ ಮಾಡಿ, ಆ ಚರಣೋದಕ ಪ್ರಸಾದವನು
ತನ್ನ ಸರ್ವಾಂಗದಲ್ಲಿ ನೆಲೆಸಿರ್ಪ ಇಷ್ಟ ಮಹಾಲಿಂಗದೇವಂಗೆ
ಕೊಟ್ಟು ಕೊಂಬುವಂತಹದೆ ಇದಿರಿಟ್ಟು
ಜಂಗಮ ಪಾದೋದಕ ಪ್ರಸಾದವ ಕೊಂಬ
ಆಚರಣೆಯ ನಿಲುಗಡೆ ನೋಡಾ.
ಆಮೇಲೆ ಒಪ್ಪತ್ತು ಸಂಬಂಧವಿಟ್ಟು
ಆಚರಿಸುವ ನಿಲುಕಡೆ ಎಂತೆಂದಡೆ
ಅಯ್ಯಾ, ನಿನ್ನ ಷಟ್ಸ್ಥಾನದಲ್ಲಿ ನೆಲೆಸಿರ್ಪ ಇಷ್ಟಮಹಾಲಿಂಗದೇವನ
ತ್ರಿವಿಧಸ್ಥಾನದಲ್ಲಿ ಓಂ ಬಸವಣ್ಣ ಚೆನ್ನಬಸವಣ್ಣ ಅಲ್ಲಮಪ್ರಭುವೆಂಬ
ತ್ರಿವಿಧ ನಾಮಸ್ವರೂಪವಾದ ಷೋಡಶಾಕ್ಷರಂಗಳೆ
ಷೋಡಶವರ್ಣವಾಗಿ ನೆಲೆಸಿಪ್ಪರು ನೋಡಾ.
ಇಂತು ಷೋಡಶಕಳಾಸ್ವರೂಪವಾದ
ಚಿದ್ಘನ ಮಹಾಲಿಂಗದೇವನ
ನಿರಂಜನ ಜಂಗಮದೋಪಾದಿಯಲ್ಲಿ
ಸಗುಣ ನಿರ್ಗುಣ ಪೂಜೆಗಳ ಮಾಡಿ
ಜಂಗಮಚರಣಸೋಂಕಿನಿಂ ಬಂದ
ಗುರುಪಾದೋದಕವಾದಡೂ ಸರಿಯೆ,
ಅದು ದೊರೆಯದಿದ್ದಡೆ,
ಲಿಂಗಾಣತಿಯಿಂ ಬಂದೊದಗಿದ
ಪರಿಣಾಮೋದಕವಾದಡೂ ಸರಿಯೆ,
ಒಂದು ಭಾಜನದಲ್ಲಿ ಸೂಕ್ಷ್ಮದಿಂ ರಚಿಸಿ
ಆ ಉದಕದೊಳಗೆ ಹಸ್ತೋದಕ
ಮಂತ್ರೋದಕ ಭಸ್ಮೋದಕವ ಮಾಡಿ,
ಆ ಮೇಲೆ ಅನಾದಿ ಮೂಲಪ್ರಣವ ಪ್ರಸಾದಪ್ರಣವದೊಳಗೆ
ಅಖಂಡಜ್ಯೋತಿಪ್ರಣವ, ಅಖಂಡಮಹಾಜ್ಯೋತಿಪ್ರಣವವ ಲಿಖಿತವಮಾಡಿ,
ಶುದ್ಧಾದಿಯಾದ ಪೂರ್ಣಭಕ್ತಿಯಿಂದ
ಮಹಾಚಿದ್ಘನತೀರ್ಥವೆಂದು ಭಾವಿಸಿ
ಪಂಚಾಕ್ಷರ ಷಡಕ್ಷರ ಮಂತ್ರಧ್ಯಾನದಿಂದ
ಅನಿಮಿಷದೃಷ್ಟಿಯಿಂ ನಿರೀಕ್ಷಿಸಿ,
ಮೂರು ವೇಳೆ ಪ್ರದಕ್ಷಿಣವ ಮಾಡಿ,
ಆ ಚಿದ್ಘನ ತೀರ್ಥವನು ದ್ವಾದಶದಳ ಕಮಲದ ಮಧ್ಯದಲ್ಲಿ ನೆಲೆಸಿರ್ಪ
ಇಷ್ಟ ಮಹಾಲಿಂಗ ಜಂಗಮಕ್ಕೆ
ಅಷ್ಟವಿಧಮಂತ್ರ ಸಕೀಲಂಗಳಿಂದ
ಆಚಾರಾದಿ ಶೂನ್ಯಾಂತವಾದ ಅಷ್ಟವಿಧ ಲಿಂಗಧ್ಯಾನದಿಂದ
ಅಷ್ಟವಿಧ ಬಿಂದುಗಳ ಸಮರ್ಪಿಸಿದಲ್ಲಿಗೆ
ಅಷ್ಟವಿಧೋದಕವಾಗುವುದಯ್ಯಾ.
ಆ ಇಷ್ಟಮಹಾಲಿಂಗ ಜಂಗಮವೆತ್ತಿ
ಅಷ್ಟಾದಶಮಂತ್ರ ಸ್ಮರಣೆಯಿಂದ
ಮುಗಿದಲ್ಲಿಗೆ ನವಮೋದಕವಾಗುವುದಯ್ಯಾ.

Downloaded from: **http://www.lingayatreligion.com**

ಉಳಿದೋದಕವ ತ್ರಿವಿಧ ಪ್ರಣವಧ್ಯಾನದಿಂದ
ಮುಕ್ತಾಯವ ಮಾಡಿದಲ್ಲಿಗೆ
ದಶವಿಧೋದಕವೆನಿಸುವುದಯ್ಯಾ.
ಹೀಗೆ ಮಹಾಜ್ಞಾನ ಲಿಂಗಜಂಗಮಸ್ವರೂಪ ಪಾದತೀರ್ಥ
ಮುಗಿದ ಮೇಲೆ ತಟ್ಟೆ ಬಟ್ಟಲಲ್ಲಿ ಎಡೆಮಾಡಬೇಕಾದಡೆ
ಗೃಹದಲ್ಲಿರ್ದ ಕ್ರಿಯಾಶಕ್ತಿಯರಿಗೆ ಧಾರಣವಿರ್ದಡೆ
ತಾ ಸಲಿಸಿದ ಪಾದೋದಕ ಪ್ರಸಾದವ ಕೊಡುವುದಯ್ಯಾ.
ಸಹಜಲಿಂಗಭಕ್ತರಾದಡೆ
ಮುಖ ಮಜ್ಜನವ ಮಾಡಿಸಿ ತಾ ಧರಿಸುವ
ವಿಭೂತಿಧಾರಣವ ಮಾಡಿಸಿ
ಶಿವಶಿವಾ ಹರಹರ ಬಸವಲಿಂಗಾ ಎಂದು ಬೋದಿಸಿ
ಎಡೆಮಾಡಿಸಿಕೊಂಬುವುದಯ್ಯಾ.
ಆಮೇಲೆ ತಾನು ಸ್ಥಲವಾದಡೆ ಸಂಬಂಧಪಟ್ಟು,
ಪರಸ್ಥಲವಾದಡೆ ಚಿದ್ಘನ ಇಷ್ಟಮಹಾಲಿಂಗ ಜಂಗಮವ
ವಾಮಕರಸ್ಥಲದಲ್ಲಿ ಮೂರ್ತಮಾಡಿಸಿಕೊಂಡು
ದಕ್ಷಿಣಹಸ್ತದಲ್ಲಿ ಗುರುಲಿಂಗಜಂಗಮ ಸೂತ್ರವಿಡಿದು
ಬಂದ ಕ್ರಿಯಾಭಸಿತವ ಲೇಪಿಸಿ,
ಮೂಲಪ್ರಣವ ಪ್ರಸಾದಪ್ರಣವದೊಳಗೆ
ಗೋಳಕಪ್ರಣವ ಅಖಂಡಗೋಳಕಪ್ರಣವ
ಅಖಂಡ ಮಹಾಗೋಳಕಪ್ರಣವ,
ಜ್ಯೋತಿಪ್ರಣವ ಧ್ಯಾನದಿಂದ
ದ್ವಾದಶ ಮಣಿಯ ಧ್ಯಾನಿಸಿ ಪ್ರದಕ್ಷಿಸಿ,
ಮೂಲಮೂರ್ತಿ ಲಿಂಗಜಂಗಮದ ಮಸ್ತಕದ ಮೇಲೆ ಸ್ಪರ್ಶನವ ಮಾಡಿ,
ಬಟ್ಟಲಿಗೆ ಮೂರು ವೇಳೆ ಸ್ಪರ್ಶನವ ಮಾಡಿ,
ಪದಾ ರ್ಥದ ಪೂರ್ವಾಶ್ರಯವ ಕಳೆದು
ಶುದ್ಧಪ್ರಸಾದವೆಂದು ಭಾವಿಸಿ,
ಆ ಇಷ್ಟ ಮಹಾಲಿಂಗ ಜಂಗಮಕ್ಕೆ
ಅಷ್ಟಾದಶ ಮಂತ್ರಸ್ಮರಣೆಯಿಂದ
ಮೂರುವೇಳೆ ರೂಪ ಸಮರ್ಪಿಸಿ, ಎರಡು ವೇಳೆ ರೂಪ ತೋರಿ,
ಚಿರಪ್ರಾಣಲಿಂಗ ಮಂತ್ರ ಜಿಹ್ವೆಯಲ್ಲಿಟ್ಟು
ಆರನೆಯ ವೇಳೆಗೆ ಭೋಜ್ಯಗಟ್ಟಿ
ಆ ಇಷ್ಟಮಹಾಲಿಂಗ ಮಂತ್ರಧ್ಯಾನದಿಂದ ಸಮರ್ಪಿಸಿ,
ಷಡ್ವಿಧ ಲಿಂಗಲೋಲುಪ್ತಿಯಿಂದ ಸಂತೃಪ್ತನಾಗಿ ಆಚರಿಸಿದಾತನೆ
ಗುರುಭಕ್ತನಾದ ನಿಚ್ಚಪ್ರಸಾದಿಯೆಂಬೆ ಕಾಣಾ ಚೆನ್ನಮಲ್ಲಿಕಾರ್ಜುನಾ
36
ಅಯ್ಯಾ, ವಿರಕ್ತ ವಿರಕ್ತರೆಂದೇನೊ
ವಿರಕ್ತಿಯ ಮಾತನಾಡುವರಲ್ಲದೆ ವಿರಕ್ತಿಕೆ ಎಲ್ಲರಿಗೆಲ್ಲಿಯದೊ
ಕೈಯೊಳಗಣ ಓಲೆ, ಕಂಕುಳೊಳಗಣ ಸಂಪುಟ, ಬಾಯೊಳಗಣ ಮಾತು.
ಪುಣ್ಯವಿಲ್ಲಪಾಪವಿಲ್ಲ, ಕರ್ಮವಿಲ್ಲಧರ್ಮವಿಲ್ಲ,

Downloaded from: **http://www.lingayatreligion.com**

ಸತ್ಯವಿಲ್ಲ ಅಸತ್ಯವಿಲ್ಲವೆಂದು ಮಾತನಾಡುತಿಪ್ಪರು.
ಅದೆಂತೆಂದಡೆ ಕಂಗಳ ನೋಟ ಹಿಂಗದನ್ನಕ್ಕ, ಕೈಯೊಳಗಣ ಬೆರಟು ನಿಲ್ಲದನ್ನಕ್ಕ,
ಹೃದಯದ ಕಾಮ ಉಡುಗದನ್ನಕ್ಕ
ವಿರಕ್ತಿಕೆ ಎಲ್ಲರಿಗೆಲ್ಲಿಯದೊ
ಬಲ್ಲ ವಿರಕ್ತನ ಹೃದಯವುದಕದೊಳಗಣ ಗುಂಡಿನಲ್ಲಿ
ಮಾಣಿಕ್ಯದ ಪ್ರಭೆಯ ಕಂಡವರಾರೊ ಕಂಡಾತಂಗೆ ಕಂಗಳಲ್ಲಿ ನೋಡಿದ
ಸರ್ವವಸ್ತುಗಳು
ಆ ಲಿಂಗಕ್ಕರ್ಪಿತ.
ಆ ಲಿಂಗವ ಕಂಡಾತಂಗೆ, ಕರ್ಣದಲ್ಲಿ ಕೇಳಿದ ಆಗಮ
ಪುರಾಣಂಗಳು ಆ ಲಿಂಗಕ್ಕರ್ಪಿತ.
ಆ ಲಿಂಗವ ಕಂಡಾತಂಗೆ ಜಿಹ್ವೆಯಲ್ಲಿ ರುಚಿಸಿದ
ಪದಾ ರ್ಥಂಗಳು ಆ ಲಿಂಗಕ್ಕರ್ಪಿತ.
ಅದೆಂತೆಂದಡೆ
ಅಂಗವೂ ಲಿಂಗವೂ ಏಕೀಭವಿಸಿದಡೆ
ಅವಂಗೆ ಪುಣ್ಯವಿಲ್ಲ ಪಾಪವಿಲ್ಲ,
ಕರ್ಮವಿಲ್ಲ ಧರ್ಮವಿಲ್ಲ, ಸತ್ಯವಿಲ್ಲ ಅಸತ್ಯವಿಲ್ಲ.
ಅದೆಂತೆಂದಡೆ
ಬಂದುದ ಲಿಂಗಕ್ಕೆ ಕೊಟ್ಟನಾಗಿ, ಬಾರದುದ ಬಯಸನಾಗಿ.
ಅಂಗನೆಯರು ಬಂದು ಕಾಮಿತಾರ್ಥದಿಂದ ತನ್ನನಪ್ಪಿದಡೆ
ತಾ ಮಹಾಲಿಂಗವನಪ್ಪುವನಾಗಿ,
ಅವಂಗೆ ಮುಖ ಬೇರಲ್ಲದೆ, ಆತ್ಮನೆಲ್ಲಾ ಒಂದೆ.
ಅದಕ್ಕೆ ಜಗವು ಪಾಪ ಪುಣ್ಯವೆಂದು ಮಾತನಾಡುತಿಪ್ಪರು.
ಅದೆಂತೆಂದಡೆ
ಶಿವಂಗೆ ತಾಯಿಯಿಲ್ಲ, ಭುವನಕ್ಕೆ ಬೆಲೆಯಿಲ್ಲ.
ತರು ಗಿರಿ ಗಹ್ವರಕ್ಕೆ ಮನೆಯಿಲ್ಲ.
ಲಿಂಗವನೊಡಗೂಡಿದ ವಿರಕ್ತಂಗೆ ಪುಣ್ಯ ಪಾಪವಿಲ್ಲ ಕಾಣಾ
ಚೆನ್ನಮಲ್ಲಿಕಾರ್ಜುನಾ.
37
ಅಯ್ಯಾ, ಸದಾಚಾರ ಸದ್ಭಕ್ತಿ ಸತ್ಕ್ರಿಯಾ ಸಮ್ಯಕ್ಜ್ಞಾನ ಸದ್ವರ್ತನೆ
ಸಗುಣ ನಿರ್ಗುಣ ನಿಜಗುಣ ಸಚ್ಚರಿತ್ರ ಸದ್ಭಾವ
ಅಕ್ರೋಧ ಸತ್ಯವಚನ ಶಮೆದಮೆ ಭವಿಭಕ್ತಭೇದ
ಸತ್ಪಾತ್ರದ್ರುವ್ಯಾರ್ಪಣ ಗೌರವಬುದ್ಧಿ ಲಿಂಗಲೀಯ ಜಂಗಮಾನುಭಾವ
ದಶವಿಧಪಾದೋದಕ ಏಕಾದಶಪ್ರಸಾದ ಷೋಡಶಭಕ್ತಿನಿರ್ವಾಹ,
ತ್ರಿವಿಧ ಷಡ್ವಿಧ ನವವಿಧ ಲಿಂಗಾರ್ಚನೆ,
ತ್ರಿವಿಧ ಷಡ್ವಿಧ ನವವಿಧ ಜಪ,
ತ್ರಿವಿಧ ಷಡ್ವಿಧ ನವವಿಧ ಲಿಂಗಾರ್ಪಣ.
ಚಿದ್ವಿಭೂತಿ ಸ್ನಾನ ಧೂಳನ ಧಾರಣ, ಸರ್ವಾಂಗದಲ್ಲಿ ಚಿದ್ರುದ್ರಾಕ್ಷಿಧಾರಣ,
ತಾ ಮಾಡುವ ಸತ್ಯಕಾಯಕ,
ತಾ ಬೇಡುವ ಸದ್ಭಕ್ತಿಭಿಕ್ಷ, ತಾ ಕೊಟ್ಟು ಕೊಂಬ ಭೇದ,

Downloaded from: **http://www.lingayatreligion.com**

ತಾನಾಚರಿಸುವ ಸತ್ಯ ನಡೆನುಡಿ, ತಾ ನಿಂದ ನಿರ್ವಾಣಪದ.
ಇಂತೀ ಬತ್ತೀಸ ನೆಲೆಕಲೆಗಳ ಸದ್ಗುರುಮುಖದಿಂದರಿದ
ಬಸವ ಮೊದಲಾದ ಸಮಸ್ತ ಗಣಂಗಳೆಲ್ಲಾ ಪ್ರಮಥ
ನಿರಾಭಾರಿ ವೀರಶೈವ ಸನ್ಮಾರ್ಗವಿಡಿದಾಚರಿಸಿದರು ನೋಡಾ.
ಇಂತು ಪ್ರಮಥಗಣವಾಚರಿಸಿದ
ಸತ್ಯ ಸನ್ಮಾರ್ಗವರಿಯದ ಮೂಢ ಅಧಮರನೆಂತು
ಶಿವಶಕ್ತಿ ಶಿವಭಕ್ತ ಶಿವಜಂಗಮವೆಂಬೆನಯ್ಯಾ ಚೆನ್ನಮಲ್ಲಿಕಾರ್ಜುನಾ ?
38
ಅಯ್ಯಾ, ಸರ್ವಮೂಲಹಂಕಾರವಿಡಿದು
ಕುಲಭ್ರಮೆ ಛಲಭ್ರಮೆ ಜಾತಿಭ್ರಮೆ,
ನಾಮ ವರ್ಣ ಆಶ್ರಮ ಮತ ಶಾಸ್ತ್ರಭ್ರಮೆ,
ತರ್ಕಭ್ರಮೆ ರಾಜ್ಯಭ್ರಮೆ, ಧನ ಧಾನ್ಯ ಪುತ್ರ ಮಿತ್ರಭ್ರಮೆ,
ಐಶ್ವರ್ಯ ತ್ಯಾಗ ಭೋಗ ಯೋಗಭ್ರಮೆ,
ಕಾಯ ಕರಣ ವಿಷಯಭ್ರಮೆ,
ವಾಯು ಮನ ಭಾವ ಜೀವ ಮೋಹಭ್ರಮೆ,
ನಾಹಂ ಕೋಹಂ ಸೋಹಂ ಮಾಯಾಭ್ರಮೆ ಮೊದಲಾದ
ಬತ್ತೀಸ ಪಾಶಭ್ರಮಿತರಾಗಿ ತೊಳಲುವ ವೇಷಧಾರಿಗಳ ಕಂಡು
ಶಿವಶಕ್ತಿ ಶಿವಭಕ್ತ ಶಿವಪ್ರಸಾದಿ ಶಿವಶರಣ ಶಿವೈಕ್ಯ
ಶಿವಜಂಗಮವೆಂದು ನುಡಿಯಲಾರದೆ ಎನ್ನ ಮನ ನಾಚಿ
ನಿಮ್ಮಡಿಗಭಿಮುಖವಾಯಿತ್ತಯ್ಯಾ ಚೆನ್ನಮಲ್ಲಿಕಾರ್ಜುನಾ.
39
ಅರಲುಗೊಂಡ ಕೆರೆಗೆ ತೊರೆಬಂದು ಹಾಯ್ದಂತಾಯಿತ್ತು.
ಬರಲುಗೊಂಡ ಸಸಿಗೆ ಮಳೆ ಸುರಿದಂತಾಯಿತ್ತು ನೋಡಾ ಇಂದೆನಗೆ.
ಇಹದ ಸುಖ ಪರದ ಗತಿ ನಡೆದು ಬಂದಂತಾಯಿತ್ತು ನೋಡಾ ಎನಗೆ.
ಚೆನ್ನಮಲ್ಲಿಕಾರ್ಜುನಯ್ಯಾ,
ಗುರುಪಾದವ ಕಂಡು ಧನ್ಯಳಾದೆ ನೋಡಾ.
40
ಅರಸಿ ತೊಳಲಿದಡಿಲ್ಲ, ಹರಸಿ ಬಳಲಿದಡಿಲ್ಲ,
ಬಯಸಿ ಹೊಕ್ಕಡಿಲ್ಲ, ತಪಸ್ಸು ಮಾಡಿದಡಿಲ್ಲ.
ಅದು ತಾನಹ ಕಾಲಕ್ಕಲ್ಲದೆ ಸಾಧ್ಯವಾಗದು.
ಶಿವನೊಲಿದಲ್ಲದೆ ಕೈಗೂಡದು.
ಚೆನ್ನಮಲ್ಲಿಕಾರ್ಜುನನೆನಗೊಲಿದನಾಗಿ
ನಾನು ಸಂಗನಬಸವಣ್ಣನ ಶ್ರೀಪಾದವ ಕಂಡು ಬದುಕಿದೆನು.
41
ಅರಸಿ ಮೊರೆವೊಕ್ಕಡೆ ಕಾವ ಗುರುವೆ,
ಜಯ ಜಯ ಗುರುವೆ,
ಆರೂ ಅರಿಯದ ಬಯಲೊಳಗೆ ಬಯಲಾಗಿ ನಿಂದ ನಿಲವ
ಹಿಡಿದೆನ್ನ ಕರದಲ್ಲಿ ತೋರಿದ ಗುರುವೆ,
ಚೆನ್ನಮಲ್ಲಿಕಾರ್ಜುನ ಗುರುವೆ, ಜಯ ಜಯ ಗುರುವೆ.

Downloaded from: **http://www.lingayatreligion.com**

42
ಅರಿದೆನೆಂದಡೆ ಅರಿಯಬಾರದು ನೋಡಾ.
ಘನಕ್ಕೆ ಘನ ತಾನೆ ನೋಡಾ.
ಚೆನ್ನಮಲ್ಲಿಕಾರ್ಜುನನ ನಿರ್ಣಯವಿಲ್ಲದೆ ಸೋತೆನು.
43
ಅರಿಯದವರೊಡನೆ ಸಂಗವ ಮಾಡಿದಡೆ
ಕಲ್ಲ ಹೊಯ್ದು ಕಿಡಿಯ ತೆಗೆದುಕೊಂಬಂತೆ.
ಬಲ್ಲವರೊಡನೆ ಸಂಗವ ಮಾಡಿದಡೆ
ಮೊಸರ ಹೊಸೆದು ಬೆಣ್ಣೆಯ ತೆಗೆದುಕೊಂಬಂತೆ.
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಶರಣರ ಸಂಗವ ಮಾಡಿದಡೆ
ಕರ್ಪುರದ ಗಿರಿಯನುಎಕೊಂಬಂತೆ.

44
ಅರಿವು ಸಾಧ್ಯವಾಯಿತ್ತೆಂದು,
ಗುರುಲಿಂಗಜಂಗಮವ ಬಿಡಬಹುದೆ ?
ಸಂದು ಸಂಶಯವಳಿದು ಅಖಂಡ ಜ್ಞಾನವಾಯಿತ್ತೆಂದು
ಪರಧನ ಪರಸ್ತ್ರೀಯರುಗಳಿಗೆ ಅಳುಪಬಹುದೆ ?
'ಯತ್ರ ಜೀವಃ ತತ್ರ ಶಿವಃ' ಎಂಬ ಅಭಿನ್ನ ಜ್ಞಾನವಾಯಿತ್ತೆಂದು
ಶುನಕ ಸೂಕರ ಕುಕ್ಕುಟ ಮಾರ್ಜಾಲಂಗಳ ಕೂಡೆ ಭುಂಜಿಸಬಹುದೆ ?
ಭಾವದಲ್ಲಿ ತನ್ನ ನಿಜದ ನೆಲೆಯನರಿತಿಹುದು'
ಸುಜ್ಞಾನ ಸತ್ಕ್ರಿಯಾ ಸುನೀತಿ ಮಾರ್ಗದಲ್ಲಿ ವರ್ತಿಸುವುದು.
ಹೀಂಗಲ್ಲದೆ ಜ್ಞಾನವಾಯಿತ್ತೆಂದು ತನ್ನ ಮನಕ್ಕೆ ಬಂದಹಾಂಗೆ
ಮೀರಿನುಡಿದು ನಡೆದೆನಾದಡೆ
ಶ್ವಾನಗರ್ಭದಲ್ಲಿ ಹುಟ್ಟಿಸದೆ ಬಿಡುವನೆ ಚೆನ್ನಮಲ್ಲಿಕಾರ್ಜುನಯ್ಯನು ?
45
ಅರಿಸಿನವನೆ ಮಿಂದು, ಹೊಂದೊಡಿಗೆಯನೆ ತೊಟ್ಟು,
ದೇವಾಂಗವನುಟ್ಟೆನೆಲೆ ಪುರುಷ ಬಾರಾ,
ಪುರುಷ ರತ್ನವೆ ಬಾರಾ.
ನಿನ್ನ ಬರವೆನ್ನ ಅಸುವಿನ ಬರವಾದುದೀಗ,
ಬಾರಯ್ಯಾ ಚೆನ್ನಮಲ್ಲಿಕಾರ್ಜುನಯ್ಯಾ,
ನೀನು ಬಂದಹನೆಂದು ಬಟ್ಟೆಯ ನೋಡಿ ಬಾಯಾರುತಿರ್ದೆನು.
46
ಅರ್ಥಸನ್ಯಾಸಿಯಾದಡೇನಯ್ಯಾ,
ಆವಂಗದಿಂದ ಬಂದಡೂ ಕೊಳದಿರಬೇಕು.
ರುಚಿಸನ್ಯಾಸಿಯಾದಡೇನಯ್ಯಾ,
ಜಿಹ್ವೆಯ ಕೊನೆಯಲ್ಲಿ ಮಧುರವನರಿಯದಿರಬೇಕು.
ಸ್ತ್ರೀ ಸನ್ಯಾಸಿಯಾದಡೇನಯ್ಯಾ,
ಜಾಗ್ರ ಸ್ವಪ್ನ ಸುಷುಪ್ತಿಯಲ್ಲಿ ತಟ್ಟಿಲ್ಲದಿರಬೇಕು.
ದಿಗಂಬರಿಯಾದಡೇನಯ್ಯಾ,

Downloaded from: **http://www.lingayatreligion.com**

ಮನ ಬತ್ತಲೆ ಇರಬೇಕು.
ಇಂತೀ ಚತುರ್ವಿಧದ ಹೊಲಬರಿಯದೆ ವೃಥಾ ಕೆಟ್ಟರು
ಕಾಣಾ ಚೆನ್ನಮಲ್ಲಿಕಾರ್ಜುನಾ.
47
ಅಲ್ಲದವರೊಡನಾಡಿ ಎಲ್ಲಾ ಸಂಗವ ತೊರೆದೆ ನಾನು.
ನಾರಿ ಸಂಗವತೊರೆದೆ, ನೀರ ಹೊಳೆಯ ತೊರೆದೆ ನಾನು.
ಎನ್ನ ಮನದೊಡೆಯ ಚೆನ್ನಮಲ್ಲಿಕಾರ್ಜುನನ ಕೂಡುವ ಭರದಿಂದ
ಎಲ್ಲಾ ಸಂಗವ ತೊರೆದೆ ನಾನು.
48
ಅಲ್ಲೆಂದಡೆ ಉಂಟೆಂಬುದೀ ಮಾಯೆ
ಒಲ್ಲೆನೆಂದಡೆ ಬಿಡದೀ ಮಾಯೆ ಎನಗಿದು ವಿಧಿಯೆ
ಚೆನ್ನಮಲ್ಲಿಕಾರ್ಜುನಯ್ಯಾ,
ಒಪ್ಪಿ ಮರೆವೊಕ್ಕಡೆ ಮತ್ತುಂಟೆ
ಕಾಯಯ್ಯಾ ಶಿವಧೋ !
49
ಅಷ್ಟದಳಕಮಲದ ಆತ್ಮನೊಳಗೆ ಸೃಷ್ಟಿ ಜನಿಸಿ,
ಕೂರುಮ ದಿಗುದಂತಿ ದಿಗುವಳಯವ ನುಂಗಿ,
ನಿಜಶೂನ್ಯ ತಾನಾದ ಬಳಿಕ,
ತನ್ನ ತಾನರಿದ ನಿಜಪದ ಭಿನ್ನಯೋಗಕ್ಕೆ ಬಹುದೆ
ಕಂಗಳ ನೋಟದಲ್ಲಿ ಮನದ ಸೊಗಸಿನಲ್ಲಿ,
ಅನಂಗನ ದಾಳಿಯನಗಲಿದೆನಣ್ಣಾ.
ಮರೀಚಿಕಾಜಲದೊಳಡಗಿದ ಪ್ರಾಣಿ ವ್ಯಾಧನ ಬಲೆಯೊಳಗಹುದೆ
ಎನ್ನದೇವ ಚೆನ್ನಮಲ್ಲಿಕಾರ್ಜುನನಲ್ಲದೆ
ಪರಪುರುಷರು ನಮಗಾಗದಣ್ಣಾ.
50
ಅಷ್ಟವಿಧಾರ್ಚನೆಯ ಮಾಡಿ ಒಲಿಸುವೆನೆ ಅಯ್ಯಾ
ನೀನು ಬಹಿರಂಗವ್ಯವಹಾರದೂರಸ್ಥನು.
ಅಂತರಂಗದಲ್ಲಿ ಧ್ಯಾನವ ಮಾಡಿ ಒಲಿಸುವೆನೆ ಅಯ್ಯಾ
ನೀನು ವಾಙ್ಮನಕ್ಕತೀತನು.
ಜಪಸ್ತೋತ್ರದಿಂದ ಒಲಿಸುವೆನೆ ಅಯ್ಯಾ
ನೀನು ನಾದಾತೀತನು.
ಭಾವಜ್ಞಾನದಿಂದ ಒಲಿಸುವೆನೆ ಅಯ್ಯಾ
ನೀನು ಮತಿಗತೀತನು.
ಹೃದಯ ಕಮಲಮಧ್ಯದಲ್ಲಿ ಇಂಬಿಟ್ಟುಕೊಂಬೆನೆ ಅಯ್ಯಾ
ನೀನು ಸರ್ವಾಂಗ ಪರಿಪೂರ್ಣನು.
ಒಲಿಸಲೆನ್ನಳವಲ್ಲ ನೀನೊಲಿವುದೆ ಸುಖವಯ್ಯಾ ಚೆನ್ನಮಲ್ಲಿಕಾರ್ಜುನಯ್ಯಾ.

51
ಅಸನದಿಂದ ಕುದಿದು,

Downloaded from: **http://www.lingayatreligion.com**

ವ್ಯಸನದಿಂದ ಬೆಂದು,
ಅತಿ ಆಸೆಯಿಂದ ಬಳಲಿ,
ವಿಷಯಕ್ಕೆ ಹರಿವ ಜೀವಿಗಳು ನಿಮ್ಮನರಿಯರು.
ಕಾಲಕಲ್ಪಿತ ಪ್ರಳಯ ಜೀವಿಗಳೆಲ್ಲ
ನಿಮ್ಮನೆತ್ತ ಬಲ್ಲರಯ್ಯ ಚೆನ್ನಮಲ್ಲಿಕಾರ್ಜುನಾ ?
52
ಅಳಿಸಂಕುಲವೆ, ಮಾಮರವೆ, ಬೆಳುದಿಂಗಳೆ, ಕೋಗಿಲೆಯೆ
ನಿಮ್ಮನೆಲ್ಲರನೂ ಒಂದ ಬೇಡುವೆನು.
ಎನ್ನೊಡೆಯ ಚೆನ್ನಮಲ್ಲಿಕಾರ್ಜುನದೇವ ಕಂಡಡೆ ಕರೆದು ತೋರಿರೆ.

53
ಆಕಾರವಿಲ್ಲದ ನಿರಾಕಾರ ಲಿಂಗವ
ಕೈಯಲ್ಲಿ ಹಿಡಿದು ಕಟ್ಟಿದೆವೆಂಬರು ಅಜ್ಞಾನಿ ಜೀವಿಗಳು.
ಹರಿಬ್ರಹ್ಮರು ವೇದ ಪುರಾಣ ಆಗಮಂಗಳು
ಅರಸಿ ಕಾಣದ ಲಿಂಗ.
ಭಕ್ತಿಗೆ ಫಲವಲ್ಲದೆ ಲಿಂಗವಿಲ್ಲ.
ಕರ್ಮಕ್ಕೆ ನರಕವಲ್ಲದೆ ಲಿಂಗವಿಲ್ಲ.
ಜ್ಞಾನಕ್ಕೆ ಪರಿಭ್ರಮಣವಲ್ಲದೆ ಲಿಂಗವಿಲ್ಲ.
ವೈರಾಗ್ಯಕ್ಕೆ ಮುಕ್ತಿಯಲ್ಲದೆ ಲಿಂಗವಿಲ್ಲ.
ಇದು ಕಾರಣ ತನ್ನ ತಾನರಿದು ತಾನಾದಡೆ
ಚೆನ್ನಮಲ್ಲಿಕಾರ್ಜುನ ತಾನೆ ಬೇರಿಲ್ಲ.
54
ಆಡಬಹುದು ಪಾಡಬಹುದಲ್ಲದೆ
ನುಡಿದಂತೆ ನಡೆಯಬಾರದು ಎಲೆ ತಂದೆ.
ಲಿಂಗಕ್ಕೆ ಶರಣೆನ್ನಬಹುದಲ್ಲದೆ
ಜಂಗಮಕ್ಕೆ ಶರಣೆನ್ನಬಾರದೆಲೆ ತಂದೆ.
ಚೆನ್ನಮಲ್ಲಿಕಾರ್ಜುನದೇವಾ,
ನಿಮ್ಮ ಶರಣರು ನುಡಿದಂತೆ ನಡೆಯಬಲ್ಲರು ಎಲೆ ತಂದೆ.
55
ಆಡುವುದು ಹಾಡುವುದು ಹೇಳುವುದು ಕೇಳುವುದು
ನಡೆವುದು ನುಡಿವುದು
ಸರಸ ಸಮ್ಮೇಳವಾಗಿಪ್ಪುದಯ್ಯಾ ಶರಣರೊಡನೆ.
ಚೆನ್ನಮಲ್ಲಿಕಾರ್ಜುನಯ್ಯಾ, ನೀ ಕೊಟ್ಟ ಆಯುಷ್ಯವುಳ್ಳನ್ನಕ್ಕರ
ಲಿಂಗಸುಖಿಗಳ ಸಂಗದಲ್ಲಿ ದಿನಗಳ ಕಳೆವೆನು.
56
ಆತುರದ ಧ್ಯಾನದಿಂದ ಧಾವತಿಗೊಂಡೆ ;
ಜ್ಯೋತಿಲರ್ಿಂಗವ ಕಾಣಿಸಬಾರದು.
ಮಾತಿನ ಮಾಲೆಗೆ ಸಿಲುಕುವನಲ್ಲ ;
ಧಾತುಗೆಡಿಸಿ ಮನವ ನೋಡಿ ಕಾಡುವನು.

Downloaded from: **http://www.lingayatreligion.com**

ಆತುಮನಂತರ ಪರವನರಿದಡೆ ಆತನೆ ಯೋಗಿ ;
ಆತನ ಪಾದಕ್ಕೆ ಶರಣೆಂಬೆನಯ್ಯಾ
ಚೆನ್ನಮಲ್ಲಿಕಾರ್ಜುನಾ.
57
ಆದಿ ಅನಾದಿಗಳಿಂದತ್ತಲಯ್ಯಾ ಬಸವಣ್ಣನು.
ಮೂದೇವರ ಮೂಲಸ್ಥಾನವಯ್ಯಾ ಬಸವಣ್ಣನು.
ನಾದ ಬಿಂದು ಕಳಾತೀತ ಆದಿ ನಿರಂಜನನಯ್ಯಾ ಬಸವಣ್ಣನು.
ಆ ನಾದಸ್ವರೂಪೇ ಬಸವಣ್ಣನಾದ ಕಾರಣ,
ಆ ಬಸವಣ್ಣನ ಶ್ರೀಪಾದಕ್ಕೆ ನಮೋ ನಮೋ ಎನುತಿರ್ದೆನು ಕಾಣಾ
ಚೆನ್ನಮಲ್ಲಿಕಾರ್ಜುನಯ್ಯಾ.
58
ಆದಿ ಅನಾದಿ ನಿತ್ಯಾನಿತ್ಯವ ತಿಳಿಯಲರಿಯದೆ
ವಾಯಕ್ಕೆ ಪರಬ್ರಹ್ಮವ ನುಡಿವ
ವಾಯುಪ್ರಾಣಿಗಳವರೆತ್ತ ಬಲ್ಲರೋ,
ಆ ಪರಬ್ರಹ್ಮದ ನಿಜದ ನಿಲವ ?
ಅದೆಂತೆಂದಡೆ ;
ಆದಿಯೆ ದೇಹ, ಅನಾದಿಯೆ ನಿರ್ದೆಹ,
ಆದಿಯೆ ಸಕಲ, ಅನಾದಿಯೆ ನಿಷ್ಕಲ,
ಆದಿಯೆ ಜಡ, ಅನಾದಿಯೆ ಅಜಡ.
ಆದಿಯೆ ಕಾಯ, ಅನಾದಿಯೆ ಪ್ರಾಣ.
ಈ ಎರಡರ ಯೋಗವ ಭೇದಿಸಿ
ತನ್ನಿಂದ ತಾನೆ ತಿಳಿದು ನೋಡಲು,
ಆದಿ ಸಂಬಂಧವಪ್ಪ ಭೂತಂಗಳು ನಾನಲ್ಲ.
ದಶವಿಧೇಂದ್ರಿಯಂಗಳು ನಾನಲ್ಲ, ದಶವಾಯುಗಳು ನಾನಲ್ಲ.
ಅಷ್ಟಮದಂಗಳು, ಸಪ್ತವ್ಯಸನಂಗಳು,
ಅರಿಷಡ್ವರ್ಗಂಗಳು, ಷಡೂರ್ಮಿಗಳು, ಷಡ್ಭ್ರಮೆಗಳು,
ಷಡ್ಭಾವವಿಕಾರಂಗಳು, ಷಟ್ಕರ್ಮಂಗಳು, ಷಡ್ಧಾತುಗಳು,
ತನುತ್ರಯಂಗಳು, ಜೀವತ್ರಯಂಗಳು,
ಮಲತ್ರಯಂಗಳು, ಮನತ್ರಯಂಗಳು,
ಗುಣತ್ರಯಂಗಳು, ಭಾವತ್ರಯಂಗಳು,
ತಾಪತ್ರಯಂಗಳು, ಅಂತಃಕರಣಂಗಳು
ಇಂತಿವಾದಿಯಾಗಿ ತೋರುವ ತೋರಿಕೆಯೇನೂ
ನಾನಲ್ಲ, ನನ್ನವಲ್ಲ.
ಇಂತಿವೆಲ್ಲವೂ ನನ್ನಾಧೀನವಾಗಿಪ್ಪವು
ನಾನಿವರಾಧೀನದವನಲ್ಲ.
ನಾನು ತೂರ್ಯ ತೂರ್ಯಾತೀತವಪ್ಪ
ಸತ್ತು ಚಿತ್ತಾನಂದ ನಿತ್ಯಪರಿಪೂರ್ಣವಸ್ತುವೆ ತನ್ನಿರವೆಂದು ತಿಳಿಯೆ,
ಆ ತಿಳಿದ ಮಾತ್ರದಲ್ಲಿಯೇ ಅನಿತ್ಯದ ಬೆಸುಗೆ ಬಿಟ್ಟು
ನಿರಾಳದಲ್ಲಿ ನಿಜವನೈದಲರಿಯದೆ

Downloaded from: **http://www.lingayatreligion.com**

ಮತ್ತೆಯುಂ ಭೌತಿಕ ತತ್ವಸಂಬಂಧಿಯಾಗಿ ಇರುತ್ತಿರಲು,
ಇಂತೀ ತತ್ವದಾದಿ ತಾನೆಂತೆನಲು
ಆ ಪರಬ್ರಹ್ಮವಪ್ಪ ನಿತ್ಯನಿರಾಳ ನಿಃಶೂನ್ಯಲಿಂಗವೆ
ತನ್ನ ಲೀಲಾವಿಲಾಸದಿಂದ ತಾನೆ ಸುನಾದ ಬಿಂದು ಪ್ರಕಾಶ
ತೇಜೋಮೂರ್ತಿಯಾಗಿ ನಿಂದು ಮಹಾಲಿಂಗವೆಂದೆನಿಸಿತ್ತು.
ಆ ಮಹಾಲಿಂಗವೆ ಪಂಚಸಾದಾಖ್ಯವೆಂದೆನಿಸಿತ್ತು.
ಆ ಪಂಚಸಾದಾಖ್ಯವೆ ಪಂಚಲಿಂಗ ಪ್ರಕಾಶವೆಂದೆನಿಸಿತ್ತು.
ಆ ಪಂಚಲಿಂಗ ಪ್ರಕಾಶವೆ ಪಂಚಮುಖವೆಂದೆನಿಸಿತ್ತು.
ಆ ಪಂಚಮುಖದಿಂದವೆ ಪಂಚಾಕ್ಷರಿಯುತ್ಪತ್ತಿ.
ಆ ಪಂಚಾಕ್ಷರಿಯಿಂದವೆ ಪಂಚಕಲೆಗಳುತ್ಪತ್ತಿ.
ಆ ಪಂಚಕಲೆಗಳಿಂದವೆ ಜ್ಞಾನ ಮನ ಬುದ್ಧಿ ಚಿತ್ತ
ಅಹಂಕಾರಗಳುತ್ಪತ್ತಿ.
ಆ ಜ್ಞಾನ ಮನ ಬುದ್ಧಿ ಚಿತ್ತ ಅಹಂಕಾರಗಳಿಂದವೆ
ಪಂಚತನ್ಮಾತ್ರಂಗಳುತ್ಪತ್ತಿ.
ಆ ಪಂಚತನ್ಮಾತ್ರಂಗಳಿಂದವೆ ಪಂಚಭೂತಂಗಳುತ್ಪತ್ತಿ.
ಆ ಪಂಚಭೂತಂಗಳೇ ಪಂಚೀಕರಣವನೆಯ್ದಿ
ಆತ್ಮಂಗೆ ಅಂಗವಾಯಿತ್ತು.
ಆ ಅಂಗಕ್ಕೆ ಜ್ಞಾನೇಂದ್ರಿಯಂಗಳು ಕಮರ್ೆಂದ್ರಿಯಂಗಳು
ಪ್ರತ್ಯಂಗವೆಂದೆನಿಸಿತ್ತು.
ಇಂತು ದೇಹ ಸಂಬಂಧಮಂ
ಶಿವ ತನ್ನ ಚಿದಂಶಿಕನಪ್ಪ ಆತ್ಮಂಗೆ ಸಂಬಂಧಿಸಿದನಾಗಿ,
ಆ ಸಂಬಂಧಿಸಿದ ಕಾಯದ ಪೂರ್ವಾಶ್ರಯವು
ಎಲ್ಲಿಯಾಯಿತ್ತು ಅಲ್ಲಿಯೇ ಅಡಗಿಸಿ
ಆ ಕಾಯದ ಪೂರ್ವಾಶ್ರಯವನಳಿದು
ಮಹಾ ಘನಲಿಂಗವ ವೇಧಿಸಿ ಕೊಟ್ಟು,
ಶಿವ ತಾನೆ ಗುರುವಾಗಿ ಬಂದು
ಮಹಾಘನಲಿಂಗವ ವೇದಿಸಿ ಕೊಟ್ಟ ಪರಿ ಎಂತೆಂದಡೆ
ಆತ್ಮಗೂಡಿ ಪಂಚಭೂತಂಗಳನೆ ಷಡ್ವಿಧ ಅಂಗವೆಂದೆನಿಸಿ,
ಆ ಅಂಗಕ್ಕೆ ಆ ಕಲೆಗಳನೆ ಷಡ್ವಿಧ ಶಕ್ತಿಗಳೆಂದೆನಿಸಿ,
ಆ ಶಕ್ತಿಗಳಿಗೆ ಷಡ್ವಿಧ ಭಕ್ತಿಯನಳವಡಿಸಿ,
ಆ ಭಕ್ತಿಗಳಿಗೆ ಭಾವ ಜ್ಞಾನ ಮನ ಬುದ್ಧಿ ಚಿತ್ತ ಅಹಂಕಾರಂಗಳನೆ
ಷಡ್ವಿಧ ಹಸ್ತಂಗಳೆಂದೆನಿಸಿ,
ಆ ಹಸ್ತಂಗಳಿಗೆ ಮಹಾಲಿಂಗವಾದಿಯಾದ
ಪಂಚಲಿಂಗಗಳನೆ ಷಡ್ವಿಧ ಲಿಂಗಂಗಳೆಂದೆನಿಸಿ,
ಆ ಮುಖಂಗಳಿಗೆ ತನ್ಮಾತ್ರಂಗಳನೆ ದ್ರವ್ಯಪದಾರ್ಥಂಗಳೆಂದೆನಿಸಿ,
ಆ ದ್ರವ್ಯಪದಾರ್ಥಂಗಳು ಆಯಾಯ ಮುಖದ ಲಿಂಗಂಗಳಲ್ಲಿ
ನಿರಂತರ ಸಾವಧಾನದಿಂದ ಅರ್ಪಿತವಾಗಿ ಬೀಗಲೊಡನೆ.
ಅಂಗಸ್ಥಲಂಗಳಡಗಿ ತ್ರಿವಿಧ ಲಿಂಗಾಂಗಸ್ಥಲಂಗಳುಳಿದು
ಕಾಯ ಗುರು, ಪ್ರಾಣ ಲಿಂಗ, ಜ್ಞಾನ ಜಂಗಮ

Downloaded from: **http://www.lingayatreligion.com**

ಗುರುವಿನಲ್ಲಿ ಶುದ್ಧಪ್ರಸಾದ, ಲಿಂಗದಲ್ಲಿ ಸಿದ್ಧಪ್ರಸಾದ,
ಜಂಗಮದಲ್ಲಿ ಪ್ರಸಿದ್ಧಪ್ರಸಾದ.
ಇಂತೀ ತ್ರಿವಿಧ ಪ್ರಸಾದವು ಏಕಾರ್ಥವಾಗಿ,
ಮಹಾಘನ ಪರಿಪೂರ್ಣಪ್ರಸಾದವಳವಟ್ಟ ಶರಣ
ಜ್ಞಾನಿಯಲ್ಲ, ಅಜ್ಞಾನಿ ಮುನ್ನವೇ ಅಲ್ಲ.
ಶೂನ್ಯನಲ್ಲ, ನಿಃಶೂನ್ಯ ಮುನ್ನವೇ ಅಲ್ಲ.
ದ್ವೈತಿಯಲ್ಲ, ಅದ್ವೈತಿ ಮುನ್ನವೇ ಅಲ್ಲ.
ಇಂತೀ ಉಭಯಾತ್ಮಕ ತಾನೆಯಾಗಿ ?
ಇದು ಕಾರಣ, ಇದರ ಆಗುಹೋಗು ಸಕೀಲಸಂಬಂಧವ ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣರೇ ಬಲ್ಲರು.
59
ಆದಿ ಅನಾದಿಯೆನ್ನದೆ ಬಸವಣ್ಣ ಗಣಮೇಳಾಪವಾಗಿ
ಅನಂತ ಯುಗಂಗಳಲ್ಲಿಯೂ ಸಕಲ ಲೋಕದೊಳು
ಚರಿಸುತ್ತಿಪ್ಪ ಸುಳುಹನರಿಯದೆ
ಸಕಲ ನಿಃಕಲರೆಲ್ಲ ಭ್ರಮೆಗೊಂಡು ಬೀಳುತ್ತೇಳುತ್ತಿರ್ದರು.
ಇವರೆಲ್ಲರ ಮುಂದೆ ಆ ಗಣಂಗಳ ನಾನರಿದು ಬದುಕಿದೆನು ಕಾಣಾ
ಶ್ರೀಶೈಲಚೆನ್ನಮಲ್ಲಿಕಾರ್ಜುನಾ.
60
ಆಧಾರ ಸ್ವಾಧಿಷ್ಠಾನ ಮಣಿಪೂರಕ
ವಿಶುದ್ಧಿ ಆಜ್ಞೇಯವ ನುಡಿದಡೇನು
ಆದಿ ಅನಾದಿಯ ಸುದ್ದಿಯ
ಕೇಳಿದಡೇನು ಹೇಳಿದಡೇನು
ತನ್ನಲ್ಲಿದ್ದುದ ತಾನರಿಯದನ್ನಕ್ಕರ.
ಉನ್ಮನಿಯ ರಭಸದ ಮನ ಪವನದ ಮೇಲೆ ಚೆನ್ನಮಲ್ಲಿಕಾರ್ಜುನಯ್ಯನ
ಭೇದಿಸಲರಿಯರು.
61
ಆನು ನೊಂದೆನಯ್ಯಾ, ಆನು ಬೆಂದೆನಯ್ಯಾ,
ಆನು ಬೆಂದ ಬೇಗೆಯನರಿಯದೆ ಕೆಟ್ಟೆನಯ್ಯಾ,
ಆನು ಕೆಟ್ಟ ಕೇಡನೇನೆಂದು ಹವಣಿಸುವೆನಯ್ಯಾ
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಶರಣರ ನೋವ ಕಂಡು ಆನು ಬೆಂದೆನಯ್ಯಾ.
62
ಆಯತ ಸ್ವಾಯತ ಅನುಭಾವವ ನಾನೆತ್ತ ಬಲ್ಲೆನಯ್ಯಾ
ಗುರು ಲಿಂಗ ಜಂಗಮಕ್ಕೆ ಅರ್ಥಪ್ರಾಣಾಭಿಮಾನವಂ ಸಮರ್ಪಿಸಿ,
ಅಹಂಕಾರವಳಿದಿಹಂತಹ ಪುರಾತನರ ಮನೆಯಲ್ಲಿ
ಭೃತ್ಯರ ಭೃತ್ಯಳಾಗಿಪ್ಪೆನಯ್ಯಾ.
ಇದು ಕಾರಣ, ಚೆನ್ನಮಲ್ಲಿಕಾರ್ಜುನಯ್ಯನ ಗಣಂಗಳಲ್ಲದನ್ಯವ ನಾನರಿಯೆನಯ್ಯಾ.
63
ಆಯುಷ್ಯ ಹೋಗುತ್ತಿದೆ, ಭವಿಷ್ಯ ತೊಲಗುತ್ತಿದೆ,
ಕೂಡಿರ್ದ ಸತಿಸುತರು ತಮತಮಗೆ ಹರಿದು ಹೋಗುತ್ತೈದಾರೆ ;

Downloaded from: **http://www.lingayatreligion.com**

ಬೇಡ ಬೇಡವೆಲೆ ಬಂಜೆಯಾಗಿ ಕೆಡಬೇಡ ಬಯಲಿಂಗೆ ಮನವೆ,
ಚೆನ್ನಮಲ್ಲಿಕಾರ್ಜುನನ ಶರಣರ ಸಂಗದಲ್ಲಿ, ಹೂಣಿ ಹೊಕ್ಕು ಬದುಕು
ಕಂಡಾ,ಮನವೆ.
64
ಆರೂ ಇಲ್ಲದವಳೆಂದು ಆಳಿಗೊಳಲುಬೇಡ ಕಂಡೆಯಾ
ಏನ ಮಾಡಿದಡೂ ಆನಂಜುವಳಲ್ಲ.
ತರಗೆಲೆಯ ಮೆಲಿದು ಆನಿಹೆನು,
ಸರಿಯ ಮೇಲೊರಗಿ ಆನಿಹೆನು.
ಚೆನ್ನಮಲ್ಲಿಕಾರ್ಜುನಯ್ಯಾ, ಕರ ಕೇಡನೊಡ್ಡಿದಡೆ ಒಡಲನು ಪ್ರಾಣವನು
ನಿಮಗರ್ಪಿಸಿ ಶುದ್ಧಳಹೆನು.
65
ಆಲಿಸೆನ್ನ ಬಿನ್ನಪವ, ಲಾಲಿಸೆನ್ನ ಬಿನ್ನಪವ, ಪಾಲಿಸೆನ್ನ ಬಿನ್ನಪವ.
ಏಕೆನ್ನ ಮೊರೆಯ ಕೇಳೆಯಯ್ಯಾ ತಂದೆ
ನೀನಲ್ಲದೆ ಮತ್ತಿಲ್ಲ ಮತ್ತಿಲ್ಲ.
ನೀನೆ ಎನಗೆ ಗತಿ, ನೀನೆ ಎನಗೆ ಮತಿಯಯ್ಯಾ, ಚೆನ್ನಮಲ್ಲಿಕಾರ್ಜುನಯ್ಯಾ.
66
ಆವ ವಿದ್ಯೆಯ ಕಲಿತಡೇನು
ಸಾವ ವಿದ್ಯೆ ಬೆನ್ನಬಿಡದು.
ಅಶನವ ತೊರೆದಡೇನು, ವ್ಯಸನವ ಮರೆದಡೇನು
ಉಸುರ ಹಿಡಿದಡೇನು, ಬಸುರ ಕಟ್ಟಿದಡೇನು
ಚೆನ್ನಮಲ್ಲಿಕಾರ್ಜುನದೇವಯ್ಯಾ, ನೆಲ ತಳವಾರನಾದಡೆ ಕಳ್ಳನೆಲ್ಲಿಗೆ ಹೋಹನು
67
ಆವಾಗಳೂ ಎನ್ನ ಮನ ಉದರಕ್ಕೆ ಹರಿವುದು.
ಕಾಣಲಾರೆನಯ್ಯಾ ನಿಮ್ಮುವನು, ಭೇದಿಸಲರಿಯೆ.
ಮಾಯದ ಸಂಸಾರದಲ್ಲಿ ಸಿಲುಕಿದೆನು.
ಎನ್ನದೇವ ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಹೊದ್ದುವಂತೆ ಮಾಡಾ, ನಿಮ್ಮ
ಧರ್ಮ.
68
ಆಶೆಯಾಮಿಷವಳಿದು, ಹುಸಿ ವಿಷಯಂಗಳೆಲ್ಲ ಹಿಂಗಿ,
ಸಂಶಯ ಸಂಬಂಧ ವಿಸಂಬಂಧವಾಯಿತ್ತು ನೋಡಾ.
ಎನ್ನ ಮನದೊಳಗೆ ಘನಪರಿಣಾಮವ ಕಂಡು
ಮನ ಮಗ್ನವಾಯಿತ್ತಯ್ಯಾ.
ಚೆನ್ನಮಲ್ಲಿಕಾರ್ಜುನಾ, ನಿಮ್ಮ ಶರಣ ಪ್ರಭುದೇವರ ಕರುಣದಿಂದ ಬದುಕಿದೆನಯ್ಯಾ.
69
ಆಹಾರವ ಕಿರಿದು ಮಾಡಿರಣ್ಣಾ, ಆಹಾರವ ಕಿರಿದು ಮಾಡಿ.
ಆಹಾರದಿಂದ ವ್ಯಾಧಿ ಹಬ್ಬಿ ಬಲಿವುದಯ್ಯಾ.
ಆಹಾರದಿಂ ನಿದ್ರೆ, ನಿದ್ರೆಯಿಂ ತಾಮಸ, ಅಜ್ಞಾನ, ಮೈಮರಹು,
ಅಜ್ಞಾನದಿಂ ಕಾಮವಿಕಾರ ಹೆಚ್ಚಿ,
ಕಾಯವಿಕಾರ, ಮನೋವಿಕಾರ, ಇಂದ್ರಿಯವಿಕಾರ,

Downloaded from: **http://www.lingayatreligion.com**

ಭಾವವಿಕಾರ, ವಾಯುವಿಕಾರವನುಂಟುಮಾಡಿ,
ಸೃಷ್ಟಿಗೆ ತಹುದಾದ ಕಾರಣ ಕಾಯದ ಅತಿಪೋಷಣ ಬೇಡ.
ಅತಿ ಪೋಷಣೆ ಮೃತ್ಯುವೆಂದುದು.
ಜಪ ತಪ ಧ್ಯಾನ ಧಾರಣ ಪೂಜೆಗೆ ಸೂಕ್ಷ್ಮದಿಂ ತನುಮಾತ್ರವಿದ್ದರೆ ಸಾಲದೆ
ತನುವ ಪೋಷಿಸುವ ಆಸೆ ಯತಿತ್ವಕ್ಕೆ ವಿಘ್ನವೆಂದುದು.
ತನು ಪೋಷಣೆಯಿಂದ ತಾಮಸ ಹೆಚ್ಚಿ, ಅಜ್ಞಾನದಿಂ ವಿರಕ್ತಿ ಹಾನಿ,
ಅರಿವು ನಷ್ಟ, ಪರವು ದೂರ, ನಿರಕೆ ನಿಲವಿಲ್ಲದ ಕಾರಣ.
ಚೆನ್ನಮಲ್ಲಿಕಾರ್ಜುನನೊಲಿಸ ಬಂದ ಕಾಯವ ಕೆಡಿಸದೆ ಉಳಿಸಿಕೊಳ್ಳಿರಯ್ಯಾ.
70
ಆಳುತನದ ಮಾತನಾಡದಿರೆಲವೊ
ಮೇಲೆ ಕಾರ್ಯದಿಮ್ಮಿತ್ತಣ್ಣಾ.
ಅಲಗಿನ ಮೊನೆಯ ಧಾರೆ ಮಿಂಚುವಾಗ
ಕೋಡದೆ ಕೊಂಕದೆ ನಿಲಬೇಕಯ್ಯ.
ಬಂಟ ಬೆಟ್ಟ ಭಕ್ತಿಯೊಂದೆ ಕಂಡಯ್ಯ. ಚೆನ್ನಮಲ್ಲಿಕಾರ್ಜುನನಂತಲ್ಲದೊಲ್ಲ.
71
ಆಳುತನದ ಮಾತನೇರಿಸಿ ನುಡಿದಡೆ
ಆಗಳೆ ಕಟ್ಟಿದೆನು ಗಂಡುಗಚ್ಚೆಯ.
ತಿಗುರನೇರಿಸಿ ತಿಲಕವನಿಟ್ಟು
ಕೈದುವ ಕೊಂಡು ಕಳನೇರಿದ ಬಳಿಕ,
ಕಟ್ಟಿದ ನಿರಿ ಸಡಿಲಿದಡೆ ಇನ್ನು ನಿಮ್ಮಾಣೆ,
ಕಾಣಾ ಚೆನ್ನಮಲ್ಲಿಕಾರ್ಜುನಾ.
72
ಇಂದ್ರನೀಲದ ಗಿರಿಯನೇರಿಕೊಂಡು
ಚಂದ್ರಕಾಂತದ ಶಿಲೆಯನಪ್ಪಿಕೊಂಡು
ಕೊಂಬ ಬಾರಿಸುತ್ತ ಎಂದಿಪ್ಪೆನೊ ಶಿವನೆ ?
ನಿಮ್ಮ ನೆನೆವುತ್ತ ಎಂದಿಪ್ಪೆನೊ ?
ಅಂಗಭಂಗ ಮನಭಂಗವಳಿದು ನಿಮ್ಮನೆಂದಿಂಗೊಮ್ಮೆ ನೆರೆವೆನಯ್ಯಾ
ಚೆನ್ನಮಲ್ಲಿಕಾರ್ಜುನಾ ?
73
ಇಂದ್ರಿಯವ ಬಿಟ್ಟು ಕಾಯವಿರದು ;
ಕಾಯವ ಬಿಟ್ಟು ಇಂದ್ರಿಯವಿರದು.
ಎಂತು ನಿಃಕಾಮಿಯೆಂಬೆ, ಎಂತು ನಿದರ್ೋಷಿಯೆಂಬೆ
ನೀನೊಲಿದಡೆ ಸುಖಿಯಾಗಿಪ್ಪೆ,
ನೀನೊಲ್ಲದಿರೆ ದುಃಖಿಯಾಗಿಪ್ಪೆನಯ್ಯಾ, ಚೆನ್ನಮಲ್ಲಿಕಾರ್ಜುನಾ.
74
ಇಂದೆನ್ನ ಮನೆಗೆ ಒಡೆಯರು ಬಂದಡೆ
ತನುವೆಂಬ ಕಳಶದಲುದಕವ ತುಂಬಿ,
ಕಂಗಳ ಸೋನೆಯೊಡನೆ ಪಾದಾರ್ಚನೆಯ ಮಾಡುವೆ.
ನಿತ್ಯ ಶಾಂತಿಯೆಂಬ ಶೈತ್ಯದೊಡನೆ ಸುಗಂಧವ ಪೂಸುವೆ.

Downloaded from: **http://www.lingayatreligion.com**

ಅಕ್ಷಯ ಸಂಪದವೆಂದರಿದು ಅಕ್ಷತೆಯನೇರಿಸುವೆ.
ಹೃದಯಕಮಲ ಪುಷ್ಪದೊಡನೆ ಪೂಜೆಯ ಮಾಡುವೆ.
ಸದ್ಭಾವನೆಯೊಡನೆ ಧೂಪವ ಬೀಸುವೆ.
ಶಿವಜ್ಞಾನ ಪ್ರಕಾಶದೊಡನೆ ಮಂಗಳಾರತಿಯನೆತ್ತುವೆ.
ನಿತ್ಯತೃಪ್ತಿಯೊಡನೆ ನೈವೇದ್ಯವ ಕೈಕೊಳಿಸುವೆ.
ಪರಿಣಾಮದೊಡನೆ ಕಪರ್ೂರ ವೀಳೆಯವ ಕೊಡುವೆ.
ಪಂಚಬ್ರಹ್ಮದೊಡನೆ ಪಂಚಮಹಾವಾದ್ಯವ ಕೇಳಿಸುವೆ.
ಹರುಷದೊಡನೆ ನೋಡುವೆ,
ಆನಂದದೊಡನೆ ಕುಣಿಕುಣಿದಾಡುವೆ,
ಪರವಶದೊಡನೆ ಹಾಡುವೆ, ಭಕ್ತಿಯೊಡನೆ ಎರಗುವೆ,
ನಿತ್ಯದೊಡನೆ ಕೂಡಿ ಆಡುವೆ.
ಚೆನ್ನಮಲ್ಲಿಕಾರ್ಜುನಾ, ನಿಮ್ಮ ನಿಲವ ತೋರಿದ ಗುರುವಿನಡಿಯಲ್ಲಿ ಅರನಾಗಿ
ಕರಗುವೆ.
75
ಇಂದೆನ್ನ ಮನೆಗೆ ಗಂಡ ಬಂದಹನೆಲೆಗವ್ವಾ.
ನಿಮನಿಮಗೆಲ್ಲಾ ಶೃಂಗಾರವ ಮಾಡಿಕೊಳ್ಳಿ.
ಚೆನ್ನಮಲ್ಲಿಕಾರ್ಜುನನೀಗಳೆ ಬಂದಹನು, ಇದಿರುಗೊಳ್ಳಿ ಬನ್ನಿರವ್ವಗಳಿರಾ.
76
ಇದನಾರಯ್ಯ ಬಲ್ಲರು
ಹಮ್ಮಳಿದ ಶರಣರ ಮೇಲಿಹ ಪರವ ಬಲ್ಲ ಶರಣ.
ಪಂಚೇಂದ್ರಿಯದ ಇಂಗಿತವ ಬಲ್ಲ ಶರಣ.
ಒಡಲ ಬಿಟ್ಟ ಶರಣನಲ್ಲದೆ, ಉಳಿದ ಪ್ರಾಣಘಾತಕ ಪಾತಕರಿವರೆತ್ತಲು, ಶ್ರೀಶೈಲ
ಚೆನ್ನಮಲ್ಲಿಕಾರ್ಜುನಯ್ಯ, ನಿಮ್ಮ ಶರಣ ಬಸವಣ್ಣಂಗಲ್ಲದೆ.
77
ಇಹಕ್ಕೊಬ್ಬ ಗಂಡನೆ ಪರಕ್ಕೊಬ್ಬ ಗಂಡನೆ ?
ಲೌಕಿಕ್ಕೊಬ್ಬ ಗಂಡನೆ ಪಾರಮಾರ್ಥಕ್ಕೊಬ್ಬ ಗಂಡನೆ ?
ಎನ್ನ ಗಂಡ ಚೆನ್ನಮಲ್ಲಿಕಾರ್ಜುನದೇವರಲ್ಲದೆ ಮಿಕ್ಕಿನ ಗಂಡರೆಲ್ಲ ಮುಗಿಲಮರೆಯ
ಬೊಂಬೆಯಂತೆ.
78
ಈಳೆ ನಿಂಬೆ ಮಾವು ಮಾದಲಕೆ
ಹುಳಿನೀರನೆರೆದವರಾರ?
ಕಬ್ಬು ಬಾಳೆ ಹಲಸು ನಾರಿವಾಳಕ್ಕೆ
ಸಿಹಿನೀರನೆರೆದವರಾರ?
ಕಳವೆ ರಾಜಾನ್ನ ಶಾಲ್ಯನ್ನಕ್ಕೆ
ಓಗರದ ಉದಕವನೆರೆದವರಾರ?
ಮರುಗ ಮಲ್ಲಿಗೆ ಪಚ್ಚೆ ಮುಡಿವಾಳಕ್ಕೆ
ಪರಿಮಳದುದಕವನೆರೆದವರಾರ?
ಇಂತೀ ಜಲವು ಒಂದೆ, ನೆಲನು ಒಂದೆ, ಆಕಾಶವು ಒಂದೆ.
ಜಲವು ಹಲವು ದ್ರವ್ಯಂಗಳ ಕೂಡಿ

Downloaded from: **http://www.lingayatreligion.com**

ತನ್ನ ಪರಿಬೇರಾಗಿಹ ಹಾಗೆ,
ಎನ್ನದೇವ ಚೆನ್ನಮಲ್ಲಿಕಾರ್ಜುನಯ್ಯನು
ಹಲವು ಜಗಂಗಳ ಕೂಡಿಕೊಂಡಿರ್ದಡೇನು ತನ್ನ ಪರಿ ಬೇರೆ.

79
ಉಡುವೆ ನಾನು ಲಿಂಗಕ್ಕೆಂದು,
ತೊಡುವೆ ನಾನು ಲಿಂಗಕ್ಕೆಂದು,
ಮಾಡುವೆ ನಾನು ಲಿಂಗಕ್ಕೆಂದು,
ನೋಡುವೆ ನಾನು ಲಿಂಗಕ್ಕೆಂದು,
ಎನ್ನಂತರಂಗ ಬಹಿರಂಗಗಳು ಲಿಂಗಕ್ಕಾಗಿ.
ಮಾಡಿಯೂ ಮಾಡದಂತಿಪ್ಪೆ ನೋಡಾ.
ಆನೆನ್ನ ಚೆನ್ನಮಲ್ಲಿಕಾರ್ಜುನನೊಳಗಾಗಿ ಹತ್ತರೊಡನೆ ಹನ್ನೊಂದಾಗಿಪ್ಪುದನೇನ
ಹೇಳುವೆನವ್ವಾ?
80
ಉಣಲೆಂದು ಬಂದ ಸುಖ ಉಂಡಲ್ಲದೆ ಹರಿಯದು.
ಕಾಣಲೆಂದು ಬಂದ ದುಃಖ ಕಂಡಲ್ಲದೆ ಹರಿಯದು.
ತನುವಿಂಗೆ ಬಂದ ಕರ್ಮ ಹರಿವ ಕಾಲಕ್ಕೆ ಚೆನ್ನಮಲ್ಲಿಕಾರ್ಜುನದೇವರು
ಕಡೆಗಣ್ಣಿನಿಂದ ನೋಡಿದರು.
81
ಉದಯದಲೆದ್ದು ನಿಮ್ಮ ನೆನೆವೆನಯ್ಯಾ.
ಕಸದೆಗೆದು ಚಳೆಯ ಕೊಟ್ಟು
ನಿಮ್ಮ ಬರವ ಹಾರುತಿರ್ದೆನಯ್ಯಾ.
ಹಸೆ ಹಂದರವನಿಕ್ಕಿ ನಿಮ್ಮಡಿಗಳಿಗೆಡೆಮಾಡಿಕೊಂಡಿರ್ದೆನಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ, ನೀನಾವಾಗ ಬಂದೆಯಾ ಎನ್ನ ದೇವಾ ?
82
ಉದಯಾಸ್ತಮಾನವೆಂಬೆರಡು ಕೊಳಗದಲ್ಲಿ,
ಆಯುಷ್ಯವೆಂಬ ರಾಶಿ ಅಳೆದು ತೀರದ ಮುನ್ನ
ಶಿವನ ನೆನೆಯಿರೆ ! ಶಿವನ ನೆನೆಯಿರೆ ! ಈ ಜನ್ಮ ಬಳಿಕಿಲ್ಲ.
ಚೆನ್ನಮಲ್ಲಿಕಾರ್ಜುನದೇವರದೇವನ ನೆನೆದು ಪಂಚಮಹಾಪಾತಕರೆಲ್ಲರು
ಮುಕ್ತಿವಡೆದರಂದು ?
83
ಉಪಮಾತೀತರು ರುದ್ರಗಣಂಗಳು,
ಅವರೆನ್ನ ಬಂಧುಬಳಗಂಗಳು.
ನಮ್ಮ ಶ್ರೀಶೈಲ ಚೆನ್ನಮಲ್ಲಿಕಾರ್ಜುನ ಒಲಿದಡೆ ಮರಳಿತ್ತ ಬಾರೆನಮ್ಮಾ ತಾಯೆ.
84
ಉರಕ್ಕೆ ಜವ್ವನಗಳು ಬಾರದ ಮುನ್ನ,
ಮನಕ್ಕೆ ನಾಚಿಕೆಗಳು ತೋರದ ಮುನ್ನ,
ನಮ್ಮವರಂದೆ ಮದುವೆಯ ಮಾಡಿದರು
ಸಿರಿಶೈಲ ಚೆನ್ನಮಲ್ಲಿಕಾರ್ಜುನಂಗೆ.
ಹೆಂಗೂಸೆಂಬ ಭಾವ ತೋರದ ಮುನ್ನ ನಮ್ಮವರಂದೆ ಮದುವೆಯ ಮಾಡಿದರು

Downloaded from: **http://www.lingayatreligion.com**

85
ಉರಿಯ ಫಣಿಯನುಟ್ಟು ಊರಿಂದ ಹೊರಗಿರಿಸಿ,
ಕರೆಯಲಟ್ಟಿದ ಸಖಿಯ ನೆರೆದ ನೋಡೆಲೆಗವ್ವಾ.
ತೂರ್ಯಾವಸ್ಥೆಯಲ್ಲಿ ತೂಗಿ ತೂಗಿ ನೋಡಿ
ಬೆರಗಾಗಿ ನಿಲಲಾರೆನವ್ವಾ.
ಆರವಸ್ಥೆ ಕರ ಹಿರಿದು ಎಲೆ ತಾಯೆ.
ಗಿರಿ ಬೆಂದು ತರುವುಳಿದು ಹೊನ್ನರಳೆಯ ಮರನುಲಿವಾಗ ಹಿರಿಯತರನಗೆಡಿಸಿ
ನೆರೆವೆನು ಚೆನ್ನಮಲ್ಲಿಕಾರ್ಜುನನ.
86
ಉರಿಯೊಡ್ಡಿದಡೆ ಸೀತಳವೆನಗೆ.
ಗಿರಿಮೇಲೆ ಬಿದ್ದರೆ ಪುಷ್ಪವೆನಗೆ.
ಸಮುದ್ರಮೇಲುವಾಯಿದರೆ ಕಾಲುವೆಯೆನಗೆ.
ಚೆನ್ನಮಲ್ಲಿಕಾರ್ಜುನಾ, ನಿಮ್ಮಾಣೆಯೆಂಬುದು ತಲೆಯೆತ್ತಿ ಬಾರದ ಭಾರವೆನಗೆ.
87
ಉಸುರಿನ ಪರಿಮಳವಿರಲು
ಕುಸುಮದ ಹಂಗೇಕಯ್ಯಾ
ಕ್ಷಮೆ ದಮೆ ಶಾಂತಿ ಸೈರಣೆಯಿರಲು
ಸಮಾಧಿಯ ಹಂಗೇಕಯ್ಯಾ
ಲೋಕವೆ ತಾನಾದ ಬಳಿಕ ಏಕಾಂತದ ಹಂಗೇಕಯ್ಯಾ ಚೆನ್ನಮಲ್ಲಿಕಾರ್ಜುನಾ ?
88
ಉಳುಹುವ, ಕರವ ನೇಹವುಂಟೆ ನಿಮ್ಮಲ್ಲಿ
ಸಂಸಾರಕ್ಕೆಡೆಯಾ [ಡದ] ಭಕ್ತಿಯೊಳವೆ
ಎನ್ನದೇವ ಚೆನ್ನಮಲ್ಲಿಕಾರ್ಜುನಯ್ಯಾ, ಏನ ಹೇಳುವೆನಯ್ಯ ಲಜ್ಜೆಯ ಮಾತನು
89
ಉಳ್ಳುದೊಂದು ತನು, ಉಳ್ಳುದೊಂದು ಮನ.
ನಾನಿನ್ನಾವ ಮನದಲ್ಲಿ ಧ್ಯಾನವ ಮಾಡುವೆನಯ್ಯಾ ?
ಸಂಸಾರವನಾವ ಮನದಲ್ಲಿ ತಲ್ಲೀಯವಾಹೆನಯ್ಯಾ ?
ಅಕಟಕಟಾ, ಕೆಟ್ಟೆ ಕೆಟ್ಟೆ ? ಸಂಸಾರಕ್ಕಲ್ಲಾ, ಪರಮಾರ್ಥಕ್ಕಲ್ಲಾ ?
ಎರಡಕ್ಕೆ ಬಿಟ್ಟ ಕರುವಿನಂತೆ ?
ಬಿಲ್ವ ಬೆಳವಲಕಾಯನೊಂದಾಗಿ ಹಿಡಿಯಬಹುದೆ ಚೆನ್ನಮಲ್ಲಿಕಾರ್ಜುನಾ ?
90
ಊಡಿದಡುಣ್ಣದು, ನೀಡಿದಡೊಲಿಯದು.
ಕಾಡದು ಬೇಡದು ಒಲಿಯದು ನೋಡಾ.
ಊಡಿದಡುಂಡು ನೀಡಿದಡೊಲಿದು ಬೇಡಿದ ವರವ ಕೊಡುವ
ಜಂಗಮಲಿಂಗದ ಪಾದವ ಹಿಡಿದು ಬದುಕಿದೆ, ಕಾಣಾ ಚೆನ್ನಮಲ್ಲಿಕಾರ್ಜುನಾ.
91
ಊರ ನಡುವೆ ಒಂದು ಬೇಂಟೆ ಬಿದ್ದಿತ್ತು.
ಆರು ಕಂಡವರು ತೋರಿರಯ್ಯಾ.
ಊರಿಗೆ ದೂರುವೆನಗುಸೆಯನಿಕ್ಕುವೆ
ಅರಸುವೆನೆನ್ನ ಬೇಂಟೆಯ.

Downloaded from: **http://www.lingayatreligion.com**

ಅರಿತು ಅರಿಯದೆ ಒಂದು ಬೇಂಟೆಯನಾಡಿದೆನು. ಅರಸಿಕೊಡಾ,
ಚೆನ್ನಮಲ್ಲಿಕಾರ್ಜುನಾ.
92
ಊರ ಮುಂದೆ ಹಾಲತೊರೆ ಇರಲು
ನೀರಡಸಿ ಬಂದೆನಲ್ಲಯ್ಯ ನಾನು.
ಬರುದೊರೆವೋದವಳನೆನ್ನನಪ್ಪದಿರಯ್ಯಾ.
ನೀನೊತ್ತಿದ ಕಾರಣ ಬಂದೆನಯ್ಯ.
ಹೆರಿಗೆ ಕೂತವಳ ತೆಗೆದಪ್ಪುವನೆಗ್ಗ ನೋಡಾ ?
ಈ ಸೂನೆಗಾರಂಗೆ ಕುರಿಯ ಮಾರುವರೆ ?
ಮಾರಿದರೆಮ್ಮವರೆನ್ನ ನಿನಗೆ.
ಎನ್ನತ್ತ ಮುಂದಾಗದಿರು, ಎನ್ನಮೇಲೆ ಕಾಲನಿಡದಿರು. ಚೆನ್ನಮಲ್ಲಿಕಾರ್ಜುನಂಗೆ ಸಲೆ
ಮಾರುವೋದವಳಾನು.
93
ಊರ ಸೀರೆಗೆ ಅಸಗ ತಡಬಡಗೊಂಬಂತೆ
ಹೊನ್ನೆನ್ನದು, ಮಣ್ಣೆನ್ನದು ಎಂದು ನೆನನೆನದು ಬಡವಾದೆ.
ನಿಮ್ಮನರಿಯದ ಕಾರಣ ಕೆಮ್ಮನೆ ಕೆಟ್ಟೆನಯ್ಯಾ ಚೆನ್ನಮಲ್ಲಿಕಾರ್ಜುನಾ.
94
ಎನಗೇಕಯ್ಯಾ ನಾ ಪ್ರಪಂಚಿನ ಪುತ್ಥಳಿ.
ಮಾಯಿಕದ ಮಲಭಾಂಡ, ಆತುರದ ಭವನಿಳಯ.
ಜಲಕುಂಭದ ಒಡೆಯಲ್ಲಿ ಒಸರುವ ನೆಲೆವನೆಗೇಕಯ್ಯಾ ?
ಬೆರಳು ತಾಳಹಣ್ಣ ಹಿಸುಕಿದಡೆ ಮೆಲಲುಂಟೆ ?
ಬಿತ್ತೆಲ್ಲಾ ಜೀವ ಅದರೊಪ್ಪದ ತೆರ ಎನಗೆ.
ಎನ್ನ ತಪ್ಪನೊಪ್ಪಗೊಳ್ಳಿ, ಚೆನ್ನಮಲ್ಲಿಕಾರ್ಜುನದೇವರದೇವ ನೀವೆ ಅಣ್ಣಗಳಿರಾ.
95
ಎನ್ನ ಅಂಗದಲ್ಲಿ ಆಚಾರವ ತೋರಿದನಯ್ಯಾ ಬಸವಣ್ಣನು.
ಆ ಆಚಾರವನೆ ಲಿಂಗವೆಂದರುಹಿದನಯ್ಯಾ ಬಸವಣ್ಣನು.
ಎನ್ನ ಪ್ರಾಣದಲ್ಲಿ ಅರಿವ ತೋರಿದನಯ್ಯಾ ಬಸವಣ್ಣನು.
ಆ ಅರಿವೆ ಜಂಗಮವೆಂದರುಹಿದನಯ್ಯಾ ಬಸವಣ್ಣನು.
ಚೆನ್ನಮಲ್ಲಕಾರ್ಜುನಯ್ಯಾ,
ಎನ್ನ ಹೆತ್ತತಂದೆ ಸಂಗನಬಸವಣ್ಣನು ಎನಗೀ ಕ್ರಮವನರುಹಿದನಯ್ಯಾ ಪ್ರಭುವೆ.
96
ಎನ್ನ ಕಾಯ ಮಣ್ಣು, ಜೀವ ಬಯಲು,
ಆವುದ ಹಿಡಿವೆನಯ್ಯಾ.
ದೇವಾ, ನಿಮ್ಮನಾವ ಪರಿಯಲ್ಲಿ ನೆನೆವೆನಯ್ಯಾ ?
ಎನ್ನ ಮಾಯೆಯನು ಮಾಣಿಸಯ್ಯಾ ಚೆನ್ನಮಲ್ಲಿಕಾರ್ಜುನಾ.
97
ಎನ್ನ ತುಂಬಿದ ಜವ್ವನ, ತುಳುಕುವ ಮೋಹನವ,
ನಿನಗೆ ಇಂಬು ಮಾಡಿಕೊಂಡಿರ್ದೆನಲ್ಲಾ ಎಲೆಯಯ್ಯಾ.
ಎನ್ನ ಲಂಬಿಸುವ ಲಾವಣ್ಯದ ರೂಪುರೇಖೆಗಳ

Downloaded from: **http://www.lingayatreligion.com**

ನಿನ್ನ ಕಣ್ಣಿಂಗೆ ಕೈವಿಡಿದಂತೆ ಮಾಡಿರ್ದೆನಲ್ಲಯ್ಯ.
ನಿನ್ನ ಮುಂದಿರಟ್ಟಲನ್ಯರು ಕೊಂಡೊಯಿವಾಗಲೆಂತು ಸೈರಿಸಿದೆ ಹೇಳಾ
ಚೆನ್ನಮಲ್ಲಿಕಾರ್ಜುನಾ ?
98
ಎನ್ನಂತೆ ಪುಣ್ಯಗೈದವರುಂಟೆ ,
ಎನ್ನಂತೆ ಭಾಗ್ಯಂಗೈದವರುಂಟೆ ,
ಕಿನ್ನರನಂತಪ್ಪ ಸೋದರರೆನಗೆ,
ಏಳೇಳು ಜನ್ಮದಲ್ಲಿ ಶಿವಭಕ್ತರೆ ಬಂಧುಗಳೆನಗೆ.
ಚೆನ್ನಮಲ್ಲಿಕಾರ್ಜುನನಂತಪ್ಪ ಗಂಡ ನೋಡಾ ಎನಗೆ.
99
ಎನ್ನ ನಾನರಿಯದಲ್ಲಿ ಎಲ್ಲಿರ್ದೆ ಹೇಳಯ್ಯಾ
ಚಿನ್ನದೊಳಗಣ ಬಣ್ಣದಂತೆ ಎನ್ನೊಳಗಿರ್ದೆ.
ಅಯ್ಯಾ ಎನ್ನೊಳಗೆ ಇನಿತಿರ್ದು ಮೈದೋರದ ಭೇದವ ನಿಮ್ಮಲ್ಲಿ ಕಂಡೆ ಕಾಣಾ
ಚೆನ್ನಮಲ್ಲಿಕಾರ್ಜುನಾ.
100
ಎನ್ನ ನಾಲಗೆಗೆ ಬಪ್ಪರುಚಿ ನಿಮಗರ್ಪಿತ.
ಎನ್ನ ನಾಸಿಕಕ್ಕೆ ಬಪ್ಪ ಪರಿಮಳ ನಿಮಗರ್ಪಿತ.
ಎನ್ನ ಕಾಯಕ್ಕೆ ಬಪ್ಪ ಸುಖ ನಿಮಗರ್ಪಿತ.
ಚೆನ್ನಮಲ್ಲಿಕಾರ್ಜುನಯ್ಯಾ, ನಿಮಗರ್ಪಿಸದ ಮುನ್ನ ಮುಟ್ಟಲಮ್ಮೆನಯ್ಯಾ.
101
ಎನ್ನನಿರಿದಡೆ ಸೈರಿಸುವೆ, ಎನ್ನ ಕೊರೆದಡೆ ಸೈರಿಸುವೆ,
ಎನ್ನ ಕಡಿದು ಹರಹಿದಡೆ ಮನಕ್ಕೆ ತಾರೆನು.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣರನೊಡನೆನ್ನ ಕಣ್ಣ ಮುಂದೆ ಕಂಡು ಮೊಗೆದುಂಡಮೃತದಂತೆ
ಆದೆನಯ್ಯಾ.
102
ಎನ್ನ ಪ್ರಾಣ ಜಂಗಮ,
ಎನ್ನ ಜೀವ ಜಂಗಮ,
ಎನ್ನ ಪುಣ್ಯದ ಫಲವು ಜಂಗಮ
ಎನ್ನ ಹ[ರು]ರುಷದ ಮೇರೆ [ಜಂಗಮ]
ಚೆನ್ನಮಲ್ಲಿಕಾರ್ಜುನಾ, ಜಂಗಮ ತಿಂಥಿಣಿಯಲೋಲಾಡುವೆ.
103
ಎನ್ನ ಭಕ್ತಿ ಬಸವಣ್ಣನ ಧರ್ಮ, ಎನ್ನ ಜ್ಞಾನ ಪ್ರಭುವಿನ ಧರ್ಮ,
ಎನ್ನ ಪರಿಣಾಮ ಚೆನ್ನಬಸವಣ್ಣನ ಧರ್ಮ.
ಈ ಮೂವರು ಒಂದೊಂದ ಕೊಟ್ಟೊಡೆನಗೆ
ಮೂರು ಭಾವವಾಯಿತ್ತು.
ಆ ಮೂರನು ನಿಮ್ಮಲ್ಲಿ ಸಮರ್ಪಿಸಿದ ಬಳಿಕ
ಎನಗಾವ ಜಂಜಡವಿಲ್ಲ.
ಚೆನ್ನಮಲ್ಲಿಕಾರ್ಜುನದೇವರ ನೆನಹಿನಲ್ಲಿ ನಿಮ್ಮ ಕರುಣದ ಕಂದನಾಗಿದ್ದೆ ಕಾಣಾ

Downloaded from: **http://www.lingayatreligion.com**

ಸಂಗನಬಸವಣ್ಣಾ.
104
ಎನ್ನ ಮನ ಪ್ರಾಣ ಭಾವ ನಿಮ್ಮಲ್ಲಿ ನಿಂದಬಳಿಕ
ಕಾಯದ ಸುಖವ ನಾನೇನೆಂದರಿಯೆನು.
ಆರು ಸೋಂಕಿದರೆಂದರಿಯೆನು.
ಚೆನ್ನಮಲ್ಲಿಕಾರ್ಜುನನ ಮನದೊಳಗೆ ಒಚ್ಚತವಾದ ಬಳಿಕ
ಹೊರಗೇನಾಯಿತ್ತೆಂದರಿಯೆನು.
105
ಎನ್ನ ಮನವ ಮಾರುಗೊಂಡನವ್ವಾ,
ಎನ್ನ ತನುವ ಸೂರೆಗೊಂಡನವ್ವಾ,
ಎನ್ನ ಸುಖವನೊಪ್ಪುಗೊಂಡನವ್ವಾ.
ಎನ್ನ ಇರವನಿಂಬುಗೊಂಡನವ್ವಾ. ಚೆನ್ನಮಲ್ಲಿಕಾರ್ಜುನನ ಒಲುಮೆಯವಳಾನು.
106
ಎನ್ನ ಮಾಯದ ಮದವ ಮುರಿಯಯ್ಯಾ.
ಎನ್ನ ಕಾಯದ ಕತ್ತಲೆಯ ಕಳೆಯಯ್ಯಾ.
ಎನ್ನ ಜೀವದ ಜಂಜಡವ ಮಾಣಿಸಯ್ಯಾ.
ಎನ್ನ ದೇವ ಚೆನ್ನಮಲ್ಲಿಕಾರ್ಜುನಯ್ಯಾ, ಎನ್ನ ಸುತ್ತಿದ ಪ್ರಪಂಚವ ಬಿಡಿಸಾ ನಿಮ್ಮ ಧರ್ಮ
107
ಎನ್ನ ಮೀಸಲ ಬೀಸರ ಮಾಡಿದೆಯಲ್ಲಯ್ಯ.
ಎನ್ನ ಮೀಸಲ ಬೀಸಾಡಿ ಕಳೆದೆಯಲ್ಲಯ್ಯ.
ಎನ್ನ ಭಾಷೆಯ ಪೈಸರ ಮಾಡಿದೆಯಲ್ಲಯ್ಯ.
ಎನ್ನ ಭಾಷೆಗೆ ದೋಷವ ತೋರಿಸಿದೆಯಲ್ಲಯ್ಯ.
ಎನ್ನ ಮೀಸಲ ಕಾಯವ ನಿಮಗೆಂದಿರಿಸಿಕೊಂಡಿದ್ದಡೆ,
ಬೀಸಾಡಿ ಕಳೆವರೆ ಹೇಳಾ ತಂದೆ ?
ಏಸು ಕಾಲ ನಿಮಗೆ ನಾನು ಮಾಡಿದ ತಪ್ಪ
ಈ ಸಮಯದಲ್ಲಿ ಹೊರಿಸಿ ಕೊಂದೆಯಲ್ಲಾ ಚೆನ್ನಮಲ್ಲಿಕಾರ್ಜುನಾ.
108
ಎಮ್ಮೆಗೊಂದು ಚಿಂತೆ ಸಮ್ಮಗಾರಗೊಂದು ಚಿಂತೆ.
ಧರ್ಮಿಗೊಂದು ಚಿಂತೆ ಕರ್ಮಿಗೊಂದು ಚಿಂತೆ.
ಎನಗೆ ಎನ್ನ ಚಿಂತೆ, ತನಗೆ ತನ್ನ ಕಾಮದ ಚಿಂತೆ.
ಒಲ್ಲೆ ಹೋಗು, ಸೆರಗ ಬಿಡು ಮರುಳೆ.
ಎನಗೆ ಚೆನ್ನಮಲ್ಲಿಕಾರ್ಜುನದೇವರು ಒಲಿವರೊ ಒಲಿಯರೊ ಎಂಬ ಚಿಂತೆ ?
109
ಎರದ ಮುಳ್ಳಿನಂತೆ ಪರಗಂಡರೆನಗವ್ವಾ.
ಸೋಂಕಲಮ್ಮೆ ಸುಳಿಯಲಮ್ಮೆದ
ನಂಬಿ ನಚ್ಚಿ ಮಾತಾಡಲಮ್ಮೆನವ್ವಾ.
ಚೆನ್ನಮಲ್ಲಿಕಾರ್ಜುನನಲ್ಲದ ಗಂಡರಿಗೆ ಉರದಲ್ಲಿ ಮುಳ್ಳುಂಟೆಂದು
ನಾನಪ್ಪಲಮ್ಮೆನವ್ವಾ.
110

Downloaded from: **http://www.lingayatreligion.com**

ಎರೆಯಂತೆ ಕರಕರಗಿ, ಮಳಲಂತೆ ಜರಿಜರಿದು,
ಕನಸಿನಲ್ಲಿ ಕಳವಳಿಸಿ, ಆನು ಬೆರಗಾದೆ.
ಆವಿಗೆಯ ಕಿಚ್ಚಿನಂತೆ ಸುಳಿಸುಳಿದು ಬೆಂದೆ
ಆಪತ್ತಿಗೆ ಸಖಿಯರನಾರನೂ ಕಾಣೆ.
ಅರಸಿ ಕಾಣದ ತನುವ, ಬೆರಸಿ ಕೂಡದ ಸುಖವ, ಎನಗೆ ನೀ ಕರುಣಿಸಾ,
ಚೆನ್ನಮಲ್ಲಿಕಾರ್ಜುನಾ.

111
ಎಲುವಿಲ್ಲದ ನಾಲಗೆ ಹೊದಕುಳಿಗೊಂಡಾಡುದು,
ಎಲೆ ಕಾಲಂಗೆ ಗುರಿಯಾದ ಕರ್ಮಿ.
ಉಲಿಯದಿರು, ಉಲಿಯದಿರು ಭವಭಾರಿ ನೀನು.
ಹಲವು ಕಾಲದ ಹುಲುಮನುಜಂಗೆ
ಹುಲುಮನುಜ ಹೆಂಡತಿ ಇವರಿದ್ದರೆ ಅದಕ್ಕದು ಸರಿ.
ಚೆನ್ನಮಲ್ಲಿಕಾರ್ಜುನನೆ ಗಂಡನೆನಗೆ
ಲೋಕದೊಳಗ್ವೊಂಡಿರುಂಟಾದರೆ ಮಾಡಿಕೊ, ಎನ್ನ ಬಿಡು ಮರುಳೆ.
112
ಎಲೆ ಅಣ್ಣಾ ಅಣ್ಣಾ, ನೀವು ಮರುಳಲ್ಲಾ ಅಣ್ಣಾ,
ಎನ್ನ ನಿನ್ನಳವೆ ?
ಹದಿನಾಲ್ಕು ಲೋಕವ ನುಂಗಿದ ಕಾಮನ ಬಾಣದ ಗುಣ
ಎನ್ನ ನಿನ್ನಳವೆ ?
ವಾರುವ ಮುಗ್ಗಿದಡೆ, ಮಿಡಿಹಯ ಹೊಯ್ವರೆ ?
ಮುಗ್ಗಿದ ಭಂಗವ ಮುಂದೆ ರಣದಲ್ಲಿ ತಿಳಿವುದು.
ನಿನ್ನ ನೀ ಸಂವರಿಸಿ ಕೈದುವ ಕೊಳ್ಳಿರಣ್ಣಾ, ಚೆನ್ನಮಲ್ಲಿಕಾರ್ಜುನನೆಂಬ ಹಗೆಗೆ
ಬೆಂಗೊಡದಿರಣ್ಣಾ.
113
ಎಲೆ ಕಾಲಂಗೆ ಸೂರೆಯಾದ ಕರ್ಮಿ,
ಎಲೆ ಕಾಮಂಗೆ ಗುರಿಯಾದ ಮರುಳೆ,
ಬಿಡು ಬಿಡು ಕೈಯ
ನರಕವೆಂದರಿಯದೆ ತಡೆವರೆ ಮನುಜಾ ?
ಚೆನ್ನಮಲ್ಲಿಕಾರ್ಜುನನ ಪೂಜೆಯ ವೇಳೆ ತಪ್ಪಿದರೆ ನಾಯಕ ನರಕ ಕಾಣಾ ನಿನಗೆ.
114
ಎಲೆ ತಾಯಿ ನೀನಂತಿರು,
ಎಲೆ ತಂದೆ ನೀನಂತಿರು,
ಎಲೆ ಬಂಧುವೆ ನೀನಂತಿರು,
ಎಲೆ ಕುಲವೆ ನೀನಂತಿರು,
ಎಲೆ ಬಲವೆ ನೀನಂತಿರು.
ಚೆನ್ನಮಲ್ಲಿಕಾರ್ಜುನನ ಕೂಡುವ ಭರದಿಂದ
ಹೋಗುತ್ತಿದ್ದೇನೆ. ನಿಮಗೆ ಶರಣಾರ್ಥಿ ಶರಣಾರ್ಥಿ.
115

Downloaded from: **http://www.lingayatreligion.com**

ಎಲೆ ದೇವಾ, ಸಕಲ ಕರಣಂಗಳ ಉಪಟಳಕ್ಕಂಜಿ
ನಿಮ್ಮ ಶರಣರ ಮರೆಯೊಕ್ಕು ಕಾರುಣ್ಯಮಂ ಪಡೆದು,
ಬಂದು ನಿಮ್ಮ ಶ್ರೀ ಮೂರ್ತಿಯ ಕಂಡೆ.
ಇನ್ನು ಎನ್ನ ನಿಮ್ಮೊಳಗೆ ಐಕ್ಯವ ಮಾಡಿಕೊಳ್ಳಾ ಚೆನ್ನಮಲ್ಲಿಕಾರ್ಜುನಾ.
116
ಎಲ್ಲ ಎಲ್ಲವನರಿದು ಫಲವೇನಯ್ಯಾ,
ತನ್ನ ತಾನರಿಯಬೇಕಲ್ಲದೆ ?
ತನ್ನಲ್ಲಿ ಅರಿವು ಸ್ವಯವಾಗಿರಲು
ಅನ್ಯರ ಕೇಳಲುಂಟೆ ?
ಚೆನ್ನಮಲ್ಲಿಕಾರ್ಜುನಾ,
ನೀನರಿವಾಗಿ ಮುಂದುದೋರಿದ ಕಾರಣ ನಿಮ್ಮಿಂದ ನಿಮ್ಮನರಿದೆನಯ್ಯಾ ಪ್ರಭುವೆ.

117
ಎಲ್ಲರ ಗಂಡರ ಶೃಂಗಾರದ ಪರಿಯಲ್ಲ,
ಎನ್ನ ನಲ್ಲನ ಶೃಂಗಾರದ ಪರಿ ಬೇರೆ.
ಶಿರದಲ್ಲಿ ಕಂಕಣ, ಉರದಮೇಲಂದುಗೆ, ಕಿವಿಯಲ್ಲಿ ಹಾವುಗೆ,
ಉಭಯ ಸಿರಿವಂತನ ಮೊಳಕಾಲಲ್ಲಿ ಜಳವಟ್ಟಿಗೆ.
ಉಂಗುಟದಲ್ಲಿ ಮೂಕುತಿ - ಇದು ಜಾಣರಿಗೆ ಜಗುಳಿಕೆ. ಚೆನ್ನಮಲ್ಲಿಕಾರ್ಜುನಯ್ಯನ
ಶೃಂಗಾರದ ಪರಿ ಬೇರೆ.
118
ಎಲ್ಲರ ಪ್ರಾಣವಂಗೈಯಲದೆ
ಎನ್ನ ಪ್ರಾಣ ಜಂಗಮದಲದೆ.
ಎಲ್ಲರ ಆಯುಷ್ಯ ಶಿರದಲ್ಲಿ ಬರೆದಿದೆ
ಎನ್ನ ಆಯುಷ್ಯ ನಿಮ್ಮಲ್ಲಿ ಸಂದಿದೆ.
ಚೆನ್ನಮಲ್ಲಿಕಾರ್ಜುನಾ, ನಿಮ್ಮ ಶರಣರೆನ್ನ ಪ್ರಾಣಲಿಂಗವೆಂದು ಧರಿಸಿದೆನು.
119
ಎಲ್ಲಿ ಹೋದಡೆ ಕಲಿಗೆ ಭಯವಿಲ್ಲ,
ಹಂದೆಗೆ ಸುಖವಿಲ್ಲ ಕಾಣಿರಣ್ಣಾ.
ಈವಂಗವಗುಣವಿಲ್ಲ, ಕರುಣವುಳ್ಳವಂಗೆ ಪಾಪವಿಲ್ಲ.
ನಿಮ್ಮ ಮುಟ್ಟಿ ಪರಧನ ಪರಸ್ತ್ರೀಯ ತೊರೆದಾತಂಗೆ ಮುಂದೆ ಭವವಿಲ್ಲ
ಚೆನ್ನಮಲ್ಲಿಕಾರ್ಜುನಾ.
120
ಎಳೆವರದಲ್ಲಿ ಮೋಹಮೊಳೆ ಹುಟ್ಟಿತ್ತು,
ಗುರುಹಸ್ತದಲ್ಲಿ ಅಂಕುರವಾಯಿತ್ತು,
ಏಳೆಲೆ ಹೋಯಿತ್ತು ಬಳಗದ ನಡುವೆ.
ಕೇಳೆಲೆಯವ್ವಾ, ನೀನು ಕೇಳು ತಾಯೆ.
ಒಂಬತ್ತೆಲೆ ಎಂದಿಂಗೆ ಪರಿಪೂರ್ಣವಾಯಿತ್ತು ನೋಡವ್ವಾ.
ಚೆನ್ನಮಲ್ಲಿಕಾರ್ಜುನನನೆ ಗಂಡನೆನಗೆ
ಲೋಕದವರ ಸಂಬಂಧವಿಲ್ಲೆಂದು ಬಿಟ್ಟು ತೊಲಗಿದೆನು ಕಾಣಾ ಎಲೆಯವ್ವಾ.
121

Downloaded from: **http://www.lingayatreligion.com**

ಐದು ಪರಿಯ ಬಣ್ಣವ ತಂದು ಕೊಟ್ಟಡೆ
ನಾಲ್ಕು ಮೊಲೆಯ ಹಸುವಾಯಿತ್ತು.
ಹಸುವಿನ ಬಸಿರಲ್ಲಿ ಕರುವು ಹುಟ್ಟಿತ್ತು.
ಕರುವ ಮುಟ್ಟಲೀಯದೆ ಹಾಲು ಕರೆದುಕೊಂಡಡೆ
ಕರ ರುಚಿಯಾಯಿತ್ತು.
ಮಧುರ ತಲೆಗೇರಿ ಅರ್ಥವ ನೀಗಾಡಿ
ಆ ಕರುವಿನ ಬೆಂಬಳಿವಿಡಿದು ಭವಹರಿಯಿತ್ತು ಚೆನ್ನಮಲ್ಲಿಕಾರ್ಜುನಾ.
122
ಒಂದರಳ ಶಿವಂಗೆಂದ ಫಲದಿಂದ
ಶಿವಪದಂಗಳಾದುದ ಕೇಳಿಯರಿಯಾ ?
ಒಂದರಳನೇರಿಸುವಲ್ಲಿ ಅಡ್ಡವಿಸಿದರೆ
ಗೊಂದಣದ ಕುಲಕೋಟಿಗೆ ನರಕ ಕಾಣಾ.
ಇಂದು ಚೆನ್ನಮಲ್ಲಿಕಾರ್ಜುನನ ವೇಳೆ ತಡೆದಡೆ ಮುಂದೆ ಬಹ ನರಕಕ್ಕೆ ಕಡೆಯಿಲ್ಲ
ಮರುಳೆ.
123
ಒಂದಲ್ಲ ಎರಡಲ್ಲ ಮೂರಲ್ಲ ನಾಲ್ಕಲ್ಲ
ಎಂಬತ್ತುನಾಲ್ಕುಲಕ್ಷಯೋನಿಯೊಳಗೆ ಬಾರದ ಭವಂಗಳಲ್ಲಿ ಬಂದೆ ಬಂದೆ.
ಉಂಡೆ ಉಂಡೆ ಸುಖಾಸುಖಂಗಳ.
ಹಿಂದಣ ಜನ್ಮ ತಾನೇನಾದಡೆಯೂ ಆಗಲಿ ಮುಂದೆ ನೀ ಕರುಣಿಸಾ,
ಚೆನ್ನಮಲ್ಲಿಕಾರ್ಜುನಾ.
124
ಒಡಲ ಕಳವಳಕ್ಕಾಗಿ ಅಡವಿಯ ಪೊಕ್ಕೆನು.
ಗಿಡುಗಿಡುದಪ್ಪದೆ ಬೇಡಿದೆನೆನ್ನಂಗಕ್ಕೆಂದು.
ಅವು ನೀಡಿದವು ತಮ್ಮ ಲಿಂಗಕ್ಕೆಂದು.
ಆನು ಬೇಡಿ ಭವಿಯಾದೆನು ; ಅವು ನೀಡಿ ಭಕ್ತರಾದವು.
ಇನ್ನು ಬೇಡಿದೆನಾದಡೆ ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮಾಣೆ.
125
ಒಡಲಿಲ್ಲದ ನುಡಿಯಿಲ್ಲದ ಕಡೆಯಿಲ್ಲದ
ನಲ್ಲನ ಒಡಗೂಡಿ ಸುಖಿಯಾದೆ ಕೇಳಿರಯ್ಯಾ.
ಭಾಷೆ ಪೈಸರವಿಲ್ಲ, ಓಸರಿಸೆನನ್ಯಕ್ಕೆ,
ಆಸೆ ಮಾಡೆನು ಮತ್ತೆ ಭಿನ್ನ ಸುಖಕ್ಕೆ.
ಅರಳಿದು ಮೂರಾಗಿ, ಮೂರಳಿದು ಎರಡಾಗಿ,
ಎರಡಳಿದು ಒಂದಾಗಿ ನಿಂದೆನಯ್ಯಾ.
ಬಸವಣ್ಣ ಮೊದಲಾದ ಶರಣರಿಗೆ ಶರಣಾರ್ಥಿ
ಆ ಪ್ರಭುವಿನಿಂದ ಕೃತಕೃತ್ಯಳಾದೆನು ನಾನು.
ಮರೆಯಲಾಗದು, ನಿಮ್ಮ ಶಿಶುವೆಂದು ಎನ್ನನು, ಚೆನ್ನಮಲ್ಲಿಕಾರ್ಜುನನ ಬೆರೆಸೆಂದು
ಹರಸುತ್ತಿಹುದು.
126
ಒಪ್ಪುವ ವಿಭೂತಿಯ ನೊಸಲಲ್ಲಿ ಧರಿಸಿ,

Downloaded from: **http://www.lingayatreligion.com**

ದೃಷ್ಟಿವಾ[ರಿ] ನಿಮ್ಮನೋಡಲೊಡನೆ
ಬೆಟ್ಟದಷ್ಟು ತಪ್ಪುಳ್ಳಡೆಯೂ ಮುಟ್ಟಲಮ್ಮವು ನೋಡಾ.
ದುರಿತ ಅನ್ಯಾಯವ ಪರಿಹರಿಸಬಲ್ಲಡೆ
'ಓಂ ನಮಃ ಶಿವಾಯ' ಶರಣೆಂಬುದೆ ಮಂತ್ರ.
ಅದೆಂತೆಂದಡೆ
'ನಮಃ ಶಿವಾಯೇತಿ ಮಂತ್ರಂ ಯಃ ಕರೋತಿ ತ್ರಿಪುಂಡ್ರಕಂ
ಸಪ್ತಜನ್ಮಕೃತಂ ಪಾಪಂ ತತ್ಕ್ಷಣಾದೇವ ನಶ್ಯತಿ'
ಇಂತೆಂದುದಾಗಿ,
ಸಿಂಹದ ಮರಿಯ ಸೀಳ್ನಾಯಿ ತಿಂಬಡೆ ಭಂಗವಿನ್ನಾರದೊ ಚೆನ್ನಮಲ್ಲಿಕಾರ್ಜುನಾ ?
127
ಒಬ್ಬಂಗೆ ಇಹವುಂಟು ಒಬ್ಬಂಗೆ ಪರವುಂಟು,
ಒಬ್ಬಂಗೆ ಇಹವಿಲ್ಲ ಒಬ್ಬಂಗೆ ಪರವಿಲ್ಲ.
ಒಬ್ಬಂಗೆ ಇಹಪರವೆರಡೂ ಇಲ್ಲ.
ಚೆನ್ನಮಲ್ಲಿಕಾರ್ಜುನದೇವರ ಶರಣರಿಗೆ ಇಹಪರವೆರಡೂ ಉಂಟು.
128
ಒಬ್ಬನ ಮನೆಯಲುಂಡು, ಒಬ್ಬನ ಮನೆಯಲುಟ್ಟು,
ಒಬ್ಬನ ಬಾಗಿಲ ಕಾದಡೆ ನಮಗೇನಯ್ಯಾ ?
ನೀನಾರಿಗೊಲಿದಡೂ ನಮಗೇನಯ್ಯಾ ?
ಚೆನ್ನಮಲ್ಲಿಕಾರ್ಜುನಯ್ಯಾ, ಭಕ್ತಿಯ ಬೇಡಿ ಬಾಯಿ ಬೂತಾಯಿತ್ತು.
129
ಒಮ್ಮೆ ಕಾಮನ ಕಾಲ ಹಿಡಿವೆ,
ಮತ್ತೊಮ್ಮೆ ಚಂದ್ರಮಂಗೆ ಸೆರಗೊಡ್ಡಿ ಬೇಡುವೆ.
ಸುಡಲೀ ವಿರಹವ, ನಾನಾರಿಗೆ ಧೃತಿಗೆಡುವೆ ?
ಚೆನ್ನಮಲ್ಲಿಕಾರ್ಜುನ ಕಾರಣ ಎಲ್ಲರಿಗೆ ಹಂಗುಗಿತ್ತಿಯಾದೆನವ್ವಾ.
130
ಒಲುಮೆ ಒಚ್ಚತವಾದವರು ಕುಲಛಲವನರಸುವರೆ ?
ಮರುಳುಗೊಂಡವರು ಲಜ್ಜೆನಾಚಿಕೆಯ ಬಲ್ಲರೆ ?
ಚೆನ್ನಮಲ್ಲಿಕಾರ್ಜುನದೇವಗೊಲಿದವರು ಲೋಕಾಭಿಮಾನವ ಬಲ್ಲರೆ ?
131
ಒಲೆಯ ಹೊಕ್ಕು ಉರಿಯ ಮರೆದವಳ,
ಮಲೆಯ ಹೊಕ್ಕು ಉಲುಹ ಮರೆದವಳ ನೋಡು ನೋಡಾ.
ಸಂಸಾರ ಸಂಬಂಧವ ನೋಡಾ.
ಸಂಸಾರ ಸಂಬಂಧ ಭವಭವದಲ್ಲಿ ಬೆನ್ನಿಂದ ಬಿಡದು.
ಸರವು ನಿಸ್ಸರವು ಒಂದಾದವಳನು, ಎನ್ನಲೇನ ನೋಡುವಿರಯ್ಯಾ,
ಚೆನ್ನಮಲ್ಲಿಕಾರ್ಜುನಯ್ಯ
132
ಒಳಗಣ ಗಂಡನಯ್ಯಾ, ಹೊರಗಣ ಮಿಂಡನಯ್ಯಾ.
ಎರಡನೂ ನಡೆಸಲು ಬಾರದಯ್ಯಾ.
ಲೌಕಿಕ ಪಾರಮಾರ್ಥವೆಂಬೆರಡನೂ ನಡೆಸಲು ಬಾರದಯ್ಯಾ.

Downloaded from: **http://www.lingayatreligion.com**

ಚೆನ್ನಮಲ್ಲಿಕಾರ್ಜುನಯ್ಯಾ, ಬಿಲ್ವ ಬೆಳವಲಕಾಯಿ ಒಂದಾಗಿ ಹಿಡಿಯಲು ಬಾರದಯ್ಯಾ.
133
ಒಳಗ ಶೋದಿಸಿ ಹೊರಗ ಶುದ್ಧಯಿಸಿ
ಒಳಹೊರಗೆಂಬ ಉಭಯ ಶಂಕೆಯ ಕಳೆದು,
ಸ್ಫಟಿಕದ ಶಲಾಕೆಯಂತೆ ತಳವೆಳಗು ಮಾಡಿ
ಸುಕ್ಷೇತ್ರವನರಿದು ಬೀಜವ ಬಿತ್ತುವಂತೆ
ಶಿಷ್ಯನ ಸರ್ವ ಪ್ರಪಂಚ ನಿವೃತ್ತಿಯಂ ಮಾಡಿ ನಿಜೋಪದೇಶವನಿತ್ತು,
ಆ ಶಿಷ್ಯನ ನಿಜದಾದಿಯನ್ನೈದಿಸುವನೀಗ ಜ್ಞಾನಗುರು.
ಆ ಸಹಜ ಗುರುವೀಗ ಜಗದಾರಾಧ್ಯನು,
ಅವನ ಶ್ರೀಪಾದಕ್ಕೆ ನಮೋ ನಮೋ ಎಂಬೆ ಕಾಣಾ ಚೆನ್ನಮಲ್ಲಿಕಾರ್ಜುನಾ.
134
ಓದಿ ಓದಿ ವೇದ ವಾದಕ್ಕಿಕ್ಕಿತ್ತು.
ಕೇಳಿ ಕೇಳಿ ಶಾಸ್ತ್ರ ಸಂದೇಹಕ್ಕಿಕ್ಕಿತ್ತು.
ಅರಿದೆಹೆ ಅರಿದೆಹೆನೆಂದು ಆಗಮ ಅರೆಯಾಗಿ ಹೋಯಿತ್ತು.
ಪೂರೈಸಿಹೆ ಪೂರೈಸಿಹೆನೆಂದು
ಪುರಾಣ ಪೂರ್ವದ ಬಟ್ಟೆಗೆ ಹೋಯಿತ್ತು.
ನಾನೆತ್ತ ತಾನೆತ್ತ ? ಬೊಮ್ಮ ಬಟ್ಟಬಯಲು ಚೆನ್ನಮಲ್ಲಿಕಾರ್ಜುನಾ.
135
ಕಂಗಳ ಕಳೆದು ಕರುಳ ಕಿತ್ತು ಕಾಮನ ಮೂಗ ಕೊಯ್ದು
ಭಂಗದ ಬಟ್ಟೆಯ ಭವ ಗೆಲಿದವಳಿಗಂಗವೆಲ್ಲಿಯದು ಹೇಳಾ ?
ಶೃಂಗಾರವೆಂಬ ಹಂಚಿಗೆ ಹಲ್ಲ ತೆರೆದಡೇನುಂಟು ?
ಅಂಗವೆ ಲಿಂಗವಹ ಪರಿಯನೆನಗೆ ಹೇಳಾ ಶ್ರೀಗಿರಿ ಚೆನ್ನಮಲ್ಲಿಕಾರ್ಜುನಾ ?
136
ಕಂಗಳಲ್ಲಿ ಕಾಂಬೆನೆಂದು
ಕತ್ತಲೆಯ ಹೊಕ್ಕಡೆಂತಹುದಯ್ಯಾ ?
ಬೆಟ್ಟದ ತುದಿಯ ಮೆಟ್ಟಲೆಂದು
ಹಳ್ಳಕೊಳ್ಳಂಗಳಲ್ಲಿ ಇಳಿದಡೆಂತಹುದಯ್ಯಾ ?
ನೀನಿಕ್ಕಿದ ಸಯದಾನವನೊಲ್ಲದೆ
ಬೇರೆ ಬಯಸಿದೊಡೆಂತಹುದಯ್ಯಾ ?
ಚೆನ್ನಮಲ್ಲಿಕಾರ್ಜುನನ ಘನವನರಿಯಲೆಂದು
ಕಿರುಕುಳಕ್ಕೆ ಸಂದಡೆಂತಹುದಯ್ಯಾ ?ಕತ್ತಲೆಯ ಹೊಕ್ಕಡೆಂತಹುದಯ್ಯಾ ?
ಬೆಟ್ಟದ ತುದಿಯ ಮೆಟ್ಟಲೆಂದು
ಹಳ್ಳಕೊಳ್ಳಂಗಳಲ್ಲಿ ಇಳಿದಡೆಂತಹುದಯ್ಯಾ ?
ನೀನಿಕ್ಕಿದ ಸಯದಾನವನೊಲ್ಲದೆ
ಬೇರೆ ಬಯಸಿದೊಡೆಂತಹುದಯ್ಯಾ ?
ಚೆನ್ನಮಲ್ಲಿಕಾರ್ಜುನನ ಘನವನರಿಯಲೆಂದು ಕಿರುಕುಳಕ್ಕೆ ಸಂದಡೆಂತಹುದಯ್ಯಾ ?
137
ಕಂಗಳೊಳಗೆ ತೊಳಗಿ ಬೆಳಗುವ

Downloaded from: **http://www.lingayatreligion.com**

ದಿವ್ಯ ರೂಪವ ಕಂಡು ಮೈಮರೆದೆನವ್ವಾ.
ಮಣಿಮುಕುಟದ ಫಣಿಕಂಕಣದ ನಗೆಮೊಗದ
ಸುಲಿಪಲ್ಲ ಸೊಬಗನ ಕಂಡು ಮನಸೋತೆನವ್ವಾ.
ಇಂತಾಗಿ ಚೆನ್ನಮಲ್ಲಿಕಾರ್ಜುನನೆನ್ನ ಮದುವಣಿಗ, ಆನು ಮದುವಣಿಗಿ ಕೇಳಾ ತಾಯೆ.
138
ಕಂಡಡೆ ಒಂದು ಸುಖ, ಮಾತಾಡಿದಡೆ ಅನಂತ ಸುಖ.
ನೆಚ್ಚಿ ಮೆಚ್ಚಿದಡೆ ಕಡೆಯಿಲ್ಲದ ಹರುಷ.
ಮಾಡಿದ ಸುಖವನಗಲಿದರೆ ಪ್ರಾಣದ ಹೋಕು ಕಂಡಯ್ಯಾ.
ಚೆನ್ನಮಲ್ಲಿಕಾರ್ಜುನದೇವಯ್ಯಾ, ನಿಮ್ಮ ತೋರಿದ ಶ್ರೀಗುರುವಿನ ಪಾದವ ನೀನೆಂದು ಕಾಂಬೆನು.
139
ಕಟಿಹಾದ ಬಿದಿರಿನಲ್ಲಿ ಮರಳಿ ಕಳಲೆ ಮೂಡಬಲ್ಲುದೆ ?
ಸುಟ್ಟ ಮಡಕೆ ಮುನ್ನಿನಂತೆ ಮರಳಿ ಧರೆಯನಪ್ಪಬಲ್ಲುದೆ ?
ತೊಟ್ಟ ಬಿಟ್ಟು ಬಿದ್ದ ಹಣ್ಣು ಮರಳಿ ತೊಟ್ಟನಪ್ಪಬಲ್ಲುದೆ ?
ಕಷ್ಟಕರ್ಮಿ ಮನುಜರು ಕಾಣದೆ ಒಂದ ನುಡಿದಡೆ,
ನಿಷ್ಠೆಯುಳ್ಳ ಶರಣರು ಮರಳಿ ಮರ್ತ್ಯಕ್ಕೆ ಬಪ್ಪರೆ ಚೆನ್ನಮಲ್ಲಿಕಾರ್ಜುನಾ ?
140
ಕಟ್ಟಿದ ಕೆರೆಗೆ ಕೋಡಿ ಮಾಣದು.
ಹುಟ್ಟಿದ ಪ್ರಾಣಿಗೆ ಪ್ರಳಯ ತಪ್ಪದಿನ್ನೆಂತಯ್ಯಾ ?
ಅರುಹಿರಿಯರೆಲ್ಲ ವೃಥಾ ಕೆಟ್ಟು ಹೋದರಿನ್ನೆಂತಯ್ಯಾ ?
ಚೆನ್ನಮಲ್ಲಿಕಾರ್ಜುನದೇವರಿಗೋತು ಮುಟ್ಟಿದವರೆಲ್ಲಾ ನಿಶ್ಚಿಂತರಾದರು.
141
ಕಡೆಗೆ ಮಾಡಿದ ಭಕ್ತಿ ದೃಢವಿಲ್ಲದಾಳುತನ,
ಮೃಡನೊಲಿಯ ಹೇಳಿದಡೆ ಎಂತೊಲಿವನಯ್ಯಾ ?
ಮಾಡಲಾಗದು ಅಳಿಮನವ,
ಮಾಡಿದಡೆ ಮನದೊಡೆಯ ಬಲ್ಲನೈಸೆ ?
ವಿರಳವಿಲ್ಲದೆ ಮಣಿಯ ಪವಣಿಸಿಹೆನೆಂದಡೆ ಮರುಳಾ,
ಚೆನ್ನಮಲ್ಲಿಕಾರ್ಜುನಯ್ಯನೆಂತೊಲಿವನಯ್ಯಾ ?
142
ಕಣ್ಣೆ ಶೃಂಗಾರ ಗುರುಹಿರಿಯರ ನೋಡುವುದು.
ಕರ್ಣಕ್ಕೆ ಶೃಂಗಾರ ಪುರಾತನರ ಸುಗೀತಂಗಳ ಕೇಳುವುದು.
ವಚನಕ್ಕೆ ಶೃಂಗಾರ ಸತ್ಯವ ನುಡಿವುದು.
ಸಂಭಾಷಣೆಗೆ ಶೃಂಗಾರ ಸದ್ಭಕ್ತರ ನುಡಿಗಡಣ.
ಕರಕ್ಕೆ ಶೃಂಗಾರ ಸತ್ಪಾತ್ರಕ್ಕೀವುದು.
ಜೀವಿಸುವ ಜೀವನಕ್ಕೆ ಶೃಂಗಾರ ಗಣಮೇಳಾಪ
ಇವಿಲ್ಲದ ಜೀವಿಯ ಬಾಳುವೆ ಏತಕ್ಕೆ ಬಾತೆಯಯ್ಯಾ ಚೆನ್ನಮಲ್ಲಿಕಾರ್ಜುನಾ
143
ಕದಳಿ ಎಂಬುದು ತನು, ಕದಳಿ ಎಂಬುದು ಮನ,
ಕದಳಿ ಎಂಬುದು ವಿಷಯಂಗಳು.

Downloaded from: **http://www.lingayatreligion.com**

ಕದಳಿ ಎಂಬುದು ಭವಘೋರಾರಣ್ಯ.
ಈ ಕದಳಿ ಎಂಬುದ ಗೆದ್ದು ತವೆ ಬದುಕಿ ಬಂದು
ಕದಳಿಯ ಬನದಲ್ಲಿ ಭವಹರನ ಕಂಡೆನು.
ಭವ ಗೆದ್ದು ಬಂದ ಮಗಳೆ ಎಂದು
ಕರುಣದಿ ತೆಗೆದು ಬಿಗಿಯಪ್ಪಿದಡೆ ಚೆನ್ನಮಲ್ಲಿಕಾರ್ಜುನನ ಹೃದಯಕಮಲದಲ್ಲಿ
ಅಡಗಿದೆನು.
144
ಕರಣ ಮೀಸಲಾಗಿ ನಿಮಗರ್ಪಿತವಾಯಿತ್ತು.
ಆನೊಂದರಿಯೆನಯ್ಯಾ.
ಎನ್ನ ಗತಿ ನೀನಾಗಿ, ಎನ್ನ ಮತಿ ನೀನಾಗಿ,
ಪ್ರಾಣ ನಿನಗರ್ಪಿತವಾಯಿತ್ತು.
ನೀನಲ್ಲದೆ ಪೆರತೊಂದ ನೆನೆದಡೆ ಆಣೆ, ನಿಮ್ಮಾಣೆ ಚೆನ್ನಮಲ್ಲಿಕಾರ್ಜುನಾ.
145
ಕರಸ್ಥಲಕ್ಕೆ ಲಿಂಗಸ್ವಾಯತವಾದ ಬಳಿಕ
ಕಾಯಕ ನಿವೃತ್ತಿಯಾಗಬೇಕು.
ಅಂಗದಲಳವಟ್ಟಲಿಂಗ,
ಲಿಂಗೈಕ್ಯಂಗೆ ಅಂಗಸಂಗ ಮತ್ತೆಲ್ಲಿಯದೊ ?
ಮಹಾಘನವನರಿತ ಮಹಾಂತಂಗೆ ಮಾಯವೆಲ್ಲಿಯದೊ ಚೆನ್ನಮಲ್ಲಿಕಾರ್ಜುನಾ ?
146
ಕರುವಿನ ರೂಹು ಅರಗಿಳಿಯನೋದಿಸುವಂತೆ,
ಓದಿಸುವುದಕ್ಕೆ ಜೀವವಿಲ್ಲ ಕೇಳುವುದಕ್ಕೆ ಜ್ಞಾನವಿಲ್ಲ.
ಚೆನ್ನಮಲ್ಲಿಕಾರ್ಜುನದೇವಯ್ಯಾ,
ನಿಮ್ಮನರಿಯದವನ ಭಕ್ತಿ ಕರುವಿನ ರೂಹು ಆ ಅರಗಿಳಿಯನೋದಿಸುವಂತೆ.
147
ಕರ್ಮವೆಂಬ ಕದಳಿ ಎನಗೆ, ಕಾಯವೆಂಬ ಕದಳಿ ನಿಮಗೆ.
ಮಾಟವೆಂಬ ಕದಳಿ ಬಸವಣ್ಣಂಗೆ,
ಭಾವವೆಂಬ ಕದಳಿ ಚೆನ್ನಬಸವಣ್ಣಂಗೆ.
ಬಂದ ಬಂದ ಭಾವ ಸಲೆ ಸಂದಿತ್ತು. ಎನ್ನಂಗದ ಅವಸಾನವ ಹೇಳಾ,
ಚೆನ್ನಮಲ್ಲಿಕಾರ್ಜುನಾ.
148
ಕರ್ಮ ಸೆರಗ ಹಿಡಿದವರೇಕೆ ಬಿಟ್ಟಪೆ ತಂದೆ.
ಕರ್ಮ ಘಾಯ [ಇ]ಮ್ಮೈಗೊಂಡು ನೊಂದೆ ನೋಡಯ್ಯ.
ನಿಮ್ಮ ನಂಬಿದ ನಚ್ಚಿಹ ಮಗಳ ಬೆಂಬಿಟ್ಟರೆ ಎಂತು ಬದುಕುವೆನಯ್ಯ,
ಚೆನ್ನಮಲ್ಲಿಕಾರ್ಜುನಾ ?
149
ಕಲ್ಲ ತಾಗಿದ ಮಿಟ್ಟೆ ಕೆಲಕ್ಕೆ ಸಾರುವಂತೆ
ಆನು ಬಲ್ಲೆನೆಂಬ ನುಡಿ ಸಲ್ಲದು.
ಲಿಂಗದಲ್ಲಿ ಮರೆದು ಮಚ್ಚಿರ್ದ ಮನವು
ಹೊರಗೆ ಬೀಸರವೋಗದೆ ?

Downloaded from: **http://www.lingayatreligion.com**

ಉರೆ ತಾಗಿದ ಕೋಲು ಗರಿ ತೋರುವುದೆ ?
ಮೊರೆದು ಬೀಸುವ ಗಾಳಿ ಪರಿಮಳವನುಂಡಂತೆ ಬೆರಸಬೇಕು
ಚೆನ್ನಮಲ್ಲಿಕಾರ್ಜುನಯ್ಯನ.
150
ಕಲ್ಲ ಹೊಕ್ಕಡೆ ಕಲ್ಲ ಬರಿಸಿದೆ,
ಗಿರಿಯ ಹೊಕ್ಕಡೆ ಗಿರಿಯ ಬರಿಸಿದೆ.
ಭಾಪು ಸಂಸಾರವೆ, ಬೆನ್ನಿಂದ ಬೆನ್ನ ಹತ್ತಿ ಬಂದೆ.
ಚೆನ್ನಮಲ್ಲಿಕಾರ್ಜುನಯ್ಯಾ, ಇನ್ನೇವೆನಿನ್ನೇವೆ ?
151
ಕಲ್ಯಾಣಕೈಲಾಸವೆಂಬ ನುಡಿ ಹಸನಾಯಿತ್ತು.
ಒಳಗೂ ಕಲ್ಯಾಣ ಹೊರಗೂ ಕಲ್ಯಾಣ.
ಇದರಂತುವನಾರು ಬಲ್ಲರಯ್ಯಾ ?
ನಿಮ್ಮ ಸತ್ಯ ಶರಣರ ಸುಳುಹು ತೋರುತ್ತಿದೆಯಯ್ಯಾ.
ನಿಮ್ಮ ಶರಣ ಬಸವಣ್ಣನ ಕಾಂಬೆನೆಂಬ ತವಕವೆನಗಾಯಿತ್ತು ಕೇಳಾ
ಚೆನ್ನಮಲ್ಲಿಕಾರ್ಜುನಾ.
152
ಕಲ್ಯಾಣವೆಂಬುದಿನ್ನಾರಿಗೆ ಹೊಗಬಹುದು ?
ಹೊಗಬಾರದು, ಅಸಾಧ್ಯವಯ್ಯಾ.
ಆಸೆ ಆಮಿಷ ಅಳಿದಂಗಲ್ಲದೆ ಕಲ್ಯಾಣದತ್ತಲಡಿಯಿಡಬಾರದು.
ಒಳಹೊರಗು ಶುದ್ಧನಾದಂಗಲ್ಲದೆ ಕಲ್ಯಾಣವ ಹೊಗಬಾರದು.
ನೀನಾನೆಂಬುದ ಹರಿದಂಗಲ್ಲದೆ ಕಲ್ಯಾಣದ ಒಳಗು ತಿಳಿಯಬಾರದು.
ಚೆನ್ನಮಲ್ಲಿಕಾರ್ಜುನಂಗೊಲಿದು ಉಭಯ ಲಜ್ಜೆ ಅಳಿದೆನಾಗಿ
ಕಲ್ಯಾಣವಂ ಕಂಡು ನಮೋ ನಮೋ ಎನುತಿದ್ದೆನು.
153
ಕಲ್ಲಹೊತ್ತು ಕಡಲೊಳಗೆ ಮುಳುಗಿದಡೆ
ಎಡರಿಂಗೆ ಕಡೆಯುಂಟೆ ಅವ್ವಾ ?
ಉಂಡು ಹಸಿವಾಯಿತ್ತೆಂದಡೆ ಭಂಗವೆಂಬೆ.
ಕಂಡ ಕಂಡ ಠಾವಿನಲ್ಲಿ ಮನ ಬೆಂದಡೆ ಗಂಡ
ಚೆನ್ನಮಲ್ಲಿಕಾರ್ಜುನಯ್ಯನೆಂತೊಲಿವನವ್ವಾ ?
154
ಕಳನೇರಿ ಇಳಿವುದು ವೀರಂಗೆ ಮತವಲ್ಲ.
ಶಿವಶರಣಂಗೆ ಹಿಮ್ಮೆಟ್ಟುವುದು ಪ ಥವಲ್ಲ.
ಮನದೊಡೆಯ ಮನವನಿಂಬುಗೊಂಬನಯ್ಯಾ.
ಇರಲಾಗದು ಶ್ರೀಪರ್ವತವ ಇಳಿದಡೆ ವ್ರತಕ್ಕೆ ಭಂಗ.
ಕಳನೇರಿ ಕೈದು ಮರೆದಡೆ ಮಾರಂಕ ಚೆನ್ನಮಲ್ಲಿಕಾರ್ಜುನನಿಮ್ಮೃಗಾಣಲಿರಿವನು.
155
ಕಳವಳದ ಮನ ತಲೆಕೆಳಗಾದುದವ್ವಾ ;
ಸುಳಿದು ಬೀಸುವ ಗಾಳಿ ಉರಿಯಾದುದವ್ವಾ ;
ಬೆಳುದಿಂಗಳು ಬಿಸಿಯಾಯಿತ್ತು ಕೆಳದಿ.

Downloaded from: **http://www.lingayatreligion.com**

ಹೊಳಲ ಸುಂಕಿಗನಂತೆ ತೊಳಲುತ್ತಿದ್ದೆನವ್ವಾ ;
ತಿಳುಹಾ, ಬುದ್ಧಿಯ ಹೇಳಿ ಕರೆತಾರೆಲಗವ್ವಾ ;
ಚೆನ್ನಮಲ್ಲಿಕಾರ್ಜುನನಂಗೆ ಎರಡರ ಮುನಿಸವ್ವಾ. ;
156
ಕಾಣುತ್ತ ಕಾಣುತ್ತ ಕಂಗಳ ಮುಚ್ಚಿದೆ ನೋಡವ್ವಾ.
ಕೇಳುತ್ತ ಕೇಳುತ್ತ ಮೈಮರೆದೊರಗಿದೆ ನೋಡವ್ವಾ.
ಹಾಸಿದ ಹಾಸಿಗೆಯ ಹಂಗಿಲ್ಲದೆ ಹೋಯಿತ್ತು ಕೇಳವ್ವಾ.
ಚೆನ್ನಮಲ್ಲಿಕಾರ್ಜುನದೇವರದೇವನ ಕೂಡುವ ಕೂಟವ ನಾನೇನೆಂದರಿಯದೆ ಮರೆದೆ ಕಾಣವ್ವಾ.
157
ಕಾಮನ ತಲೆಯ ಕೊರೆದು, ಕಾಲನ ಕಣ್ಣ ಕಳೆದು,
ಸೋಮ ಸೂರ್ಯರ ಹುರಿದು ಹುಡಿಮಾಡಿ ತಿಂಬವಳಿಂಗೆ
ನಾಮವನಿಡಬಲ್ಲವರಾರು ಹೇಳಿರೆ ?
ನೀ ಮದವಳಿಗನಾಗೆ ನಾ ಮದವಳಿಗಿತ್ತಿಯಾಗೆ
ಯಮನ ಕೂಡುವ ಮರುತನಂತೆ ನೋಡಾ ಶ್ರೀಗಿರಿ ಚೆನ್ನಮಲ್ಲಿಕಾರ್ಜುನಾ.
158
ಕಾಮ ಬಲ್ಲಿದನೆಂದಡೆ ಉರುಹಿ ಭಸ್ಮವ ಮಾಡಿದ.
ಕಾಲ ಬಲ್ಲಿದನೆಂದಡೆ ಕೆಡಹಿ ತುಳಿದ.
ಎಲೆ ಅವ್ವಾ, ನೀನು ಕೇಳಾ ತಾಯೆ.
ಬ್ರಹ್ಮ ಬಲ್ಲಿದನೆಂದಡೆ ಶಿರವ ಚಿವುಟಿಯಾಡಿದ.
ಎಲೆ ಅವ್ವಾ ನೀನು ಕೇಳಾ ತಾಯೆ.
ವಿಷ್ಣು ಬಲ್ಲಿದನೆಂದಡೆ ಆಕಳ ಕಾಯ್ದಿರಿಸಿದ.
ತ್ರಿಪುರದ ಕೋಟೆ ಬಲ್ಲಿತ್ತೆಂದಡೆ
ನೊಸಲಕಂಗಳಲುರುಹಿದನವ್ವಾ.
ಇದು ಕಾರಣ, ಚೆನ್ನಮಲ್ಲಿಕಾರ್ಜುನ ಗಂಡನೆನಗೆ,
ಜನನ ಮರಣಕ್ಕೊಳಗಾಗದ ಬಲುಹನೇನ ಬಣ್ಣಿಪೆನವ್ವಾ.
159
ಕಾಮವುಳ್ಳವರಿಗೆ ಕಾಯಸಂಗ ಮಚ್ಚು ನೋಡಾ.
ಕಾಮವಿಲ್ಲದವರಿಗೆ ಲಿಂಗಸಂಗ ಮಚ್ಚು ನೋಡಾ.
ಕಾಮವಿಕಾರಿ ಕಾಯದತ್ತ ಮುಂತಾದಡೆ,
ನಾ ನಿಮ್ಮತ್ತ ಮುಂತಾದೆ.
ಚೆನ್ನಮಲ್ಲಿಕಾರ್ಜುನಯ್ಯಾ, ಕಾಮವಿಕಾರಿಯ ಸಂಗವ ಹೊದ್ದಿದಡೆ ನಿಮ್ಮಾಣೆ.
160
ಕಾಮಾರಿಯ ಗೆಲಿದನು ಬಸವಾ ನಿಮ್ಮಿಂದ.
ಸೋಮಧರನ ಹಿಡಿತಪ್ಪೆನು ಬಸವಾ ನಿಮ್ಮ ಕೃಪೆಯಿಂದ.
ನಾಮದಲ್ಲಿ ಹೆಂಗೂಸೆಂಬ ಹೆಸರಾದಡೇನು ?
ಭಾವಿಸಲು ಗಂಡು ರೂಪು ಬಸವಾ ನಿಮ್ಮ ದಯದಿಂದ.
ಅತಿಕಾಮಿ ಚೆನ್ನಮಲ್ಲಿಕಾರ್ಜುನಂಗೆ ತೊಡರಿಕ್ಕಿ ಎರಡುವರಿಯದೆ ಕೂಡಿದೆನು
ಬಸವಾ ನಿಮ್ಮ ಕೃಪೆಯಿಂದ.

Downloaded from: **http://www.lingayatreligion.com**

161
ಕಾಮಿಸಿ ಕಲ್ಪಿಸಿ ಕಂದಿ ಕುಂದಿದೆನವ್ವಾ.
ಮೋಹಿಸಿ ಮುದ್ದಿಸಿ ಮರುಳಾದೆನವ್ವಾ.
ತೆರೆಯದೆ ತೊರೆಯದೆ ನಲಿದು ನಂಬಿದೆ ನಾನು.
ಎನ್ನ ದೇವ ಚೆನ್ನಮಲ್ಲಿಕಾರ್ಜುನನೆನ್ನನೊಲ್ಲದಡೆ ಆನೇವೆನವ್ವಾ ?
162
ಕಾಯ ಕರ್ರನೆ ಕಂದಿದಡೇನಯ್ಯಾ ?
ಕಾಯ ಮಿರ್ರನೆ ಮಿಂಚಿದಡೇನಯ್ಯಾ ?
ಅಂತರಂಗ ಶುದ್ಧವಾದ ಬಳಿಕ
ಚೆನ್ನಮಲ್ಲಿಕಾರ್ಜುನಯ್ಯಾ ನೀನೊಲಿದ ಕಾಯವು ಹೇಗಿದ್ದಡೇನಯ್ಯಾ ?
163
ಕಾಯಕ್ಕೆ ನೆಳಲಾಗಿ ಕಾಡಿತ್ತು ಮಾಯೆ.
ಪ್ರಾಣಕ್ಕೆ ಮನವಾಗಿ ಕಾಡಿತ್ತು ಮಾಯೆ.
ಮನಕ್ಕೆ ನೆನಹಾಗಿ ಕಾಡಿತ್ತು ಮಾಯೆ.
ನೆನಹಿಂಗೆ ಅರುಹಾಗಿ ಕಾಡಿತ್ತು ಮಾಯೆ.
ಅರುಹಿಂಗೆ ಮರಹಾಗಿ ಕಾಡಿತ್ತು ಮಾಯೆ.
ಜಗದ ಜಂಗುಳಿಗೆ ಬೆಂಗೋಲನೆತ್ತಿ ಕಾಡಿತ್ತು ಮಾಯೆ.
ಚೆನ್ನಮಲ್ಲಿಕಾರ್ಜುನಾ, ನೀನೊಡ್ಡಿದ ಮಾಯೆಯನಾರಿಗೂ ಗೆಲಬಾರದು.
164
ಕಾಯದ ಕಳವಳವ ಕೆಡಿಸಿ, ಮನದ ಮಾಯೆಯ ಮಾಣಿಸಿ,
ಎನ್ನ ಹರಣವ ಮೇಲೆತ್ತಿ ಸಲಹಿದೆಯಯ್ಯಾ.
ಶಿವಶಿವಾ, ಎನ್ನ ಭವಬಂಧನವ ಬಿಡಿಸಿ,
ನಿಮ್ಮತ್ತ ತೋರಿದ ಘನವನುಪಮಿಸಬಾರದಯ್ಯಾ.
ಇರುಳೋಸರಿಸಿದ ಜಕ್ಕವಕ್ಕಿಯಂತೆ
ನಾನಿಂದು ನಿಮ್ಮ ಶ್ರೀಪಾದವನಿಂಬುಗೊಂಡು ಸುಖದೊಳೋಲಾಡುವೆನಯ್ಯಾ,
ಚೆನ್ನಮಲ್ಲಿಕಾರ್ಜುನಾ.
165
ಕಾಯದ ಕಾರ್ಪಣ್ಯವರತಿತ್ತು, ಕರಣಂಗಳ ಕಳವಳವಳಿದಿತ್ತು.
ಮನ ತನ್ನ ತಾರ್ಕಣೆಯ ಕಂಡು ತಳವೆಳಗಾದುದು.
ಇನ್ನೇವೆನಿನ್ನೇವೆನಯ್ಯಾ ?
ನಿಮ್ಮ ಶರಣ ಬಸವಣ್ಣನ ಶ್ರೀಪಾದವ ಕಂಡಲ್ಲದೆ
ಬಯಕೆ ಬಯಲಾಗದು. ಇನ್ನೇವೆನಿನ್ನೇವೆನಯ್ಯಾ ಚೆನ್ನಮಲ್ಲಿಕಾರ್ಜುನಾ ?
166
ಕಾಯದ ನುಂಪನೊಬ್ಬ ಕಂಡು ಬಯಸಿದನು.
ಅವಂಗೆ ಮಾಂಸವ ಬೆಲೆಮಾಡಿಕೊಡುವೆನು.
ಎನ್ನ ಪ್ರಾಣದೊಡೆಯಂಗೆ ಎನ್ನ ಹೃದಯವ ಸೂರೆಗೊಡುವೆನು
ಚೆನ್ನಮಲ್ಲಿಕಾರ್ಜುನದೇವಯ್ಯನು ಮುನಿದು ಭವಿಗೆ ಮಾರಿದಡೆ ಹೊಲಬುಗೆಡದಿರಾ
ಮನವೆ.
167
ಕಾಯದೊಳಗೆ ಅಕಾಯವಾಯಿತ್ತು.

Downloaded from: **http://www.lingayatreligion.com**

ಜೀವದೊಳಗೆ ನಿರ್ಜೀವವಾಯಿತ್ತು.
ಭಾವದೊಳಗೆ ನಿರ್ಭಾವವಾಯಿತ್ತು.
ಎನ್ನ ಮನದೊಳಗೆ ಘನ ನೆನಹಾಯಿತ್ತು.
ಎನ್ನ ತಲೆ ಮೊಲೆಗಳ ನೋಡಿ ಸಲಹಿದಿರಾಗಿ ಚೆನ್ನಮಲ್ಲಿಕಾರ್ಜುನಯ್ಯನ
ಧರ್ಮದವಳಾನು.
168
ಕಾಯ ಪ್ರಸಾದವೆನ್ನ, ಜೀವ ಪ್ರಸಾದವೆನ್ನ,
ಪ್ರಾಣ ಪ್ರಸಾದವೆನ್ನ, ಮನಪ್ರಸಾದವೆನ್ನ,
ಧನ ಪ್ರಸಾದವೆನ್ನ, ಭಾವ ಪ್ರಸಾದವೆನ್ನ,
ಸಯದಾನ ಪ್ರಸಾದವೆನ್ನ, ಸಮಭೋಗ ಪ್ರಸಾದವೆನ್ನ.
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಪ್ರಸಾದವ ಹಾಸಿ ಹೊದಿಸಿಕೊಂಡಿಪ್ಪೆನು.
169
ಕಾಯ ಮೀಸಲಾಗಿ ನಿನಗರ್ಪಿತವಾಯಿತ್ತು.
ಕರಣ ಮೀಸಲಾಗಿ ನಿನಗರ್ಪಿತವಾಯಿತ್ತು.
ಆನೊಂದರಿಯೆನಯ್ಯಾ.
ಎನ್ನ ಗತಿ ನೀನಾಗಿ, ಎನ್ನ ಮತಿ ನೀನಾಗಿ,
ಪ್ರಾಣ ನಿನಗರ್ಪಿತವಾಯಿತ್ತು.
ನೀನಲ್ಲದೆ ಪೆರತೊಂದ ನೆನೆದಡೆ ಆಣೆ, ನಿಮ್ಮಾಣೆ ಚೆನ್ನಮಲ್ಲಿಕಾರ್ಜುನಾ.
170
ಕಾಯವಿಕಾರಿಗೆ ಕಾಯಕ್ಕೆ ಮೆಚ್ಚಿದೆ.
ವಾಯದ ಸುಖ ನಿನಗೆ ಮುಂದೆ ನರಕವೆಂದರಿಯೆ.
ದೇವರ ದೇವಂಗೆ ವಂದಿಸಹೋದರೆ ಬಾಯಬಿಡದಿರು,
ಕೈವಿಡಿದು ಸೆಳೆಯದಿರು. ಚೆನ್ನಮಲ್ಲಿಕಾರ್ಜುನನ ಪಾದಕ್ಕೆರಗುವ ಭರವೆನಗೆ ಮರುಳೆ.
171
ಕಿಚ್ಚಿಲ್ಲದ ಬೇಗೆಯಲ್ಲಿ ಬೆಂದೆನವ್ವಾ.
ಏರಿಲ್ಲದ ಗಾಯದಲ್ಲಿ ನೊಂದೆನವ್ವಾ.
ಸುಖವಿಲ್ಲದೆ ಧಾವತಿಗೊಂಡೆನವ್ವಾ.
ಚೆನ್ನಮಲ್ಲಿಕಾರ್ಜುನದೇವಂಗೊಲಿದು ಬಾರದ ಭವಂಗಳಲ್ಲಿ ಬಂದೆನವ್ವಾ.
172
ಕಿಡಿ ಕಿಡಿ ಕೆದರಿದಡೆ ಎನಗೆ ಹಸಿವು ತೃಷೆಯಡಗಿತ್ತೆಂಬೆನು.
ಮುಗಿಲು ಹರಿದು ಬಿದ್ದಡೆ ಎನಗೆ ಮಜ್ಜನಕ್ಕೆರೆದರೆಂಬೆನು.
ಗಿರಿ ಮೇಲೆ ಬಿದ್ದಡೆ ಎನಗೆ ಪುಷ್ಪವೆಂಬೆನು.
ಚೆನ್ನಮಲ್ಲಿಕಾರ್ಜುನಯ್ಯಾ, ಶಿರ ಹರಿದು ಬಿದ್ದಡೆ ಪ್ರಾಣ ನಿಮಗರ್ಪಿತವೆಂಬೆನು.
173
ಕಿರಿಯರಹುದರಿದಲ್ಲದೆ,
ಹಿರಿಯರಹುದರಿದಲ್ಲ ನೋಡಾ !
[ಭವಿಯಹುದರಿದಲ್ಲದೆ]
ಭಕ್ತನಹುದರಿದಲ್ಲ ನೋಡಾ.
ಕುರುಹಹುದರಿದಲ್ಲದೆ, ನಿರಾಳವಹುದರಿದಲ್ಲ ಚೆನ್ನಮಲ್ಲಿಕಾರ್ಜುನಯ್ಯಾ ?
174

Downloaded from: **http://www.lingayatreligion.com**

ಕೀಡಿ ತುಂಬಿಯ ಹಂಬಲದಿಂದ ತುಂಬಿಯಾಗಿ
ತನ್ನ ಬಿಡಲುಂಟೆ ಅಯ್ಯಾ ?
ಆನು ನಿಮ್ಮ ನೆನೆದು
ಎನ್ನ ಕರತುಂಬಿ, ಎನ್ನ ಮನತುಂಬಿ, ಎನ್ನ ಭಾವತುಂಬಿ,
ಮತ್ತಿಲ್ಲದೆ ನಿನ್ನ ಕೂಟದ ಸವಿಗಲೆಯನೆಂತು ಕಾಣುವೆನಯ್ಯಾ ಚೆನ್ನಮಲ್ಲಿಕಾರ್ಜುನಾ
?
175
ಕುಲಗಿರಿಯ ಶಿಖರದ ಮೇಲೆ ಬಾಳೆ ಬೆಳೆವುದಯ್ಯಾ ಎಂದಡೆ,
ಬಾಳೆ ಬೆಳೆವುದಯ್ಯಾ ಎನಬೇಕು.
ಒರೆಗಲ್ಲ ನುಗ್ಗುಗುಟ್ಟಿ ಮೆಲಬಹುದಯ್ಯಾ ಎಂದಡೆ,
ಅದು ಅತ್ಯಂತ ಮೃದು ಮೆಲಬಹುದಯ್ಯಾ ಎನಬೇಕು.
ಸಿಕ್ಕದ ಠಾವಿನಲ್ಲಿ ಉಚಿತವ ನುಡಿವುದೆ ಕಾರಣ ಚೆನ್ನಮಲ್ಲಿಕಾರ್ಜುನ-[ಯ್ಯಾ]
ಮತ್ರ್ಯಕ್ಕೆ ಬಂದುದಕ್ಕಿದೆ ಗೆಲವು.
176
ಕುಲಮದವೆಂಬುದಿಲ್ಲ ಅಯೋನಿಸಂಭವನಾಗಿ,
ಛಲಮದವೆಂಬುದಿಲ್ಲ ಪ್ರತಿದೋರನಾಗಿ,
ಧನಮದವೆಂಬುದಿಲ್ಲ ತ್ರಿಕರಣ ಶುದ್ಧನಾಗಿ,
ವಿದ್ಯಾಮದವೆಂಬುದಿಲ್ಲ ಅಸಾಧ್ಯವ ಸಾಧಿಸಿದನಾಗಿ.
ಮತ್ತಾವ ಮದವೆಂಬುದಿಲ್ಲ ನೀನವಗ್ರಹಿಸಿದ ಕಾರಣ,
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಶರಣನು ಅಕಾಯ ಚರಿತ್ರನಾಗಿ.
177
ಕೂಡಿ ಕೂಡುವ ಸುಖದಿಂದ
ಒಪ್ಪಚ್ಚಿ ಅಗಲಿ ಕೂಡುವ ಸುಖ ಲೇಸು, ಕೆಳದಿ ?
ಒಚ್ಚೊತ್ತಗಲಿದಡೆ ಕಾಣದಿರಲಾರೆ.
ಎನ್ನ ದೇವ ಚೆನ್ನಮಲ್ಲಿಕಾರ್ಜುನನಗಲಿಯಗಲದ ಸುಖವೆಂದಪ್ಪುದೊ ?
178
ಕೆಂಡದ ಶವದಂತೆ, ಸೂತ್ರ ತಪ್ಪಿದ ಬೊಂಬೆಯಂತೆ,
ಜಲವರತ ತಟಾಕದಂತೆ, ಬೆಂದ ನುಲಿಯಂತೆ
ಮತ್ತೆ ಹಿಂದಣಂಗವುಂಟೆ ಅಣ್ಣಾ, ಚೆನ್ನಮಲ್ಲಿಕಾರ್ಜುನನಂಗವೆ ಆಶ್ರಯವಾದವಳಿಗೆ
?
179
ಕೆಚ್ಚಿಲ್ಲದ ಮರನ ಕ್ರಿಮಿ ಇಂಬುಗೊಂಬಂತೆ,
ಒಡೆಯನಿಲ್ಲದ ಮನೆಯ ಶುನಕ ಸಂಚುಗೊಂಬಂತೆ,
ನೃಪತಿಯಿಲ್ಲದ ದೇಶವ ಮನ್ನೆಯರಿಂಬುಗೊಂಬಂತೆ,
ನಿಮ್ಮ ನೆನಹಿಲ್ಲದ ಶರೀರವ
ಭೂತ ಪ್ರೇತ ಪಿಶಾಚಿಗಳಿಂಬುಗೊಂಬಂತೆ ಚೆನ್ನಮಲ್ಲಿಕಾರ್ಜುನಾ.
180
ಕೆಡದಿರೆ ಕೆಡದಿರೆ ಮೃಡನಡಿಯ ಹಿಡಿಯಿರೇ.
ದೃಢವಲ್ಲ ನೋಡಿರೆ ನಿಮ್ಮೊಡಲು.
ದೃಢವಲ್ಲ ನೋಡಿರೆ ಸಂಸಾರಸುಖವು.

Downloaded from: **http://www.lingayatreligion.com**

ಚೆನ್ನಮಲ್ಲಿಕಾರ್ಜುನ ಬರೆದ ಅಕ್ಷರವು ತೊಡೆಯದ ಮುನ್ನ ಬೇಗ ಬೇಗ ಶಿವಶರಣೆನ್ನಿ.
181
ಕೆತ್ತಿದ ತಿಗುಡು ಹತ್ತೂದೆ ಮುನ್ನಿನಂತೆ ?
ಎರಿಣ ತಪ್ಪಿದಲ್ಲಿ ಗುಣವನರಸುವರೆ ?
ಸಕ್ಕರೆ ಹಾಲು ತುಪ್ಪ ಎಂದರೆ
ಕಪ್ಪ ಕಂಡಲ್ಲಿ ಮನ ಹಿಡಿವುದೆ ?
ಕರ್ತೃವೆ ಚೆನ್ನಮಲ್ಲಿಕಾರ್ಜುನಯ್ಯಾ ಸತ್ತವರು ಮರಳಿ ತಕ್ಕೈಸಿಕೊಂಬರೆ
182
ಕೇಳವ್ವಾ ಕೇಳವ್ವಾ ಕೆಳದಿ ನಾನೊಂದು ಕನಸಕಂಡೆ.
ಗಿರಿಯಮೇಲೊಬ್ಬ ಗೊರವ ಕುಳ್ಳಿರ್ದುದ ಕಂಡೆ.
ಗಿರಿಯೆಂಬುದು ಸಿರಿಶೈಲ ಗೊರವನೆ ಚೆನ್ನಮಲ್ಲಿಕಾರ್ಜುನನು.
183
ಕೇಳವ್ವಾ ಕೇಳವ್ವಾ ಕೆಳದಿ ನಾನೊಂದು ಕನಸುವ ಕಂಡೆ.
ಗಿರಿಯಮೇಲೊಬ್ಬ ಗೊರವ ಕುಳ್ಳಿರ್ದುದ ಕಂಡೆ
ಚಿಕ್ಕ ಚಿಕ್ಕ ಜಡೆಗಳ ಸುಲಿಪಲ್ಲ ಗೊರವನು
ಬಂದೆನ್ನ ನೆರೆದ ನೋಡವ್ವಾ
ಆತನನಪ್ಪಿಕೊಂಡು ತಳವೆಳಗಾದೆನು.
ಚೆನ್ನಮಲ್ಲಿಕಾರ್ಜುನನ ಕಂಡು ಕಣ್ಣು ಮುಚ್ಚಿ ತೆರೆದು ತಳವೆಳಗಾದೆನು.
184
ಕೈಯ ಧನವ ಕೊಂಡಡೆ, ಮೈಯ ಭಾಷೆಯ ಕೊಳಬಹುದೆ ?
ಉಟ್ಟ ಉಡುಗೆಯ ಸೆಳೆದುಕೊಂಡರೆ,
ಮುಚ್ಚಿ ಮುಸುಕಿದ ನಿರ್ವಾಣವ ಸೆಳೆಯಬಹುದೆ ?
ನೋಡುವಿರಿ ಎಲೆ ಅಣ್ಣಗಳಿರಾ,
ಕುಲವಳಿದು ಛಲವಳಿದು ಭವಗೆಟ್ಟು ಭಕ್ತೆಯಾದವಳ.
ಎನ್ನನೇಕೆ ನೋಡುವಿರಿ ಎಲೆ ತಂದೆಗಳಿರಾ, ಚೆನ್ನಮಲ್ಲಿಕಾರ್ಜುನನ ಕೂಡಿ
ಕುಲವಳಿದು ಛಲವುಳಿದವಳನು.
185
ಕೈಯ ಸಂಕಲೆಯ ಕಳೆದೆಯಲ್ಲಾ !
ಕಾಲ ಸುತ್ತಿದ ಪಾಶವ ಹರಿದೆಯಲ್ಲಾ !
ಸುತ್ತಿ ಮುತ್ತಿರ್ದ ಬಲೆಯ ಕುಣಿಕೆಯಿಂದ ಹೊರವಡಿಸಿದೆಯಲ್ಲಾ !
ಚೆನ್ನಮಲ್ಲಿಕಾರ್ಜುನಾ, ನೀನು ಕೊಟ್ಟವಧಿ ತುಂಬುವ ಮುನ್ನ ಮುಟ್ಟುವೆ ನಿಮ್ಮನು.
186
ಕೈಸಿರಿಯ ದಂಡವ ಕೊಳಬಹುದಲ್ಲದೆ,
ಮೈಸಿರಿಯ ದಂಡವ ಕೊಳಲುಂಟೆ ?
ಉಟ್ಟಂತಹ ಉಡಿಗೆ ತೊಡಿಗೆಯನೆಲ್ಲ ಸೆಳೆದುಕೊಳಬಹುದಲ್ಲದೆ,
ಮುಚ್ಚಿರ್ದ ಮುಸುಕಿರ್ದ ನಿರ್ವಾಣವ ಸೆಳೆದುಕೊಳಬಹುದೆ ?
ಚೆನ್ನಮಲ್ಲಿಕಾರ್ಜುನದೇವರ ಬೆಳಗನುಟ್ಟು ಲಜ್ಜೆಗೆಟ್ಟವಳಿಗೆ ಉಡುಗೆ ತೊಡುಗೆಯ
ಹಂಗೇಕೋ ಮರುಳೆ ?
187
ಕೊಳಲ ದನಿಗೆ ಸರ್ಪ ತಲೆದೂಗಿದಡೇನು,

Downloaded from: **http://www.lingayatreligion.com**

ಒಳಗಣ ವಿಷದ ಬಯಕೆ ಬಿಡದನ್ನಕ್ಕ ?
ಹಾಡಿದಡೇನು, ಕೇಳಿದಡೇನು,
ತನ್ನಲುಳ್ಳ ಅವಗುಣ ಬಿಡದನ್ನಕ್ಕ ?
ಒಳಗನರಿದು ಹೊರಗೆ ಮರೆದವರ ನೀ ಎನಗೆ ತೋರಯ್ಯಾ ಚೆನ್ನಮಲ್ಲಿಕಾರ್ಜುನಾ.
188
ಕೋಲ ತುದಿಯ ಕೋಡಗದಂತೆ,
ನೇಣ ತುದಿಯ ಬೊಂಬೆಯಂತೆ,
ಆಡಿದೆನಯ್ಯಾ ನೀನಾಡಿಸಿದಂತೆ,
ಆನು ನುಡಿದೆನಯ್ಯಾ ನೀ ನುಡಿಸಿದಂತೆ,
ಆನು ಇದ್ದೆನಯ್ಯಾ ನೀನು ಇರಿಸಿದಂತೆ, ಜಗದ ಯಂತ್ರವಾಹಕ ಚೆನ್ನಮಲ್ಲಿಕಾರ್ಜುನ
ಸಾಕೆಂಬನ್ನಕ್ಕ.

189
ಕ್ರೀಯುಳ್ಳಡಂತೊಂದಾಸೆ,
ಸದ್ಭಕ್ತರ ನುಡಿಗಡಣವುಳ್ಳಡಂತೊಂದಾಸೆ,
ಶ್ರೀಗಿರಿಯನೇರಿ ನಿಮ್ಮ ಬೆರಸಿದಡೆ ಎನ್ನಾಸೆಗೆ ಕಡೆಯೆ ಅಯ್ಯಾ
ಆವಾಸೆಯೂ ಇಲ್ಲದೆ ನಿಮ್ಮ ನಂಬಿ ಬಂದು ಕೆಟ್ಟೆನಯ್ಯಾ ಚೆನ್ನಮಲ್ಲಿಕಾರ್ಜುನಾ.
190
ಕ್ರಿಯೆಗಳು ಮುಟ್ಟಲರಿಯವು,
ನಿಮ್ಮನೆಂತು ಪೂಜಿಸುವೆ ?
ನಾದ ಬಿಂದುಗಳು ಮುಟ್ಟಲರಿಯವು,
ನಿಮ್ಮನೆಂತು ಹಾಡುವೆ ?
ಕಾಯ ಮುಟ್ಟುವಡೆ ಕಾಣಬಾರದ ಘನವು,
ನಿಮ್ಮನೆಂತು ಕರಸ್ಥಲದಲ್ಲಿ ಧರಿಸುವೆ ?
ಚೆನ್ನಮಲ್ಲಿಕಾರ್ಜುನಯ್ಯಾ, ನಾನೇನೆಂದರಿಯದೆ ನಿಮ್ಮ ನೋಡಿ ನೋಡಿ
ಸೈವೆರಗಾಗುತಿರ್ದೆನು.
191
ಗಂಗೆಯೊಡನಾಡಿದ ಘಟ್ಟ ಬೆಟ್ಟಂಗಳು ಕೆಟ್ಟ ಕೇಡ ನೋಡಿರಯ್ಯಾ.
ಅಗ್ನಿಯೊಡನಾಡಿದ ಕಾಷ್ಠಂಗಳು ಕೆಟ್ಟ ಕೇಡ ನೋಡಿರಯ್ಯಾ.
ಜ್ಯೋತಿಯೊಡನಾಡಿದ ಕತ್ತಲೆ ಕೆಟ್ಟ ಕೇಡ ನೋಡಿರಯ್ಯಾ.
ಜ್ಞಾನಿಯೊಡನಾಡಿದ ಅಜ್ಞಾನಿ ಕೆಟ್ಟ ಕೇಡ ನೋಡಿರಯ್ಯಾ.
ಎಲೆ ಪರಶಿವಮೂರ್ತಿ ಹರನೆ, ನಿಮ್ಮ ಜಂಗಮಲಿಂಗದೊಡನಾಡಿ ಎನ್ನ ಭವಾದಿ
ಭವಂಗಳು ಕೆಟ್ಟ ಕೇಡ ನೋಡಾ, ಚೆನ್ನಮಲ್ಲಿಕಾರ್ಜುನಾ
192
ಗಂಡ ನೀನು ಹೆಂಡತಿಯಾನು ಮತ್ತೊಬ್ಬರಿಲ್ಲಯ್ಯಾ.
ನಿನ್ನ ಬೆಂಬಳಿಯಲಾನು ಮೆಚ್ಚಿಬಂದೆ.
ಕಂಡಕಂಡವರೆಲ್ಲ ಬಲುಹಿಂದ ಕೈಹಿಡಿದರೆ,
ಗಂಡಾ, ನಿನಗೆ ಸೈರಣೆಯೆಂತಾಯಿತ್ತು ಹೇಳಾ ?
ಚೆನ್ನಮಲ್ಲಿಕಾರ್ಜುನಯ್ಯಾ,

Downloaded from: **http://www.lingayatreligion.com**

ನಿನ್ನ ತೋಳ ಮೇಲಣವಳನನ್ಯರೆಳದೊಯ್ಯುವರೆ ನೋಡುತಿಹುದುಚಿತವೆ
ಕರುಣಿಗಳರಸಾ ?
193
ಗಂಡ ಮನೆಗೆ ಒಡೆಯನಲ್ಲ ;
ಹೆಂಡತಿ ಮನೆಗೆ ಒಡತಿಯೇ ? ಒಡತಿಯಲ್ಲ.
ಗಂಡಹೆಂಡಿರ ಸಂಬಂಧವಿಲ್ಲಯ್ಯಾ.
ಗಂಡುಗಲಿಯೇ ಚೆನ್ನಮಲ್ಲಿಕಾರ್ಜುನಾ ನೀ ಮನೆಯೊಡೆಯನೆಂದು ನಾ ದುಡಿವೆ
ತೊತ್ತುಗೆಲಸವನು.
194
ಗಗನದ ಗುಂಪ ಚಂದ್ರಮ ಬಲ್ಲುದಲ್ಲದೆ,
ಕಡೆಯಲಿದ್ದಾಡುವ ಹದ್ದು ಬಲ್ಲುದೆ ಅಯ್ಯಾ ?
ನದಿಯ ಗುಂಪ ತಾವರೆ ಬಲ್ಲುದಲ್ಲದೆ,
ಕಡೆಯಲಿದ್ದ ಹೊನ್ನಾವರಿಕೆ ಬಲ್ಲುದೆ ಅಯ್ಯಾ ?
ಪುಷ್ಪದ ಪರಿಮಳವ ತುಂಬಿ ಬಲ್ಲುದಲ್ಲದೆ,
ಕಡೆಯಲಿದ್ದಾಡುವ ನೊರಜು ಬಲ್ಲುದೆ ಅಯ್ಯಾ ?
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಶರಣರ ನಿಲವ ನೀವೆ ಬಲ್ಲಿರಲ್ಲದೆ, ಈ ಕೋಣನ
ಮೈಮೇಲಣ ಸೊಳ್ಳೆಗಳೆತ್ತ ಬಲ್ಲವಯ್ಯಾ ?
195
ಗಟ್ಟಿದುಪ್ಪ ತಿಳಿದುಪ್ಪಕ್ಕೆ ಹಂಗುಂಟೆ ಅಯ್ಯಾ ?
ದೀಪಕ್ಕೆ ದೀಪ್ತಿಗೆ ಭೇದವುಂಟೆ ಅಯ್ಯಾ ?
ಅಂಗಕ್ಕೆ ಆತ್ಮಂಗೆ ಭಿನ್ನವುಂಟೆ ಅಯ್ಯಾ ?
ಎನ್ನಂಗವನು ಶ್ರೀಗುರು ಮಂತ್ರವಮಾಡಿ ತೋರಿದನಾಗಿ,
ಸಾವಯಕ್ಕೂ ನಿರವಯಕ್ಕೂ ಭಿನ್ನವಿಲ್ಲವಯ್ಯಾ.
ಚೆನ್ನಮಲ್ಲಿಕಾರ್ಜುನದೇವರ ಬೆರಸಿ ಮತಿಗೆಟ್ಟವಳನೇತಕ್ಕೆ ನುಡಿಸುವಿರಯ್ಯಾ ?
196
ಗಿರಿಯಲಲ್ಲದೆ ಹುಲ್ಲುಮೊರಡಿಯಲ್ಲಾಡುವುದೆ ನವಿಲು ?
ಕೊಳಕ್ಕಲ್ಲದೆ ಕಿರುವಳ್ಳಕ್ಕೆಳಸುವುದೆ ಹಂಸೆ ?
ಮಾಮರ ತಳಿತಲ್ಲದೆ ಸರಗೈವುದೆ ಕೋಗಿಲೆ ?
ಪರಿಮಳವಿಲ್ಲದ ಪುಷ್ಪಕ್ಕೆಳಸುವುದೆ ಭ್ರಮರ ?
ಎನ್ನ ದೇವ ಚೆನ್ನಮಲ್ಲಿಕಾರ್ಜುನಂಗಲ್ಲದೆ
ಅನ್ಯಕ್ಕೆಳಸುವುದೆ ಎನ್ನ ಮನ ? ಪೇಳಿರೆ, ಕೆಳದಿಯರಿರಾ ?
197
ಗಿರಿಯೊಳು ಮನದೊಳು ಗಿಡಗಿಡದತ್ತ
ದೇವ, ಎನ್ನದೇವ, ಬಾರಯ್ಯಾ,
ತೋರಯ್ಯಾ ನಿಮ್ಮ ಕರುಣವನೆಂದು,
ನಾನು ಅರಸುತ್ತ ಅಳಲುತ್ತ ಕಾಣದೆ
ಸುಯಿದು ಬಂದು ಕಂಡೆ.
ಶರಣರ ಸಂಗದಿಂದ ಅರಸಿ ಹಿಡಿದಿಹೆನಿಂದು ನೀನಡಗುವ ಠಾವ ಹೇಳಾ
ಚೆನ್ನಮಲ್ಲಿಕಾರ್ಜುನಾ.

Downloaded from: **http://www.lingayatreligion.com**

198
ಗುಣ ದೋಷ ಸಂಪಾದನೆಯ ಮಾಡುವನ್ನಕ್ಕ
ಕಾಮದ ಒಡಲು, ಕ್ರೋಧದ ಗೊತ್ತು, ಲೋಭದ ಇಕ್ಕೆ,
ಮೋಹದ ಮಂದಿರ, ಮದದಾವರಣ, ಮತ್ಸರದ ಹೊದಕೆ.
ಆ ಭಾವವರತಲ್ಲದೆ ಚೆನ್ನಮಲ್ಲಿಕಾರ್ಜುನನ ಅರಿವುದಕ್ಕೆ ಇಂಬಿಲ್ಲ ಕಾಣಿರಣ್ಣಾ.
199
ಗುರು ತನ್ನ ವಿನೋದಕ್ಕೆ ಗುರುವಾದ
ಗುರು ತನ್ನ ವಿನೋದಕ್ಕೆ ಲಿಂಗವಾದ
ಗುರು ತನ್ನ ವಿನೋದಕ್ಕೆ ಜಂಗಮವಾದ
ಗುರು ತನ್ನ ವಿನೋದಕ್ಕೆ ಪಾದೋದಕವಾದ
ಗುರು ತನ್ನ ವಿನೋದಕ್ಕೆ ಪ್ರಸಾದವಾದ
ಗುರು ತನ್ನ ವಿನೋದಕ್ಕೆ ವಿಭೂತಿಯಾದ
ಗುರು ತನ್ನ ವಿನೋದಕ್ಕೆ ರುದ್ರಾಕ್ಷಿಯಾದ
ಗುರು ತನ್ನ ವಿನೋದಕ್ಕೆ ಮಹಾಮಂತ್ರವಾದ.
ಇಂತೀ ಭೇದವನರಿಯದೆ,
ಗುರು ಲಿಂಗ ಜಂಗಮ ಪಾದತೀರ್ಥ ಪ್ರಸಾದ ವಿಭೂತಿ ರುದ್ರಾಕ್ಷಿ
ಓಂ ನಮಃ ಶಿವಾಯಯೆಂಬ ಮಂತ್ರವ ಬೇರಿಟ್ಟು ಅರಿಯಬಾರದು.
ಅದಲ್ಲದೆ ಒಂದರಲ್ಲಿಯೂ ವಿಶ್ವಾಸ ಬೇರಾದಡೆ
ಅಂಗೈಯಲ್ಲಿರ್ದ ಲಿಂಗವು ಜಾರಿತ್ತು.
ಮಾಡಿದ ಪೂಜೆಗೆ ಕಿಂಚಿತ್ತು ಫಲಪದವಿಯ ಕೊಟ್ಟು
ಭವಹೇತುಗಳ ಮಾಡುವನಯ್ಯಾ.
ಇಷ್ಟಲಿಂಗದಲ್ಲಿ ನೈಷ್ಠೆ ನಟ್ಟು ಬಿಟ್ಟು ತ್ರಿವಿಧವ ಮರಳಿ ಹಿಡಿಯದೆ
ವಿರಕ್ತನಾದನಯ್ಯಾ ಗುರು
ಚೆನ್ನಮಲ್ಲಿಕಾರ್ಜುನಾ
200
ಗುರುಪಾದತೀರ್ಥವೆ ಮಂಗಳ ಮಜ್ಜನವೆನಗೆ.
ವಿಭೂತಿಯೆ ಒಳಗುಂದದರಿಷಿಣವೆನಗೆ
ದಿಗಂಬರವೆ ದಿವ್ಯಾಂಬರವೆನಗೆ.
ಶಿವಭಕ್ತರ ಪಾದರೇಣುವೆ ಅನುಲೇಪನವೆನಗೆ.
ರುದ್ರಾಕ್ಷಿಯೆ ಮೈದೊಡಿಗೆಯೆನಗೆ.
ಶರಣರ ಪಾದರಕ್ಷೆಯೆ ಶಿರದಲ್ಲಿ ತೊಂಡಿಲುಬಾಸಿಗವೆನಗೆ.
ಚೆನ್ನಮಲ್ಲಿಕಾರ್ಜುನನ ಮದವಳಿಗೆಗೆ ಬೇರೆ ಶೃಂಗಾರವೇಕೆ ಹೇಳಿರೆ ಅವ್ವಗಳಿರಾ ?
201
ಗುರುವಿನ ಕರುಣದಿಂದ ಲಿಂಗವ ಕಂಡೆ, ಜಂಗಮನ ಕಂಡೆ.
ಗುರುವಿನ ಕರುಣದಿಂದ ಪಾದೋದಕವ ಕಂಡೆ, ಪ್ರಸಾದವ ಕಂಡೆ.
ಗುರುವಿನ ಕರುಣದಿಂದ ಸಜ್ಜನ ಸದ್ಭಕ್ತರ ಸದ್ಗೋಷ್ಠಿಯ ಕಂಡೆ.
ಚೆನ್ನಮಲ್ಲಿಕಾರ್ಜುನಯ್ಯಾ,
ನಾ ಹುಟ್ಟಲೊಡನೆ ಶ್ರೀಗುರು ವಿಭೂತಿಯ ಪಟ್ಟವ ಕಟ್ಟಿ ಲಿಂಗಸ್ವಾಯತವ
ಮಾಡಿದನಾಗಿ ಧನ್ಯಳಾದೆನು.

Downloaded from: **http://www.lingayatreligion.com**

202
ಗುರುವೆಂಬ ತೆತ್ತಿಗನು
ಲಿಂಗವೆಂಬಲಗನು ಮನನಿಷ್ಠೆಯೆಂಬ ಕೈಯಲ್ಲಿ ಕೊಡಲು,
ಕಾದಿದೆ ಗೆಲಿದೆ ಕಾಮನೆಂಬವನ,
ಕ್ರೋಧಾದಿಗಳು ಕೆಟ್ಟು, ವಿಷಯಂಗಳೋಡಿದವು.
ಅಲಗು ಎನ್ನೊಳು ನಟ್ಟು ಆನಳಿದ ಕಾರಣ ಚೆನ್ನಮಲ್ಲಿಕಾರ್ಜುನಲಿಂಗವ ಕರದಲ್ಲಿ ಹಿಡಿದೆ.
203
ಗುರುವೆ ತೆತ್ತಿಗನಾದ,
ಲಿಂಗವೆ ಮದುವಣಿಗನಾದ, ನಾನೆ ಮದುವಳಿಗೆಯಾದೆನು.
ಈ ಭುವನವೆಲ್ಲರಿಯಲು ಅಸಂಖ್ಯಾತರೆನಗೆ ತಾಯಿತಂದೆಗಳು.
ಕೊಟ್ಟರು ಸಾದೃಶ್ಯವಪ್ಪ ವರನ ನೋಡಿ.
ಇದು ಕಾರಣ ಚೆನ್ನಮಲ್ಲಿಕಾರ್ಜುನನೆ ಗಂಡನೆನಗೆ.
ಮಿಕ್ಕಿನ ಲೋಕದವರೆನಗೆ ಸಂಬಂಧವಿಲ್ಲವಯ್ಯಾ ಪ್ರಭುವೆ.

204
ಗೂಗೆ ಕಣ್ಣ ಕಾಣಲರಿಯದೆ ರವಿಯ ಬಯ್ವುದು.
ಕಾಗೆ ಕಣ್ಣ ಕಾಣಲರಿಯದೆ ಶಶಿಯ ಬಯ್ವುದು.
ಕುರುಡ ಕಣ್ಣ ಕಾಣಲರಿಯದೆ ಕನ್ನಡಿಯ ಬಯ್ವನು.
ಇವರ ಮಾತೆಲ್ಲವು ಸಹಜವೆ
ನರಕಸಂಸಾರದಲ್ಲಿ ಹೊದಕುಳಿಗೊಳುತ್ತ
ಶಿವನಿಲ್ಲ ಮುಕ್ತಿಯಿಲ್ಲ, ಹುಸಿಯೆಂದಡೆ ನರಕದಲ್ಲಿಕ್ಕದೆ ಬಿಡುವನೆ
ಚೆನ್ನಮಲ್ಲಿಕಾರ್ಜುನಯ್ಯ
205
ಘನವ ಕಂಡೆ, ಅನುವ ಕಂಡೆ,
ಆಯತ ಸ್ವಾಯತ ಸನ್ನಿಹಿತ ಸುಖವ ಕಂಡೆ.
ಅರಿವರಿದು ಮರಹ ಮರೆದೆ.
ಕುರುಹಿನ ಮೋಹ ಮೊರೆಗೆಡದೆ
ಚೆನ್ನಮಲ್ಲಿಕಾರ್ಜುನಾ, ನಿಮ್ಮನರಿದು ಸೀಮೆಗೆಟ್ಟೆನು.
206
ಚಂದನವ ಕಡಿದು ಕೊರೆದು ತೇದಡೆ
ನೊಂದೆನೆಂದು ಕಂಪ ಬಿಟ್ಟಿತ್ತೆ ?
ತಂದು ಸುವರ್ಣವ ಕಡಿದೊರೆದಡೆ
ಬೆಂದು ಕಳಂಕ ಹಿಡಿಯಿತ್ತೆ ?
ಸಂದುಸಂದು ಕಡಿದ ಕಬ್ಬನು ತಂದು ಗಾಣದಲ್ಲಿಕ್ಕಿ ಅರೆದಡೆ,
ಬೆಂದು ಪಾಕಗುಡದೆ ಸಕ್ಕರೆಯಾಗಿ ನೊಂದೆನೆಂದು ಸಿಹಿಯ ಬಿಟ್ಟಿತ್ತೆ ?
ನಾ ಹಿಂದೆ ಮಾಡಿದ ಹೀನಂಗಳೆಲ್ಲವ ತಂದು ಮುಂದಿಳುಹಲು
ನಿಮಗೇ ಹಾನಿ.
ಎನ್ನ ತಂದೆ ಚೆನ್ನಮಲ್ಲಿಕಾರ್ಜುನಯ್ಯಾ, ನೀ ಕೊಂದಡೆಯೂ ಶರಣೆಂಬುದ ಮಾಣೆ.

Downloaded from: **http://www.lingayatreligion.com**

207
ಚಂದ್ರಕಾಂತದ ಶಿಲೆಗೆ ಒಂದು ಗಜ ಹೋರುವಂತೆ
ತನ್ನ ನೆಳಲಿಂಗೆ ತಾನೆ ಹೋರಿ ಸಾವಂತೆ
ಆನೆಯ ಗತಿ ಆನೆಯ ಮತಿ.
ಆನೆಯಹುದು, ಆನೆಯಲ್ಲ, ಅದನೇನೆಂಬೆ ?
ನೀನೆನ್ನ ಕರಸ್ಥಲದಲ್ಲಿ ಸಿಲ್ಕಿದೆಯಾಗಿ ನೀ ನಾನೆಂಬ ಭ್ರಾಂತೇಕೆ ? ನಾನು ನೀನಲ್ಲದ
ತೆರಹಿಲ್ಲ,
ಚೆನ್ನಮಲ್ಲಿಕಾರ್ಜುನಾ.
208
ಚಕ್ರ ಬೆಸಗೆಯ್ವಡೆ ಅಲಗಿನ ಹಂಗೇಕೆ ?
ಮಾಣಿಕ್ಯದ ಬೆಳಗುಳ್ಳಡೆ ದೀಪದ ಹಂಗೇಕೆ ?
ಪರುಷ ಕೈಯ್ಯಲುಳ್ಳಡೆ ಸಿರಿಯ ಹಂಗೇಕೆ ?
ಕಾಮಧೇನು ಕರೆವಡೆ ಕರುವಿನ ಹಂಗೇಕೆ ?
ಎನ್ನದೇವ ಚೆನ್ನಮಲ್ಲಿಕಾರ್ಜುನಲಿಂಗವು ಕರಸ್ಥಳದೊಳಗುಳ್ಳಡೆ ಇನ್ನಾವ ಹಂಗೇಕೆ ?
209
ಚರಾಚರಾತ್ಮಕ ಪ್ರಪಂಚವೆಲ್ಲ
ಶಿವನ ಚಿದ್ಗರ್ಭದಿಂದುಯಿಸಿಪ್ಪವೆಂದು,
ಶಿವಾಭಿನ್ನತ್ವದಿಂ ಸಕಲಪ್ರಾಣಿಗಳಲ್ಲಿ ತನ್ನಾತ್ಮಚೇತನವ
ತನ್ನಲ್ಲಿ ಸಕಲ ಪ್ರಾಣಿಗಳ ಆತ್ಮ ಚೇತನವ ಕಂಡು,
ದಯಾಪರತ್ವವನುಳ್ಳ ಸರ್ವಜ್ಞತಾ ಶಕ್ತಿಯನು
ಭಕ್ತಿಸ್ಥಲದಲ್ಲಿ ಪಡೆವುದು ನೋಡಾ.
ತನಗೆ ಬಂದ ಅಪವಾದ ನಿಂದೆ ಎಡರಾಪತ್ತುಗಳಲ್ಲಿ ಎದೆಗುಂದದೆ
ಬಪ್ಪ ಸುಖ ದುಃಖ ಖೇದ ಹಷರ್ಾದಿಗಳು
ಶಿವಾಜ್ಞೆಯಹುದೆಂದು ಪರಿಣತನಪ್ಪ ತೃಪ್ತಿಯ ಶಕ್ತಿಯನು
ಮಾಹೇಶ್ವರಸ್ಥಲದಲ್ಲಿ ಪಡೆವುದು ನೋಡಾ.
ದೇಹಾದಿ ಆದಿ ಪ್ರಪಂಚಕ್ಕೆ ಮೂಲಿಗನಾದ
ಅನಾದಿ ಪರಶಿವನು ಪ್ರಸನ್ನತ್ವವನುಂಟುಮಾಡುವ
ಅನಾದಿ ಬೋಧ ಶಕ್ತಿಯನು
ಪ್ರಸಾದಿಸ್ಥಲದಲ್ಲಿ ಪಡೆವುದು ನೋಡಾ.
ಅಂತಪ್ಪ ದೇಹಾದಿ ಪ್ರಪಂಚದ ಚಲನವಲನವು
ತನ್ನಾಶ್ರಯದಲ್ಲಿ ನಡೆದು ತಾನು ಆವುದನ್ನೂ ಆಶ್ರಯಿಸದೆ
ಸರ್ವಸ್ವತಂತ್ರ ತಾನೆಂಬರಿವನುಂಟುಮಾಡುವ
ಸ್ವತಂತ್ರ ಶಕ್ತಿಯನು ಪ್ರಾಣಲಿಂಗಿಸ್ಥಲದಲ್ಲಿ ಪಡೆವುದು ನೋಡಾ.
ತನ್ನಾಶ್ರಯವ ಪಡೆದ ದೃಶ್ಯಮಾನ ದೇಹಾದಿ ಜಗವೆಲ್ಲ ಅನಿತ್ಯವೆಂಬ
ಆ ದೃಶ್ಯಮಾನದೇಹಾದಿಗಳ ಮೂಲೋತ್ಪತ್ತಿಗಳಿಗೆ
ಕಾರಣನಪ್ಪ ಪತಿಪರಶಿವಲಿಂಗವೇ ನಿತ್ಯವೆಂಬರಿವನುಂಟುಮಾಡುವ
ಅಲುಪ್ತ ಶಕ್ತಿಯನು ಶರಣಸ್ಥಲದಲ್ಲಿ ಪಡೆವುದು ನೋಡಾ.
ಅಂಗಲಿಂಗಗಳ ಸಂಯೋಗವ ತೋರಿ,
ಅಖಂಡ ಪರಶಿಲಿಂಗೈಕ್ಯವನುಂಟುಮಾಡಿ ಕೊಡುವ

Downloaded from: **http://www.lingayatreligion.com**

ಅನಂತ ಶಕ್ತಿಯನು ಐಕ್ಯಸ್ಥಲದಲ್ಲಿ ಪಡೆವುದು ನೋಡಾ.
ಇದಕ್ಕೆ ಶಿವರಹಸ್ಯೇ ;
'ಯದ್ಭಕ್ತಿಸ್ಥಲಮಿತ್ಯಾಹುಸ್ತತ್ಸರ್ವಜ್ಞತ್ವಮಿತೀರ್ಯತೇ
ಯನ್ಮಾಹೇಶ್ವರಂ ನಾಮ ಸಾ ತೃಪ್ತಿರ್ಮಮ ಶಾಂಕರಿ ||
ಯತ್ಪ್ರಸಾದಾಬಿದಂ ಸ್ಥಾನಂ ತದ್ಬೋಧೋ ನಿರಂಕುಶಃ
ಯತ್ಪ್ರಾಣಲಿಂಗಕಂ ನಾಮ ತತ್ಸ್ವಾತಂತ್ರ್ಯಮುದಾಹೃತಂ ||
ಯದಸ್ತಿ ಶರಣಂ ನಾಮ ಹ್ಯಲುಪ್ತಾ ಶಕ್ತಿರುಚ್ಯತೇ
ಯದೈಕ್ಯಸ್ಥಾನಮೂರ್ಧಸ್ಥಾ ಹ್ಯನಂತಾಶಕ್ತಿರುಚ್ಯತೇ ||ಳ
ಎಂದುದಾಗಿ,
ಇಂತಪ್ಪ ಷಟ್ಸ್ಥಲಗಳಲ್ಲಿ ಷಡ್ವಿಧ ಶಕ್ತಿಗಳ
ಸ್ಥಳಕುಳಂಗಳ ತಿಳಿದು, ಷಡ್ವಿಧ ಲಿಂಗಗಳಲ್ಲಿ
ಧ್ಯಾನ ಪೂಜಾದಿಗಳಿಂದ ಅಂಗಗೊಂಡು
ಭವದ ಬಟ್ಟೆಯ ಮೆಟ್ಟಿ ನಿಂದಲ್ಲದೆ ಷಟ್ಸ್ಥಲಬ್ರಹ್ಮಿಗಳಾಗರು.
ಇಂತಲ್ಲದೆ ಅಪವಾದ ನಿಂದೆಗಳ ಪರರ ಮೇಲೆ ಕಣ್ಕಾಣದೆ ಹೊರಿಸುತ್ತ
ಪರದಾರ ದಾಶಿ ವೇಶಿ ಸೂಳೆಯರ ಕೂಡಿ ಭುಂಜಿಸಿ
ತೊಂಬಲತಿಂಬ ಹೇಸಿ ಮೂಳರು
ಪೋತರಾಜ, ಜೋಗಿ, ಕ್ಷಪಣರಂತೆ
ಜಟಾ, ತುರುಬು, ಬೋಳುಮುಂಡೆಗೊಂಡು
ಕೂಳಿಗಾಗಿ ತಿರುಗುವ ಮೂಳ ಚುಕ್ಕೆಯರ
ವಿರಕ್ತ ಷಟ್ಸ್ಥಲಬ್ರಹ್ಮಿಗಳೆನಬಹುದೇನಯ್ಯ ?
ಅಂತಪ್ಪ ಅನಾದಿ ಷಟ್ಸ್ಥಲಬ್ರಹ್ಮದ ಷಡ್ವಿಧಶಕ್ತಿಯನರಿದು
ವಿರಕ್ತ ಜಂಗಮ ಷಟ್ಸ್ಥಲ ಬಾಲಬ್ರಹ್ಮಿ ನಿರಾಭಾರಿಯಾದ
ಚೆನ್ನಬಸವಣ್ಣನ ಶ್ರೀಪಾದಕ್ಕೆ ನಮೋ ನಮೋ ಎಂಬೆನಯ್ಯಾ ಚೆನ್ನಮಲ್ಲಿಕಾರ್ಜುನಾ.
210
ಚಿನ್ನಕ್ಕರಿಸಿನ ಚಿನ್ನಕ್ಕರಿಸಿನ ಚಿನ್ನಕ್ಕರಿಸಿನವ ಕೊಳ್ಳಿರವ್ವಾ.
ಎಮ್ಮ ನಲ್ಲನ ಮೈಯ ಹತ್ತುವ ಅರಿಸಿನವ ಕೊಳ್ಳಿರವ್ವಾ.
ಒಳಗುಂದದರಿಸಿನವ ಮಿಂದು ಚೆನ್ನಮಲ್ಲಿಕಾರ್ಜುನನ ಅಪ್ಪಿರವ್ವಾ.
211
ಚಿಲಿಮಿಲಿ ಎಂದು ಓದುವ ಗಿಳಿಗಳಿರಾ,
ನೀವು ಕಾಣಿರೆ, ನೀವು ಕಾಣಿರೆ.
ಸರವೆತ್ತಿ ಪಾಡುವ ಕೋಗಿಲೆಗಳಿರಾ,
ನೀವು ಕಾಣಿರೆ, ನೀವು ಕಾಣಿರೆ.
ಎರಗಿ ಬಂದಾಡುವ ತುಂಬಿಗಳಿರಾ,
ನೀವು ಕಾಣಿರೆ, ನೀವು ಕಾಣಿರೆ.
ಕೊಳನತಡಿಯೊಳಾಡುವ ಹಂಸೆಗಳಿರಾ,
ನೀವು ಕಾಣಿರೆ, ನೀವು ಕಾಣಿರೆ.
ಗಿರಿ ಗಹ್ವರದೊಳಗಾಡುವ ನವಿಲುಗಳಿರಾ,
ನೀವು ಕಾಣಿರೆ, ನೀವು ಕಾಣಿರೆ. ಚೆನ್ನಮಲ್ಲಿಕಾರ್ಜುನನೆಲ್ಲಿದ್ದಹನೆಂದು ಹೇಳಿರೆ.

Downloaded from: **http://www.lingayatreligion.com**

212
ಜಂಗಮದ ಕೈ ಹೊಯ್ದು ಹೊಯ್ದು ನಕ್ಕು ಕೆಟ್ಟರಯ್ಯ ?
ಸರಸದಲ್ಲಿ ಮುಟ್ಟಿ ಪೂಜಿಸುವರೆ ನಿಮಗೆ ಲಿಂಗವಿಲ್ಲ.
ಹುತ್ತಿನೊಳಗೆ ಕೈಯನಿಕ್ಕೆ ಸರ್ಪದಷ್ಟವಾದರೆ ಮತ್ತೆ ಗಾರುಡವುಂಟೆ
ಚೆನ್ನಮಲ್ಲಿಕಾರ್ಜುನಾ ?
213
ಜಂಗಮವೆನ್ನ ಪ್ರಾಣ, ಜಂಗಮವೆನ್ನ ಜೀವ,
ಜಂಗಮವೆನ್ನ ಪುಣ್ಯದ ಫಲ, ಜಂಗಮವೆನ್ನ ನಿಧಿನಿಧಾನ,
ಜಂಗಮವೆನ್ನ ಹರುಷದ ಮೇರೆ.
ಚೆನ್ನಮಲ್ಲಿಕಾರ್ಜುನಾ, ಜಂಗಮದ ತಿಂಥಿಣಿಯಲ್ಲಿ ಓಲಾಡುವೆನು.
214
ಜಲದ ಮಂಟಪದ ಮೇಲೆ ಉರಿಯ ಚಪ್ಪರವನಿಕ್ಕಿ,
ಆಲಿಕಲ್ಲ ಹಸೆಯ ಹಾಸಿ ಬಾಸಿಗವ ಕಟ್ಟಿ,
ಕಾಲಿಲ್ಲದ ಹೆಂಡತಿಗೆ ತಲೆಯಿಲ್ಲದ ಗಂಡ ಬಂದು ಮದುವೆಯಾದನು.
ಎಂದೆಂದೂ ಬಿಡದ ಬಾಳುವೆಗೆ ಕೊಟ್ಟರೆನ್ನ.
ಚೆನ್ನಮಲ್ಲಿಕಾರ್ಜುನನೆಂಬ ಗಂಡಂಗೆನ್ನ ಮದುವೆಯ ಮಾಡಿದರೆಲೆ ಅವ್ವಾ.

215
ಜಾಲಗಾರನೊಬ್ಬ ಜಲವ ಹೊಕ್ಕು ಶೋಧಿಸಿ,
ಹಲವು ಪ್ರಾಣಿಯ ಕೊಂದು, ನಲಿನಲಿದಾಡುವ.
ತನ್ನ ಮನೆಯಲೊಂದು ಶಿಶು ಸತ್ತಡೆ
ಅದಕ್ಕೆ ಮರುಗುವಂತೆ ಅವಕೇಕೆ ಮರುಗ ?
ಅದೆಂತೆಂದಡೆ
'ಸ್ವಾತ್ಮಾನಮಿತರಂ ಚೇತಿ ಭಿನ್ನತಾ ನೈವ ದೃಶ್ಯತಾಂ
ಸರ್ವಂ ಚಿಜ್ಜ್ಯೋತಿರೇವೇತಿ ಯಃ ಪಶ್ಯತಿ ಸ ಪಶ್ಯತಿ'
ಎಂದುದಾಗಿ,
ಜಾಲಗಾರನ ದುಃಖ ಜಗಕೆಲ್ಲ ನಗೆಗೆಡೆ.
ಇದು ಕಾರಣ, ಚೆನ್ನಮಲ್ಲಿಕಾರ್ಜುನಯ್ಯನ ಭಕ್ತನಾಗಿರ್ದು ಜೀವಹಿಂಸೆ ಮಾಡುವ
ಮಾದಿಗರನೇನೆಂಬೆನಯ್ಯಾ ?
216
ಜೀವೇಶ್ವರಗಾಶ್ರಯವಾದ ಸೂಕ್ಷ್ಮದೇಹಮಧ್ಯದಲ್ಲಿ
ಷಟ್ಚಕ್ರಂಗಳಲ್ಲಿ ಹುಟ್ಟಿರ್ದ ಷಟ್ಕಮಲಂಗಳನು
ಆಧಾರ ತೊಡಗಿ ಆಜ್ಞಾಚಕ್ರವೇ ಕಡೆಯಾಗುಳ್ಳ
ಬ್ರಹ್ಮಾದಿಗಳ ಸ್ಥಾನಂಗಳ ಗುರೂಪದೇಶದಿಂದ ಭಾವಿಸುವುದು.
ಆಜ್ಞಾಚಕ್ರದತ್ತಣಿಂದ ಊರ್ಧ್ವ ಭಾಗವಾದ
ಬ್ರಹ್ಮರಂಧ್ರದಲ್ಲಿಯಾಯಿತ್ತಾದಡೆ
ಸಹಸ್ರದಳ ಕಮಲವನು ಭಾವಿಸುವುದು.
ಆ ಸಹಸ್ರದಳ ಕಮಲದಲ್ಲಿ ನಿರ್ಮಲವಾದ
ಚಂದ್ರಮಂಡಲವನು ಧ್ಯಾನಿಸುವುದು.

Downloaded from: **http://www.lingayatreligion.com**

ಆ ಚಂದ್ರಮಂಡಲದ ಮಧ್ಯದಲ್ಲಿ ವಾಲಾಗ್ರ ಮಾತ್ರದೋಪಾದಿಯಲ್ಲಿ
ಪರಮ ಸೂಕ್ಷ್ಮರಂಧ್ರುವನು ಉಪದೇಶದಿಂದರಿವುದು.
ಆ ಸೂಕ್ಷ್ಮರಂಧ್ರುವನೆ ಕೈಲಾಸಸ್ಥಾನವಾಗಿ ಅರಿದು
ಆ ಕೈಲಾಸದಲ್ಲಿ ಇರುತಿರ್ದ ಪರಮೇಶ್ವರನನು
ಸಮಸ್ತ ಕಾರಣಂಗಳಿಗೆ ಕಾರಣವಾಗಿದ್ದಾತನಾಗಿ ಧ್ಯಾನಿಸುವುದಯ್ಯಾ ಶ್ರೀ
ಚೆನ್ನಮಲ್ಲಿಕಾರ್ಜುನದೇವಾ.
217
ಜ್ಞಾನದ ಕಾರಣಾಂಗವೆ ಭಕ್ತಿಯು.
ಭಕ್ತಿಯ ಮಹಾಕಾರಣಾಂಗವೆ ಜ್ಞಾನವು.
ಭಕ್ತಿ ಜ್ಞಾನವೆಂಬುದು ಕಾಕಾಕ್ಷಿಯಂತೆ.
ಭಕ್ತಿ ಜ್ಞಾನವೆಂಬುದು ಎನ್ನ ಮೋಹದ ಚೆನ್ನಮಲ್ಲಿಕಾರ್ಜುನಾ ನಿಮ್ಮಂತೆ.
218
ತನು ಕರಗದವರಲ್ಲಿ
ಮಜ್ಜನವನೊಲ್ಲೆಯಯ್ಯಾ ನೀನು.
ಮನ ಕರಗದವರಲ್ಲಿ
ಪುಷ್ಪವನೊಲ್ಲೆಯಯ್ಯಾ ನೀನು.
ಹದುಳಿಗರಲ್ಲದವರಲ್ಲಿ
ಗಂಧಾಕ್ಷತೆಯನೊಲ್ಲೆಯಯ್ಯಾ ನೀನು.
ಅರಿವು ಕಣ್ದೆರೆಯದವರಲ್ಲಿ
ಆರತಿಯನೊಲ್ಲೆಯಯ್ಯಾ ನೀನು.
ಭಾವಶುದ್ಧವಿಲ್ಲದವರಲ್ಲಿ
ಧೂಪವನೊಲ್ಲೆಯಯ್ಯಾ ನೀನು.
ಪರಿಣಾಮಿಗಳಲ್ಲದವರಲ್ಲಿ
ನೈವೇದ್ಯವನೊಲ್ಲೆಯಯ್ಯಾ ನೀನು.
ತ್ರಿಕರಣ ಶುದ್ಧವಿಲ್ಲದವರಲ್ಲಿ
ತಾಂಬೂಲವನೊಲ್ಲೆಯಯ್ಯಾ ನೀನು.
ಹೃದಯಕಮಲ ಅರಳದವರಲ್ಲಿ
ಇರಲೊಲ್ಲೆಯಯ್ಯಾ ನೀನು.
ಎನ್ನಲ್ಲಿ ಏನುಂಟೆಂದು ಕರಸ್ಥಲವನಿಂಬುಗೊಂಡೆ ಹೇಳಾ ಚೆನ್ನಮಲ್ಲಿಕಾರ್ಜುನಯ್ಯಾ
?

219
ತನು ನಿಮ್ಮ ರೂಪಾದ ಬಳಿಕ
ಆರಿಗೆ ಮಾಡುವೆ ?
ಮನ ನಿಮ್ಮ ರೂಪಾದ ಬಳಿಕ
ಆರ ನೆನೆವೆ ?
ಪ್ರಾಣ ನಿಮ್ಮ ರೂಪಾದ ಬಳಿಕ
ಆರನಾರಾಧಿಸುವೆ ?
ಅರಿವು ನಿಮ್ಮಲ್ಲಿ ಸ್ವಯವಾದ ಬಳಿಕ

Downloaded from: **http://www.lingayatreligion.com**

ಆರನರಿವೆ ?
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮಿಂದ ನೀವೆಯಾದಿರಾಗಿ ನಿಮ್ಮನೆ ಅರಿವುತ್ತಿರ್ದೆನು.
220
ತನು ಮೀಸಲಾಗಿ, ಮನ ಮೀಸಲಾಗಿ,
ಭಾವವಚ್ಚುಗೊಂಡಿಪ್ಪುದವ್ವಾ.
ಅಚ್ಚುಗನ ಸ್ನೇಹ, ನಿಚ್ಚಟದ ಮೆಚ್ಚುಗೆ,
ಬೆಚ್ಚು ಬೇರಾಗದ ಭಾವವಾಗೆ ಚೆನ್ನಮಲ್ಲಿಕಾರ್ಜುನಯ್ಯ ಒಳಗೆ
ಗಟ್ಟಿಗೊಂಡಿಪ್ಪನವ್ವಾ.
221
ತನುವನುವಾಯಿತ್ತು, ಮನವನುವಾಯಿತ್ತು,
ಪ್ರಾಣವನುವಾಯಿತ್ತು.
ಮುನಿದು ಬಾರದ ಪರಿ ಇನ್ನೆಂತು ಹೇಳಾ ?
ಎನ್ನ ಪ್ರಾಣದಲ್ಲಿ ಸಂದು, ಎನ್ನ ಮನಕ್ಕೆ ಮನವಾಗಿ ನಿಂದ
ಎನ್ನ ದೇವ ಚೆನ್ನಮಲ್ಲಿಕಾರ್ಜುನನ ಕಾಣದಡೆ ಆನೆಂತು ಬದುಕುವೆನಯ್ಯಾ ?
222
ತನುವನೆಲ್ಲವ ಜರಿದು ಮನವ ನಿಮ್ಮೊಳಗಿರಿಸಿ,
ಘನಸುಖದಲೋಲಾಡುವ ಪರಿಯ ತೋರಯ್ಯಾ ಎನಗೆ.
ಭಾವವಿಲ್ಲದ ಬಯಲಸುಖವು ಭಾವಿಸಿದಡೆಂತಹುದು
ಬಹುಮುಖರುಗಳಿಗೆ ?
ಕೇಳಯ್ಯಾ, ಶ್ರೀಶೈಲ ಚೆನ್ನಮಲ್ಲಿಕಾರ್ಜುನದೇವಾ ನಾನಳಿದು ನೀನುಳಿದ ಪರಿಯ
ತೋರಯ್ಯಾ ಪ್ರಭುವೆ.
223
ತನುವಬೇಡಿದಡೆ ತನುವಕೊಟ್ಟು ಶುದ್ಧವಪ್ಪೆ.
ಮನವ ಬೇಡಿದಡೆ ಮನವಕೊಟ್ಟು ಶುದ್ಧವಪ್ಪೆ.
ಧನವ ಬೇಡಿದಡೆ ಧನವ ಕೊಟ್ಟು ಶುದ್ಧವಪ್ಪೆ.
ನೀನಾವುದ ಬೇಡಿದಡೂ ಓಸರಿಸಿದಡೆ,
ಕೈವಾರಿಸಿದಡೆ ಹಿಡಿದು ಮೂಗ ಕೊಯಿ.
ಎನ್ನ ಕಲಿತನದ ಬಿನ್ನಪವ ಕಡೆತನಕ ನಡೆಸದಿರ್ದಡೆ ತಲೆದಂಡ ಕಾಣಾ
ಚೆನ್ನಮಲ್ಲಿಕಾರ್ಜುನಾ.
224
ತನುವ ಮೀರಿತ್ತು, ಮನವ ಮೀರಿತ್ತು,
ಘನವ ಮೀರಿತ್ತು.
ಅಲ್ಲಿಂದತ್ತ ಭಾವುಕರಿಲ್ಲವಾಗಿ ತಾರ್ಕಣೆಯಿಲ್ಲ. ಚೆನ್ನಮಲ್ಲಿಕಾರ್ಜುನಯ್ಯನ
ಬೆರಸಲಿಲ್ಲದ ನಿಜತತ್ವವು.
225
ತನುವಿಕಾರದಿಂದ ಸವದು ಸವದು,
ಮನವಿಕಾರದಿಂದ ನೊಂದು ಬೆಂದವರೆಲ್ಲಾ ಬೋಳಾಗಿ ;
ದಿನ ಜವ್ವನಂಗಳು ಸವದು ಸವದು,

Downloaded from: **http://www.lingayatreligion.com**

ಜಂತ್ರ ಮುರಿದು ಗತಿಗೆಟ್ಟವರೆಲ್ಲಾ ಬೋಳಾಗಿದ
'ಹೇಸಿ, ಒಲ್ಲೆ ಸಂಸಾರವನೆಂಬರು '
ವೈರಾಗ್ಯವ ಬಲ್ಲವರಲ್ಲ ಕೇಳವ್ವಾ.
ಕನ್ನೆಯಳಿಯದ ಜವ್ವನ ಸತಿಗಲ್ಲದೆ ಚೆನ್ನಮಲ್ಲಿಕಾರ್ಜುನದೇವಗಲ್ಲ ಕೇಳವ್ವಾ.
226
ತನುವಿಡಿದ ಇಂದ್ರಿಯಸುಖ
ಸಿರಿಯಂತೆ ತೋರಿ ಅಡಗುತ್ತಲಿದೆ.
ಗಗನದೊಡ್ಡಣೆಯಂತೆ ತನು ;
ನೋಡ ನೋಡಲನುಮಾನವಿಲ್ಲದೆ ಹರಿದು ಹೋಗುತ್ತದೆ.
ಇವಾದಿಯ ಮಾಣಿಸಿ, ನಿಮ್ಮ ಘನನೆನಹಿನೊಳಿರಿಸಾ ಚೆನ್ನಮಲ್ಲಿಕಾರ್ಜುನಯ್ಯಾ.
227
ತನುವಿನ ಸತ್ವವ ನಿಲಿಸಿತ್ತು, ಮನದ ವಿರಕ್ತಿಯ ಕೆಡಿಸಿತ್ತು.
ಘನವ ಕಾಣಲೀಯದು ದುಃಖ.
ಅರುಹಿರಿಯರ ತರಕಟ ಕಾಡಿತ್ತು.
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಮರೆಗೊಂಡ ಸಂಸಾರದ ತೆರೆ ಎನ್ನ
ಬರಲೀಯದಯ್ಯಾ.
228
ತನುವೆಂಬ ಸಾಗರ ತುಂಬಲು,
ಮನವೆಂಬುದು ಹರುಗೋಲಾಯಿತ್ತು ಅಂಬಿಗಾ.
ಎನ್ನ ಗಮ್ಮನೆ ತೆಗೆಯೋ ಅಂಬಿಗಾ.
ತೊರೆದು ದಾಂಟಿಹೆನೆಂಬ ಭರವಸ ಕರಘನ,
ಗಮ್ಮನೆ ತೆಗೆಯೋ ಅಂಬಿಗಾ.
ಸಿರಿಶೈಲ ಚೆನ್ನಮಲ್ಲಿಕಾರ್ಜುನಾ ನಿನ್ನ ಕಾಣಲು ಬಂದಿಹೆ ಅಂಬಿಗಾ.
229
ತನುಶುದ್ಧ ಮನಶುದ್ಧ ಭಾವಶುದ್ಧ
ವಾದವರನೆನಗೊಮ್ಮೆ ತೋರಾ ?
ನಡೆಯೆಲ್ಲ ಸದಾಚಾರ; ನುಡಿಯೆಲ್ಲ ಶಿವಾಗಮ ;
ನಿತ್ಯಶುದ್ಧರಾದವರನೆನಗೊಮ್ಮೆ ತೋರಾ ?
ಕತ್ತಲೆಯ ಮೆಟ್ಟಿ ತಳವೆಳಗಾಗಿ
ಹೊರಗೊಳಗೊಂದಾಗಿ ನಿಂದ
ನಿಮ್ಮ ಶರಣರನೆನಗೊಮ್ಮೆ ತೋರಾ ಚೆನ್ನಮಲ್ಲಿಕಾರ್ಜುನಾ ?
230
ತನು ಶುದ್ಧವಾಯಿತ್ತು ಶಿವಭಕ್ತರೊಕ್ಕುದ ಕೊಂಡೆನ್ನ.
ಮನ ಶುದ್ಧವಾಯಿತ್ತು ಅಸಂಖ್ಯಾತರ ನೆನದೆನ್ನ.
ಕಂಗಳು ಶುದ್ಧವಾಯಿತ್ತು ಸಕಲಗಣಂಗಳ ನೋಡಿ ಎನ್ನ.
ಶ್ರೋತ್ರ ಶುದ್ಧವಾಯಿತ್ತು ಅವರ ಕೀರ್ತಿಯ ಕೇಳಿ ಎನ್ನ.
ಭಾವನೆ ಎನಗಿದು ಜೀವನ ಲಿಂಗತಂದೆ.
ನೆಟ್ಟನೆ ನಿಮ್ಮ ಮನಮುಟ್ಟಿ ಪೂಜಿಸಿ ಭವಗೆಟ್ಟೆ ನಾನು ಚೆನ್ನಮಲ್ಲಿಕಾರ್ಜುನಾ.
231

Downloaded from: **http://www.lingayatreligion.com**

ತನ್ನವಸರಕ್ಕಾಗಿ ಹಗಲುಗನ್ನವನಿಕ್ಕಿದಡೆ,
ತನ್ನ ಸವೆಯಲಿಲ್ಲ, ಕಳವು ದೊರೆಯಲಿಲ್ಲ ?
ಬೊಬ್ಬುಲಿಯನೇರಿದ ಮರ್ಕಟನಂತೆ
ಹಣ್ಣ ಮೆಲ್ಲಲಿಲ್ಲ, ಕುಳ್ಳಿರೆ ಠಾವಿಲ್ಲ.
ನಾನು ಸರ್ವಸಂಗಪರಿತ್ಯಾಗಮಾಡಿದವಳಲ್ಲ, ನಿಮ್ಮ ಕೂಡಿ ಕುಲವಳಿದವಳಲ್ಲ,
ಚೆನ್ನಮಲ್ಲಿಕಾರ್ಜುನಾ.
232
ತನ್ನ ವಿನೋದಕ್ಕೆ ತಾನೆ ಸೃಜಿಸಿದ ಸಕಲ ಜಗತ್ತ.
ತನ್ನ ವಿನೋದಕ್ಕೆ ತಾನೆ ಸುತ್ತಿದನದಕ್ಕೆ ಸಕಲ ಪ್ರಪಂಚನು.
ತನ್ನ ವಿನೋದಕ್ಕೆ ತಾನೆ ತಿರುಗಿಸಿದನನಂತ ಭವದುಃಖಂಗಳಲ್ಲಿ.
ಇಂತೆನ್ನ ಚೆನ್ನಮಲ್ಲಿಕಾರ್ಜುನನೆಂಬ ಪರಶಿವನು
ತನ್ನ ಜಗದ್ವಿಲಾಸ ಸಾಕಾದ ಮತ್ತೆ ತಾನೆ ಪರಿವನದರ ಮಾಯಾಪಾಶವನು.
233
ತನ್ನ ಶಿಷ್ಯ ತನ್ನ ಮಗನೆಂಬುದು ತಪ್ಪದಲಾ.
ಏಕೆ? ಆತನ ಧನಕ್ಕೆ ತಂದೆಯಾದನಲ್ಲದೆ
ಆತನ ಮನಕ್ಕೆ ತಂದೆಯಾದನೆ ?
ಏಕೆ? ಆತನ ಮನವನರಿಯನಾಗಿ, ಆತನ ಧನಕ್ಕೆ ತಂದೆಯಾದನು.
ತನ್ನಲ್ಲಿರ್ದ ಭಕ್ತಿಯ ಮಾರಿಕೊಂಡುಂಬವರು ನಿಮ್ಮ ನಿಜಭಕ್ತರಲ್ಲವಯ್ಯಾ
ಚೆನ್ನಮಲ್ಲಿಕಾರ್ಜುನಾ.
234
ತಲೆಯಲ್ಲಿ ನಿರಿ, ಟೊಂಕದಲ್ಲಿ ಮುಡಿ,
ಮೊಳಕಾಲಲ್ಲಿ ಕಿವಿಯೋಲೆಯ ಕಂಡೆ.
ಹರವಸದ ಉಡಿಗೆ !
ಕಾಂತದಲ್ಲಿ ಮುಖವ ಕಂಡು ಕಾಣದೆ ಚೆನ್ನಮಲ್ಲಿಕಾರ್ಜುನನ ನೆರೆವ ಪರಿಕರ
ಹೊಸತು.
235
ತಾನು ದಂಡುಮಂಡಲಕ್ಕೆ ಹೋದಹೆನೆಂದಡೆ
ನಾನು ಸುಮ್ಮನಿಹೆನಲ್ಲದೆ,
ತಾನೆನ್ನ ಕೈಯೊಳಗಿದ್ದು ತಾನೆನ್ನ ಮನದೊಳಗಿದ್ದು
ಎನ್ನ ಕೂಡದಿದ್ದಡೆ ನಾನೆಂತು ಸೈರಿಸುವೆನವ್ವಾ ?
ನೆನಹೆಂಬ ಕುಂಟಣಿ ಚೆನ್ನಮಲ್ಲಿಕಾರ್ಜುನನ ನೆರಹದಿದ್ದಡೆ ನಾನೇವೆ ಸಖಿಯೆ ?
236
ತಾಯ ತೊರೆದು ನಾನೇನ ಮಾಡುವೆ ?
ತಂದೆಯ ತೊರೆದು ನಾನೇನ ಮಾಡುವೆ ?
ಎತ್ತ ಮುಂತಾಗಿ ನಡೆದು ನಾನೇನ ಮಾಡುವೆ ?
ಚೆನ್ನಮಲ್ಲಿಕಾರ್ಜುನಾ ನೀನೊಲಿಯದನ್ನಕ್ಕರ ?
237
ತುಂಬಿದುದು ತುಳುಕದು ನೋಡಾ.
ನಂಬಿದುದು ಸಂದೇಹಿಸದು ನೋಡಾ.

Downloaded from: **http://www.lingayatreligion.com**

ಒಲಿದುದು ಓಸರಿಸದು ನೋಡಾ.
ನೆರೆಯರಿದುದು ಮರೆಯದು ನೋಡಾ.
ಚೆನ್ನಮಲ್ಲಿಕಾರ್ಜುನಯ್ಯಾ, ನೀನೊಲಿದ ಶರಣಂಗೆ ನಿಸ್ಸೀಮಸುಖವಯ್ಯಾ.

238
ತೆರಣಿಯ ಹುಳು ತನ್ನ ಸ್ನೇಹದಿಂದ ಮನೆಯ ಮಾಡಿ
ತನ್ನ ನೂಲು ತನ್ನನೆ ಸುತ್ತಿ ಸಾವಂತೆ,
ಮನಬಂದುದನು ಬಯಸಿ ಬೇವುತ್ತಿದ್ದೇನಯ್ಯಾ.
ಎನ್ನ ಮನದ ದುರಾಶೆಯ ಮಾಣಿಸಿ ನಿಮ್ಮತ್ತ ತೋರಾ ಚೆನ್ನಮಲ್ಲಿಕಾರ್ಜುನಾ.

239
ದೂರದಲ್ಲಿರ್ದನೆಂದು ಆನು ಬಾಯಾರಿ ಬಳಲುತಿರ್ದೆನಯ್ಯಾ.
ಸಾರಿ ಬೆರಸಿ ಎನ್ನ ಕರಸ್ಥಲದಲ್ಲಿ ಮೂರ್ತಿಗೊಂಡಡೆ
ಎನ್ನ ಆರತವೆಲ್ಲವೂ ಲಿಂಗಾ ನಿಮ್ಮಲ್ಲಿ ನಟ್ಟಿತು ನೋಡಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮನು ಕರಸ್ಥಲದಲ್ಲಿ ನೋಡಿ ಕಂಗಳೆ ಪ್ರಾಣವಾಗಿರ್ದೆನಯ್ಯಾ.
240
ದೇವಲೋಕದವರಿಗೂ ಬಸವಣ್ಣನೆ ದೇವರು.
ಮರ್ತ್ಯಲೋಕದವರಿಗೂ ಬಸವಣ್ಣನೆ ದೇವರು.
ನಾಗಲೋಕದವರಿಗೂ ಬಸವಣ್ಣನೆ ದೇವರು.
ಮೇರುಗಿರಿ ಮಂದರಗಿರಿ ಮೊದಲಾದವೆಲ್ಲಕ್ಕೂ ಬಸವಣ್ಣನೆ ದೇವರು.
ಚೆನ್ನಮಲ್ಲಿಕಾರ್ಜುನಯ್ಯಾ, ನಿಮಗೂ ಎನಗೂ ನಿಮ್ಮ ಶರಣರಿಗೂ ಬಸವಣ್ಣನೆ ದೇವರು.
241
ದೇಹ ಉಳ್ಳನ್ನಕ್ಕರ ಲಜ್ಜೆ ಬಿಡದು, ಅಹಂಕಾರ ಬಿಡದು.
ದೇಹದೊಳಗೆ ಮನ ಉಳ್ಳನ್ನಕ್ಕರ ಅಭಿಮಾನ ಬಿಡದು,
ನೆನಹಿನ ವ್ಯಾಪ್ತಿ ಬಿಡದು.
ದೇಹ ಮನವೆರಡೂ ಇದ್ದಲ್ಲಿ ಸಂಸಾರ ಬಿಡದು.
ಸಂಸಾರವುಳ್ಳಲ್ಲಿ ಭವ ಬೆನ್ನ ಬಿಡದು.
ಭವದ ಕುಣಿಕೆಯುಳ್ಳನ್ನಕ್ಕರ ವಿಧಿವಶ ಬಿಡದು.
ಚೆನ್ನಮಲ್ಲಿಕಾರ್ಜುನನೊಲಿದ ಶರಣರಿಗೆ ದೇಹವಿಲ್ಲ, ಮನವಿಲ್ಲ, ಅಭಿಮಾನವಿಲ್ಲ ಕಾಣಾ ಮರುಳೆ.
242
ದೃಶ್ಯವಾದ ರವಿಯ ಬೆಳಗು, ಆಕಾಶದ ವಿಸ್ತೀರ್ಣ,
ವಾಯುವಿನ ಚಲನೆ, ತರುಗುಲ್ಮ ಲತಾದಿಗಳಲ್ಲಿಯ ತಳಿರು ಪುಷ್ಪ
ಷಡುವರ್ಣಂಗಳೆಲ್ಲ ಹಗಲಿನ ಪೂಜೆ.
ಚಂದ್ರಪ್ರಕಾಶ ನಕ್ಷತ್ರ ಅಗ್ನಿ ವಿದ್ಯುತ್ತಾದಿಗಳು
ದೀಪ್ತಮಯವೆನಿಸಿಪ್ಪವೆಲ್ಲ ಇರುಳಿನ ಪೂಜೆ.
ಹಗಲಿರುಳು ನಿನ್ನ ಪೂಜೆಯಲ್ಲಿ ಎನ್ನ ಮರೆದಿಪ್ಪೆನಯ್ಯಾ ಚೆನ್ನಮಲ್ಲಿಕಾರ್ಜುನಾ.
243

Downloaded from: **http://www.lingayatreligion.com**

ದೃಷ್ಟಿವರಿದು ಮನ ನೆಲೆಗೊಂಡುದಿದೇನೊ ?
ಆವನೆಂದರಿಯೆ ಭಾವನಟ್ಟುದವ್ವಾ.
ಕಳೆವರಿದು ಅಂಗ ಗಸಣೆಯಾದುದವ್ವಾ. ಇನ್ನಾರೇನೆಂದಡೆ ಬಿಡೆನು
ಚೆನ್ನಮಲ್ಲಿಕಾರ್ಜುನಲಿಂಗವ.
244
ಧನದ ಮೇಲೆ ಬಂದವರೆಲ್ಲ ಅನುಸರಿಗಳಲ್ಲದೆ
ಆಗುಮಾಡಬಂದವರಲ್ಲ.
ಮನದ ಮೇಲೆ ಬಂದು ನಿಂದು ಜರೆದು ನುಡಿದು
ಪಥವ ತೋರಬಲ್ಲಡಾತನೆ ಸಂಬಂಧಿ.
ಹಾಗಲ್ಲದೆ ಅವರಿಚ್ಛೆಯ ನುಡಿದು ತನ್ನುದರವ ಹೊರೆವ ಬಚ್ಚಣಿಗಳ ಮಚ್ಚುವನೆ
ಚೆನ್ನಮಲ್ಲಿಕಾರ್ಜುನ ?
245
ಧರೆಯ ಮೇಗಣ ಹುಲ್ಲೆ, ಚಂದ್ರಮನೊಳಗಣ ಎರಳೆ,
ಕೂರ್ತಡೆ ಫಲವೇನೋ ಕೂಟವಿಲ್ಲದನ್ನಕ್ಕ
ಇಂಬನರಿಯದ ಠಾವಿನಲ್ಲಿ ಕಣ್ಸೋಟವ ಮಾಡಿದಡೆ,
ತುಂಬಿದ ತೊರೆಯ ನಡುವೆ ಮಾಮರ ಕಾತಂತೆ.
ಚೆನ್ನಮಲ್ಲಿಕಾರ್ಜುನದೇವಾ, ದೂರದ ಸ್ನೇಹವಮಾಡಲು ಬಾರದ ಭವಕ್ಕೆ ಬಂದೆ.
246
ನಂದಿ ದೇವಂಗೆ, ಖಳ ಸಿರಿಯಾಳಂಗೆ,
ಲಿಂಗ ದಾಸಿಮಯ್ಯಂಗೆ, ಜಾಗರ ಬಸವಣ್ಣಂಗೆ,
ಆದರಿಕೆಯ ಬಿಟ್ಟು ಜೂಜನಾಡರೆ ನಮ್ಮವರಂದು ?
ಒಬ್ಬಂಗೆ ಮಗನ ರಪಣ, ಒಬ್ಬಂಗೆ ಸೀರೆಯ ರಪಣ,
ಒಬ್ಬಂಗೆ ತನು ಮನ ಧನದ ರಪಣ.
ಮೂವರೂ ಮೂದಲಿಸಿ ಮುಕ್ಕಣ್ಣನ ಗೆಲಿದರು ಎನ್ನ ದೇವ ಚೆನ್ನಮಲ್ಲಿಕಾರ್ಜುನಾ.
247
ನಚ್ಚುಗೆ ಮನ ನಿಮ್ಮಲ್ಲಿ, ಮಚ್ಚುಗೆ ಮನ ನಿಮ್ಮಲ್ಲಿ,
ಸಲುಗುಗೆ ಮನ ನಿಮ್ಮಲ್ಲಿ, ಸೋಲುಗೆ ಮನ ನಿಮ್ಮಲ್ಲಿ,
ಅಳಲುಗೆ ಮನ ನಿಮ್ಮಲ್ಲಿ, ಬಳಲುಗೆ ಮನ ನಿಮ್ಮಲ್ಲಿ,
ಕರಗುವೆ ಮನ ನಿಮ್ಮಲ್ಲಿ, ಕೊರಗುಗೆ ಮನ ನಿಮ್ಮಲ್ಲಿ.
ಎನ್ನ ಪಂಚೇಂದ್ರಿಯಂಗಳು ಕಬ್ಬುನ ಉಂಡ ನೀರಿನಂತೆ ನಿಮ್ಮಲ್ಲಿ ಬೆರಸುಗೆ
ಚೆನ್ನಮಲ್ಲಿಕಾರ್ಜುನಯ್ಯಾ.
248
ನಡೆಯದ ನುಡಿಗಡಣ, ಮಾಡದ ಕಲಿತನ,
ಚಿತ್ರದಸತಿಯ ಶೃಂಗಾರವದೇತಕ್ಕೆ ಪ್ರಯೋಜನ ?
ಎಲೆಯಿಲ್ಲದ ಮರನು, ಜಲವಿಲ್ಲದ ನದಿಯು,
ಗುಣಿಯಲ್ಲದ ಅವಗುಣಿಯ ಸಂಗವದೇತಕ್ಕೆ ಪ್ರಯೋಜನ ?
ದಯವಿಲ್ಲದ ಧರ್ಮ, ಉಭಯವಿಲ್ಲದ ಭಕ್ತಿಯು,
ನಯವಿಲ್ಲದ ಶಬ್ದವದೇತಕ್ಕೆ ಪ್ರಯೋಜನ ಎನ್ನ ದೇವ ಚೆನ್ನಮಲ್ಲಿಕಾರ್ಜುನಾ ?
249

Downloaded from: **http://www.lingayatreligion.com**

ನಡೆಶುಚಿ, ನುಡಿಶುಚಿ, ತನುಶುಚಿ, ಮನಶುಚಿ, ಭಾವಶುಚಿ.
ಇಂತೀ ಪಂಚ ತೀರ್ಥಂಗಳನೊಳಕೊಂಡು ಮರ್ತ್ಯದಲ್ಲಿ ನಿಂದ
ನಿಮ್ಮ ಶರಣರ ತೋರಿ ಎನ್ನನುಳುಹಿಕೊಳ್ಳಾ ಚೆನ್ನಮಲ್ಲಿಕಾರ್ಜುನಾ ?
250
ನಮಗೆ ನಮ್ಮ ಲಿಂಗದ ಚಿಂತೆ, ನಮಗೆ ನಮ್ಮ ಭಕ್ತರ ಚಿಂತೆ,
ನಮಗೆ ನಮ್ಮ ಆದ್ಯರ ಚಿಂತೆ,
ನಮಗೆ ನಮ್ಮ ಚೆನ್ನಮಲ್ಲಿಕಾರ್ಜುನಯ್ಯನ ಚಿಂತೆಯಲ್ಲದೆ ಲೋಕದ ಮಾತು
ನಮಗೇಕಣ್ಣಾ ?
251
ನರಜನ್ಮವ ತೊಡೆದು ಹರಜನ್ಮವ ಮಾಡಿದ ಗುರುವೆ ನಮೋ.
ಭವಬಂಧನವ ಬಿಡಿಸಿ ಪರಮಸುಖವ ತೋರಿದ ಗುರುವೆ ನಮೋ.
ಭವಿಯೆಂಬುದ ತೊಡೆದು ಭಕ್ತೆ ಎಂದೆನಿಸಿದ ಗುರುವೆ ನಮೋ.
ಚೆನ್ನಮಲ್ಲಿಕಾರ್ಜುನನ ತಂದೆನ್ನ ಕೈವಶಕ್ಕೆ ಕೊಟ್ಟ ಗುರುವೆ, ನಮೋ ನಮೋ.
252
ನಾಣಮರೆಯ ನೂಲು ಸಡಿಲಲು
ನಾಚುವರು ನೋಡಾ ಗಂಡು ಹೆಣ್ಣೆಂಬ ಜಾತಿಗಳು.
ಪ್ರಾಣದೊಡೆಯ ಜಗದೊಳಗೆ ಮುಳುಗಲು ತೆರಹಿಲ್ಲದಿರಲು
ದೇವರ ಮುಂದೆ ನಾಚಲೆಡೆಯುಂಟೆ ?
ಚೆನ್ನಮಲ್ಲಿಕಾರ್ಜುನ ಜಗವೆಲ್ಲ ಕಣ್ಣಾಗಿ ನೋಡುತ್ತಿರಲು ಮುಚ್ಚಿ ಮರಸುವ
ಠಾವಾವುದು ಹೇಳಯ್ಯಾ ?
253
ನಾನುಣ್ಣದ ಮುನ್ನವೆ ಜಂಗಮಕ್ಕೆ
ಅಮೃತಾನ್ನಾದಿ ನೈವೇದ್ಯವ ನೀಡುವೆ.
ನಾನುಡದ ಮುನ್ನವೆ ಜಂಗಮಕ್ಕೆ
ದೇವಾಂಗಾದಿ ವಸ್ತ್ರವನುಡಿಸುವೆ.
ನಾನು ಹೂಸದ ಮುನ್ನವೆ ಜಂಗಮಕ್ಕೆ
ಸುಗಂಧಾದಿ ಪರಿಮಳದ್ರವ್ಯವ ಹೂಸುವೆ.
ನಾನು ಮುಡಿಯದ ಮುನ್ನವೆ ಜಂಗಮಕ್ಕೆ
ಪರಿಪರಿಯ ಪುಷ್ಪವ ಮುಡಿಸುವೆ.
ನಾನು ತೊಡದ ಮುನ್ನವೆ
ಜಂಗಮಕ್ಕೆ ತೊಡಿಗೆಯ ತೊಡಿಸುವೆ.
ನಾನಾವಾವ ಭೋಗವ ಭೋಗಿಸುವದ ಜಂಗಮಕ್ಕೆ ಭೋಗಿಸಲಿತ್ತು,
ಆ ಶೇಷಪ್ರಸಾದವ ಲಿಂಗಕ್ಕಿತ್ತು
ಭೋಗಿಸಿದ ಬಳಿಕಲಲ್ಲದೆ ಭೋಗಿಸಿದಡೆ ಬಸವಣ್ಣಾ, ನಿಮ್ಮಾಣೆಯಯ್ಯಾ
ಚೆನ್ನಮಲ್ಲಿಕಾರ್ಜುನಾ.
254
ನಾನು ನಿನಗೊಲಿದೆ, ನೀನು ಎನಗೊಲಿದೆ.
ನೀನೆನ್ನನಗಲದಿಪ್ಪೆ, ನಾನಿನ್ನನಗಲದಿಪ್ಪೆನಯ್ಯಾ.
ನಿನಗೆ ಎನಗೆ ಬೇರೊಂದು ಠಾವುಂಟೆ ?

Downloaded from: **http://www.lingayatreligion.com**

ನೀನು ಕರುಣಿಯೆಂಬುದ ಬಲ್ಲೆನು ;
ನೀನಿರಿಸಿದ ಗತಿಯೊಳಗಿಪ್ಪವಳಾನು. ನೀನೆ ಬಲ್ಲೆ ಚೆನ್ನಮಲ್ಲಿಕಾರ್ಜುನಾ.

255
ನಾನು ಮಜ್ಜನವ ಮಾಡುವುದಕ್ಕೆ ಮುನ್ನವೆ
ಜಂಗಮಕ್ಕೆ ಮಜ್ಜನವ ಮಾಡಿಸುವೆ.
ನಾನು ಸೀರೆಯನುಡುವುದಕ್ಕೆ ಮುನ್ನವೆ
ಜಂಗಮಕ್ಕೆ ದೇವಾಂಗವನುಡಿಸುವೆ.
ನಾನು ಪರಿಮಳವ ಲೇಪಿಸುವುದಕ್ಕೆ ಮುನ್ನವೆ
ಜಂಗಮಕ್ಕೆ ಸುಗಂಧದ್ರವ್ಯಂಗಳ ಲೇಪಿಸುವೆ.
ನಾನು ಅಕ್ಷತೆಯನಿಡುವುದಕ್ಕೆ ಮುನ್ನವೆ
ಜಂಗಮಕ್ಕೆ ಅಕ್ಷತೆಯನಿಡುವೆ.
ನಾನು ಪುಷ್ಪವ ಮುಡಿವುದಕ್ಕೆ ಮುನ್ನವೆ
ಜಂಗಮಕ್ಕೆ ಪರಿಮಳಪುಷ್ಪವ ಮುಡಿಸುವೆ.
ನಾನು ಧೂಪವಾಸನೆಯ ಕೊಳ್ಳುವ ಮುನ್ನವೆ
ಜಂಗಮಕ್ಕೆ ಧೂಪವಾಸನೆಯ ಕೊಡುವೆ.
ನಾನು ದೀಪಾರತಿಯ ನೋಡುವ ಮುನ್ನವೆ
ಜಂಗಮಕ್ಕೆ ಆರತಿಯ ನೋಡಿಸುವೆ.
ನಾನು ಸಕಲ ಪದಾರ್ಥಂಗಳ ಸ್ವೀಕರಿಸುವ ಮುನ್ನವೆ
ಜಂಗಮಕ್ಕೆ ಮೃಷ್ಟಾನ್ನವ ನೀಡುವೆ.
ನಾನು ಪಾನಂಗಳ ಕೊಳ್ಳುವ ಮುನ್ನವೆ
ಜಂಗಮಕ್ಕೆ ಅಮೃತಪಾನಂಗಳ ಕೊಡುವೆ.
ನಾನು ಕೈಯ ತೊಳೆಯುವ ಮುನ್ನವೆ
ಜಂಗಮಕ್ಕೆ ಹಸ್ತಪ್ರಕ್ಷಾಲನವ ಮಾಡಿಸುವೆ.
ನಾನು ವೀಳೆಯವ ಮಾಡುವುದಕ್ಕೆ ಮುನ್ನವೆ
ಜಂಗಮಕ್ಕೆ ತಾಂಬೂಲವ ಕೊಡುವೆ.
ನಾನು ಗದ್ದುಗೆಯ ಮೇಲೆ ಕುಳ್ಳಿರುವುದಕ್ಕೆ ಮುನ್ನವೆ
ಜಂಗಮಕ್ಕೆ ಉನ್ನತಾಸನವನಿಕ್ಕುವೆ.
ನಾನು ಸುನಾದಂಗಳ ಕೇಳುವುದಕ್ಕೆ ಮುನ್ನವೆ
ಜಂಗಮಕ್ಕೆ ಸುಗೀತ ವಾದ್ಯಂಗಳ ಕೇಳಿಸುವೆ.
ನಾನು ಭೂಷಣಂಗಳ ತೊಡುವುದಕ್ಕೆ ಮುನ್ನವೆ
ಜಂಗಮಕ್ಕೆ ಆಭರಣಂಗಳ ತೊಡಿಸುವೆ.
ನಾನು ವಾಹನಂಗಳನೇರುವುದಕ್ಕೆ ಮುನ್ನವೆ
ಜಂಗಮಕ್ಕೆ ವಾಹಂಗಳನೇರಿಸುವೆ.
ನಾನು ಮನೆಯೊಳಗಿಹುದಕ್ಕೆ ಮುನ್ನವೆ
ಜಂಗಮಕ್ಕೆ ಗೃಹವಕೊಡುವೆ.
ಇಂತೀ ಹದಿನಾರು ತೆರದಭಕ್ತಿಯನು ಚರಲಿಂಗಕ್ಕೆ ಕೊಟ್ಟು
ಆ ಚರಲಿಂಗಮೂರ್ತಿ ಭೋಗಿಸಿದ ಬಳಿಕ
ನಾನು ಪ್ರಸಾದ ಮುಂತಾಗಿ ಭೋಗಿಸುವೆನಲ್ಲದೆ

Downloaded from: **http://www.lingayatreligion.com**

ಜಂಗಮವಿಲ್ಲದೆ ಇನಿತರೊಳೊಂದು ಭೋಗವನಾದಡೂ
ನಾನು ಭೋಗಿಸಿದೆನಾದಡೆ ನಿಮ್ಮಾಣೆ, ನಿಮ್ಮ ಪ್ರಮಥರಾಣೆ.
ಇಂತೀ ಕ್ರಮದಲ್ಲಿ ನಡೆವಾತಂಗೆ
ಗುರುವುಂಟು ಲಿಂಗವುಂಟು ಜಂಗಮವುಂಟು,
ಪಾದೋದಕವುಂಟು ಪ್ರಸಾದವುಂಟು ಆಚಾರವುಂಟು ಭಕ್ತಿಯುಂಟು.
ಈ ಕ್ರಮದಲ್ಲಿ ನಡೆಯದಾತಂಗೆ
ಗುರುವಿಲ್ಲ ಲಿಂಗವಿಲ್ಲ ಜಂಗಮವಿಲ್ಲ
ಪಾದೋದಕವಿಲ್ಲ ಪ್ರಸಾದವಿಲ್ಲಾಚಾರವಿಲ್ಲ ಭಕ್ತಿಯಿಲ್ಲ.
ಅವನ ಬಾಳುವೆ ಹಂದಿಯ ಬಾಳುವೆ.
ಅವನ ಬಾಳುವೆ ನಾಯ ಬಾಳುವೆ.
ಅವನ ಬಾಳುವೆ ಕತ್ತೆಯ ಬಾಳುವೆ.
ಅವನು ಸುರೆಮಾಂಸ ಭುಂಜಕನು, ಅವನು ಸರ್ವ ಚಾಂಡಾಲನಯ್ಯಾ
ಚೆನ್ನಮಲ್ಲಿಕಾರ್ಜುನಾ.
256
ನಾ ಹುಟ್ಟಿದಲ್ಲಿ ಸಂಸಾರ ಹುಟ್ಟಿತ್ತು.
ಸಂಸಾರ ಹುಟ್ಟಿದಲ್ಲಿ ಅಜ್ಞಾನ ಹುಟ್ಟಿತ್ತು.
ಅಜ್ಞಾನ ಹುಟ್ಟಿದಲ್ಲಿ ಆಶೆ ಹುಟ್ಟಿತ್ತು.
ಆಶೆ ಹುಟ್ಟಿದಲ್ಲಿ ಕೋಪ ಹುಟ್ಟಿತ್ತು.
ಆ ಕೋಪಾಗ್ನಿಯ ತಾಮಸಧೂಮ್ರ ಮುಸುಕಿದಲ್ಲಿ
ನಾ ನಿಮ್ಮ ಮರೆದು ಭವದುಃಖಕ್ಕೀಡಾದೆ.
ನೀ ಕರುಣದಿಂದೆತ್ತಿ ಎನ್ನ ಮರಹ ಬಿಂಗಡಿಸಿ ನಿಮ್ಮ ಪಾದವನರುಹಿಸಯ್ಯಾ,
ಚೆನ್ನಮಲ್ಲಿಕಾರ್ಜುನಾ.
257
ನಾಳದ ಮರೆಯ ನಾಚಿಕೆ,
ನೂಲಮರೆಯಲ್ಲಿ ಅಡಗಿತ್ತೆಂದು ಅಂಜುವರು, ಅಳುಕುವರು.
ಮನ ಮೆಚ್ಚಿದಭಿಮಾನಕ್ಕೆ ಆವುದು ಮರೆ ಹೇಳಾ ?
ಕಾಯ ಮಣ್ಣೆಂದು ಕಳೆದ ಬಳಿಕ,
ದೇಹದಭಿಮಾನ ಅಲ್ಲಿಯೇ ಹೋಯಿತ್ತು.
ಪ್ರಾಣ ಬಯಲೆಂದು ಕಳೆದ ಬಳಿಕ,
ಮನದ ಲಜ್ಜೆಯಲ್ಲಿಯೆ ಹೋಯಿತ್ತು.
ಚೆನ್ನಮಲ್ಲಿಕಾರ್ಜುನನ ಕೂಡಿ ಲಜ್ಜೆಗೆಟ್ಟವಳ
ಉಡಿಗೆಯ ಸೆಳೆದುಕೊಂಡಡೆ, ಮುಚ್ಚಿದ ಸೀರೆ ಹೋದರೆ ಅಂಜುವರೆ ಮರುಳೆ ?
258
ನಾಳೆ ಬರುವುದು ನಮಗಿಂದೆ ಬರಲಿ,
ಇಂದು ಬರುವುದು ನಮಗೀಗಲೆ ಬರಲಿ ;
ಆಗೀಗ ಎನ್ನದಿರೊ, ಚೆನ್ನಮಲ್ಲಿಕಾರ್ಜುನಾ.
259
ನಿತ್ಯತೃಪ್ತಂಗೆ ನೈವೇದ್ಯದ ಹಂಗೇತಕ್ಕೆ ?
ಸುರಾಳ ನಿರಾಳಂಗೆ ಮಜ್ಜನದ ಹಂಗೇತಕ್ಕೆ ?

Downloaded from: **http://www.lingayatreligion.com**

ಸ್ವಯಂಜ್ಯೋತಿರ್ಮಯಂಗೆ ದೀಪಾರಾಧನೆಯ ಹಂಗೇತಕ್ಕೆ ?
ಸುವಾಸನೆ ಸೂಕ್ಷ್ಮಗಂಧ ಕಪರ್ೂರಗೌರಂಗೆ ಪುಷ್ಪದ ಹಂಗೇತಕ್ಕೆ ?
ಮಾಟದಲಿ ಮನ ನಂಬುಗೆಯಿಲ್ಲದ, ಅಹಂಕಾರಕ್ಕೀಡಾದ,
ಭಕ್ತಿಯೆಂಬ ಪಸಾರವನಿಕ್ಕಿ
ಹೊಲೆಹದಿನೆಂಟುಜನ್ಮವ ಹೊರೆವುದರಿಂದ
ಅಂಗೈಯಲೊರಸಿ ಮುಕ್ತಿಯ
ಮೂಲ ಶಿಖಿರಂಧ್ರದ ಕಾಮನ ಸುಟ್ಟು
ಶುದ್ಧಸ್ಫಟಿಕ ಸ್ವಯಂಜ್ಯೋತಿಯನು
ಸುನಾಳದಿಂದ ಹಂ ಕ್ಷಂ ಎಂಬೆರಡಕ್ಷರವ
ಸ್ವಯಾನುಭಾವಭಕ್ತಿನಿರ್ವಾಣವಾದವರನೆನಗೊಮ್ಮೆ ತೋರಿದೆ. ಶ್ರೀಗಿರಿ ಚೆನ್ನ ಮಲ್ಲಿಕಾರ್ಜುನಾ.
260
ನಿತ್ಯವೆಂಬ ನಿಜಪದವೆನ್ನ ಹತ್ತೆಸಾರ್ದು ಕಂಡಬಳಿಕ
ಚಿತ್ತ ಕರಗಿ ಮನ ಕೊರಗಿ ಹೃದಯವರಳಿತ್ತು ನೋಡಯ್ಯಾ.
ಒತ್ತಿ ಬಿಗಿದ ಸೆರೆಯೊಳಗೆ ಅತ್ತಿತ್ತಲೆಂದರಿಯದೆ
ಚೆನ್ನಮಲ್ಲಿಕಾರ್ಜುನನ ಪಾದದಲ್ಲಿ ಮರೆದೊರಗಿದೆ ನೋಡಯ್ಯಾ.
261
ನಿತ್ಯವೆನ್ನ ಮನೆಗೆ ನಡೆದುಬಂದಿತ್ತಿಂದು.
ಮುಕ್ತಿ ಎನ್ನ ಮನೆಗೆ ನಡೆದುಬಂದಿತ್ತಿಂದು.
ಜಯ ಜಯಾ, ಹರಹರಾ, ಶಂಕರ ಶಂಕರಾ,
ಗುರುವೆ ನಮೋ, ಪರಮಗುರುವೆ ನಮೋ.
ಚೆನ್ನಮಲ್ಲಿಕಾರ್ಜುನನ ತೋರಿದ ಗುರುವೆ ನಮೋ ನಮೋ.
262
ನಿನ್ನರಿಕೆಯ ನರಕವೆ ಮೋಕ್ಷ ನೋಡಯ್ಯಾ,
ನಿನ್ನನರಿಯದ ಮುಕ್ತಿಯೆ ನರಕ ಕಂಡಯ್ಯಾ.
ನೀನೊಲ್ಲದ ಸುಖವೆ ದಃಖ ಕಂಡಯ್ಯಾ,
ನೀನೊಲಿದ ದುಃಖವೆ ಪರಮಸುಖ ಕಂಡಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ, ನೀ ಕಟ್ಟಿ ಕೆಡಹಿದ ಬಂಧನವ ನಿರ್ಬಂಧವೆಂದಿಪ್ಪೆನು.
263
ನಿಮ್ಮ ಒಕ್ಕುದ ಕೊಂಡು ಓಲಾಡುವೆ,
ಮಿಕ್ಕುದ ಕೊಂಡು ಕುಣಿದಾಡುವೆ.
ನಿಮ್ಮ ತೊತ್ತಿನ ತೊತ್ತಿನ ಕರುಣಪ್ರಸಾದವ ಕೊಂಡು
ನಿತ್ಯಳಾಗಿ ಬದುಕಿದೆನು ಕಾಣಾ ಚೆನ್ನಮಲ್ಲಿಕಾರ್ಜುನಾ.
264
ನಿಮ್ಮ ನಿಲವಿಂಗೆ ನೀವು ನಾಚಬೇಡವೆ ?
ಅನ್ಯರ ಕೈಯಲ್ಲಿ ಅಲ್ಲ ಎನಿಸಿಕೊಂಬ ನಡೆನುಡಿ ಏಕೆ ?
ಅಲ್ಲ ಎನಿಸಿಕೊಂಬುದರಿಂದ
ಆ ಕ್ಷಣವೆ ಸಾವುದು ಲೇಸು ಕಾಣಾ ಚೆನ್ನಮಲ್ಲಿಕಾರ್ಜುನಾ.
265

Downloaded from: **http://www.lingayatreligion.com**

ನೀನು ಹೋಗೆಂದಡೆ ಹೋದೆನಯ್ಯಾ.
ನೀನು ಹುಟ್ಟೆಂದಡೆ ಹುಟ್ಟಿದೆನಯ್ಯಾ.
ನೀನು ಬೆಳೆಯೆಂದ ಠಾವಿನಲ್ಲಿ ಬೆಳೆದೆನಯ್ಯಾ.
ನೀನು ಹಿಡಿಯೆಂದವರ ಮನೆಯ ಹೊಕ್ಕೆನಯ್ಯಾ.
ನೀನು ಮಾಡೆಂದ ಕೆಲಸವ ಮಾಡಿಕೊಂಡು
ನಿಮ್ಮ ಬೆಸಲಾದ ಮಗಳಾಗಿರ್ದೆ ಕಾಣಾ ಚೆನ್ನಮಲ್ಲಿಕಾರ್ಜುನಾ.
266
ನೀನಿಕ್ಕಿದ ಸರಿದೊಡಕನಾರು ಬಿಡಿಸಬಲ್ಲರಯ್ಯಾ ?
ನೀನಿಕ್ಕಿದ ಕಟ್ಟನಾರು ಕಳೆಯಬಲ್ಲರಯ್ಯಾ ?
ನೀ ಸೀಳಿದ ರೇಖೆಯನಾರು ಮೀರಬಹುದಯ್ಯಾ ?
ಚೆನ್ನಮಲ್ಲಿಕಾರ್ಜುನಯ್ಯಾ,
ನೀನು ಕಳುಹಿದ ಸೆರೆಗೆ ಮಾರುವೋಗದಿರ್ದಡೆ ಎನ್ನಿಚ್ಛೆಯ ಅಯ್ಯಾ ?
267
ನೀರಕ್ಷೀರದಂತೆ ನೀನಿಪ್ಪೆಯಾಗಿ,
ಆವುದು ಮುಂದು, ಆವುದು ಹಿಂದು ಎಂದರಿಯೆ.
ಆವುದು ಕರ್ತೃ, ಆವುದು ಭೃತ್ಯನೆಂದರಿಯೆ.
ಆವುದು ಘನ, ಆವುದು ಕಿರಿದೆಂದರಿಯೆ.
ಚೆನ್ನಮಲ್ಲಿಕಾರ್ಜುನಯ್ಯಾ, ನೀನೊಲಿದು ಕೊಂಡಾಡಿದಡೆ ಇರುಹೆ ರುದ್ರನಾಗದೆ ಹೇಳಯ್ಯಾ ?
268
ನೆಲದ ಮರೆಯ ನಿಧಾನದಂತೆ
ಫಲದ ಮರೆಯ ರುಚಿಯಂತೆ
ಶಿಲೆಯ ಮರೆಯ ಹೇಮದಂತೆ
ತಿಲದ ಮರೆಯ ತೈಲದಂತೆ
ಮರದ ಮರೆಯ ತೇಜದಂತೆ
ಭಾವದ ಮರೆಯ ಬ್ರಹ್ಮವಾಗಿಪ್ಪ ಚೆನ್ನಮಲ್ಲಿಕಾರ್ಜುನನ ನಿಲವನರಿಯಬಾರದು.
269
ನೋಡಿ ನುಡಿಸಿ ಮಾತಾಡಿಸಿದಡೊಂದು ಸುಖ,
ಏನ ಮಾಡದಯ್ಯಾ ನಿಮ್ಮ ಶರಣರ ಅನುಭಾವ ?
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಶರಣರ ಸದ್ಗೋಷ್ಠಿ ಏನ ಮಾಡದಯ್ಯಾ ?
270
ನೋಡಿಹೆನೆಂದಡೆ ದೃಷ್ಟಿಮರೆಯಾಯಿತ್ತು.
ಕೂಡಿಹೆನೆಂದಡೆ ಭಾವ ಮರೆಯಾಯಿತ್ತು.
ಏನೆಂಬೆನೆಂತೆಂಬೆನಯ್ಯಾ ?
ಅರಿದಿಹೆನೆಂದಡೆ ಮರಹು ಮರೆಯಾಯಿತ್ತು.
ನಿನ್ನ ಮಾಯೆಯನತಿಗಳೆವಡೆ ಎನ್ನಳವೆ ? ಕಾಯಯ್ಯಾ ಚೆನ್ನಮಲ್ಲಿಕಾರ್ಜುನಾ.
271
ನೋಡುವ ಕಂಗಳಿಗೆ ರೂಪಿಂಬಾಗಿರಲು
ನೀವು ಮನನಾಚದೆ ಬಂದಿರಣ್ಣಾ.

Downloaded from: **http://www.lingayatreligion.com**

ಕೇಳಿದ ಶ್ರೋತ್ರಸೊಗಸಿಗೆ ನೀವು ಮರುಳಾಗಿ ಬಂದಿರಣ್ಣಾ.
ನಾರಿಯೆಂಬ ರೂಪಿಂಗೆ ನೀವು ಒಲಿದು ಬಂದಿರಣ್ಣಾ.
ಮೂತ್ರವು ಬಿಂದು ಒಸರುವ ನಾಳವೆಂದು
ಕಂಗಾಣದೆ ಮುಂದುಗೆಟ್ಟು ಬಂದಿರಣ್ಣಾ.
ಬುದ್ಧಿಗೇಡಿತನದಿಂದ ಪರಮಾರ್ಥದ ಸುಖವ ಹೋಗಲಾಡಿಸಿಕೊಂಡು
ಇದಾವ ಕಾರಣವೆಂದರಿಯದೆ,
ನೀವು ನರಕಹೇತುವೆಂದರಿತು ಮನ ಹೇಸದೆ ಬಂದಿರಣ್ಣಾ.
ಚೆನ್ನಮಲ್ಲಿಕಾರ್ಜುನನಲ್ಲದೆ ಮಿಕ್ಕಿಹ ಪುರುಷರೆನಗೆ ಸಹೋದರರು. ಅಧೀ ಹೋಗಾ ಮರುಳೆ.
272
ನೋಡೆನೆಂಬವರ ನೋಡಿಸುವೆ,
ನುಡಿಯೆನೆಂಬವರ ನುಡಿಯಿಸುವೆ,
ಒಲ್ಲೆನೆಂಬವರನೊಲಿಸುವೆ,
ಒಲಿದೆನೆಂಬವರ ತೊಲಗಿಸುವೆ ನೋಡಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ,
ನೀನಲ್ಲದನ್ಯರ ಮುಖದ ನೋಡೆನೆಂದಡೆ ನೋಡುವಂತೆ ಮಾಡಿದೆಯಲ್ಲಾ ಲಿಂಗವೆ ?
273
ಪಂಚೇಂದ್ರಿಯಂಗಳೊಳಗೆ
ಒಂದಕ್ಕೆ ಪ್ರಿಯನಾದಡೆ ಸಾಲದೆ ?
ಸಪ್ತವ್ಯಸನಂಗಳೊಳಗೆ
ಒಂದಕ್ಕೆ ಪ್ರಿಯನಾದಡೆ ಸಾಲದೆ ?
ರತ್ನದ ಸಂಕಲೆಯಾದಡೇನು ಬಂಧನ ಬಿಡುವುದೆ ಚೆನ್ನಮಲ್ಲಿಕಾರ್ಜುನಾ ?
274
ಪಂಚೇಂದ್ರಿಯದ ಉರವಣೆಯ
ಉದುಮದದ ಭರದ ಜವ್ವನದೊಡಲು ವೃಥಾ ಹೋಯಿತ್ತಲ್ಲಾ ?
ತುಂಬಿ ಪರಿಮಳವ ಕೊಂಡು ಲಂಬಿಸುವ ತೆರನಂತೆ ಇನ್ನೆಂದಿಂಗೆ ಒಳಕೊಂಬೆಯೊ,
ಅಯ್ಯಾ
ಚೆನ್ನಮಲ್ಲಿಕಾರ್ಜುನಾ ? |
275
ಪಂಚೇಂದ್ರಿಯ ಸಪ್ತಧಾತು ಅಷ್ಟಮದ ಕೊಂದು ಕೂಗಿತಲ್ಲಾ ?
ಹರಿಬ್ರಹ್ಮರ ಬಲುಹ ಮುರಿದು ಕೊಂದು ಕೂಗಿತಲ್ಲಾ ?
ಮಹಾ ಋಷಿಯರ ತಪವ ಕೆಡಿಸಿ ಕೊಂದು ಕೂಗಿತಲ್ಲಾ ?
ಚೆನ್ನಮಲ್ಲಿಕಾರ್ಜುನಂಗೆ ಶರಣೆಂದು ನಂಬಿ ಮರೆಹೊಕ್ಕಡೆ ಅಂಜಿ ನಿಂದುದಲ್ಲಾ ?
276
ಪಚ್ಚೆಯ ನೆಲೆಗಟ್ಟು, ಕನಕದ ತೋರಣ, ವಜ್ರದ ಕಂಬ,
ಪವಳದ ಚಪ್ಪರವಿಕ್ಕಿ, ಮುತ್ತುಮಾಣಿಕದ ಮೇಲುಕಟ್ಟು ಕಟ್ಟಿ,
ಮದುವೆಯ ಮಾಡಿದರು, ಎಮ್ಮವರೆನ್ನ ಮದುವೆಯ ಮಾಡಿದರು.
ಚೆನ್ನಮಲ್ಲಿಕಾರ್ಜುನನೆಂಬ ಗಂಡಂಗೆನ್ನ ಮದುವೆಯಮಾಡಿದರು

277

Downloaded from: **http://www.lingayatreligion.com**

ಪಡೆವುದರಿದು ನರಜನ್ಮವ,
ಪಡೆವುದರಿದು ಹರಭಕ್ತಿಯ,
ಪಡೆವುದರಿದು ಗುರುಕಾರುಣ್ಯವ,
ಪಡೆವುದರಿದು ಲಿಂಗಜಂಗಮಸೇವೆಯ,
ಪಡೆವುದರಿದು ಸತ್ಯಶರಣರನುಭಾವವ.
ಇಂತಾಗಿ ಚೆನ್ನಮಲ್ಲಿಕಾರ್ಜುನಯ್ಯನ ಶರಣರ ಅನುಭಾವದಲ್ಲಿ ನಲಿನಲಿದಾಡು
ಕಂಡೆಯಾ ಎಲೆ ಮನವೆ.
278
ಪರರೊಡತಣ ಮಾತು ನಮಗೇತರದಯ್ಯ ?
ಪರರೊಡತಣ ಗೊಟ್ಟಿ ನಮಗೇಕಯ್ಯ ?
ಲೋಕದ ಮಾನವರೊಡನೆ ನಮಗೇತರ ವಿಚಾರವಯ್ಯ ?
ಚೆನ್ನಮಲ್ಲಿಕಾರ್ಜುನನ ಒಲವಿಲ್ಲದವರೊಡನೆ ನಮಗೇತರ ವಿಚಾರವಯ್ಯಾ ?
279
ಪಾತಾಳವಿತ್ತಿತ್ತ, ಪಾದಂಗಳತ್ತತ್ತ,
ದಶದಿಕ್ಕು ಇತ್ತಿತ್ತ, ದಶಭುಜಂಗಳತ್ತತ್ತ,
ಬ್ರಹ್ಮಾಂಡವಿತ್ತಿತ್ತ, ಮಣಿಮುಕುಟವತ್ತತ್ತ,
ಚೆನ್ನಮಲ್ಲಿಕಾರ್ಜುನಯ್ಯಾ, ನೀವೆನ್ನ ಕರಸ್ಥಲಕ್ಕೆ ಬಂದು ಚುಳುಕಾದಿರಲ್ಲಾ ಲಿಂಗವೆ.
280
ಪುಣ್ಯಪಾಪಂಗಳನರಿಯದ ಮುನ್ನ,
ಅನೇಕ ಭವಂಗಳ ಬಂದೆನಯ್ಯಾ ?
ಬಂದು ಬಂದು ನೊಂದು ಬೆಂದೆನಯ್ಯಾ ?
ಬಂದು ನಿಮ್ಮ ನಂಬಿ ಶರಣುವೊಕ್ಕೆನಯ್ಯಾ ?
ನಿಮ್ಮನೆಂದೂ ಅಗಲದಂತೆ ಮಾಡಿ ನಡೆಸಯ್ಯಾ ನಿಮ್ಮ ಧರ್ಮ ನಿಮ್ಮ ಧರ್ಮ.
ನಿಮ್ಮಲೊಂದು ಬೇಡುವೆನು, ಎನ್ನ ಬಂಧನ ಬಿಡುವಂತೆ ಮಾಡಯ್ಯಾ
ಚೆನ್ನಮಲ್ಲಿಕಾರ್ಜುನಾ

281
ಪುದುಗಿದ ಸಂಸಾರದ ಬಂಧನದೊಳು ಪೆಣಗಿದೆ
ಅದೆಂದಿಗೆ ಬಿಟ್ಟು ಪೋಪುದೊ ?
ಎಂದು ನಿಮ್ಮನೊಡಗೂಡಿ ಬೇರಾಗದೆಂದಿಪ್ಪೆನೊ ಚೆನ್ನಮಲ್ಲಿಕಾರ್ಜುನಾ ?
282
ಪುರುಷನ ಮುಂದೆ ಮಾಯೆ
ಸ್ತ್ರೀಯೆಂಬ ಅಭಿಮಾನವಾಗಿ ಕಾಡುವುದು.
ಸ್ತ್ರೀಯ ಮುಂದೆ ಮಾಯೆ
ಪುರುಷನೆಂಬ ಅಭಿಮಾನವಾಗಿ ಕಾಡುವುದು.
ಲೋಕವೆಂಬ ಮಾಯೆಗೆ ಶರಣಚಾರಿತ್ರ್ಯ
ಮರುಳಾಗಿ ತೋರುವುದು.
ಚೆನ್ನಮಲ್ಲಿಕಾರ್ಜುನನೊಲಿದ ಶರಣಂಗೆ ಮಾಯೆಯಿಲ್ಲ, ಮರಹಿಲ್ಲ, ಅಭಿಮಾನವೂ
ಇಲ್ಲ.

Downloaded from: **http://www.lingayatreligion.com**

283
ಪ್ರಥಮದಲಾದ ಮೋಹ ಸಾತ್ವಿಕವಾದಡೆ ಕಿತವೇಕಯ್ಯಾ
ಹೆರರನೊಲ್ಲದ ಬೇಟಕ್ಕೆ ಕಿತವೇಕಯ್ಯಾ ?
ಚೆನ್ನಮಲ್ಲಿಕಾರ್ಜುನದೇವರದೇವನನೆಂದಿಗೆ ಬಿಡದ ನೇಹಕ್ಕೆ ಕಿತವೇಕಯ್ಯಾ ?
284
ಪ್ರಾಣ ಲಿಂಗವೆಂದರಿದಬಳಿಕ
ಪ್ರಾಣ ಪ್ರಸಾದವಾಯಿತ್ತು.
ಲಿಂಗ ಪ್ರಾಣವೆಂದರಿದಬಳಿಕ
ಅಂಗದಾಸೆ ಹಿಂಗಿತ್ತು.
ಲಿಂಗ ಸೋಂಕಿನ ಸಂಗಿಗೆ ಕಂಗಳೆ ಕರುವಾದವಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ, ಹಿಂಗದೆ ಅನಿಮಿಷನಾಗಿಹ ಶರಣಂಗೆ.
285
ಪ್ರಾಣ ಹೊಲ ಮೇರೆಯಲ್ಲಿ ಪ್ರಾಣ ಸತ್ತುದ ಕಂಡೆ ?
ದೇವ ದಾನವ ಮಾನವರೆಲ್ಲಾ ಜೋಳವಾಳಿಯಲ್ಹೈದಾರೆ.
ಜಾಣಕಲುಕುಟಿಗನನಗಲದೆ ಹೂವನೆ ಕೊಯ್ದು,
ಕಲಿಯುಗದ ಕರಸ್ಥಲದೇವಪೂಜೆ ಘನ.
ಮೇರುವಿನ ಕುದುರೆ ನಲಿದಾಡಲದುಭುತ.
ಜಾರಜಂಗುಳಿಗಳ ಜಗಳ ಮೇಳಾಪ,
ಮರುಪತ್ತದ ಮಾತು, ನಗೆ ಹಗರಣ ?
ಕ್ಷೀರಸಾಗರದಲ್ಲಿ ದಾರಿಯಳವಡದಯ್ಯಾ.
ನೀ ಹೇಳಬೇಕು, ಭಕ್ತರೆಂತಿಪ್ಪರೊ ?
ಪಂಚವರ್ಣದ ಬಣ್ಣ ಸಂತೆಯ ಪರದಾಟವು
ಚೆನ್ನಮಲ್ಲಿಕಾರ್ಜುನಯ್ಯಾ, ತ್ರಿಭುವನದ ಹೆಂಡಿರ ನೀರಹೊಳೆಯಲ್ಲಿರಿಸಿತ್ತು.
286
ಪೃಥ್ವಿಯಲ್ಲಿ ಗುರೂಪದೇಶವೆಂಬ ನೇಗಿಲಪಿಡಿದು
ಅಂತಃಕರಣಚತುಷ್ಟಯವೆಂಬ ಪಶುವಂ ಕಟ್ಟಿ
ಓಂಕಾರವೆಂಬ ಶಿಣಿಗೋಲಂ ಪಿಡಿದು
ವ್ರತ ಕ್ರಿಯವೆಂಬ ಸಾಲನೆತ್ತಿ
ನಿರಾಶೆಯೆಂಬ ಕುಂಟೆಯಂ ತುರುಗಿ
ದುಷ್ಕರ್ಮಂಗಳೆಂಬ ದುರ್ಮಲರಿಗಳಂ ಕಳೆದು
ನಾನಾ ಮೂಲದ ಬೇರಂ ಕಿತ್ತು
ಜ್ಞಾನಾಗ್ನಿಯೆಂಬ ಬೆಂಕಿಯಂ ಸುಟ್ಟು
ಈ ಹೊಲನ ಹಸನಮಾಡಿ ಬಿತ್ತುವ
ಪರ್ಯಾಯವೆಂತೆಂದೊಡೆ
ನಾದ ಬಿಂದು ಕಳೆ ಮೊಳೆ ಹದ ಬೆದೆಯನರಿದು
ಸ್ಥೂಲವೆಂಬ ದಿಂಡಿಂಗೆ ಶ್ರೀದೇವರೆಂಬ ತಾಳನಟ್ಟು
ಸುಷುಮ್ನನಾಳವೆಂಬ ಕೋವಿಯಂ ಜೋಡಿಸಿ
ಮೇಲೆ ತ್ರಿಕೂಟಸ್ಥಾನವೆಂಬ ಬಟ್ಟೆಯಂ ಬಲಿದು
ಕುಂಡಲಿಯ ಸರ್ಪನ ಹಗ್ಗವಂ ಬಿಗಿದು

Downloaded from: **http://www.lingayatreligion.com**

ಹಂಸನೆಂಬ ಎತ್ತಂ ಕಟ್ಟಿ
ಪ್ರಣವವೆಂಬ ಬೀಜವ ಪಶ್ಚಿಮ ಮುಖಕ್ಕೆ ಬಿತ್ತಿ
ಸಂತೋಷವೆಂಬ ಬೆಳೆಯಂ ಬೆಳೆದು
ಈ ಬೆಳೆಯ ಕೊಯಿದುಂಬ ಪರ್ಯಾಯವೆಂತೆಂದೊಡೆ
ಬಾಗುಚಂದನೆಂಬ ಕುಡುಗೋಲಂ ಪಿಡಿದು
ಜನನದ ನಿಲವಂ ಕೊಯಿದು,
ಮರಣದ ಸೂಡಂ ಕಟ್ಟಿ
ಆಕಾಶವೆಂಬ ಬಣಬೆಯ ಒಟ್ಟಿ
ಅಷ್ಟಾಂಗಯೋಗವೆಂಬ ಜೀವಧನದಿಂದಮೊಕ್ಕಿ
ತಾಪತ್ರಯವೆಂಬ ಮೆಟ್ಟನಂ ಮೆಟ್ಟಿಸಿ
ಪಾಪದ ಹೊಟ್ಟ ತೂರಿ
ಪುಣ್ಯದಜರ ಹಮ್ಮನುಳಿಯೆ
ನಿರ್ಮಲನೆಂಬ ಘನರಾಶಿಯಂ ಮಾಡಿ
ಚಿತ್ರಗುಪ್ತರೆಂಬ ಶಾನುಭೋಗರ
ಸಂಪುಟಕ್ಕೆ ಬರಹಂ ಬರೆಸದೆ
ವ್ಯವಹಾರಂ ಕದ್ದು
ನಮ್ಮ ಶ್ರೀಶೈಲ ಚೆನ್ನಮಲ್ಲಿಕಾರ್ಜುನನೆಲ್ಲಿ
ಭಾನುಗೆ ಒಂದೆ ಮುಖವಾದ
ಒಕ್ಕಲುಮಗನ ತೋರಿಸಯ್ಯ ನಿಮ್ಮ ಧರ್ಮ ಶ್ರೀಶೈಲಚೆನ್ನಮಲ್ಲಿಕಾರ್ಜುನಪ್ರಭುವೆ.
287
ಪೃದ್ವಿಯಗೆಲಿದ ಏಲೇಶ್ವರನ ಕಂಡೆ.
ಭಾವಭ್ರಮೆಯ ಗೆಲಿದ ಬ್ರಹ್ಮೇಶ್ವರನ ಕಂಡೆ.
ಸತ್ವ ರಜ ತಮ ತ್ರಿವಿಧವ ಗೆಲಿದ ತ್ರಿಪುರಾಂತಕನ ಕಂಡೆ.
ಅಂತರಂಗದ ಆತ್ಮಜ್ಞಾನದಿಂದ ಜ್ಯೋತಿಸಿದ್ದಯ್ಯನ ಕಂಡೆ.
ಇವರೆಲ್ಲರ ಮಧ್ಯಮಸ್ಥಾನ ಪ್ರಾಣಲಿಂಗ ಜಂಗಮವೆಂದು
ಸುಜ್ಞಾನದಲ್ಲಿ ತೋರಿದ ಬಸವಣ್ಣ ; ಆ ಬಸವಣ್ಣನ ಪ್ರಸಾದದಿಂದ
ಚೆನ್ನಮಲ್ಲಿಕಾರ್ಜುನನ ಕಂಡೆನಯ್ಯಾ
288
ಪೃಥ್ವಿ ಪೃಥ್ವಿಯ ಕೂಡದ ಮುನ್ನ,
ಅಪ್ಪು ಅಪ್ಪುವ ಕೂಡದ ಮುನ್ನ,
ತೇಜ ತೇಜವ ಕೂಡದ ಮುನ್ನ,
ವಾಯು ವಾಯುವ ಕೂಡದ ಮುನ್ನ,
ಆಕಾಶ ಆಕಾಶವ ಕೂಡದ ಮುನ್ನ
ಪಂಚೇಂದ್ರಿಯಂಗಳೆಲ್ಲ ಹಂಚುಹರಿಯಾಗದ ಮುನ್ನ ಚೆನ್ನಮಲ್ಲಿಕಾರ್ಜುನಂಗೆ
ಶರಣೆನ್ನಿರೆ ?
289
ಫಲ ಒಳಗೆ ಪಕ್ವವಾಗಿಯಲ್ಲದೆ,
ಹೊರಗಳ ಸಿಪ್ಪೆ ಒಪ್ಪುಗೆಡದು.
ಕಾಮನ ಮುದ್ರೆಯ ಕಂಡು ನಿಮಗೆ ನೋವಾದಿಹಿತೆಂದು

Downloaded from: **http://www.lingayatreligion.com**

ಆ ಭಾವದಿಂದ ಮುಚ್ಚಿದೆ.
ಇದಕ್ಕೆ ನೋವೇಕೆ ಕಾಡದಿರಣ್ಣಾ, ಚೆನ್ನಮಲ್ಲಿಕಾರ್ಜುನದೇವರದೇವನ ಒಳಗಾದವಳ.
290
ಬಂಜೆ ಬೇನೆಯನರಿವಳೆ ?
ಬಲದಾಯಿ ಮದ್ದ ಬಲ್ಲಳೆ ?
ನೊಂದವರ ನೋವ ನೋಯದವರೆತ್ತ ಬಲ್ಲರೊ ?
ಚೆನ್ನಮಲ್ಲಿಕಾರ್ಜುನಯ್ಯನಿರಿದಲಗು
ಒಡಲಲ್ಲಿ ಮುರಿದು ಹೊರಳುವೆನ್ನಳಲನು ನೀವೆತ್ತ ಬಲ್ಲಿರೆ, ಎಲೆ ತಾಯಿಗಳಿರಾ ?
291
ಬಂದಹನೆಂದು ಬಟ್ಟೆಯ ನೋಡಿ,
ಬಾರದಿದ್ದಡೆ ಕರಗಿ ಕೊರಗಿದೆನವ್ವಾ.
ತಡವಾದಡೆ ಬಡವಾದೆ ತಾಯೆ.
ಚೆನ್ನಮಲ್ಲಿಕಾರ್ಜುನನ ಒಂದಿರುಳಗಲಿದಡೆ ತಕ್ಕೆಸಡಲಿದ ಜಕ್ಕವಕ್ಕಿಯಂತಾದೆನವ್ವಾ.
292
ಬಟ್ಟೆಹ ಮೊಲೆಯ ಭರದ ಜವ್ವನದ ಚಲುವ ಕಂಡು ಬಂದಿರಣ್ಣಾ.
ಅಣ್ಣಾ, ನಾನು ಹೆಂಗೂಸಲ್ಲ ; ಅಣ್ಣಾ, ನಾನು ಸೂಳೆಯಲ್ಲ.
ಅಣ್ಣಾ, ಮತ್ತೆ ನನ್ನ ಕಂಡು ಕಂಡು ಆರೆಂದು ಬಂದಿರಣ್ಣಾ ?
ಚೆನ್ನಮಲ್ಲಿಕಾರ್ಜುನನಲ್ಲದ ಮಿಕ್ಕಿನ ಪರಪುರುಷನು ನಮಗಾಗದ ಮೋರೆ
ನೋಡಣ್ಣಾ ?
293
ಬಯಲಿಂದ ಹುಟ್ಟಿದ ಪರವೆಂಬ ತಾಯಿಗೆ
ಐವರು ಮಕ್ಕಳು ಜನಿಸಿದರು.
ಒಬ್ಬ ಭಾವರೂಪ, ಒಬ್ಬ ಪ್ರಾಣರೂಪ ;
ಒಬ್ಬ ಐಮುಖವಾಗಿ ಕಾಯರೂಪಾದ ;
ಇಬ್ಬರು ಉತ್ಪತ್ತಿ ಸ್ಥಿತಿಗೆ ಕಾರಣವಾದರು.
ಐಮುಖನರಮನೆ ಸುಖವಿಲ್ಲೆಂದು
ಕೈಲಾಸವ ಹೊಗೆನು, ಮರ್ತ್ಯಕ್ಕೆ ಅಡಿ ಇಡೆನು ; ಚೆನ್ನಮಲ್ಲಿಕಾರ್ಜುನದೇವಾ, ನೀನೇ
ಸಾಕ್ಷಿ.
294
ಬಯಲು ಲಿಂಗವೆಂಬೆನೆ ? ಬಗಿದು ನಡೆವಲ್ಲಿ ಹೋಯಿತ್ತು.
ಬೆಟ್ಟ ಲಿಂಗವೆಂಬೆನೆ ? ಮೆಟ್ಟಿ ನಿಂದಲ್ಲಿ ಹೋಯಿತ್ತು.
ತರುಮರಾದಿಗಳು ಲಿಂಗವೆಂಬೆನೆ ?ತರಿದಲ್ಲಿ ಹೋಯಿತ್ತು.
ಲಿಂಗ ಜಂಗಮದ ಪಾದವೇ ಗತಿಯೆಂದು ನಂಬಿದ
ಚೆನ್ನಮಲ್ಲಿಕಾರ್ಜುನಾ, ಸಂಗನಬಸವಣ್ಣನ ಮಾತು ಕೇಳದೆ ಕೆಟ್ಟೆನಯ್ಯಾ.
295
ಬಲ್ಲಿದ ಹಗೆಯವ ತೆಗೆವನ್ನಬರ,
ಬಡವರ ಹರಣ ಹಾರಿಹೋದ ತೆರನಂತಾಯಿತ್ತು.
ನೀ ಕಾಡಿ ಕಾಡಿ ನೋಡುವನ್ನಬರ,
ಎನಗಿದು ವಿಧಿಯೇ ಹೇಳಾ ತಂದೆ ?

Downloaded from: **http://www.lingayatreligion.com**

ಮುರುವಾರುವನ್ನಬರ,
ಎಮ್ಮ ಗಾಳಿಗೆ ಹಾರಿಹೋದ ತೆರನಂತಾಯಿತ್ತು.
ಎನಗೆ ನೀನಾವ ಪರಿಯಲ್ಲಿ ಕರುಣಿಸುವೆಯಯ್ಯಾ ಚೆನ್ನಮಲ್ಲಿಕಾರ್ಜುನಾ ?
296
ಬಸವಣ್ಣನ ಪಾದವ ಕಂಡೆನಾಗಿ
ಎನ್ನಂಗ ನಾಸ್ತಿಯಾಯಿತ್ತು.
ಚೆನ್ನಬಸವಣ್ಣನ ಪಾದವ ಕಂಡೆನಾಗಿ
ಎನ್ನ ಪ್ರಾಣಬಯಲಾಯಿತ್ತು.
ಪ್ರಭುವೆ, ನಿಮ್ಮ ಶ್ರೀಚರಣಕ್ಕೆ ಶರಣೆಂದೆನಾಗಿ
ಎನ್ನ ಅರಿವು ಸ್ವಯವಾಯಿತ್ತು.
ಚೆನ್ನಮಲ್ಲಿಕಾರ್ಜುನದೇವಯ್ಯಾ
ನಿಮ್ಮ ಶರಣರ ಕರುಣವ ಪಡೆದೆನಾಗಿ ನಿನಗೆ ಮತ್ತಾವುದಿಲ್ಲವಯ್ಯ ಪ್ರಭುವೆ.
297
ಬಸವಣ್ಣನ ಭಕ್ತಿ, ಚೆನ್ನಬಸವಣ್ಣನ ಜ್ಞಾನ,
ಮಡಿವಾಳಯ್ಯನ ನಿಷ್ಠೆ, ಪ್ರಭುದೇವರ ಜಂಗಮಸ್ಥಲ,
ಅಜಗಣ್ಣನ ಐಕ್ಯಸ್ಥಲ, ನಿಜಗುಣನ ಆರೂಢಸ್ಥಲ,
ಸಿದ್ಧರಾಮಯ್ಯನ ಸಮಾಧಿಸ್ಥಲ.
ಇಂತಿವರ ಕರುಣಪ್ರಸಾದ ಎನಗಾಯಿತ್ತು ಚೆನ್ನಮಲ್ಲಿಕಾರ್ಜುನಯ್ಯಾ.
298
ಬಸವಣ್ಣನ ಮನೆಯ ಮಗಳಾದ ಕಾರಣ
ಭಕ್ತಿಪ್ರಸಾದವ ಕೊಟ್ಟನು.
ಚೆನ್ನಬಸವಣ್ಣನ ತೊತ್ತಿನ ಮಗಳಾದ ಕಾರಣ
ಒಕ್ಕಪ್ರಸಾದವ ಕೊಟ್ಟನು.
ಪ್ರಭುದೇವರ ತೊತ್ತಿನ ತೊತ್ತಿನ ಮರಿದೊತ್ತಿನ ಮಗಳಾದ ಕಾರಣ
ಜ್ಞಾನಪ್ರಸಾದವ ಕೊಟ್ಟನು.
ಸಿದ್ಧರಾಮಯ್ಯನ ಶಿಶುಮಗಳಾದ ಕಾರಣ
ಪ್ರಾಣಪ್ರಸಾದವ ಸಿದ್ಧಿಸಿಕೊಟ್ಟನು.
ಮಡಿವಾಳಯ್ಯನ ಮನೆಯ ಮಗಳಾದ ಕಾರಣ
ನಿರ್ಮಲಪ್ರಸಾದವ ನಿಶ್ಚೈಸಿಕೊಟ್ಟನು.
ಇಂತೀ ಅಸಂಖ್ಯಾತ ಗಣಂಗಳೆಲ್ಲರು
ತಮ್ಮ ಕರುಣದ ಕಂದನೆಂದು ತಲೆದಡಹಿದ ಕಾರಣ ಚೆನ್ನಮಲ್ಲಿಕಾರ್ಜುನಯ್ಯನ
ಶ್ರೀಪಾದಕ್ಕೆ ಯೋಗ್ಯಳಾದೆನು.
299
ಬಸವಣ್ಣನೆ ಗುರು, ಪ್ರಭುದೇವರೆ ಲಿಂಗ,
ಸಿದ್ಧರಾಮಯ್ಯನೆ ಜಂಗಮ,
ಮಡಿವಾಳಯ್ಯನೆ ಜಂಗಮ,
ಚೆನ್ನಬಸವಣ್ಣನೆನ್ನ ಪರಮಾರಾಧ್ಯರು.
ಇನ್ನು ಸುಖಿಯಾದೆನು ಕಾಣಾ ಚೆನ್ನಮಲ್ಲಿಕಾರ್ಜುನಯ್ಯಾ.
300

Downloaded from: **http://www.lingayatreligion.com**

ಬಸವಣ್ಣಾ, ನಿಮ್ಮಂಗದಾಚಾರವ ಕಂಡು
ಎನಗೆ ಲಿಂಗಸಂಗವಾಯಿತ್ತಯ್ಯಾ.
ಬಸವಣ್ಣಾ, ನಿಮ್ಮ ಮನದ ಸುಜ್ಞಾನವ ಕಂಡು
ಎನಗೆ ಜಂಗಮಸಂಬಂಧವಾಯಿತ್ತಯ್ಯಾ.
ಬಸವಣ್ಣಾ, ನಿಮ್ಮ ಸದ್ಭಕ್ತಿಯ ತಿಳಿದು
ಎನಗೆ ನಿಜವು ಸಾಧ್ಯವಾಯಿತ್ತಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯನ ಹೆಸರಿಟ್ಟ ಗುರು
ನೀವಾದ ಕಾರಣ ನಿಮ್ಮ ಶ್ರೀಪಾದಕ್ಕೆ
ನಮೋ ನಮೋ ಎನುತಿರ್ದೆನು ಕಾಣಾ ಸಂಗನಬಸವಣ್ಣಾ.
301
ಬಸವನ ಭಕ್ತಿ ಕೊಟ್ಟಣದಮನೆ.
ಸಿರಿಯಾಳನ ಭಕ್ತಿ ಕಸಬುಗೇರಿ.
ಸಿಂಧುಬಲ್ಲಾಳನ ಭಕ್ತಿ ಪರದಾರದ್ರೋಹ.
ಉಳಿದಾದ ಅಟಮಟ ಉದಾಸೀನ ದಾಸೋಹವ ಮಾಡುವವರ
ದೈನ್ಯವೆಂಬ ಭೂತ ಸೋಂಕಿತು.
ಮಣ್ಣಿನ ಮನೆಯ ಕಟ್ಟಿ
ಮಾಯಾ ಮೋಹಿನಿಯೆಂಬ ಮಹೇಂದ್ರಜಾಲದೊಳಗಾಗಿ
ಮಾಡುವ ಮಾಟ.
ಭಕ್ತನಲ್ಲಿ ಉಂಡು ಉದ್ದಂಡವೃತ್ತಿಯಲ್ಲಿ ನಡೆವವರು ಶಿವನಲ್ಲ.
ಇವರು ದೇವಲೋಕ ಮರ್ತ್ಯಲೋಕಕ್ಕೆ ಹೊರಗು.
ಶ್ರೀಗಿರಿ ಚೆನ್ನಮಲ್ಲಿಕಾರ್ಜುನಾ, ನನ್ನ ಭಕ್ತಿ ನಿನ್ನೊಳಗೈಕ್ಯವಾಯಿತ್ತಾಗಿ
ನಿರ್ವಯಲಾದೆ ಕಾಣಾ
302
ಬಾರದ ಭವಂಗಳಲ್ಲಿ ಬಂದೆನಯ್ಯಾ.
ಕಡೆಯಿಲ್ಲದ ತಾಪಂಗಳಲ್ಲಿ ನೊಂದು
ನಿಮ್ಮ ಕರುಣೆಗೆ ಬಳಿಸಂದೆನಯ್ಯಾ.
ಇದು ಕಾರಣ ಎನ್ನ ದೇವ ಚೆನ್ನಮಲ್ಲಿಕಾರ್ಜುನಂಗೆ
ತನುವನುವಾಗಿ ಮನಮಾರುವೋಗೆ ಮತ್ತಿಲ್ಲದ ತವಕದ ಸ್ನೇಹಕ್ಕೆ ತೆರಹಿನ್ನೆಂತು
ಹೇಳಾ ತಂದೆ ?||
303
ಬಿಟ್ಟೆನೆಂದಡೆ ಬಿಡದೀ ಮಾಯೆ,
ಬಿಡದಿದ್ದಡೆ ಬೆಂಬತ್ತಿತ್ತು ಮಾಯೆ.
ಯೋಗಿಗೆ ಯೋಗಿಣಿಯಾಯಿತ್ತು ಮಾಯೆ,
ಸವಣಂಗೆ ಸವಣಿಯಾಯಿತ್ತು ಮಾಯೆ.
ಯತಿಗೆ ಪರಾಕಿಯಾಯಿತ್ತು ಮಾಯೆ.
ನಿನ್ನ ಮಾಯೆಗೆ ನಾನಂಜುವಳಲ್ಲ, ಚೆನ್ನಮಲ್ಲಿಕಾರ್ಜುನದೇವಾ, ನಿಮ್ಮಾಣೆ.
304
ಬಿಡು ಬಿಡು ಸಂಗವ, ಸುಡುಸುಡು ವಿಷಯವ,
ಎನ್ನೊಡೆಯರು ಬಾಗಿಲಿಗೆ ಬಂದರು,

Downloaded from: **http://www.lingayatreligion.com**

ತಡೆಯದಿರಾ ಮರುಳೆ.
ಹಡಿಕೆಯ ಸಂಸಾರದ ಸುಖವ ಕಡೆಯಲ್ಲಿ ಹೇಸಿ,
ಇದಕ್ಕೆ ಹಿಡಿಯದಿರು ಸೆರಗನು.
ಚೆನ್ನಮಲ್ಲಿಕಾರ್ಜುನದೇವರು ಮನೆಗೆ ಬಂದಲ್ಲಿ ಇದಿರೇಳದಿರ್ದಡೆ ನಾಯಕ ನರಕ.
305
ಬೆಂದಸಂಸಾರ ಬೆಂಬಿಡದೆ ಕಾಡಿಹುದಯ್ಯ,
ಏವೆನೇವೆನಯ್ಯಾ ?
ಅಂದಂದಿನ ದಂದುಗಕ್ಕೆ ಏವೆನೇವೆನಯ್ಯಾ ?
ಬೆಂದ ಒಡಲ ಹೊರೆವುದಕ್ಕೆ ನಾನಾರೆ. ಚೆನ್ನಮಲ್ಲಿಕಾರ್ಜುನಯ್ಯಾ, ಕೊಲ್ಲು ಕಾಯಿ,
ನಿಮ್ಮ ಧರ್ಮ.
306
ಬೆಟ್ಟಕ್ಕೆ ಸಾರವಿಲ್ಲೆಂಬರು
ತರುಗಳು ಹುಟ್ಟುವಪರಿ ಇನ್ನೆಂತಯ್ಯಾ ?
ಇದ್ದಲಿಗೆ ರಸವಿಲ್ಲೆಂಬರು ;
ಕಬ್ಬುನ ಕರಗುವಪರಿ ಇನ್ನೆಂತಯ್ಯಾ ?
ಎನಗೆ ಕಾಯವಿಲ್ಲೆಂಬರು ; ಚೆನ್ನಮಲ್ಲಿಕಾರ್ಜುನನೊಲಿವಪರಿ ಇನ್ನೆಂತಯ್ಯಾ ?
307
ಬೆಟ್ಟದ ಮೇಲೊಂದು ಮನೆಯ ಮಾಡಿ,
ಮೃಗಗಳಿಗಂಜಿದಡೆಂತಯ್ಯಾ ?
ಸಮುದ್ರದ ತಡಿಯಲೊಂದು ಮನೆಯ ಮಾಡಿ,
ನೊರೆತೆರೆಗಳಿಗಂಜಿದಡೆಂತಯ್ಯಾ ?
ಸಂತೆಯೊಳಗೊಂದು ಮನೆಯ ಮಾಡಿ,
ಶಬ್ದಕ್ಕೆ ನಾಚಿದಡೆಂತಯ್ಯಾ ?
ಚೆನ್ನಮಲ್ಲಿಕಾರ್ಜುನದೇವ ಕೇಳಯ್ಯಾ,
ಲೋಕದೊಳಗೆ ಹುಟ್ಟಿದ ಬಳಿಕ ಸ್ತುತಿನಿಂದೆಗಳು ಬಂದಡೆ ಮನದಲ್ಲಿ ಕೋಪವ
ತಾಳದೆ ಸಮಾಧಾನಿಯಾಗಿರಬೇಕು.

308
ಬೆರಸುವಡೆ ಬೇಗ ತೋರಾ,
ಹೊರ ಹಾಯ್ಕದಿರಯ್ಯಾ.
ನಿಮ್ಮಲ್ಲಿಗೆ ಸಲೆ ಸಂದ ತೊತ್ತಾನು ;
ಎನ್ನ ಹೊರ ಹಾಯ್ಕದಿರಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ನಂಬಿ ಬೆಂಬಳಿಬಂದೆನು ಇಂಬುಗೊಳ್ಳಯ್ಯಾ ಬೇಗದಲಿ.
309
ಬೋಳೆಯನೆಂದು ನಂಬಬೇಡ,
ಢಾಳಕನವನು ಜಗದ ಬಿನ್ನಾಣಿ.
ಬಾಣ ಮಯೂರ ಕಾಳಿದಾಸ ಓಹಿಲ ಉದ್ಭಟ
ಮಲುಹಣರವರಿಗಿತ್ತ ಪರಿ ಬೇರೆ.

Downloaded from: **http://www.lingayatreligion.com**

ಮುಕ್ತಿಯ ತೋರಿ, ಭಕ್ತಿಯ ಮರೆಸಿಕೊಂಬ ಚೆನ್ನಮಲ್ಲಿಕಾರ್ಜುನನು.
310
ಭಕ್ತನೆ ಕುಲಜನೆಂದ ಮಾತಿನಂತೆ ಹೋಗದು.
ಭಕ್ತನೆ ಕುಲಜನೆಂಬ ನುಡಿಯೆಲ್ಲಿಯು ಸಲ್ಲದು.
ಭಕ್ತನೆ ಕುಲಜನೆಂಬುದು ಪಾತಕವಯ್ಯ.
ಅವಯವವೆ ಮೂರ್ತಿಯಾಗಿ
ಸರ್ವಾಂಗಲಿಂಗಕ್ಕೆ ಅನುಭಾವವಿಲ್ಲಾಗಿ
ಎನ್ನ ದೇವ ಚೆನ್ನಮಲ್ಲಿಕಾರ್ಜುನನಲಿ ಯಥಾ ತಥಾ ಎಂಬಚನವನರಿಯಿರೆ.
311
ಭಕ್ತೆಯಾನಪ್ಪೆನಯ್ಯಾ ;
ಕರ್ತೃಭೃತ್ಯವ ನಾನರಿಯೆ.
ಮಾಹೇಶ್ವರಿಯಾನಪ್ಪೆನಯ್ಯಾ ;
ವ್ರತ ನೇಮ ಛಲವ ನಾನರಿಯೆ.
ಪ್ರಸಾದಿಯಾನಪ್ಪೆನಯ್ಯಾ ;
ಅರ್ಪಿತನರ್ಪಿತವೆಂಬ ಭೇದವ ನಾನರಿಯೆ.
ಪ್ರಾಣಲಿಂಗಿಯಾನಪ್ಪೆನಯ್ಯಾ ;
ಅನುಭಾವದ ಗಮನವ ನಾನರಿಯೆ.
ಶರಣೆಯಾನಪ್ಪೆನಯ್ಯಾ?
ಶರಣಸತಿ ಲಿಂಗಪತಿ ಎಂಬ ಭಾವವ ನಾನರಿಯೆ.
ಐಕ್ಯಳಾನಪ್ಪೆನಯ್ಯಾ?
ಬೆರಸಿ ಭೇದವ ನಾನರಿಯೆ.
ಚೆನ್ನಮಲ್ಲಿಕಾರ್ಜುನಯ್ಯಾ, ಷಟ್ಸ್ಥಲದಲ್ಲಿ ನಿಃಸ್ಥಲವಾಗಿಪ್ಪೆನು.
312
ಭವದ ಬಟ್ಟೆಯ ದೂರವನೇನ ಹೇಳುವೆನಯ್ಯಾ ?
ಎಂಬತ್ತುನಾಲ್ಕು ಲಕ್ಷ ಊರಲ್ಲಿ ಎಡೆಗೆಯ್ಯಬೇಕು.
ಒಂದೂರಭಾಷೆಯೊಂದೂರಲಿಲ್ಲ.
ಒಂದೂರಲ್ಲಿ ಕೊಂಡಂಥ ಆಹಾರ ಮತ್ತೊಂದೂರಲಿಲ್ಲ.
ಇಂತೀ ಊರ ಹೊಕ್ಕ ತಪ್ಪಿಂಗೆ
ಕಾಯವ ಭೂಮಿಗೆ ಸುಂಕವ ತೆತ್ತು
ಜೀವವನುಳುಹಿಕೊಂಡು ಬರಬೇಕಾಯಿತ್ತು.
ಇಂತೀ ಮಹಾಘನದ ಬೆಳಕಿನೊಳಗೆ
ಕಳೆದುಳಿದು ಸುಳಿದಾಡಿ
ನಿಮ್ಮ ಪಾದವ ಕಂಡು ಸುಯಿಧಾನಿಯಾದೆ ಕಾಣಾ ಚೆನ್ನಮಲ್ಲಿಕಾರ್ಜುನಯ್ಯಾ
313
ಭವಭವದಲ್ಲಿ ತೊಳಲಿ ಬಳಲಿತ್ತೆನ್ನಮನ,
ಆನೇವೆನಯ್ಯಾ ?
ಹಸಿದುಂಡಡೆ ಉಂಡು ಹಸಿವಾಯಿತ್ತು.
ಇಂದು ನೀನೊಲಿದೆಯಾಗಿ,
ಎನಗೆ ಅಮೃತದ ಆಪ್ಯಾಯನವಾಯಿತ್ತು.

Downloaded from: **http://www.lingayatreligion.com**

ಇದು ಕಾರಣ, ನೀನಿಕ್ಕಿದ ಮಾಯೆಯನಿನ್ನು ಮುಟ್ಟಿದೆನಾದಡೆ ಆಣೆ, ನಿಮ್ಮಾಣೆ ಚೆನ್ನಮಲ್ಲಿಕಾರ್ಜುನಾ.
314
ಭವಿಯಾಚಾರವ ಬಿಡದೆ ಭಯಾಗರವ ಹೊಗದೆ,
ಶಿವಾಚಾರದಲ್ಲಿ ನಡೆವ ನಾಯಿಗಳು ಬರಿದೆ ನಾವು ಶಿವಾಚಾರಿಗಳೆಂದರೆ
ನಮ್ಮ ಶಿವಾಚಾರಿ ಶರಣ ಬಸವಣ್ಣ ಮೆಚ್ಚ ನೋಡಯ್ಯ.
ಶಿವಾಚಾರದ ಮಾರ್ಗವನು, ಶಿವಾಚಾರದ ಮರ್ಮವನು,
ಶಿವಾಚಾರದ ವಿಸ್ತಾರವನು ನಮ್ಮ ಶರಣ ಬಸವಣ್ಣ ಬಲ್ಲನಲ್ಲದೆ
ಉದರವ ಹೊರವ ವೇಷಧಾರಿಗಳೆತ್ತಬಲ್ಲರಯ್ಯ ?
ಅಂತಪ್ಪ ಶಿವಾಚಾರದ ವಿಸ್ತಾರ ಸಕೀಲ ಹೇಳಿಹೆ ಕೇಳಿರಣ್ಣ.
ಅದೆಂತೆಂದೊಡೆ ತ
ಲಿಂಗಾಚಾರವೆಂದು, ಸದಾಚಾರವೆಂದು, ಶಿವಾಚಾರವೆಂದು,
ಭೃತ್ಯಾಚಾರವೆಂದು, ಗಣಾಚಾರವೆಂದು ಶಿವಾಚಾರವು
ಐದುತೆರನಾಗಿಪ್ಪುದು ನೋಡಯ್ಯಾ.
ಶ್ರೀ ಗುರು ಕರುಣಿಸಿಕೊಟ್ಟ ಲಿಂಗವನಲ್ಲದೆ
ಅನ್ಯದೈವಂಗಳಿಗೆರಗದಿಹುದೇ ಲಿಂಗಾಚಾರ ನೋಡಯ್ಯ.
ತಾ ಮಾಡುವ ಸತ್ಯ ಕಾಯಕದಿಂದ ಬಂದ ಅರ್ಥಾದಿಗಳಿಂದ
ತನ್ನ ಕುಟುಂಬ ರಕ್ಷಣೆಗೊಂಬ ತೆರದಿ
ಗುರುಲಿಂಗಜಂಗಮ ದಾಸೋಹಿಯಾಗಿಪ್ಪುದೇ ಸದಾಚಾರ ನೋಡಯ್ಯ.
ಶಿವಭಕ್ತರಾದ ಲಿಂಗಾಂಗಿಗಳಲ್ಲಿ ಪೂರ್ವದ ಜಾತಿಸೂತಕಾದಿಗಳನ್ನು
ವಿಚಾರಿಸದೆ ಅವರ ಮನೆಯಲ್ಲಿ ತಾ ಹೊಕ್ಕು
ಒಕ್ಕು ಮಿಕ್ಕ ಪ್ರಸಾದವ ಕೊಂಬುದೇ ಶಿವಾಚಾರ ನೋಡಯ್ಯ.
ಲಿಂಗಾಂಗಿಗಳಾದ ಶಿವಭಕ್ತರೇ ಮರ್ತ್ಯದಲ್ಲಿ ಮಿಗಿಲಹರೆಂದು
ತಾನು ಅವರ ಭೃತ್ಯನೆಂದರಿದು
ಅಂತಪ್ಪ ನಿಜಲಿಂಗಾಂಗಿಗಳ ಚಮ್ಮಾವುಗೆಯ
ಕಾಯ್ದಿಪ್ಪುದೇ ಭೃತ್ಯಾಚಾರ ನೋಡಯ್ಯ.
ಗುರುಲಿಂಗಜಂಗಮ ಪಾದೋದಕ ಪ್ರಸಾದ
ರುದ್ರಾಕ್ಷಿ ಮಂತ್ರಗಳೆಂಬಷ್ಟಾವರಣಂಗಳು
ತನ್ನ ಪ್ರಾಣಸ್ವರೂಪವಾಗಿ ಅವುಗಳ ನಿಂದೆಯನ್ನು ಕೇಳಿ ಸೈರಿಸದೆ
ಶಿಕ್ಷಿಸುವೆನೆಂಬ ನಿಷ್ಠೆಗೊಂಡುದೇ ಗಣಾಚಾರ ನೋಡಯ್ಯ.
ಇದಕ್ಕೆ ಸಾಕ್ಷಿ - ಪರಮರಹಸ್ಯೇ-
'ಲಿಂಗಾಚಾರಸ್ಸದಾಚಾರಶ್ಶಿವಾಚಾರಸ್ತಥವಚ
ಭೃತ್ಯಾಚಾರೋ ಗಣಾಚಾರಃ ಪಂಚಾಚಾರಃ ಪ್ರಕೀರ್ತಿತಃ ||
ಗುರೂಣಾ ದತ್ತಲಿಂಗಂಚ ನಾಸ್ತಿ ದೈವಂ ಮಹೀತಲೇ'
ಇತಿ ಭಾವಾನುಸಂಧಾನೋ ಲಿಂಗಾಚಾರಸ್ಸಮುಚ್ಯತೇ ||
ಧರ್ಮಾರ್ಜಿತವಿತ್ತೇನ ತೃಪ್ತಿಶ್ಚ ಕ್ರಿಯತೇ ಸದಾ
ಗುರುಜಂಗಮಲಿಂಗಾನಾಂ ಸದಾಚಾರಃ ಪ್ರಕೀರ್ತಿತಃ ||
ಅವಿಚಾರೇಷು ಭಕ್ತೇಷು ಜಾತಿಧರ್ಮಾದಿ ಸೂತಕಾನ್
ತದ್ಗೃಹೇಷ್ವನ್ನಪಾನಾದಿ ಭೋಜನಂ ಕ್ರಿಯತೇ ಸದಾ ||

Downloaded from: **http://www.lingayatreligion.com**

ತಚ್ಛಿವಾಚಾರಮಿತ್ಯಾಹುರ್ವಿರಶೈವಪರಾಯಣಾ
ಶಿವಭಕ್ತಜನಾ ಸರ್ವೆ ವರಿಷ್ಠಾಃ ಪೃಥಿವೀತಲೇ ||
ತೇಷಾಂ ಭೃತ್ಯೋಽಹಮಿತ್ಯೇತದ್ಭೃತ್ಯಾಚಾರಸ್ಸ ಉಚ್ಯತೇ
ಗುರುಲಿಂಗ ಜಂಗಮಶ್ಚೈವ ಪಾದತೀರ್ಥಃ ಪ್ರಸಾದತಃ
ಇತಿ ಪಂಚಸ್ವರೂಪೋಽಯಹಂ ಗಣಾಚಾರಃ ಪ್ರಕೀರ್ತಿತಃ ||ಽಳ
ಎಂದುದಾಗಿ, ಇಂತಪ್ಪ ಶಿವಾಚಾರದ ಆಚಾರವನರಿಯದೆ
ನಾ ಶಿವಭಕ್ತ ನಾ ಶಿವಭಕ್ತೆ ನಾ ಶಿವಾಚಾರಿ ಎಂದು
ಕೊಂಬ ಶೀಲವಂತರ ನೋಡಿ ಎನ್ನ ಮನ ನಾಚಿ ನಿಮ್ಮಡಿಮುಖವಾಯಿತ್ತಯ್ಯ
ಶ್ರೀಗಿರಿ ಚೆನ್ನಮಲ್ಲಿಕಾರ್ಜುನಯ್ಯ.
315
ಭವಿಸಂಗವಳಿದು ಭಕ್ತನಾದ ಬಳಿಕ,
ಭಕ್ತಂಗೆ ಭವಿಸಂಗವತಿಘೋರ ನರಕ.
ಶರಣಸತಿ ಲಿಂಗಪತಿಯಾದ ಬಳಿಕ,
ಶರಣಂಗೆ ಸತಿಸಂಗವು ಅಘೋರನರಕ.
ಚೆನ್ನಮಲ್ಲಿಕಾರ್ಜುನಾ, ಪ್ರಾಣಗುಣವಳಿಯದವರ ಸಂಗವೇ ಭಂಗ.
316
ಭಾನುವಿನಂತಿಪ್ಪುದು ಜ್ಞಾನ,
ಭಾನುಕಿರಣದಂತಿಪ್ಪುದು ಭಕ್ತಿ.
ಭಾನುವನುಳಿದು ಕಿರಣಂಗಳಿಲ್ಲ,
ಕಿರಣಂಗಳನುಳಿದು ಭಾನುವಿಲ್ಲ.
ಜ್ಞಾನವಿಲ್ಲದ ಭಕ್ತಿ, ಭಕ್ತಿಯಿಲ್ಲದ ಜ್ಞಾನವೆಂತಿಪ್ಪುದು ಚೆನ್ನಮಲ್ಲಿಕಾರ್ಜುನಾ ?
317
ಭಾವ ಬೀಸರವಾಯಿತ್ತು, ಮನ ಮೃತ್ಯುವನಪ್ಪಿತ್ತು ;
ಆನೇವೆನಯ್ಯಾ ?
ಆಳಿತನದ ಮನ ತಲೆಕೆಳಗಾಯಿತ್ತು ;
ಆನೇವೆನಯ್ಯಾ ?
ಬಿಚ್ಚಿ ಬೇರಾಗದ ಭಾವವಾಗೆ,
ಬೆರೆದೊಪ್ಪಚ್ಚಿ ನಿನ್ನ ನಿತ್ಯಸುಖದೊಳಗೆಂದಿಪ್ಪೆನಯ್ಯಾ, ಚೆನ್ನಮಲ್ಲಿಕಾರ್ಜುನಾ ?
318
ಭಾವಿಸಿ ನೋಡಿದಡೆ ಅಂಗವಾಯಿತ್ತು,
ಅಂಗಸಂಗವಾಗಿ ಸಂಯೋಗವ ಮರೆದು, ಲಿಂಗಸ್ವೈವೆರಗಾದೆ.
ಲಿಂಗೈಕ್ಯ, ನಿಮ್ಮನಗಲದೆ ಅಂಗರುಚಿಗಳ ಮರೆದು,
ಲಿಂಗರುಚಿಗಳಲ್ಲಿ ಸ್ವೈವೆರಗಾದೆ.
ಲಿಂಗ ಸ್ವೈವೆರಗಾದ ಬಳಿಕ ಚೆನ್ನಮಲ್ಲಿಕಾರ್ಜುನನ ಕೊಂದು ಸಾವ ಭಾಷೆ.
319
ಭೃತ್ಯನಾದ ಬಳಿಕ ಕರ್ತೃವಿಂಗೆ ಉತ್ತಮ ವಸ್ತುವನೀಯಬೇಕು,
ಇದೇ ಕರ್ತೃಭೃತ್ಯರ ಭೇದ.
ಲಿಂಗಭಕ್ತನಾದಡೆ ಜಂಗಮಪಾದತೀರ್ಥಪ್ರಸಾದವ
ಲಿಂಗಕ್ಕೆ ಮಜ್ಜನ ಭೋಜನ ನೈವೇದ್ಯವ ಮಾಡಿ,

Downloaded from: **http://www.lingayatreligion.com**

ಪ್ರಸಾದವ ಕೊಳ್ಳಬೇಕು. ಇದೇ ವರ್ಮ, ಇದೇ ಧರ್ಮ ಕಾಣಾ ಚೆನ್ನಮಲ್ಲಿಕಾರ್ಜುನಾ.
320
ಮಚ್ಚು ಅಚ್ಚುಗವಾಗಿ ಒಪ್ಪಿದ ಪರಿಯ ನೋಡಾ.
ಎಚ್ಚಡೆ ಗರಿದೋರದಂತಿರಬೇಕು.
ಅಪ್ಪಿದಡೆ ಅಸ್ಥಿಗಳು ನಗ್ಗುನುಸಿಯಾಗಬೇಕು.
ಬೆಚ್ಚಡೆ ಬೆಸುಗೆಯರಿಯದಂತಿರಬೇಕು. ಮಚ್ಚು ಒಪ್ಪಿತ್ತು, ಚೆನ್ನಮಲ್ಲಿಕಾರ್ಜುನನ
ಸ್ನೇಹ ತಾಯೆ.
321
ಮಡಿವಾಳಯ್ಯನ ಪ್ರಸಾದವ ಕೊಂಡು
ಎನ್ನ ಸರ್ವಾಂಗ ಶುದ್ಧವಾಯಿತ್ತಯ್ಯಾ.
ಸಿದ್ಧರಾಮಯ್ಯನ ಪ್ರಸಾದವ ಕೊಂಡು
ಎನ್ನ ಕರಣಂಗಳು ಶುದ್ಧವಾಯಿತ್ತಯ್ಯಾ.
ಬಸವಣ್ಣನ ಪ್ರಸಾದವ ಕೊಂಡು
ಭಕ್ತಿಸಂಪನ್ನನಾದೆನಯ್ಯಾ.
ಚೆನ್ನಬಸವಣ್ಣನ ಪ್ರಸಾದವ ಕೊಂಡು
ಜ್ಞಾನಸಂಪನ್ನನಾದೆನಯ್ಯಾ.
ನಿಜಗುಣನ ಪ್ರಸಾದವ ಕೊಂಡು ನಿಶ್ಚಿಂತನಾದೆನಯ್ಯಾ.
ಅಜಗಣ್ಣನ ಪ್ರಸಾದವ ಕೊಂಡು ಆರೂಢನಾದೆನಯ್ಯಾ.
ಘಟ್ಟಿವಾಳಯ್ಯನ ಪ್ರಸಾದವ ಕೊಂಡು
ನಿರಾಕಾರ ಪರಬ್ರಹ್ಮ ಸ್ವರೂಪನಾದೆನಯ್ಯಾ.
ಪ್ರಭುದೇವರ ಪ್ರಸಾದವ ಕೊಂಡು ಚೆನ್ನಮಲ್ಲಿಕಾರ್ಜುನಯ್ಯನ ಕೂಡಿ
ಸುಖಿಯಾದೆನು.
322
ಮದನಾರಿಯೆಂಬ ಮಳೆ ಹೊಯ್ಯಲು,
ಶಿವಯೋಗವೆಂಬ ತೊರೆ ಬರಲು,
ಕಾಮನೆ ಅಂಬಿಗನಾದ ನೋಡಾ ?
ಕರ್ಮದ ಕಡಲೆನ್ನನೆಳದೊಯ್ಯಾಗ ಕೈಯ ನೀಡು ತಂದೆ ಚೆನ್ನಮಲ್ಲಿಕಾರ್ಜುನಾ.
323
ಮಧ್ಯಾಹ್ನದಿಂದ ಮೇಲೆ ಹಿರಿಯರಿಲ್ಲ.
ಅಸ್ತಮಾನದಿಂದ ಮೇಲೆ ಜಿತೇಂದ್ರಿಯರಿಲ್ಲ.
ವಿಧಿಯ ಮೀರುವ ಅಮರರಿಲ್ಲ.
ಕ್ಷುಧೆ ವಿಧಿ ವ್ಯಸನಕ್ಕಂಜಿ,
ನಾ ನಿಮ್ಮ ಮರೆಹೊಕ್ಕು ಬದುಕಿದೆನು ಚೆನ್ನಮಲ್ಲಿಕಾರ್ಜುನಾ.
324
ಮನ ಬೀಸರವಾದಡೆ ಪ್ರಾಣ ಪಲ್ಲಟವಹುದವ್ವಾ.
ತನು ಕರಣಂಗಳು ಮೀಸಲಾಗಿ
ಮನ ಸಮರಸವಾಯಿತ್ತು ನೋಡಾ
ಅನ್ಯವನರಿಯೆ ಭಿನ್ನವನರಿಯೆ.
ಎನ್ನ ದೇವ ಚೆನ್ನಮಲ್ಲಿಕಾರ್ಜುನಯ್ಯನ ಬಳಿಯವಳಾನು ಕೇಳಾ ತಾಯೆ ?

Downloaded from: **http://www.lingayatreligion.com**

325
ಮನ ಮನ ತಾರ್ಕಣೆಗೊಂಡು ಅನುಭವಿಸಲು,
ನೆನಹೆ ಘನವಹುದಲ್ಲದೆ ಅದು ಹವಣದಲ್ಲಿ ನಿಲುವುದೆ ?
ಎಲೆ ಅವ್ವಾ, ನೀನು ಮರುಳವ್ವೆ.
ಎನ್ನ ದೇವ ಚೆನ್ನಮಲ್ಲಿಕಾರ್ಜುನಯ್ಯಗೊಲಿದು
ಸಲೆ ಮಾರುಹೋದೆನು. ನಿನ್ನ ತಾಯಿತನವನೊಲ್ಲೆ ಹೋಗಾ.
326
ಮನ ಮುನ್ನ ಮುನ್ನವೆ ಗುರುವಿನೆಡೆಗೆಯಿದಿತ್ತು.
ತನುವಿನಲ್ಲಿ ಡಿಂಬ ನೋಡಾ ?
ಮನ ಬೇರಾದವರ ತನುವನಪ್ಪುವನೆಗ್ಗ ನೋಡಾ. ಚೆನ್ನಮಲ್ಲಿಕಾರ್ಜುನನ ನೋಡಿ
ಕೂಡಿ ಬಂದೆಹೆನಂತಿರುವಂತಿರು.
327
ಮನೆ ಮನೆದಪ್ಪದೆ ಕೈಯೊಡ್ಡಿ ಬೇಡುವಂತೆ ಮಾಡಯ್ಯ ?
ಬೇಡಿದಡೆ ಇಕ್ಕದಂತೆ ಮಾಡಯ್ಯ ?
ಇಕ್ಕಿದಡೆ ನೆಲಕ್ಕೆ ಬೀಳುವಂತೆ ಮಾಡಯ್ಯ ?
ನೆಲಕ್ಕೆ ಬಿದ್ದಡೆ ನಾನೆತ್ತಿಕೊಂಬುದಕ್ಕೆ ಮುನ್ನವೆ
ಸುನಿಯೆತ್ತಿಕೊಂಬಂತೆ ಮಾಡಾ ಚೆನ್ನಮಲ್ಲಿಕಾರ್ಜುನಯ್ಯ || 327 ||

328
ಮನೆಯೆನ್ನದು, ತನುವೆನ್ನದು, ಧನವೆನ್ನದೆನ್ನೆನಯ್ಯಾ.
ಮನ ನಿಮ್ಮದು, ತನು ನಿಮ್ಮದು, ಧನ ನಿಮ್ಮದು ಎಂದಿಪ್ಪೆನಯ್ಯಾ.
ಸತಿಯಾನು, ಪತಿಯುಂಟು, ಸುಖ ಉಂಟೆಂಬುದ
ಮನ, ಭಾವದಲ್ಲಿ ಅರಿದೆನಾದಡೆ, ನಿಮ್ಮಾಣೆಯಯ್ಯಾ.
ನೀನಿರಿಸಿದ ಗೃಹದಲ್ಲಿ ನಿನ್ನಿಚ್ಛೆಯವಳಾಗಿಪ್ಪೆನಲ್ಲದೆ ಅನ್ಯವನರಿಯೆ ಕಾಣಾ
ಚೆನ್ನಮಲ್ಲಿಕಾರ್ಜುನಾ.
329
ಮರಮರ ಮಥನಿಸಿ ಕಿಚ್ಚು ಹುಟ್ಟಿ
ಸುತ್ತಣ ತರುಮರಾದಿಗಳ ಸುಡಲಾಯಿತ್ತು.
ಆತ್ಮ ಆತ್ಮ ಮಥನಿಸಿ ಅನುಭಾವ ಹುಟ್ಟಿ
ಹೊದ್ದಿರ್ದ ತನುಗುಣಾದಿಗಳ ಸುಡಲಾಯಿತ್ತು.
ಇಂತಪ್ಪ ಅನುಭಾವರ ಅನುಭಾವವ ತೋರಿ ಎನ್ನ ಒಡಲನುಳುಹಿಕೊಳ್ಳಾ
ಚೆನ್ನಮಲ್ಲಿಕಾರ್ಜುನಾ.
330
ಮರವಿದ್ದು ಫಲವೇನು ನೆಳಲಿಲ್ಲದನ್ನಕ್ಕ ?
ಧನವಿದ್ದು ಫಲವೇನು ದಯವಿಲ್ಲದನ್ನಕ್ಕ ?
ಹಸುವಿದ್ದು ಫಲವೇನು ಹಯನಿಲ್ಲದನ್ನಕ್ಕ ?
ರೂಪಿದ್ದು ಫಲವೇನು ಗುಣವಿಲ್ಲದನ್ನಕ್ಕ ?
ಅಗಲಿದ್ದು ಫಲವೇನು ಬಾನವಿಲ್ಲದನ್ನಕ್ಕ ?
ನಾನಿದ್ದು ಫಲವೇನು ನಿಮ್ಮ ಜ್ಞಾನವಿಲ್ಲದನ್ನಕ್ಕ ಚೆನ್ನಮಲ್ಲಿಕಾರ್ಜುನಾ ?

Downloaded from: **http://www.lingayatreligion.com**

331
ಮರಹು ಬಂದಿಹುದೆಂದು ಗುರು ಕುರುಹನೆ ಕೊಟ್ಟ ;
ಅರಿವಿಂಗೆ ಪ್ರಾಣಲಿಂಗ ಬೇರೆ ಕಾಣಿರಣ್ಣಾ.
ನಿರ್ಣಯವಿಲ್ಲದ ಭಕ್ತಿಗೆ ಬರಿದೆ ಬಳಲಲದೇತಕೆ ?
ಚೆನ್ನಮಲ್ಲಿಕಾರ್ಜುನಯ್ಯನನರಿದು ಪೂಜಿಸಿದಡೆ ಮರಳಿ ಭವಕ್ಕೆ ಬಹನೆ ?
332
ಮರೆದೊರಗಿ, ಕನಸ ಕಂಡು ಹೇಳುವಲ್ಲಿ
ಸತ್ತ ಹೆಣ ಎದ್ದಿತ್ತು.
ತನ್ನ ಋಣ ನಿಧಾನ ಎದ್ದು ಕರೆಯಿತ್ತು.
ಹೆಪ್ಪಿಟ್ಟ ಹಾಲು ಗಟ್ಟಿತುಪ್ಪಾಗಿ ಸಿಹಿಯಾಯಿತ್ತು.
ಇದಕ್ಕೆ ತಪ್ಪ ಸಾಧಿಸಲೇಕೆ ಚೆನ್ನಮಲ್ಲಿಕಾರ್ಜುನದೇವರ ದೇವನಣ್ಣಗಳಿರಾ ?
333
ಮರ್ತ್ಯಲೋಕದ ಭಕ್ತರ ಮನವ
ಬೆಳಗಲೆಂದು ಇಳಿತಂದನಯ್ಯಾ ಶಿವನು
ಕತ್ತಲೆಯ ಪಾಳೆಯವ ರವಿ ಹೊಕ್ಕಂತಾಯಿತ್ತಯ್ಯಾ.
ಚಿತ್ತದ ಪ್ರಕೃತಿಯ ಹಿಂಗಿಸಿ,
ಮುಕ್ತಿಪ ಥವ ತೋರಿದನೆಲ್ಲ ಅಸಂಖ್ಯಾತ ಗಣಂಗಳಿಗೆ.
ತನುವೆಲ್ಲ ಸ್ವಯಲಿಂಗ, ಮನವೆಲ್ಲ ಚರಲಿಂಗ.
ಭಾವವೆಲ್ಲ ಮಹಾಘನದ ಬೆಳಗು.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣ ಸಮ್ಯಕ್ಜ್ಞಾನಿ ಚೆನ್ನಬಸವಣ್ಣನ ಶ್ರೀ ಪಾದಕ್ಕೆ ಶರಣೆಂದು ಎನ್ನ ಭವಂ
ನಾಸ್ತಿಯಾಯಿತ್ತಯ್ಯಾ ಪ್ರಭುವೆ.
334
ಮಾಟಕೂಟ ಬಸವಣ್ಣಂಗಾಯಿತ್ತು.
ನೋಟಕೂಟ ಪ್ರಭುದೇವರಿಗಾಯಿತ್ತು.
ಭಾವಕೂಟ ಅಜಗಣ್ಣಂಗಾಯಿತ್ತು.
ಸ್ನೇಹಕೂಟ ಬಾಚಿರಾಜಂಗಾಯಿತ್ತು.
ಇವರೆಲ್ಲರ ಕೂಟ ಚೆನ್ನಬಸವಣ್ಣಂಗಾಯಿತ್ತು. ಎನಗಿನ್ನಾವ ಕೂಟವಿಲ್ಲವಯ್ಯಾ,
ಚೆನ್ನಮಲ್ಲಿಕಾರ್ಜುನಯ್ಯಾ.
335
ಮಾಟಕೂಟದಲ್ಲಿ ಬಸವಣ್ಣನಿಲ್ಲ.
ನೋಟಕೂಟದಲ್ಲಿ ಪ್ರಭುದೇವರಿಲ್ಲ.
ಭಾವಕೂಟದಲ್ಲಿ ಅಜಗಣ್ಣನಿಲ್ಲ.
ಸ್ನೇಹಕೂಟದಲ್ಲಿ ಬಾಚಿರಾಜನಿಲ್ಲ.
ಇವರೆಲ್ಲರ ಕೂಟದಲ್ಲಿ ಚೆನ್ನಬಸವಣ್ಣನಿಲ್ಲ. ಎನಗಿನ್ನೇನಯ್ಯಾ
ಚೆನ್ನಮಲ್ಲಿಕಾರ್ಜುನಯ್ಯಾ ?
336
ಮಾಟ ಮದುವೆಯ ಮನೆ.
ದಾನಧರ್ಮ ಸಂತೆಯ ಪಸಾರ,

Downloaded from: **http://www.lingayatreligion.com**

ಸಾಜಸಾಜೇಶ್ವರಿ ಸೂಳೆಗೇರಿಯ ಸೊಬಗು.
ವ್ರತನೇಮವೆಂಬುದು ವಂಚನೆಯ ಲುಬ್ಧವಾಣಿ.
ಭಕ್ತಿಯೆಂಬುದು ಬಾಜಿಗಾರರಾಟ.
ಬಸವಣ್ಣಗೆ ತರ ; ನಾನರಿಯದೆ ಹುಟ್ಟಿದೆ, ಹುಟ್ಟಿ ಹುಸಿಗೀಡಾದೆ.
ಹುಸಿ ವಿಷಯದೊಳಡಗಿತ್ತು, ವಿಷಯ ಮಸಿಮಣ್ಣಾಯಿತ್ತು.
ನಿನ್ನ ಗಸಣೆಯನೊಲ್ಲೆ ಹೋಗಾ, ಚೆನ್ನಮಲ್ಲಿಕಾರ್ಜುನಾ,
337
ಮುಂಗೈಯಲ್ಲಿ ವೀರಗಂಕಣವಿಕ್ಕಿ,
ಮುಂಗಾಲಲ್ಲಿ ತೊಡರುಬಾವುಲಿಯ ಕಟ್ಟಿದೆ.
ಗಂಡುಡಿಗೆಯನುಟ್ಟೆನೆಂಬ ಮಾತಿನ ಬಿರಿದ ನುಂಗಿದೆನು.
ಚೆನ್ನಮಲ್ಲಿಕಾರ್ಜುನಾ,
ನಿಮ್ಮಾಣೆಗೆ ಊಣೆಯವ ತಂದೆನಾದಡೆ, ನಿಮ್ಮ ತೊತ್ತಿನ ಮಗಳಲ್ಲಯ್ಯಾ.
338
ಮುಡಿಬಿಟ್ಟು ತೂಂಗವಾರಿದವು ಕೇಳು ತಂದೆ.
ಉಡಿ ಜೋಲಿ ಅಡಿಗಿಕ್ಕಿ ಹೋಯಿತ್ತು ಶಿವಶಿವಾ.
ನಡೆಗೆಟ್ಟು ನಿಧಿ ನಿಂದಿತ್ತು ಕೇಳಾ ಎನ್ನ ತಂದೆ.
ಪ್ರಾಣದೊಡೆಯಾ, ಕರುಣದಿಂದೊಪ್ಪುಗೊಳ್ಳಾ ಚೆನ್ನಮಲ್ಲಿಕಾರ್ಜುನಾ.
339
ಮುಡಿಬಿಟ್ಟು ಮೊಗಬಾಡಿ ತನುಕರಗಿದವಳ
ಎನ್ನನೇಕೆ ನುಡಿಸುವಿರಿ ?
ಎಲೆ ತಂದೆಗಳಿರಾ, ಬಲುಹಳಿದು ಭವಗೆಟ್ಟು ಛಲವಳಿದು ಭಕ್ತೆಯಾಗಿ
ಚೆನ್ನಮಲ್ಲಿಕಾರ್ಜುನನ ಕೂಡಿ ಕುಲವಳಿದವಳ ಲ
340
ಮುತ್ತು ಒಡೆದಡೆ ಬೆಸೆಯಬಹುದೆ ?
ಮನ ಮುರಿದಡೆ ಸಂತಕ್ಕೆ ತರಬಹುದೆ ?
ಅಪ್ಪುಗೆ ಸಡಲಿದ ಸುಖವ ಮರಳಿ ಅರಸಿದರುಂಟೆ ?
ಸಾಧಕನೊಯಿದ ನಿಧಾನದ ಕುಳಿಯಂತೆ ಅಲ್ಲಿ ಏನುಂಟು ?
ಮಚ್ಚು ಪಲ್ಲಟವಾಗಿ, ನೋಟದ ಸುಖವ ಹಿಂಗಿದರೊಳವೆ ?
ನೋಡದಿರು, ಕಾಡದಿರು, ಮನಬಳಸದಿರು.
ಭಾಷೆಗೆ ತಪ್ಪಿದರೆ ಮುಳ್ಳುಮೊನೆಯ ಕಿಚ್ಚಿನಂತೆ.
ಲೇಸು ಬೀಸರವೋಗದ ಮುನ್ನ ಚೆನ್ನಮಲ್ಲಿಕಾರ್ಜುನನ ಕೂಡಿ ಧಾತುಗೆಟ್ಟ ಬಳಿಕ
ಒಳವೆ ?
341
ಮುತ್ತು ನೀರಲಾಯಿತ್ತು, ವಾರಿಕಲ್ಲು ನೀರಲಾಯಿತ್ತು,
ಉಪ್ಪು ನೀರಲಾಯಿತ್ತು.
ಉಪ್ಪು ಕರಗಿತ್ತು, ವಾರಿಕಲ್ಲು ಕರಗಿತ್ತು,
ಮುತ್ತು ಕರಗಿದುದನಾರೂ ಕಂಡವರಿಲ್ಲ.
ಈ ಸಂಸಾರಿಮಾನವರು ಲಿಂಗವಮುಟ್ಟಿ ಭವಭಾರಿಗಳಾದರು.
ನಾ ನಿಮ್ಮ ಮುಟ್ಟಿ ಕರಿಗೊಂಡೆನಯ್ಯಾ ಚೆನ್ನಮಲ್ಲಿಕಾರ್ಜುನಯ್ಯಾ.

Downloaded from: **http://www.lingayatreligion.com**

342
ಮುನ್ನ ಮಾಡಿತ್ತನಾರು ಕಳೆಯಬಾರದು.
ಅದು ಬೆನ್ನ ಹಿಂದೆ ಬರುತ್ತಿಪ್ಪುದು.
ಅದನಿನ್ನು ಕಳದೆಹೆನೆಂದಡೆ ಎನ್ನಿಚ್ಛೆಯುಂಟೆ ಅಯ್ಯಾ ?
ಚೆನ್ನಮಲ್ಲಿಕಾರ್ಜುನನೆನಗೆ ಕಟ್ಟಿದ ಕಟ್ಟಳೆಯ ನನ್ನಿಂದ ನಾನೆ ಅನುಭವಿಸಿ ಕಳೆವೆನು.
343
ಮೂರು ತಪ್ಪ ಹೊರಿಸಿ ಬಂದವಳಿಗೆ
ಇನ್ನಾರ ಕೊಂಡು ಕೆಲಸವೇತಕ್ಕೆ ?
ಹೊಗದಿಹೆನೆ ಹೋಗಿಹೆನೆ, ಜ್ಞಾನಕ್ಕೆ ಹಾನಿ.
ಅರೆಗೋಣ ಕೊಯ್ವವನಂತೆ ಇನ್ನೇವೆ ? ಈ ಗುಣವ ಬಿಡಿಸಾ ಎನ್ನ ತಂದೆ
ಚೆನ್ನಮಲ್ಲಿಕಾರ್ಜುನಾ.
344
ಮೂಲಾಧಾರದ ಬೇರ ಮೆಟ್ಟಿ, ಭ್ರೂಮಂಡಲವನೇರಿದೆ.
ಆಚಾರದ ಬೇರ ಹಿಡಿದು ಐಕ್ಯದ ತುದಿಯನೇರಿದೆ.
ವೈರಾಗ್ಯದ ಸೋಪಾನದಿಂದ ಶ್ರೀಗಿರಿಯನೇರಿದೆ. ಕೈವಿಡಿದು ತೆಗೆದುಕೊಳ್ಳಾ,
ಚೆನ್ನಮಲ್ಲಿಕಾರ್ಜುನಾ.
345
ಮೊಲೆ ಬಿದ್ದು, ಮುಡಿ ಸಡಲಿ, ಗಲ್ಲ ಬತ್ತಿ, ತೋಳು ಕಂದಿದವಳ
ಎನ್ನನೇಕೆ ನೋಡುವಿರಿ ಎಲೆ ಅಣ್ಣಗಳಿರಾ ?
ಕುಲವಳಿದು ಛಲವಳಿದು ಭವಗೆಟ್ಟು ಭಕ್ತೆಯಾದವಳ,
ಎನ್ನನೇಕೆ ನೋಡುವಿರಿ ಎಲೆ ತಂದೆಗಳಿರಾ ? ಚೆನ್ನಮಲ್ಲಿಕಾರ್ಜುನನ ಕೂಡಿ
ಕುಲವಳಿದು ಛಲವಳಿದವಳನು.
346
ಮೊಲೆಮುಡಿಯಿದ್ದಡೇನು ಮೂಗಿಲ್ಲದವಳಿಂಗೆ ?
ತಲೆಯ ಮೇಲೆ ಸೆರಗೇತಕ್ಕೆ ಸಹಜಸಂಕಲ್ಪವಿಲ್ಲದವಳಿಂಗೆ ?
ಜಲದೊಳಗೆ ಹುಟ್ಟಿ ಗುಳ್ಳೆ ಜಾತಿಸ್ಮರತ್ವವರಿದಿತ್ತು.
ಹಲವರ ಹಾದಿಯೊಳು ಹರಿಸುರಗರ್ೆ ನಿಮ್ಮ ನೆಲೆಯ ತೋರಿದೆ ಶ್ರೀಗಿರಿ
ಚೆನ್ನಮಲ್ಲಿಕಾರ್ಜುನಾ.
347
ಮೋಹವುಳ್ಳಲ್ಲಿ ಮಚ್ಚುವಂತೆಮಾಡಯ್ಯಾ.
ಮೋಹವುಳ್ಳಲ್ಲಿ ಕರುಳುವ ಕೊಯ್ಯಯ್ಯಾ.
ಮೋಹವುಳ್ಳಲ್ಲಿ ಬೆರಳುವ ಕಡಿಯಯ್ಯಾ.
ಚೆನ್ನಮಲ್ಲಿಕಾರ್ಜುನದೇವಯ್ಯಾ, ನೊಂದೆನೆಂದಡೆ ಮನಕತಮಾಡಯ್ಯಾ.
348
ರತ್ನದ ಸಂಕೋಲೆಯಾದಡೆ ತೊಡರಲ್ಲವೆ ?
ಮುತ್ತಿನ ಬಲೆಯಾದಡೆ ಬಂಧನವಲ್ಲವೆ ?
ಚಿನ್ನದ ಕತ್ತಿಯಲ್ಲಿ ತಲೆಹೊಯ್ದಡೆ ಸಾಯದಿರ್ಪರೆ ?
ಲೋಕದ ಭಜನೆಯ ಭಕ್ತಿಯಲ್ಲಿ ಸಿಲುಕಿದಡೆ ಜನನಮರಣ ಬಿಡುವುದೆ
ಚೆನ್ನಮಲ್ಲಿಕಾರ್ಜುನಾ ?
349

Downloaded from: **http://www.lingayatreligion.com**

ರವಿಯ ಕಾಳಗವ ಗೆಲಿದು, ಒಂಬತ್ತು ಬಾಗಿಲ ಮುರಿದು,
ಅಷ್ಟಧವಳಾರಮಂ ಸುಟ್ಟು, ಮೇಲುಪ್ಪರಿಗೆಯ ಮೆಟ್ಟಿ,
ಅಲ್ಲಅಹುದು, ಉಂಟುಇಲ್ಲ, ಬೇಕುಬೇಡೆಂಬ
ಆರರಿತಾತನೆ ಗುರು ತಾನೆ ಬೇರಿಲ್ಲ.
ದ್ವಯಕಮಳದಲ್ಲಿ ಉದಯವಾದ ಚೆನ್ನಮಲ್ಲಿಕಾರ್ಜುನಯ್ಯಾ
ನಿಮ್ಮ ಶರಣ ಸಂಗನಬಸವಣ್ಣನ ಶ್ರೀಪಾದಕ್ಕೆ ನಮೋ ನಮೋ ಎನುತಿರ್ದೆನು.
350
ಲಾಂಛನ ಸಹಿತ ಮನೆಗೆ ಬಂದಡೆ,
ತತ್ಕಾಲವನರಿದು ಪ್ರೇಮವ ಮಾಡದಿರ್ದಡೆ
ನೀನಿರಿಸಿದ ಮನೆಯ ತೊತ್ತಲ್ಲ.
ತತ್ಕಾಲ ಪ್ರೇಮವ ಮಾಡುವಂತೆ ಎನ್ನಮುದ್ದ ಸಲಿಸಯ್ಯಾ.
ಅಲ್ಲದೊಡೆ ಒಯ್ಯಯ್ಯ ಸಿರಿಶೈಲ ಚೆನ್ನಮಲ್ಲಿಕಾರ್ಜುನಾ.

351
ಲಿಂಗಕ್ಕೆ ರೂಪ ಸಲಿಸುವೆ,
ಜಂಗಮಕ್ಕೆ ರುಚಿಯ ಸಲಿಸುವೆ,
ಕಾಯಕ್ಕೆ ಶುದ್ಧಪ್ರಸಾದವ ಕೊಂಬೆ.
ಪ್ರಾಣಕ್ಕೆ ಸಿದ್ಧಪ್ರಸಾದವ ಕೊಂಬೆ.
ನಿಮ್ಮ ಪ್ರಸಾದದಿಂದ ಧನ್ಯಳಾದೆನು. ಕಾಣಾ ಚೆನ್ನಮಲ್ಲಿಕಾರ್ಜುನಯ್ಯಾ.
352
ಲಿಂಗಕ್ಕೆ ಶರಣೆಂದು ಪೂಜಿಸಿ ಅರ್ಪಿಸಬಹುದಲ್ಲದೆ,
ಜಂಗಮವ ಪೂಜಿಸಿ ಸರ್ವಸುಖವನರ್ಪಿಸಿ
ಶರಣೆನ್ನಬಾರದು ಎಲೆ ತಂದೆ.
ಆಡಬಹುದು ಪಾಡಬಹುದಲ್ಲದೆ,
ನುಡಿದಂತೆ ನಡೆಯಲು ಬಾರದು ಎಲೆ ತಂದೆ.
ಚೆನ್ನಮಲ್ಲಿಕಾರ್ಜುನದೇವಾ, ನಿಮ್ಮ ಶರಣರು ನುಡಿದಂತೆ ನಡೆಯಲು ಬಲ್ಲರು ಎಲೆ ತಂದೆ.
353
ಲಿಂಗದಿಂದುದಯಿಸಿ ಅಂಗವಿಡಿದಿಪ್ಪ ಪುರಾತನರ
ಇಂಗಿತವನೇನೆಂದು ಬೆಸಗೊಂಬಿರಯ್ಯಾ ?
ಅವರ ನಡೆಯೇ ಆಗಮ, ಅವರ ನುಡಿಯೇ ವೇದ ;
ಅವರ ಲೋಕದಮಾನವರೆಂದೆನ್ನಬಹುದೆ ಅಯ್ಯಾ ?
ಅದೆಂತೆಂದಡೆ, ಸಾಕ್ಷಿ
'ವೃಕ್ಷದ್ಭವತಿ ಬೀಜಂ ಹಿ ತದ್ವೃಕ್ಷೇ ಲೀಯತೇ ಪುನಃ
ರುದ್ರಲೋಕಂ ಪರಿತ್ಯಕ್ತ್ವಾ ಿವ ಶಿವಲೋಕೇ ಭವಿಷ್ಯತಿ || '
ಎಂದುದಾಗಿ,
ಅಂಕೋಲೆಯಬೀಜದಿಂದಾಯಿತ್ತು ವೃಕ್ಷವು ;
ಆ ವೃಕ್ಷ ಮರಳಿ ಆ ಬೀಜದೊಳಡಗಿತ್ತು.
ಆ ಪ್ರಕಾರದಲ್ಲಿ ಲಿಂಗದೊಳಗಿಂದ ಪುರಾತನರುದ್ಭವಿಸಿ,

Downloaded from: **http://www.lingayatreligion.com**

ಮರಳಿ ಆ ಪುರಾತನರು ಆ ಲಿಂಗದೊಳಗೆ
ಬೆರಸಿದರು ನೋಡಿರಯ್ಯಾ.
ಇಂತಪ್ಪ ಪುರಾತನರಿಗೆ ನಾನು ಶರಣೆಂದು ಹುಟ್ಟುಗೆಟ್ಟೆನಯ್ಯಾ
ಚೆನ್ನಮಲ್ಲಿಕಾರ್ಜುನಾ.
354
ಲಿಂಗಪೂಜಕಂಗೆ ಫಲಪದಂಗಳಲ್ಲದೆ ಲಿಂಗವಿಲ್ಲ ?
ಧರ್ಮತ್ಯಾಗಿಗೆ ನರಕವಲ್ಲದೆ ಲಿಂಗವಿಲ್ಲ
ವೈರಾಗ್ಯಸಂಪನ್ನಂಗೆ ಮುಕ್ತಿಯಲ್ಲದೆ ಲಿಂಗವಿಲ್ಲ ?
ಜ್ಞಾನಿಗೆ ಪರಿಭ್ರಮಣವಲ್ಲದೆ ಲಿಂಗವಿಲ್ಲ ?
ಇಂತಪ್ಪ ಭ್ರಾಂತನತಿಗಳದು ತನು ತಾನಾದ ಇರವೆಂತೆಂದಡೆ
ದ್ವೈತವಳಿದು ಅದ್ವೈತದಿಂದ ತನ್ನ ತಾನರಿದಡೆ ಚೆನ್ನಮಲ್ಲಿಕಾರ್ಜುನಲಿಂಗವು ತಾನೆ.
355
ಲಿಂಗವನು ಪುರಾತನರನು
ಅನ್ಯರ ಮನೆಯೊಳಯಿಕೆ ಹೋಗಿ ಹೊಗಳುವರು,
ತಮ್ಮದೊಂದುದರ ಕಾರಣ.
ಲಿಂಗವು ಪುರಾತನರು ಅಲ್ಲಿಗೆ ಬರಬಲ್ಲರೆ ?
ಅನ್ಯವನೆ ಮರೆದು ನಿಮ್ಮ ನೆನೆವರ ಎನಗೊಮ್ಮೆ ತೋರಾ ಚೆನ್ನಮಲ್ಲಿಕಾರ್ಜುನಾ.
356
ಲಿಂಗವೆನ್ನೆ ಲಿಂಗೈಕ್ಯವೆನ್ನೆ, ಸಂಗವೆನ್ನೆ ಸಮರಸವೆನ್ನೆ.
ಆಯಿತೆನ್ನೆ ಆಗದೆನ್ನೆ, ನೀನೆನ್ನೆ ನಾನೆನ್ನೆ.
ಚೆನ್ನಮಲ್ಲಿಕಾರ್ಜುನಯ್ಯಾ, ಲಿಂಗೈಕ್ಯವಾದ ಬಳಿಕ ಏನೂ ಎನ್ನೆ.

357
ಲಿಂಗಸ್ಥಲವ ಬಲ್ಲೆನೆಂಬ ಪರಬ್ರಹ್ಮಿಗಳು ನೀವು ಕೇಳಿರೆ,
ಲಿಂಗಸ್ಥಲ ನಿಃಶೂನ್ಯವಾಯಿತ್ತು ಸಂಗಮದೇವರಬೆನ್ನಿನಲ್ಲಿ.
ಜಂಗಮಸ್ಥಲ ಬಲ್ಲೆನೆಂಬ ಪರಬ್ರಹ್ಮಿಗಳು ನೀವು ಕೇಳಿರೆ,
ಜಂಗಮಸ್ಥಲ ನಿಃಶೂನ್ಯವಾಯಿತ್ತು ಪ್ರಭುದೇವರಬೆನ್ನಿನಲ್ಲಿ.
ಭಕ್ತಿಸ್ಥಲವ ಬಲ್ಲೆನೆಂಬ ಪರಬ್ರಹ್ಮಿಗಳು ನೀವು ಕೇಳಿರೆ,
ಭಕ್ತಿಸ್ಥಲ ನಿಃಶೂನ್ಯವಾಯಿತ್ತು ಸಂಗನಬಸವರಾಜದೇವರಬೆನ್ನಿನಲ್ಲಿ.
ಪ್ರಾಣಲಿಂಗಿಸ್ಥಲವ ಬಲ್ಲೆನೆಂಬ ಪರಬ್ರಹ್ಮಿಗಳು ನೀವು ಕೇಳಿರೆ,
ಪ್ರಾಣಲಿಂಗಿಸ್ಥಲ ನಿಃಶೂನ್ಯವಾಯಿತ್ತು ಸಿದ್ಧರಾಮೇಶ್ವರದೇವರಬೆನ್ನಿನಲ್ಲಿ.
ಪ್ರಸಾದಿಸ್ಥಲವ ಬಲ್ಲೆನೆಂಬ ಪರಬ್ರಹ್ಮಿಗಳು ನೀವು ಕೇಳಿರೆ,
ಪ್ರಸಾದಿಸ್ಥಲ ನಿಃಶೂನ್ಯವಾಯಿತ್ತು ಚಿಕ್ಕದಣ್ಣಾಯಕರಬೆನ್ನಿನಲ್ಲಿ.
ಐಕ್ಯಸ್ಥಲವ ಬಲ್ಲೆನೆಂಬ ಪರಬ್ರಹ್ಮಿಗಳು ನೀವು ಕೇಳಿರೆ,
ಐಕ್ಯಸ್ಥಲ ನಿಃಶೂನ್ಯವಾಯಿತ್ತು ಅಜಗಣ್ಣದೇವರಬೆನ್ನಿನಲ್ಲಿ.
ಇಂತೆನ್ನ ಷಟ್ಸ್ಥಲಂಗಳು ಒಬ್ಬೊಬ್ಬರ ಬೆನ್ನಿನಲ್ಲಿ ನಿಃಶೂನ್ಯವಾದವು ಎನಗಿನ್ನಾವ
ಕಿಂಚಿತುಸ್ಥಲವೂ ಇಲ್ಲವಯ್ಯಾ ಚೆನ್ನಮಲ್ಲಿಕಾರ್ಜುನಯ್ಯಾ
358
ಲಿಂಗಾಂಗಸಂಗಸಮರಸಸುಖದಲ್ಲಿ ಮನ ವೇದ್ಯವಾಯಿತ್ತು.

Downloaded from: **http://www.lingayatreligion.com**

ನಿಮ್ಮ ಶರಣರ ಅನುಭಾವಸಂಗದಿಂದ
ಎನ್ನ ತನು ಮನ ಪ್ರಾಣ ಪದಾರ್ಥವ
ಗುರುಲಿಂಗಜಂಗಮಕ್ಕಿತ್ತು,
ಶುದ್ಧಸಿದ್ಧಪ್ರಸಿದ್ಧಪ್ರಸಾದಿಯಾದೆನು.
ಆ ಮಹಾಪ್ರಸಾದದ ರೂಪು ರುಚಿ ತೃಪ್ತಿಯ
ಇಷ್ಟ ಪ್ರಾಣ ಭಾವಲಿಂಗದಲ್ಲಿ ಸಾವಧಾನದಿಂದರ್ಪಿಸಿ
ಮಹಾಘನಪ್ರಸಾದಿಯಾದೆನು.
ಇಂತೀ ಸರ್ವಾಚಾರಸಂಪತ್ತು ಎನ್ನ ತನುಮನ ವೇದ್ಯವಾಯಿತ್ತು.
ಇನ್ನೆಲ್ಲಿಯಯ್ಯಾ, ಎನಗೆ ನಿಮ್ಮಲ್ಲಿ ನಿರವಯವು ?
ಇನ್ನೆಲ್ಲಿಯಯ್ಯಾ ನಿಮ್ಮಲ್ಲಿ ಕೂಡುವುದು ?
ಪರಮಸುಖದ ಪರಿಣಾಮ ಮನಮೇರೆದಪ್ಪಿ
ನಾನು ನಿಜವನ್ನೈದುವ ಠಾವ ಹೇಳಾ ಚೆನ್ನಮಲ್ಲಿಕಾರ್ಜುನ ಪ್ರಭುವೆ ?
359
ಲಿಂಗಾನುಭಾವ ಸಿದ್ಧಿಯಾದ ಬಳಿಕ
ಮತ್ತೇಕಯ್ಯ ಕೂಟವೆಮಗೆ ಹೆರರೊಡನೆ ?
ಹೇಳಿರಯ್ಯಾ, ಎನ್ನದೇವ ಚೆನ್ನಮಲ್ಲಿಕಾರ್ಜುನನು ಕರುಣಿಸಿದ ಬಳಿಕ
360
ಲೇಸು ಹಾಸು, ನೋಟವಾಭರಣ, ಆಲಿಂಗನ ವಸ್ತು,
ಚುಂಬನವಾರೋಗಣೆ, ಲಲ್ಲೆವಾತು ತಾಂಬೂಲ,
ಲವಲವಿಕೆಯ ಅನುಲೇಪನವೆನಗೆ. ಚೆನ್ನಮಲ್ಲಿಕಾರ್ಜುನನ ಕೂಟ
ಪರಮಸುಖವವ್ವಾ.
361
ಲೋಕದ ಚೇಷ್ಟೆಗೆ ರವಿ ಬೀಜವಾದಂತೆ,
ಕರಣಂಗಳ ಚೇಷ್ಟೆಗೆ ಮನವೇ ಬೀಜ.
ಎನಗುಳ್ಳುದೊಂದು ಮನ.
ಆ ಮನ ನಿಮ್ಮಲ್ಲಿ ಸಿಲುಕಿದ ಬಳಿಕ ಎನಗೆ ಭವವುಂಟೆ ಚೆನ್ನಮಲ್ಲಿಕಾರ್ಜುನಾ ?
362
ಲೋಕವ ಹಿಡಿದು ಲೋಕದ ಸಂಗದಂತಿಪ್ಪೆ.
ಆಕಾರವಿಡಿದು ಸಾಕಾರಸಹಿತ ನಡೆವೆ.
ಹೊರಗೆ ಬಳಸಿ ಒಳಗೆ ಮರೆದಿಪ್ಪೆ.
ಬೆಂದನುಲಿಯಂತೆ ಹುರಿಗುಂದದಿಪ್ಪೆ.
ಎನ್ನ ದೇವ ಚೆನ್ನಮಲ್ಲಿಕಾರ್ಜುನಯ್ಯಾ, ಹತ್ತರೊಳಗೆ ಹನ್ನೊಂದಾಗಿ
ನೀರತಾವರೆಯಂತಿಪ್ಪೆ.
363
ವಟವೃಕ್ಷದೊಳಡಗಿದ ಸಮರಸ ಬೀಜ
ಬಿನ್ನಭಾವಕ್ಕೆ ಬಪ್ಪುದೆ ?
ಕಂಗಳ ನೋಟ, ಕರುವಿಟ್ಟ ಮನದ ಸೊಗಸು
ಅನಂಗನ ದಾಳಿಯ ಗೆಲಿದವು ಕಾಣಾ.
ಈ ಮರೀಚಿಕಾಜಲದೊಳಡಗಿದ ಪ್ರಾಣಿ

Downloaded from: **http://www.lingayatreligion.com**

ವ್ಯಾಧನ ಬಲೆಗೆ ಸಿಲುಕುವುದೆ ?
ನಿನ್ನ ಕೈವಶಕ್ಕೆ ಸಿಕ್ಕಿಹಳೆಂಬುದ ಮರೆಯಾ ಮರುಳೆ.
ಚೆನ್ನಮಲ್ಲಿಕಾರ್ಜುನನಲ್ಲದೆ ಪರಪುರುಷ ನಮಗಾಗದ ಮೋರೆ ನೋಡಣ್ಣಾ.
364
ಮನವೆಲ್ಲಾ ಕಲ್ಪತರು, ಗಿಡವೆಲ್ಲಾ ಮರುಜವಣಿ,
ಶಿಲೆಗಳೆಲ್ಲಾ ಪರುಷ, ನೆಲವೆಲ್ಲಾ ಅವಿಮುಕ್ತಿಕ್ಷೇತ್ರ.
ಜಲವೆಲ್ಲಾ ನಿರ್ಜರಾಮೃತ, ಮೃಗವೆಲ್ಲಾ ಪುರುಷಾಮೃಗ,
ಎಡಹುವ ಹರಳೆಲ್ಲಾ ಚಿಂತಾಮಣಿ.
ಚೆನ್ನಮಲ್ಲಿಕಾರ್ಜುನಯ್ಯನ ನಚ್ಚಿನ ಗಿರಿಯ ಸುತ್ತಿ, ನೋಡುತ್ತ ಬಂದು ಕದಳಿಯ
ಬನವ ಕಂಡೆ ನಾನು.
365
ವನವೆಲ್ಲಾ ನೀನೆ, ವನದೊಳಗಣ ದೇವತರುವೆಲ್ಲಾ ನೀನೆ,
ತರುವಿನೊಳಗಾಡುವ ಖಗಮೃಗವೆಲ್ಲಾ ನೀನೆ.
ಚೆನ್ನಮಲ್ಲಿಕಾರ್ಜುನಾ, ಸರ್ವಭರಿತನಾಗಿ ಎನಗೇಕೆ ಮುಖದೋರೆ ?
366
ವಾನರಂಗಳಿಗೆ ಭೈತ್ರ ತಪ್ಪಿಬಂದಡೆ
ಮುತ್ತು ಮಾಣಿಕ್ಯ ನವರತ್ನದ ಪೆಟ್ಟಿಗೆಗಳು ಸಾರಿದವು.
ಸಾರಿದಡೆ ಆ ವಾನರಂಗಳು ಬಲ್ಲವೆ ಮುತ್ತಿನ ರಕ್ಷೆಯ ?
ನವರತ್ನದ ಪೆಟ್ಟಿಗೆಯ ತೆರದು ನೋಡಿ,
ಕೆಯ್ಕೊಂಡು, ವಾನರಂಗಳು ಮೆದ್ದು ನೋಡಿ,
ಹಣ್ಣಲ್ಲವೆಂದು ಬಿಟ್ಟು ಕಳದವು.
ಲೋಕದೊಳಗೆ ಶರಣ ಸುಳಿದಡೆ,
ಆ ಶರಣನ ನಡೆ ನುಡಿ ಚಾರಿತ್ರವ ಕರ್ಮಿಗಳೆತ್ತ ಬಲ್ಲರು ?
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣರ ಇರವನು ನಿಮ್ಮ ಶರಣರು ಬಲ್ಲರಲ್ಲದೆ ಆ ವಾನರನಂತಹ
ಮನುಜರೆತ್ತ ಬಲ್ಲರು.
367
ವಿರಕ್ತಿ ವಿರಕ್ತಿಯೆಂಬವರು
ವಿರಕ್ತಿಯ ಪರಿಯೆಂತುಟು ಹೇಳಿರಯ್ಯಾ ?
ಕಟ್ಟಿದ್ದ ಲಿಂಗವ ಕೈಯಲ್ಲಿ ಹಿಡಿದು
ಬತ್ತಲೆಯಿರ್ದಡೆ ವಿರಕ್ತನೆ ?
ಉಟ್ಟುದ ತೊರದ ಮತ್ತೆ
ಕಟ್ಟಿದ ಲಿಂಗವ ಕೈಯಲ್ಲಿ ಹಿಡಿಯಲೇಬೇಕು.
ಉಟ್ಟುದ ತೊರೆಯದೆ
ಕಟ್ಟಿದ ಲಿಂಗವ ಕೈಯಲ್ಲಿ ಹಿಡಿದ ಭ್ರಷ್ಟರನೇನೆಂಬೆ ಚೆನ್ನಮಲ್ಲಿಕಾರ್ಜುನಾ ?
368
ವಿರಕ್ತಿ ವಿರಕ್ತಿ ಎಂಬರು ವಿರಕ್ತಿಯ ಪರಿ ಎಂತುಂಟು ಹೇಳಿರಯ್ಯಾ.
ಕಟ್ಟಿದ ಲಿಂಗವ ಕೈಯಲ್ಲಿ ಹಿಡಿದಿದ್ದರೆ ವಿರಕ್ತನೆ ?
ಹುಟ್ಟು ಕೆತ್ತುವ ಡೊಂಬನಂತೆ

Downloaded from: **http://www.lingayatreligion.com**

ಬಿಟ್ಟಮಂಡೆಯ ಕೇಶವ ನುಣ್ಣಿಸಿ ಬಣ್ಣಿಸಿ,
ಎಣ್ಣೆಯ ಗಂಟ ಹಾಕಿದಡೆ ವಿರಕ್ತನೆ ?
ಕಟ್ಟುಹರಿದ ಪಂಜಿನಂತೆ,
ಬಿಟ್ಟಮಂಡೆಯ ಕಟ್ಟದಿರ್ದಡೆ ವಿರಕ್ತನೆ ?
ಹರದನಂತೆ ಹೇಸಿಯಾಗಿರ್ದಡೆ ವಿರಕ್ತನೆ ?
ಮೂಗನಂತೆ ಮಾತನಾಡದಿರ್ದಡೆ ವಿರಕ್ತನೆ ?
ಹೊನ್ನು ಹೆಣ್ಣು ಮಣ್ಣು ಬಿಟ್ಟು
ಅಡವಿಯಾರಣ್ಯದಲ್ಲಿರ್ದಡೆ ವಿರಕ್ತನೆ ?ಅಲ್ಲ.
ವಿರಕ್ತನ ಪರಿಯೆಂತೆಂದೊಡೆ
ಒಡಲ ಹುಡಿಗುಟ್ಟಿ, ಮೃಡನೊಳೆಡದೆರಹಿಲ್ಲದಿರಬಲ್ಲಡೆ ವಿರಕ್ತನಪ್ಪನು.
ಅಲ್ಲದಿರ್ದಡೆ ಮೈಲಾರಿ ಮಲ್ಲಿ ಗೊರವಿಯಲ್ಲವೆ ಚೆನ್ನಮಲ್ಲಿಕಾರ್ಜುನಾ ?
369
ವಿರಕ್ತಿಯೇ ಅವಿರಕ್ತಿ, ವಿರಕ್ತನೆನ್ನದಿರಣ್ಣಾ.
ನೋಟದ ಕರುಳ ಕೊಯ್ಯದನ್ನಕ್ಕರ,
ಕ್ರೀಯದ ಕರಬೋನಗಳೊಡೆಯದನ್ನಕ್ಕರ,
ಅಷ್ಟಮದಾದಿಗಳೆಂಬವ ಹೊಟ್ಟುಹುರಿಯದನ್ನಕ್ಕರ,
ಬೇಕುಬೇಡಾಯೆಂದು ಪರಿವ
ಸರ್ವಸಂದೇಹವ ಹೂಳದನ್ನಕ್ಕರ ವಿರಕ್ತ ವಿರಕ್ತನೆನ್ನದಿರಣ್ಣಾ.
ಶ್ರೀಶೈಲಚೆನ್ನಮಲ್ಲಿಕಾರ್ಜುನದೇವನೊಬ್ಬನೆ ವಿರಕ್ತ ಕಾಣಿರಣ್ಣಾ.
370
ವಿಷಯದ ಸುಖ ವಿಷವೆಂದರಿಯದ ಮರುಳೆ,
ವಿಷಯಕ್ಕೆ ಅಂಗವಿಸದಿರಾ.
ವಿಷಯದಿಂದ ಕೆಡನೆ ರಾವಣನು
ವಿಷಯದಿಂದ ಕೆಡನೆ ದೇವೇಂದ್ರನು ?
ವಿಷಯದಿಂದಾರು ಕೆಡರು ಮರುಳೆ ?
ವಿಷಯ ನಿರ್ವಿಷಯವಾಯಿತ್ತೆನಗೆ ನಿನ್ನಲ್ಲಿ.
ಚೆನ್ನಮಲ್ಲಿಕಾರ್ಜುನಂಗೆ ಒಲಿದವಳ ನೀನಪ್ಪಿಹೆನೆಂದಡೆ ಒಣಗಿದ ಮರನಪ್ಪುವಂತೆ
ಕಾಣಾ
371
ವೃಷಭನ ಹಿಂದೆ ಪಶುವಾನು ಬಂದೆನು ;
ನಂಬಿ ನಚ್ಚಿ ಪಶುವಾನುಬಂದೆನು.
ಸಾಕಿ ಸಲಹಿಹನೆಂದು ಸಲೆ ನಚ್ಚಿ ಬಂದೆನು.
ಒಲಿದಹ ಒಲಿದಹನೆಂದು ಬಳಿಯಲ್ಲಿ ಬಂದೆನು.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ನಂಬಿ ಬಂದ ಹೆಂಗೂಸ ಹಿಂದೊಬ್ಬರೆಳದೊಯ್ದರೆ ಎಂತು ಸೈರಿಸಿದೆ ಹೇಳಾ,
ಎನ್ನ ದೇವರದೇವಾ ?
372
ವೇದ ಶಾಸ್ತ್ರ ಆಗಮ ಪುರಾಣಗಳೆಲ್ಲವು
ಕೊಟ್ಟಣವ ಕುಟ್ಟಿದ ನುಚ್ಚು ತೌಡು ಕಾಣಿಭೋ.

Downloaded from: **http://www.lingayatreligion.com**

ಇವ ಕುಟ್ಟಲೇಕೆ ಕುಸುಕಲೇಕೆ ?
ಅತ್ತಲಿತ್ತ ಹರಿವ ಮನದ ಶಿರವನರಿದಡೆ ಬಚ್ಚಬರಿಯ ಬಯಲು
ಚೆನ್ನಮಲ್ಲಿಕಾರ್ಜುನಾ.
373
ಶರಣರ ಮನ ನೋಯ ನುಡಿದೆನಾಗಿ,
ಹರಜನ್ಮವಳಿದು ನರಜನ್ಮಕ್ಕೆ ಬಂದೆನು.
ಹರನಟ್ಟಿದ ಬೆಸನ ಶಿರದೊಳಗಾಂತೊಡೆ,
ಗಿರಿಗಳ ಭಾರವೆನಗಾದುದಯ್ಯ.
ಚೆನ್ನಮಲ್ಲಿಕಾರ್ಜುನನ ಧರ್ಮದಿಂದ
ಸಂಸಾರ ಕರ್ಮದ ಹೊರೆಯನಿಳುಹಿ, ನಡುದೊರೆಯ ಹಾಯಿದು ಹೋದೆನು.
374
ಶಿವಂಗೆ ತಪ್ಪಿದ ಕಾಲ ಭಸ್ಮವಾದುದನರಿಯಾ ?
ಶಿವಂಗೆ ತಪ್ಪಿದ ಕಾಮನುರಿದುದನರಿಯಾ ?
ಶಿವಂಗೆ ತಪ್ಪಿದ ಬ್ರಹ್ಮನ ಶಿರ ಹೋದುದನರಿಯಾ ?
ಚೆನ್ನಮಲ್ಲಿಕಾರ್ಜುನನ ಪಾದಕ್ಕೆ ತಪ್ಪಿದಡೆ, ಭವಘೋರನರಕವೆಂದರಿಯಾ, ಮರುಳೆ ?
375
ಶಿವಗಣಂಗಳ ಮನೆಯಂಗಳ
ವಾರಣಾಸಿಯೆಂಬುದು ಹುಸಿಯೆ,
ಪುರಾತನರ ಮನೆಯಂಗಳದಲ್ಲಿ
ಅಷ್ಟಾಷಷ್ಟಿ ತೀರ್ಥಂಗಳು ನೆಲೆಸಿಪ್ಪವಾಗಿ.
ಅದೆಂತೆಂದಡೆ ಅದಕ್ಕೆ ಆಗಮ ಸಾಕ್ಷಿ
'ಕೇದಾರಸ್ಯೋದಕೆ ಪೀತೇ ವಾರಣಾಸ್ಯಾ ಮೃತೇ ಸತೀ'
ಶ್ರೀಶೈಲಶಿಖರೇ ದೃಷ್ಟೇ ಪುನರ್ಜನ್ಮ ನ ವಿದ್ಯತೇ ||ಅಳ
ಎಂಬ ಶಬ್ದಕ್ಕಧಿಕವು.
ಸುತ್ತಿಬರಲು ಶ್ರೀಶೈಲ, ಕೆಲಬಲದಲ್ಲಿ ಕೇದಾರ,
ಅಲ್ಲಿಂದ ಹೊರಗೆ ವಾರಣಾಸಿ.
ವಿರಕ್ತಿ ಬೆದೆಯಾಗಿ, ಭಕ್ತಿ ಮೊಳೆಯಾಗೆ,
ಎನ್ನ ದೇವ ಚೆನ್ನಮಲ್ಲಿಕಾರ್ಜುನಾ
ನಿಮ್ಮ ಭಕ್ತರ ಮನೆಯಂಗಳ ಪ್ರಯಾಗದಿಂದ ಗುರುಗಂಜಿಯಧಿಕ ನೋಡಾ ?
376
ಶಿವನು ತಾನೆ ಗುರುವಾಗಿ ಬಂದು
ಮಹಾಘನಲಿಂಗವ ವೇದಿಸಿಕೊಟ್ಟ ಪರಿಯೆಂತೆಂದೊಡೆ ತ
ಆತ್ಮಗೂಡಿ ಪಂಚಭೂತಂಗಳನೆ ಷಡಂಗವೆಂದೆನಿಸಿ,
ಆ ಅಂಗಕ್ಕೆ ಕಲೆಗಳನೆ ಷಡುಶಕ್ತಿಗಳೆನಿಸಿ,
ಆ ಶಕ್ತಿಗಳಿಗೆ ಷಡ್ವಿಧ ಭಕ್ತಿಯನಳವಡಿಸಿ,
ಆ ಭಕ್ತಿಗಳಿಗೆ ಭಾವಜ್ಞಾನಮನಬುದ್ಧಿಚಿತ್ತ
ಅಹಂಕಾರಗಳನೆ ಹಸ್ತಂಗಳೆಂದೆನಿಸಿ,
ಆ ಹಸ್ತಂಗಳಿಗೆ ಮಹಾಲಿಂಗವಾದಿಯಾದ

Downloaded from: **http://www.lingayatreligion.com**

ಪಂಚಲಿಂಗಂಗಳನೆ ಷಡ್ವಿಧ ಲಿಂಗಂಗಳೆಂದೆನಿಸಿ,
ಆ ಮಂತ್ರಲಿಂಗಂಗಳಿಗೆ ಹೃದಯಗೂಡಿ
ಪಂಚೇಂದ್ರಿಯಂಗಳನೆ ಮುಖಂಗಳೆಂದೆನಿಸಿ,
ಆ ಮುಖಂಗಳಿಗೆ ತನ್ಮಾತ್ರಂಗಳನೆ ದ್ರವ್ಯ ಪದಾರ್ಥಗಳೆಂದೆನಿಸಿ,
ಆ ದ್ರವ್ಯಪದಾರ್ಥಂಗಳು ಆಯಾ ಮುಖದ ಲಿಂಗಗಳಲ್ಲಿ
ನಿರಂತರ ಸಾವಧಾನದಿಂದ ಅರ್ಪಿತವಾಗಿ
ಬೀಗಲೊಡನೆ ಅಂಗಸ್ಥಲಂಗಳಡಗಿ,
ತ್ರಿವಿಧ ಲಿಂಗಾಂಗ ಸ್ಥಲಂಗಳುಳಿದು,
ಕಾಯಗುರು, ಪ್ರಾಣಲಿಂಗ, ಜ್ಞಾನ ಜಂಗಮ,
ಗುರುವಿನಲ್ಲಿ ಶುದ್ಧ ಪ್ರಸಾದ
ಲಿಂಗದಲ್ಲಿ ಸಿದ್ಧಪ್ರಸಾದ
ಜಂಗಮದಲ್ಲಿ ಪ್ರಸಿದ್ಧ ಪ್ರಸಾದ
ಇಂತೀ ತ್ರಿವಿಧ ಪ್ರಸಾದ ಏಕಾರ್ಥವಾಗಿ
ಮಹಾಘನ ಪರಿಪೂರ್ಣ ಪ್ರಸಾದವಳವಟ್ಟ ಶರಣ
ಜ್ಞಾನಿಯಲ್ಲ, ಅಜ್ಞಾನಿ ಮುನ್ನವೆ ಅಲ್ಲ,
ಶೂನ್ಯನಲ್ಲ, ನಿಶ್ಶೂನ್ಯನಲ್ಲ, ದ್ವೈತಿಯಲ್ಲ, ಅದ್ವೈತಿಯಲ್ಲ.
ಇಂತೀ ಉಭಯಾತ್ಮಕ ತಾನೆಯಾಗಿ
ಇದು ಕಾರಣ, ಇದರಾಗುಹೋಗು ಸಕಲಸಂಬಂಧವ ಚೆನ್ನಮಲ್ಲಿಕಾರ್ಜುನದೇವಾ,
ನಿಮ್ಮ ಶರಣರೆ ಬಲ್ಲರು.
377
ಶಿವಭಕ್ತರ ರೋಮನೊಂದಡೆ, ಶಿವನು ನೋವ ನೋಡಾ.
ಶಿವಭಕ್ತರು ಪರಿಣಾಮಿಸಿದಡೆ, ಶಿವನು ಪರಿಣಾಮಿಸುವ ನೋಡಾ.
ಭಕ್ತದೇಹಿಕದೇವನೆಂದು ಶ್ರುತಿ ಹೊಗಳುವ ಕಾರಣ,
ಶಿವಭಕ್ತರ ಲೇಸು ಹೊಲ್ಲೆಹ ಶಿವನ ಮುಟ್ಟುವುದು ನೋಡಾ.
ತಾಯಿನೊಂದಡೆ ಒಡಲಶಿಶು ನೋವತೆರನಂತೆ, ಭಕ್ತರು ನೊಂದಡೆ ತಾ ನೋವ
ನೋಡಾ ಚೆನ್ನಮಲ್ಲಿಕಾರ್ಜುನ.
378
ಶಿವ ಶಿವಾ, ಆದಿ ಅನಾದಿಗಳೆಂಬೆರಡಿಲ್ಲದ ನಿರವಯ ಶಿವ,
ನಿಮ್ಮ ನಿಜವನಾರಯ್ಯಾ ಬಲ್ಲವರು
ವೇದಂಗಳಿಗಭೇದ್ಯನು ಶಾಸ್ತ್ರಂಗಳಿಗಸಾಧ್ಯನು
ಪುರಾಣಕ್ಕೆ ಆಗಮ್ಯನು ಆಗಮಕ್ಕೆ ಅಗೋಚರನು ;
ತರ್ಕಕ್ಕೆ ಅತರ್ಕ್ಯನು
ವಾಙ್ಮನಾತೀತವಾಗಿಪ್ಪ ಪರಶಿವಲಿಂಗವನು
ಕೆಲಂಬರು ಸಕಲನೆಂಬರು ; ಕೆಲಂಬರು ನಿಃಕಲನೆಂಬರು
ಕೆಲಂಬರು ಸೂಕ್ಷ್ಮನೆಂಬರು ; ಕೆಲಂಬರು ಸ್ಥೂಲನೆಂಬರು
ಈ ಬಗೆಯ ಭಾವದಿಂದ, ಹರಿ, ಬ್ರಹ್ಮ, ಇಂದ್ರ, ಚಂದ್ರ, ರವಿ,
ಕಾಲ, ಕಾಮ, ದಕ್ಷ, ದೇವ, ದಾನವ, ಮಾನವರೆಲ್ಲರೂ
ಕಾಣಲರಿಯದೆ ಅಜ್ಞಾನದಿಂದ ಭವಭಾರಿಗಳಾದರು.
ಈ ಪರಿಯಲ್ಲಿ ಬಯಲಾಗಿ ಹೋಗಬಾರದೆಂದು ನಮ್ಮ ಬಸವಣ್ಣನು

Downloaded from: **http://www.lingayatreligion.com**

ಜಗದ್ಹಿತಾರ್ಥವಾಗಿ ಮರ್ತ್ಯಕ್ಕೆ ಅವತರಿಸಿ
ವೀರಶೈವ ಮಾರ್ಗವನರುಪುವುದಕ್ಕೆ
ಬಾವನ್ನ ವಿವರವನೊಳಕೊಂಡು ಚರಿಸಿದನದೆಂತೆಂದಡೆ
ಗುರುಕಾರುಣ್ಯವೇದ್ಯನು, ವಿಭೂತಿ ರುದ್ರಾಕ್ಷಿಧಾರಕನು,
ಪಂಚಾಕ್ಷರೀ ಭಾಷಾಸಮೇತನು, ಲಿಂಗಾಂಗ ಸಂಬಂಧಿ,
ನಿತ್ಯ ಲಿಂಗಾರ್ಚಕನು, ಅರ್ಪಿತದಲ್ಲಿ ಅವಧಾನಿ,
ಪಾದೋದಕಪ್ರಸಾದಗ್ರಾಹಕನು, ಗುರುಭಕ್ತಿಸಂಪನ್ನನು,
ಏಕಲಿಂಗನಿಷ್ಠಾಪರನು, ಚರಲಿಂಗಲೋಲುಪ್ತನು,
ಶರಣಸಂಗಮೈಶ್ವರ್ಯನು, ತ್ರಿವಿಧಕ್ಕಾಯತನು,
ತ್ರಿಕರಣ ಶುದ್ಧನು, ತ್ರಿವಿಧ ಲಿಂಗಾಂಗಸಂಬಂಧಿ,
ಅನ್ಯದೈವ ಸ್ಮರಣೆಯ ಹೊದ್ದ, ಭವಿಸಂಗವ ಮಾಡ,
ಭವಿಪಾಕವ ಕೊಳ್ಳ, ಪರಸತಿಯ ಬೆರಸ,
ಪರಧನವನೊಲ್ಲ, ಪರನಿಂದೆಯನಾಡ, ಅನೃತವ ನುಡಿಯ,
ಹಿಂಸೆಯ ಮಾಡ, ತಾಮಸಭಕ್ತಸಂಗವ ಮಾಡ,
ಗುರುಲಿಂಗಜಂಗಮಕ್ಕೆ ಅರ್ಥಪ್ರಾಣಾಭಿಮಾನ
ಮುಂತಾದವೆಲ್ಲವ ಸಮರ್ಪಿಸಿ,
ಪ್ರಸಾದ ಮುಂತಾಗಿ ಭೋಗಿಸುವ, ಜಂಗಮನಿಂದೆಯ ಸೈರಿಸ,
ಪ್ರಸಾದನಿಂದೆಯ ಕೇಳ, ಅನ್ಯರನಾಸೆಗೆಯ್ಯ,
ಪಾತ್ರಪಾತ್ರವನರಿದೀವ, ಚತುರ್ವಿಧಪದವಿಯ ಹಾರ,
ಅರಿಷಡ್ವರ್ಗಕ್ಕೆ ಅಳುಕ, ಕುಲಾದಿಮದಂಗಳ ಬಗೆಗೊಳ್ಳ,
ದ್ವೈತಾದ್ವೈತವ ನುಡಿವನಲ್ಲ, ಸಂಕಲ್ಪವಿಕಲ್ಪವ ಮಾಡುವನಲ್ಲ,
ಕಾಲೋಚಿತವ ಬಲ್ಲ, ಕ್ರಮಯುಕ್ತನಾಗಿ ಷಟ್ಸ್ಥಲಭರಿತ,
ಸರ್ವಾಂಗಲಿಂಗಿ, ದಾಸೋಹಸಂಪನ್ನ.
ಇಂತೀ ಐವತ್ತೆರಡು ವಿಧದಲ್ಲಿ ನಿಪುಣನಾಗಿ
ಮೆರೆದ ನಮ್ಮ ಬಸವಣ್ಣನು.
ಆ ಬಸವಣ್ಣನ ಶ್ರೀಪಾದಕ್ಕೆ ನಾನು ಅಹೋರಾತ್ರಿಯಲ್ಲಿ ನಮೋ ನಮೋ ಎಂದು
ಬದುಕಿದೆನು ಕಾಣಾ, ಚೆನ್ನಮಲ್ಲಿಕಾರ್ಜುನಾ
379
ಶಿವಶಿವಾ, ಶ್ರೀಗುರುಲಿಂಗಯ್ಯದೇವರು ತನ್ನ ಕರಸ್ಥಲವ ತಂದು
ಎನ್ನ ಶಿರಸ್ಥಲದ ಮೇಲಿರಿಸಿದ ಬಳಿಕ
ಎನ್ನ ಭವಂ ನಾಸ್ತಿಯಾಯಿತ್ತು.
ಎನ್ನ ತನ್ನಂತೆ ಮಾಡಿದ, ತನ್ನ ಎನ್ನಂತೆ ಮಾಡಿದ ;
ಎನ್ನಲ್ಲಿ ತನ್ನಲ್ಲಿ ತೆರಹಿಲ್ಲದೆ ಮನಕ್ಕೆ ತೋರಿದ.
ತನ್ನ ಕರಸ್ಥಲದೊಳಗಿದ್ದ ಶಿವಲಿಂಗದೇವರನು
ಎನ್ನ ಕರಸ್ಥಲದೊಳಗೆ ಮೂರ್ತಿಗೊಳಿಸಿದ.
ಎನ್ನ ಕರಸ್ಥಲದೊಳಗಿದ್ದ ಶಿವಲಿಂಗದೇವರನು
ಎನ್ನ ತನುವಿನ ಮೇಲೆ ಮೂರ್ತಿಗೊಳಿಸಿದ.
ಎನ್ನ ತನುವಿನ ಮೇಲಣ ಶಿವಲಿಂಗದೇವರನು
ಎನ್ನ ಮನವೆಂಬ ಮಂಟಪದೊಳಗೆ ಮೂರ್ತಿಗೊಳಿಸದ.

Downloaded from: **http://www.lingayatreligion.com**

ಎನ್ನ ಮನವೆಂಬ ಮಂಟಪದೊಳಗೆ ಮೂರ್ತಿಗೊಳಿಸಿದ ಶಿವಲಿಂಗದೇವರನು
ಎನ್ನ ಜ್ಞಾನವೆಂಬ ಮಂಟಪದೊಳಗೆ ಮೂರ್ತಿಗೊಳಿಸಿದ.
ಎನ್ನ ಜ್ಞಾನವೆಂಬ ಮಂಟಪದೊಳಗಣ ಶಿವಲಿಂಗದೇವರನು
ಮಹಾಘನದಲ್ಲಿ ಮೂರ್ತಿಗೊಳಿಸಿದ.
ಕಬ್ಬಿನ ತನಿರಸವ ಕೊಂಡು ಸಿಪ್ಪೆಯ ಬಿಡುವಂತೆ,
ಮನದ ಮೇಲಣ ಶಿವಲಿಂಗದೇವರಿರಲು
ತನುವಿನ ಮೇಲಣ ಶಿವಲಿಂಗದೇವರು ಹೋಯಿತ್ತೆಂದು
ಆತ್ಮಘಾತವ ಮಾಡಿಕೊಂಬ ಬ್ರಹ್ಮೇತಿ ಸೂನೆಗಾರರ ನೋಡಯ್ಯಾ,
ಚೆನ್ನಮಲ್ಲಿಕಾರ್ಜುನಾ.
380
ಶಿವಶಿವಾ, ಕರ್ಮಕ್ಷಯವಾದಲ್ಲಿ
ಕರ್ಮದ ಮಾತ ಕೇಳಿಸಿದೆಯಯ್ಯಾ ?
ಪಾಪಲೇಪವಳಿದಲ್ಲಿ
ಪಾಪದ ಮಾತ ಕೇಳಿಸಿದೆಯಲ್ಲಯ್ಯಾ ?
ಶಿವಶಿವಾ, ಭವದ ಬಟ್ಟೆಯನಗಲಿದಲ್ಲಿ ?
ಬಂಧನದ ನುಡಿಯನಾಡಿಸಿದೆಯಲ್ಲಯ್ಯಾ ?
ಚೆನ್ನಮಲ್ಲಿಕಾರ್ಜುನಯ್ಯಾ,
ನೀನೆ ಗಂಡನೆಂದಿದ್ದಲ್ಲಿ, ಪರಪುರುಷರ ಮಾತನಾಡಿಸಿದೆಯಲ್ಲಯ್ಯಾ ?
381
ಸಂಗದಿಂದಲ್ಲದೆ ಅಗ್ನಿ ಹುಟ್ಟದು,
ಸಂಗದಿಂದಲ್ಲದೆ ಬೀಜ ಮೊಳೆದೋರದು,
ಸಂಗದಿಂದಲ್ಲದೆ ಹೂವಾಗದು.
ಸಂಗದಿಂದಲ್ಲದೆ ಸರ್ವಸುಖದೋರದು.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಮಹಾನುಭಾವಿಗಳ ಸಂಗದಿಂದಲಾನು ಪರಮಸುಖಿಯಾದೆನಯ್ಯಾ.
382
ಸಂಗನಬಸವಣ್ಣನ ಪಾದವ ಕಂಡೆನಾಗಿ
ಎನ್ನ ಅಂಗ ನಾಸ್ತಿಯಾಯಿತ್ತು.
ಚೆನ್ನಬಸವಣ್ಣನ ಪಾದವ ಕಂಡೆನಾಗಿ
ಎನ್ನ ಪ್ರಾಣ ಬಯಲಾಯಿತ್ತು.
ಪ್ರಭುವೆ, ನಿಮ್ಮ ಶ್ರೀಚರಣಕ್ಕೆ ಶರಣೆಂದೆನಾಗಿ
ಎನಗೆ ಅರಿವು ಸ್ವಾಯತವಾಯಿತ್ತು.
ಚೆನ್ನಮಲ್ಲಿಕಾರ್ಜುನಯ್ಯಾ,
ನಿಮ್ಮ ಶರಣರ ಕರುಣವ ಪಡೆದೆನಾಗಿ ಎನಗಾವ ಜಂಜಡವೂ ಇಲ್ಲವಯ್ಯಾ ಪ್ರಭುವೆ.
383
ಸಂಸಾರವ ನಿರ್ವಾಣವ ಮಾಡಿ,
ಮನವ ವಜ್ರತುರಗವ ಮಾಡಿ,
ಜೀವವ ರಾವುತನ ಮಾಡಿ,
ಮೇಲಕ್ಕೆ ಉಪ್ಪರಿಸಲೀಯದೆ,

Downloaded from: **http://www.lingayatreligion.com**

ಮುಂದಕ್ಕೆ ಮುಗ್ಗರಿಸಲೀಯದೆ
ಈ ವಾರುವನ ಹಿಂದಕ್ಕೆ ಬರಸೆಳೆದು ನಿಲಿಸಿ,
ಮೋಹರವಾಗಿದ್ದ ದಳದ ಮೇಲೆ,
ಅಟ್ಟಿ ಮುಟ್ಟಿ ತಿವಿದು ಹೊಯಿದು ನಿಲಿಸಲಎರಿಯದೆ,
ಧವಳಬಣ್ಣದ ಕೆಸರುಗಲ್ಲ ಮೆಟ್ಟಿ
ತೊತ್ತಳದುಳಿವುತ್ತಲು ಇದಾರಯ್ಯಾ.
ಅಂಗಡಿಯ ರಾಜಬೀದಿಯೊಳಗೆ ಬಿದ್ದ ರತ್ನಸೆಟ್ಟಿ
ಈ ಥಳಥಳನೆ ಹೊಳವ ಪ್ರಜ್ವಲಿತವ ಕಾಣದೆ
ಹಳಹಳನೆ ಹಳಸುತ್ತೈದಾರೆ ಅಯ್ಯಾ.
ಆಧಾರಸ್ಥಾನದ ಇಂಗಳವನಿಕ್ಕಿ
ವಾಯು ಪವನದಿಂದ ನಿಲಿಸಲು,
ಆ ಅಗ್ನಿಯ ಸೆಕೆ ಹೋಗಿ ಬ್ರಹ್ಮರಂಧ್ರವ ಮುಟ್ಟಲು,
ಅಲ್ಲಿರ್ದ ಅಮೃತದ ಕೊಡನೊಡೆದು
ಕೆಳಗಣ ಹೃದಯಸ್ಥಾನದ ಮೇಲೆ ಬೀಳಲ್ಕೆ,
ಮರಸಿದ ಮಾಣಿಕ್ಯದ ಬೆಳಗು ಕಾಣಬಹುದು.
ಇದನಾರಯ್ಯಾ ಬಲ್ಲರು ತ ಹಮ್ಮಳಿದ ಶರಣರ ಮೇಲೆ ?
ಇಹಪರವ ಬಲ್ಲ ಶರಣ, ಪಂಚೇಂದ್ರಿಯದ ಇಂಗಿತವ ಬಲ್ಲ ಶರಣ.
ಒಡಲ ಬಿಟ್ಟ ಶರಣನಲ್ಲದೆ ಉಳಿದ ಪ್ರಾಣಘಾತಕ ಪಾತಕರಿವರೆತ್ತಲು,
ಶ್ರೀಶೈಲ ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಶರಣ ಬಸವಣ್ಣಂಗಲ್ಲದೆ ?
384
ಸಂಸಾರವೆಂಬ ಹಗೆಯಯ್ಯಾ ಎನ್ನ ತಂದೆ.
ಎನ್ನ ವಂಶವಂಶದಪ್ಪದೆ ಅರಸಿಕೊಂಡು ಬರುತ್ತಿದೆಯಯ್ಯಾ.
ಎನ್ನುವನರಸಿಯರಸಿ ಹಿಡಿದು ಕೊಲುತ್ತಿದೆಯಯ್ಯಾ.
ನಿನ್ನ ನಾ ಮರೆಹೊಕ್ಕೆ ಕಾಯಯ್ಯಾ. ಎನ್ನ ಬಿನ್ನಪವನವಧರಿಸಾ,
ಚೆನ್ನಮಲ್ಲಿಕಾರ್ಜುನಾ.
385
ಸಂಸಾರಸಂಗದಲ್ಲಿರ್ದೆ ನೋಡಾ ನಾನು.
ಸಂಸಾರ ನಿಸ್ಸಾರವೆಂದು ತೋರಿದನೆನಗೆ ಶ್ರೀಗುರು.
ಅಂಗವಿಕಾರದ ಸಂಗವ ನಿಲಿಸಿ,
ಲಿಂಗವನಂಗದ ಮೇಲೆ ಸ್ಥಾಪ್ಯವ ಮಾಡಿದನೆನ್ನ ಗುರು,
ಹಿಂದಣ ಜನ್ಮವ ತೊಡೆದು, ಮುಂದಣ ಪ ಥವ ತೋರಿದನೆನ್ನ ತಂದೆ.
ಚೆನ್ನಮಲ್ಲಿಕಾರ್ಜುನನ ನಿಜವ ತೋರಿದನೆನ್ನ ಗುರು.
386
ಸಜ್ಜನೆಯಾಗಿ ಮಜ್ಜನಕ್ಕೆರೆವೆ,
ಶಾಂತಳಾಗಿ ಪೂಜೆಮಾಡುವೆ,
ಸಮರತಿಯಿಂದ ನಿಮ್ಮ ಹಾಡುವೆ,
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮನಗಲದ ಪೂಜೆ ಅನುವಾಯಿತ್ತೆನಗೆ.

387

Downloaded from: **http://www.lingayatreligion.com**

ಸಟೆದಿಟವೆಂಬ ಎರಡುವಿಡಿದು ನಡೆವುದೀ ಲೋಕವೆಲ್ಲವು.
ಸಟೆದಿಟವೆಂಬ ಎರಡುವಿಡಿದು ನುಡಿವುದೀ ಲೋಕವೆಲ್ಲವು.
ಸಟೆದಿಟವೆಂಬ ಎರಡುವಿಡಿದು ನಡೆವನೆ ಶರಣನು ?
ಗುರುಲಿಂಗಜಂಗಮದಲ್ಲಿ ಸಟೆಯ ಬಳಸಿದಡೆ
ಅವನು ತ್ರಿವಿಧಕ್ಕೆ ದ್ರೋಹಿ, ಅಘೋರ ನರಕಿ.
ಉಂಬುದೆಲ್ಲ ಕಿಲ್ಬಿಷ, ತಿಂಬುದೆಲ್ಲ ಅಡಗು, ಕುಡಿವುದೆಲ್ಲ ಸುರೆ.
ಹುಸಿಯೆಂಬುದೆ ಹೊಲೆ, ಶಿವಭಕ್ತಂಗೆ ಹುಸಿಯೆಂಬುದುಂಟೆ ಅಯ್ಯಾ ?
ಹುಸಿಯನಾಡಿ ಲಿಂಗವ ಪೂಜಿಸಿದಡೆ ಹೊಳ್ಳ ಬಿತ್ತಿ ಫಲವನರಸುವಂತೆ,
388
ಸಟೆ ಹಿರಿದಾಯಿತ್ತು ಇನ್ನೇವೆನಿನ್ನೇವೆ.
ದಿಟ ಕಿಱಿದಾಯಿತ್ತು ಇನ್ನೇವೆನಿನ್ನೇವೆ.
ಡಂಬಕ ಮಿಗಿಲಾಯಿತ್ತು ಇನ್ನೇವೆನಿನ್ನೇವೆ.
ನಂಬುಗೆಯೆಯ್ದದಿನ್ನೇವೆನಿನ್ನೇವೆ.
ಆಮಿಷ ಘನವಾಯತ್ತಿನ್ನೇವೆನಿನ್ನೇವೆ.
ತಾಮಸ ಘನವಾಯಿತ್ತಿನ್ನೇವೆನಿನ್ನೇವೆ.
ಚೆನ್ನಮಲ್ಲಿಕಾರ್ಜುನಯ್ಯಾ ಭಕ್ತಿಯೆನ್ನಲ್ಲಿಲ್ಲ ಇನ್ನೇವೆನಿನ್ನೇವೆ.
389
ಸತ್ತ ಹೆಣ ಕೂಗಿದುದುಂಟು,
ಬೈತಿಟ್ಟ ಬಯಕೆ ಕರೆದುದುಂಟು,
ಹೆಪ್ಪಿಟ್ಟ ಹಾಲು ಗಟ್ಟಿಗೊಂಡು ಸಿಹಿಯಾದುದುಂಟು.
ಇದ ನಿಶ್ಚೈಸಿ ನೋಡಿ ಚೆನ್ನಮಲ್ಲಿಕಾರ್ಜುನದೇವರಲ್ಲಿ.
390
ಸತ್ಯ ಸದ್ಭಕ್ತರ ಸಂಭಾಷಣೆ ನುಡಿಗಡಣವೆಂಬುದು
ನಿಚ್ಚಲೊಂದು ಉಪದೇಶ ಮಂತ್ರವ ಕಲಿತಂತೆ.
ಬಚ್ಚಬಱಿಯ ಭವಿಗಳ ಸಂಗದಲ್ಲಿದ್ದರೆ
ಕಿಚ್ಚಿನೊಳಗೆ ಬಿದ್ದ ಕೀಡೆಯಂತಪ್ಪುದಯ್ಯ.
ಸುಚಿತ್ತದಿಂದ ನಿಮ್ಮ ಸದ್ಭಕ್ತರ ಸಂಗದಲ್ಲಿರಿಸದಿರ್ದಡೆ ನಾನಿನ್ನೆತ್ತ ಸಾರುವೆನು ಹೇಳಾ
ಚೆನ್ನಮಲ್ಲಿಕಾರ್ಜುನಾ ?
391
ಸತ್ತಾದಡೆ ಶರೀರಂ ಪೋದಡೆ ಪೋಗಲಿ,
ಲೋಕದ ಗಂಡರನೊಲ್ಲೆ ;
ಲೋಕದ ಹೆಂಡಿರು ಬೇಕಾದೊಡೆ ಮಾಡಿಕೊಳ್ಳಲೆ ;
ಉರಿಯದಿರು ಉರಿಯದಿರು ಉರಿಯದಿರು.
ಚೆನ್ನಮಲ್ಲಿಕಾರ್ಜುನನಲ್ಲದೆ
ಲೋಕದ ಗಂಡರು ಎನಗೆ ನೆನೆಯಲು ಬಾರದು, ಸೋಂಕಲಿ ಬಾರದು, ಅಲ್ಲದ ಮೋರೆ ಕಂಡಣ್ಣ.
392
ಸತಿ ಎಂಬುದು ಮಾಟ, ಪತಿಯೆಂಬುದು ಮಾಟ,
ತನುವೆಂಬುದು ಮಾಯೆ, ಮನವೆಂಬುದು ಮಾಯೆ,

Downloaded from: **http://www.lingayatreligion.com**

ಸುಖವೆಂಬುದು ಮಾಯೆ,
ಚೆನ್ನಮಲ್ಲಿಕಾರ್ಜುನನೆನಗೆ ಕೈಹಿಡಿದ ಗಂಡನಲ್ಲದೆ ಮಿಕ್ಕಿನವರೆಲ್ಲರೂ ಮೂಗಿಲ್ಲದ ಬಣ್ಣದ ಬೊಂಬೆಗಳು ಕಾಣಯ್ಯಾ.
393
ಸದ್ಗುರು ಸ್ವಾಮಿ ಶಿಷ್ಯಂಗೆ ಅನುಗ್ರಹವ ಮಾಡುವಲ್ಲಿ
ತಚ್ಛಿಷ್ಯನ ಮಸ್ತಕದ ಮೇಲೆ ತನ್ನ ಹಸ್ತವನಿರಿಸಿದಡೆ
ಲೋಹದ ಮೇಲೆ ಪರುಷ ಬಿದ್ದಂತಾಯಿತ್ತಯ್ಯಾ.
ಒಪ್ಪುವ ಶ್ರೀ ವಿಭೂತಿಯ ನೊಸಲಿಂಗೆ ಪಟ್ಟವಕಟ್ಟಿದಡೆ
ಮುಕ್ತಿರಾಜ್ಯದ ಒಡೆತನಕ್ಕೆ ಪಟ್ಟವಕಟ್ಟಿದಂತಾಯಿತ್ತಯ್ಯಾ.
ಸದ್ಯೋಜಾತ ವಾಮದೇವ ಅಘೋರ ತತ್ಪುರುಷ ಈಶಾನವೆಂಬ
ಪಂಚಕಳಶದಭಿಷೇಕವ ಮಾಡಿಸಲು,
ಶಿವನ ಕರುಣಾಮೃತದ ಸೋನೆ ಸುರಿದಂತಾಯಿತ್ತಯ್ಯಾ.
ನೆರೆದ ಶಿವಗಣಂಗಳ ಮಧ್ಯದಲ್ಲಿ
ಮಹಾಲಿಂಗವನು ಕರತಳಾಮಳಕವಾಗಿ ಶಿಷ್ಯನ ಕರಸ್ಥಲಕ್ಕೆ ಇತ್ತು,
ಅಂಗದಲ್ಲಿ ಪ್ರತಿಷ್ಠಿಸಿ, ಪ್ರಣವಪಂಚಾಕ್ಷರಿಯುಪದೇಶವ
ಕರ್ಣದಲ್ಲಿ ಹೇಳಿ, ಕಂಕಣವ ಕಟ್ಟಿದಲ್ಲಿ,
ಕಾಯವೆ ಕೈಲಾಸವಾಯಿತ್ತು ;
ಪ್ರಾಣವೆ ಪಂಚಬ್ರಹ್ಮಮಯಲಿಂಗವಾಯಿತ್ತು.
ಇಂತು ಮುಂದ ತೋರಿ ಹಿಂದ ಬಿಡಿಸಿದ
ಶ್ರೀಗುರುವಿನ ಸಾನ್ನಿಧ್ಯದಿಂದಾನು ಬದುಕಿದೆನಯ್ಯಾ ಚೆನ್ನಮಲ್ಲಿಕಾರ್ಜುನಾ.
394
ಸಪ್ತಧಾತುಗಳಿಂದ ಬಳಸಲ್ಪಟ್ಟ ಈ ಶರೀರವೆ
ಶಿವನ ಪಟ್ಟಣವೆಂದು ಹೇಳಲ್ಪಟ್ಟಿತ್ತು.
ಈ ಪಿಂಡವೆಂಬ ಪಟ್ಟಣದಲ್ಲಿ
ಸೂಕ್ಷ್ಮವಾದಂಥಧಾರಾಕಾಶದಿಂದ ಮನೋಹರವಾಗಿದ್ದ
ಹೃದಯಕಮಲವೆ ಅಂತಃಪುರವು.
ಅಲ್ಲಿ ನಿತ್ಯಪರಿಪೂರ್ಣತ್ವದಿಂದ ಸಿದ್ಧನಾಗಿ ಸಚ್ಚಿದಾನಂದವೇ
ಕುರುಹಾಗುಳ್ಳ ಪರಮಶಿವನು ಜಲದಲ್ಲಿ ತೋರುತ್ತಿರ್ದ
ಆಕಾಶದೋಪಾದಿಯಲ್ಲಿ ಪ್ರತ್ಯಕ್ಷವಾಗಿ
ಪ್ರಕಾಶವೇ ಸ್ವರೂಪವಾಗುಳ್ಳಾತನಾಗಿ ಇರುತಿರ್ದನು.
ಆ ಜಲಮಧ್ಯದಲ್ಲಿಯ ಆಕಾಶ ಬಿಂಬದಲ್ಲಿರುತಿರ್ದ
ಘಟಾಕಾಶದೋಪಾದಿಯಲ್ಲಿ
[ಅ]ಖಂಡಿತನಾಗಿರ್ದ ಚಿದ್ರೂಪನಾದ ಶಿವನನು ಭಾವಿಸುವುದಯ್ಯ ಶ್ರೀ ಚೆನ್ನಮಲ್ಲಿಕಾರ್ಜುನದೇವಾ.
395
ಸರ್ಪನ ಬಾಯ ಕಪ್ಪೆ ನೊಣಕ್ಕೆ ಹಾರುವಂತೆ
ಆಪ್ಯಾಯನ ಬಿಡದು.
ಕಾಯವರ್ಪಿತವೆಂಬ ಹುಸಿಯ ನೋಡಾ.
ನಾನು ಭಕ್ತಳೆಂಬ ನಾಚಿಕೆಯ ನೋಡಾ.

Downloaded from: **http://www.lingayatreligion.com**

ನಾನು ಯುಕ್ತಳೆಂಬ ಹೇಸಿಕೆಯ ನೋಡಾ.
ಓಗರವಿನ್ನಾಗದು, ಪ್ರಸಾದ ಮುನ್ನಿಲ್ಲ ;
ಚೆನ್ನಮಲ್ಲಿಕಾರ್ಜುನಯ್ಯ ಉಪಚಾರದರ್ಪಿತವನವಗಡಿಸಿ ಕಳೆವ
396
ಸಾಕ್ಷಿ ಸತ್ತಿತ್ತು, ಪತ್ರ ಬೆಂದಿತ್ತು, ಲೆಕ್ಕ ತುಂಬಿತ್ತು,
ಜೀವ ಜೀವಿತದ ಆಸೆ ನಿಂದುದು, ಭಾಷೆ ಹೋಯಿತ್ತು,
ದೇಶವೆಲ್ಲರಿಯೆ ಎನ್ನ ದೇವ ಚೆನ್ನಮಲ್ಲಿಕಾರ್ಜುನನ ನಂಬಿ ಹಂಬಲ ಮರೆದೆನಾಗಿ.
397
ಸಾವಿರ ಹೊನ್ನಿಂಗೆ ಸಾದಕೊಂಡು
ಸುಣ್ಣವ ಬೆರಸಿದಂತೆ ಮಾಡಿದೆಯಯ್ಯಾ.
ಮೂರು ಲಕ್ಷದ ಬೆಲೆಗೆ ರತ್ನವ ಕೊಂಡು
ಮಡುವಿನಲ್ಲಿ ಇಟ್ಟಂತೆ ಮಾಡಿದೆಯಯ್ಯಾ.
ಚೆನ್ನಮಲ್ಲಿಕಾರ್ಜುನಯ್ಯಾ,
ಎನ್ನ ಮುಟ್ಟಿ ಪಾವನವ ಮಾಡಿ ಕಷ್ಟಸಂಸಾರಿಗೊಪ್ಪಿಸುವಂತೆ ಮಾಡಿದೆಯಯ್ಯಾ.
398
ಸಾವಿಲ್ಲದ ಕೇಡಿಲ್ಲದ ರೂಹಿಲ್ಲದ ಚೆಲುವಂಗೆ ನಾನೊಲಿದೆ.
ಎಡೆಯಿಲ್ಲದ ಕಡೆಯಿಲ್ಲದ ತೆರಹಿಲ್ಲದ ಕುರುಹಿಲ್ಲದ
ಚೆಲುವಂಗೆ ನಾನೊಲಿದೆ ಎಲೆ ಅವ್ವಗಳಿರಾ ?
ಭವವಿಲ್ಲದ ಭಯವಿಲ್ಲದ ನಿರ್ಭಯ ಚೆಲುವಂಗೊಲಿದೆ ನಾನು.
ಸೀಮೆಯಿಲ್ಲದ ನಿಸ್ಸೀಮಂಗೊಲಿದೆ ನಾನು.
ಚೆನ್ನಮಲ್ಲಿಕಾರ್ಜುನನೆಂಬ ಗಂಡಂಗೆ ಮಿಗೆ ಮಿಗೆ ಒಲಿದೆ ಎಲೆ ಅವ್ವಗಳಿರಾ.

399
ಸುಖದ ಸುಖಿಗಳ ಸಂಭಾಷಣೆಯಿಂದ
ದುಃಖಕ್ಕೆ ವಿಶ್ರಾಮವಾಯಿತ್ತು.
ಭಾವಕ್ಕೆ ತಾರ್ಕಣೆಯಾದಲ್ಲಿ,
ನೆನಹಕ್ಕೆ ವಿಶಾಮವಾಯಿತ್ತು.
ಬೆಚ್ಚು ಬೆರಸಲೊಡನೆ ಮಚ್ಚು ಒಳಕೊಂಡಿತ್ತಯ್ಯಾ,
ಚೆನ್ನಮಲ್ಲಿಕಾರ್ಜುನಯ್ಯಾ ನಿಮ್ಮ ಶರಣರ ಸಂಗದಿಂದ.
400
ಸುಖಸಾರಾಯ ಸುಶೀಲರನುವ ಸುಖಸಾರಾಯರೆ ಬಲ್ಲರು.
ನಿಸ್ಸೀಮರು ನಿಸ್ಸೀಮರು ನೆರೆವಲ್ಲಿ ಪರಮಸುಖಿಗಳ ಬಲ್ಲರು.
ಎನ್ನ ದೇವ ಚೆನ್ನಮಲ್ಲಿಕಾರ್ಜುನಯ್ಯಾ ನಿಮ್ಮ ಲಿಂಗೈಕ್ಯರನುವ ಲಿಂಗೈಕ್ಯರೆ ಬಲ್ಲರು.
401
ಸುಟ್ಟ ಬೂದಿಯೊಳಗೊಂದು ಸುಡದ ಬೂದಿಯ ಕಂಡೆ,
ಆ ಸುಡದ ಬೂದಿಯ ಬೆಟ್ಟವ ಮಾಡಿದಾತನ
ಗುಟ್ಟನಾರು ಕಂಡುದಿಲ್ಲ.
ನಾನು ಆತನನರಿದು ಶರಣೆಂದು ಬದುಕಿದೆ.
ಆ ಬೆಟ್ಟದ ಮೇಲೆ ಅನೇಕ ವಸ್ತುಗಳ ಕಂಡು ಚರಿಸುತ್ತಿದ್ದೇನೆ ಚೆನ್ನಮಲ್ಲಿಕಾರ್ಜುನಾ.
402

Downloaded from: **http://www.lingayatreligion.com**

ಸೂರ್ಯಪ್ರಕಾಶ ಆಕಾಶದ ವಿಸ್ತೀರ್ಣ,
ವಾಯುವಿನ ಚಲನೆಯೆಲ್ಲಾ ಹಗಲಿನ ಪೂಜೆ.
ಚಂದ್ರಪ್ರಕಾಶ ನಕ್ಷತ್ರ ಅಗ್ನಿವಿದ್ಯುತ್ತಾದಿ
ದೀಪ್ತಿಮಯವೆನಿಸಿಪ್ಪವೆಲ್ಲಾ ಇರುಳಿನ ಪೂಜೆ.
ನಿನ್ನ ಪ್ರಕಾಶದಲ್ಲಿ ಎನ್ನ ಮರದಿಪ್ಪೆನಯ್ಯಾ ಚೆನ್ನಮಲ್ಲಿಕಾರ್ಜುನಾ.
403
ಸೆಜ್ಜೆಯನುಪ್ಪರಿಸಿ ಶಿವಲಿಂಗ ಕರಸ್ಥಲಕ್ಕೆ ಬರಲು,
ಪ್ರಜ್ವಲಿಸಿ ತೊಳತೊಳಗಿ ಬೆಳಗುತ್ತಿಹ ಕಾಂತಿಯೊಳು
ಪ್ರಜ್ವಲಿಸಿ, ದೃಷ್ಟಿನಟ್ಟು ಒಜ್ಜರಿಸಿ ಸುರಿವ ಅಶ್ರುಜಲ
ಶಿವಸುಖ ಸಾರಾಯನಲ್ಲಿ ಸಜ್ಜನಸತಿಯ ರತಿಯೊಡಗೂಡಿ ಲಜ್ಜೆಗೆಟ್ಟು ನಿಮ್ಮ
ನೆರೆದೆನು ಚೆನ್ನಮಲ್ಲಿಕಾರ್ಜುನಾ.
404
ಸ್ಥಾನಭೇದ ಸಂಶಯ
ಆಧಾರ ಸ್ವಾದಿಷ್ಟ ಮಣಿಪೂರಕ ಅನಾಹತ ವಿಶುದ್ಧಿ ಆಜ್ಞೆ
ಎಂಬ ಷಟ್ಚಕ್ರಂಗಳ ವರ್ತನೆಯ ನುಡಿದಡೇನು ?
ಆದಿ ಅನಾದಿಯ ಕೇಳಿದಡೇನು ?
ತನ್ನಲ್ಲಿದ್ದುದ ತಾನರಿಯದನ್ನಕ್ಕ
ಉನ್ಮನಿಯ ರಭಸದ ಸಿಂಹಾಸನದ ಮೇಲೆ ಚೆನ್ನಮಲ್ಲಿಕಾರ್ಜುನನ ಭೇದಿಸಲರಿಯರು.
405
ಹಂದಿಯೂ ಮದಕರಿಯೂ ಒಂದೇ ದಾರಿಯಲ್ಲಿ ಸಂಧಿಸಿದಡೆ
ಹಂದಿಗಂಜಿ ಮದಕರಿ ಕೆಲಕ್ಕೆ ಸಾರಿದಡೆ ಈ ಹಂದಿಯದು ಕೇಸರಿಯಪ್ಪುದೆ
ಚೆನ್ನಮಲ್ಲಿಕಾರ್ಜುನಾ ?
406
ಹಗಲಿನ ಕೂಟಕ್ಕೆ ಹೋರಿ ಬೆಂಡಾದೆ ;
ಇರುಳಿನ ಕೂಟದಲ್ಲಿ ಇಂಬರಿದು ಹತ್ತಿದೆ.
ಕನಸಿನಲ್ಲಿ ಮನಸಂಗವಾಗಿ ಮೈಮರೆದಿರ್ದೆ ;
ಮನಸ್ಸಿನಲ್ಲಿ ಮೈಮರೆದು ಒರಗಿದೆ. ಚೆನ್ನಮಲ್ಲಿಕಾರ್ಜುನನ ಕಂಡು ಕಣ್ದೆರೆದೆ.
407
ಹಗಲು ನಾಲ್ಕುಜಾವ ಅಶನಕ್ಕೆ ಕುದಿವರು.
ಇರುಳು ನಾಲ್ಕುಜಾವ ವ್ಯಸನಕ್ಕೆ ಕುದಿವರು.
ಅಗಸ ನೀರೊಳಗಿರ್ದು ಬಾಯಾರಿ ಸತ್ತಂತೆ,
ತಮ್ಮೊಳಗಿರ್ದ ಮಹಾಘನವನರಿಯರು ಚೆನ್ನಮಲ್ಲಿಕಾರ್ಜುನಾ.
408
ಹಗಲು ನಾಲ್ಕುಜಾವ ನಿಮ್ಮ ಕಳವಳದಲ್ಲಿಪ್ಪೆನು.
ಇರುಳು ನಾಲ್ಕುಜಾವ ಲಿಂಗದ ವಿಕಳಾವಸ್ಥೆಯಲ್ಲಿಪ್ಪೆನು.
ಹಗಲಿರುಳು ನಿಮ್ಮ ಹಂಬಲದಲ್ಲಿ ಮೈಮರೆದೊರಗಿಪ್ಪೆನು.
ಚೆನ್ನಮಲ್ಲಿಕಾರ್ಜುನಯ್ಯಾ, ನಿಮ್ಮ ಒಲುಮೆ ನಟ್ಟು ಹಸಿವು ತೃಷೆ ನಿದ್ರೆಯ
ತೊರೆದೆನಯ್ಯಾ
409
ಹಗಲೆನ್ನೆ ಇರುಳೆನ್ನೆ ಉದಯವೆನ್ನೆ ಅಸ್ತಮಾನವೆನ್ನೆ ;

Downloaded from: **http://www.lingayatreligion.com**

ಹಿಂದೆನ್ನ ಮುಂದೆನ್ನ, ನೀನಲ್ಲದೆ ಪೆರತೊಂದಹುದೆನ್ನೆ.
ಮನ ಘನವಾದುದಿಲ್ಲವಯ್ಯಾ.
ಕತ್ತಲೆಯಲ್ಲಿ ಕನ್ನಡಿಯ ನೋಡಿ ಕಳವಳಗೊಂಡೆನಯ್ಯಾ.
ನಿಮ್ಮ ಶರಣ ಬಸವಣ್ಣನ ತೇಜದೊಳಗಲ್ಲದೆ ಆನಿನ್ನೆಂದು ಕಾಂಬೆನು ಹೇಳಾ,
ಚೆನ್ನಮಲ್ಲಿಕಾರ್ಜುನಾ.
410
ಹಣ್ಣು ಮೆದ್ದ ಬಳಿಕ ಆ ಮರನನಾರು ತರಿದಡೇನು ?
ಹೆಣ್ಣು ಬಿಟ್ಟ ಬಳಿಕ ಆಕೆಯನಾರು ಕೂಡಿದಡೇನು ?
ಮಣ್ಣು ಬಿಟ್ಟ ಬಳಿಕ ಆ ಕೆಯ್ಯನಾರು ಉತ್ತಡೇನು ?
ಚೆನ್ನ ಮಲ್ಲಿಕಾರ್ಜುನನರಿಯದ ಬಳಿಕ ಆ ಕಾಯವ ನಾಯಿ ತಿಂದಡೇನು, ನೀರು
ಕುಡಿದಡೇನು?
411
ಹರನೆ ನೀನೆನಗೆ ಗಂಡನಾಗಬೇಕೆಂದು
ಅನಂತಕಾಲ ತಪಸ್ಸಿದ್ದೆ ನೋಡಾ.
ಹಸೆಯಮೇಲಣ ಮಾತ ಬೆಸಗೊಳಲಟ್ಟಿದಡೆ,
ಶಶಿಧರನ ಹತ್ತಿರಕೆ ಕಳುಹಿದರೆಮ್ಮವರು.
ಭಸ್ಮವನೆ ಹೂಸಿ, ಕಂಕಣವನೆ ಕಟ್ಟಿದರು ಚೆನ್ನಮಲ್ಲಿಕಾರ್ಜುನ ತನಗೆ
ನಾನಾಗಬೇಕೆಂದ.
412
ಹರಿಯ ನುಂಗಿತ್ತು ಮಾಯೆ,
ಅಜನ ನುಂಗಿತ್ತು ಮಾಯೆ
ಇಂದ್ರನ ನುಂಗಿತ್ತು ಮಾಯೆ,
ಚಂದ್ರನ ನುಂಗಿತ್ತು ಮಾಯೆ
ಬಲ್ಲೆನೆಂಬ ಬಲುಗೈಯರ ನುಂಗಿತ್ತು ಮಾಯೆ,
ಅರಿಯೆನೆಂಬ ಅಜ್ಞಾನಿಗಳ ನುಂಗಿತ್ತು ಮಾಯೆ,
ಈರೇಳುಭುವನವನಾರಡಿಗೊಂಡಿತ್ತು ಮಾಯೆ,
ಚೆನ್ನಮಲ್ಲಿಕಾರ್ಜುನಯ್ಯಾ, ಎನ್ನ ಮಾಯವ ಮಾಣಿಸಾ ಕರುಣಿ.
413
ಹಸಿವಾದಡೆ ಊರೊಳಗೆ ಭಿಕ್ಷಾನ್ನಗಳುಂಟು.
ತೃಷೆಯಾದಡೆ ಕೆರೆ ಹಳ್ಳ ಬಾವಿಗಳುಂಟು.
ಅಂಗಶೀತಕ್ಕೆ ಬೀಸಾಟ ಅರಿವೆಗಳುಂಟು.
ಶಯನಕ್ಕೆ ಹಾಳು ದೇಗುಲಗಳುಂಟು.
ಚೆನ್ನಮಲ್ಲಿಕಾರ್ಜುನಯ್ಯಾ, ಆತ್ಮಸಂಗಾತಕ್ಕೆ ನೀನೆನಗುಂಟು.
414
ಹಸಿವು ತೃಷೆಯಾದಿಗಳು ಎನ್ನೊಳಗಾದ ಬಳಿಕ,
ವಿಷಯ ವಿಕಾರವೆನ್ನನಿರಿಸಿ ಹೋದವು ಕಾಣಾ ತಂದೆ.
ಅದೇ ಕಾರಣ ನೀವು ಅರಸಿಕೊಂಡು ಬಂದಿರಣ್ಣ.
ನೀವು ಅರಸುವ ಅರಕೆ - ಎನ್ನೊಳಗಾಯಿತ್ತು.
ಎನ್ನ ದೇವ ಚೆನ್ನಮಲ್ಲಿಕಾರ್ಜುನ

Downloaded from: **http://www.lingayatreligion.com**

ತನ್ನೊಳಗೆನ್ನನಿಂಬಿಟ್ಟುಕೊಂಡನಾಗಿ ಇನ್ನು ನಿನ್ನ ತಂದೆ ತಾಯಿತನವನೊಲ್ಲೆ ನಾನು.
415
ಹಸಿವೆ ನೀನು ನಿಲ್ಲು ನಿಲ್ಲು
ತೃಷೆಯೆ ನೀನು ನಿಲ್ಲು ನಿಲ್ಲು
ನಿದ್ರೆಯೆ ನೀನು ನಿಲ್ಲು ನಿಲ್ಲು
ಕಾಮವೆ ನೀನು ನಿಲ್ಲು ನಿಲ್ಲು
ಕ್ರೋಧವೆ ನೀನು ನಿಲ್ಲು ನಿಲ್ಲು
ಮೋಹವೆ ನೀನು ನಿಲ್ಲು ನಿಲ್ಲು
ಲೋಭವೆ ನೀನು ನಿಲ್ಲು ನಿಲ್ಲು
ಮದವೆ ನೀನು ನಿಲ್ಲು ನಿಲ್ಲು
ಮಚ್ಚರವೆ ನೀನು ನಿಲ್ಲು ನಿಲ್ಲು
ಸಚರಾಚರವೆ ನೀನು ನಿಲ್ಲು ನಿಲ್ಲು
ನಾನು ಚೆನ್ನಮಲ್ಲಿಕಾರ್ಜುನದೇವರ ಅವಸರದ ಓಲೆಯನೊಯ್ಯುತ್ತಲಿದ್ದೇನೆ ಶರಣಾರ್ಥಿ.
416
ಹಸೆ ಹಂದರವನಿಕ್ಕಿ, ತೊಂಡಿಲ ಬಾಸಿಗವ ಕಟ್ಟಿ,
ಮದುವೆಯಾದೆನಲ್ಲಾ ನಾನು
ಮಚ್ಚಿ ಮದುವೆಯಾದೆನಲ್ಲಾ ನಾನು.
ಗಂಡನೆ, ನಿನಗೋತು ಕೈವಿಡಿದವಳನು
ಮತ್ತೊಬ್ಬರು ಕೈವಿಡಿದರೆ
ನಿನ್ನಭಿಮಾನವ ಪರರೆಳದೊಯಿದಂತೆ ಕಾಣಾ ಚೆನ್ನಮಲ್ಲಿಕಾರ್ಜುನಾ.
417
ಹಾಲಹಿಡಿದು ಬೆಣ್ಣೆಯನರಸಲುಂಟೆ ?
ಲಿಂಗವಹಿಡಿದು ಪುಣ್ಯತೀರ್ಥಕ್ಕೆ ಹೋಗಲುಂಟೆ ?
ಲಿಂಗದ ಪಾದತೀರ್ಥ ಪ್ರಸಾದವ ಕೊಂಡು
ಅನ್ಯಬೋಧೆ ಅನ್ಯಶಾಸ್ತ್ರಕ್ಕೆ ಹಾರೈಸಲೇತಕ್ಕೆ ?
ಇಷ್ಟಲಿಂಗವಿದ್ದಂತೆ ಸ್ಥಾವರಲಿಂಗಕ್ಕೆ ಶರಣೆಂದೆನಾದಡೆ
ತಡೆಯದೆ ಹುಟ್ಟಿಸುವನು ಶ್ವಾನನ ಗರ್ಭದಲ್ಲಿ.
ಅದೆಂತೆಂದಡೆ ಶಿವಧರ್ಮಪುರಾಣದಲ್ಲಿ
'ಇಷ್ಟಲಿಂಗಮವಿಶ್ವಸ್ಯ ತೀರ್ಥಲಿಂಗಸ್ಯ ಪೂಜಕಃ
ಶ್ವಾನಯೋನಿಶತಂ ಗತ್ವಾ ಚಾಂಡಾಲಗೃಹಮಾಚರೇತ್' ||
ಎಂದುದಾಗಿ,
ಇದನರಿದು ಗುರು ಕೊಟ್ಟ ಲಿಂಗದಲ್ಲಿಯೆ ಎಲ್ಲಾ ತೀರ್ಥಂಗಳೂ
ಎಲ್ಲಾ ಕ್ಷೇತ್ರಂಗಳೂ ಇದ್ದಾವೆಂದು ಭಾವಿಸಿ ಮುಕ್ತರಪ್ಪುದಯ್ಯಾ.
ಇಂತಲ್ಲದೆ ಗುರು ಕೊಟ್ಟ ಲಿಂಗವ ಕಿರಿದುಮಾಡಿ,
ತೀರ್ಥಲಿಂಗವ ಹಿರಿದುಮಾಡಿ ಹೋದಾತಂಗೆ ಅಘೋರ ನರಕ ತಪ್ಪದು ಕಾಣಾ ಚೆನ್ನಮಲ್ಲಿಕಾರ್ಜುನಾ.
418

Downloaded from: **http://www.lingayatreligion.com**

ಹಾಲು ತುಪ್ಪವ ನುಂಗಿ ಬೇರಾಗಬಲ್ಲುದೆ ?
ಸೂರ್ಯಕಾಂತದ ಅಗ್ನಿಯನಾರು ಭೇದಿಸಬಲ್ಲರು ?
ಅಪಾರಮಹಿಮ ಚೆನ್ನಮಲ್ಲಿಕಾರ್ಜುನಾ,
ನೀನೆನ್ನೊಳಡಗಿಪ್ಪ ಪರಿಯ ಬೇರಿಲ್ಲದೆ ಕಂಡು ಕಣ್ದೆರೆದೆನು.
419
ಹಾವಿನ ಹಲ್ಲ ಕಳೆದು ಹಾವನಾಡಿಸಬಲ್ಲಡೆ
ಹಾವಿನ ಸಂಗವೆ ಲೇಸು ಕಂಡಯ್ಯಾ.
ಕಾಯದ ಸಂಗವ ವಿವರಿಸಬಲ್ಲಡೆ
ಕಾಯದ ಸಂಗವೆ ಲೇಸು ಕಂಡಯ್ಯಾ.
ತಾಯಿ ರಕ್ಕಸಿಯಾದಂತೆ ಕಾಯವಿಕಾರವು.
ಚೆನ್ನಮಲ್ಲಿಕಾರ್ಜುನಯ್ಯಾ, ನೀನೊಲಿದವರು ಕಾಯಗೊಂಡಿದ್ದರೆನಬೇಡ.
420
ಹಿಂಡನಗಲಿ ಹಿಡಿವಡೆದ ಕುಂಜರ
ತನ್ನ ವಿಂಧ್ಯವ ನೆನೆವಂತೆ ನೆನೆವೆನಯ್ಯಾ.
ಬಂಧನಕ್ಕೆ ಬಂದ ಗಿಳಿ
ತನ್ನ ಬಂಧುವ ನೆನೆವಂತೆ ನೆನೆವೆನಯ್ಯಾ
ಕಂದಾ, ನೀನಿತ್ತ ಬಾ ಎಂದು ನೀವು ನಿಮ್ಮಂದವ ತೋರಯ್ಯಾ,
ಚೆನ್ನಮಲ್ಲಿಕಾರ್ಜುನಾ.
421
ಹಿಂದಣ ಹಳ್ಳ, ಮುಂದಣ ತೊರೆ,
ಸಲ್ಲುವ ಪರಿಯೆಂತು ಹೇಳಾ ?
ಹಿಂದಣ ಕೆರೆ, ಮುಂದಣ ಬಲೆ,
ಹದುಳವಿನ್ನೆಲ್ಲಿಯದು ಹೇಳಾ ?
ನೀನಿಕ್ಕಿದ ಮಾಯೆ ಕೊಲುತಿಪ್ಪುದು ಕಾಯಯ್ಯಾ, ಕಾಯಯ್ಯಾ
ಚೆನ್ನಮಲ್ಲಿಕಾರ್ಜುನಾ.
422
ಹಿಡಿಯದಿರು ತಡೆಯದಿರು ಬಿಡುಬಿಡು ಕೈಯಸೆರಗ.
ಭಾಷೆಯ ಬರೆದುಕೊಟ್ಟ ಸತ್ಯಕ್ಕೆ ತಪ್ಪಿದರೆ
ಅಘೋರ ನರಕವೆಂದರಿಯಾ ?
ಚೆನ್ನಮಲ್ಲಿಕಾರ್ಜುನನ ಕೈವಿಡಿದ ಸತಿಯ ಮುಟ್ಟಿದರೆ ಕೆಡುವೆ ಕಾಣಾ ಮರುಳೆ.
423
ಹಿಡಿವೆನೆಂದಡೆ ಹಿಡಿಗೆ ಬಾರನವ್ವಾ.
ತಡೆವೆನೆಂದಡೆ ಮೀರಿ ಹೋಹನವ್ವಾ.
ಒಪ್ಪಚ್ಚಿ ಅಗಲಿದಡೆ ಕಳವಳಗೊಂಡೆ.
ಚೆನ್ನಮಲ್ಲಿಕಾರ್ಜುನನ ಕಾಣದೆ ಆನಾರೆಂದರಿಯೆ ಕೇಳಾ, ತಾಯೆ.
424
ಹಿತವಿದೆ ಸಕಲಲೋಕದ ಜನಕ್ಕೆ,
ಮತವಿದೆ ಶ್ರುತಿಪುರಾಣಾಗಮದ,
ಗತಿಯಿದೆ, ಭಕುತಿಯ ಬೆಳಗಿನುನ್ನತಿಯಿದೆ.

Downloaded from: **http://www.lingayatreligion.com**

ಶ್ರೀ ವಿಭೂತಿಯ ಧರಿಸಿದಡೆ ಭವವ ಪರಿವುದು
ದುರಿತಸಂಕುಳವನೊರಸುವುದು
ಹರನ ಸಾಲೋಕ್ಯ ಸಾಮೀಪ್ಯ ಸಾರೂಪ್ಯ ಸಾಯುಜ್ಯದಲ್ಲಿರಿಸುವುದು.
ನಿರುತವಿದು ನಂಬು ಮನುಜಾ,
ಜನನಭೀತಿ ಈ ವಿಭೂತಿ.
ಮರಣಭಯದಿಂದ ಅಗಸ್ತ್ಯ ಕಾಶ್ಯಪ ಜಮದಗ್ನಿಗಳು
ಧರಿಸಿದರಂದು ನೋಡಾ. ಶ್ರೀಶೈಲ ಚೆನ್ನಮಲ್ಲಿಕಾರ್ಜುನನ ಒಲಿವ ವಿಭೂತಿ.
425
ಹುಟ್ಟದ ಯೋನಿಯಲ್ಲಿ ಹುಟ್ಟಿಸಿ,
ಬಾರದ ಭವಂಗಳಲ್ಲಿ ಬರಿಸಿ,
ಉಣ್ಣದ ಊಟವನುಣಿಸಿ ವಿಧಿಗೊಳಗಾಗಿಸುವ ಕೇಳಿರಣ್ಣಾ.
ತನ್ನವರೆಂದಡೆ ಮನ್ನಿಸುವನೆ
ಹತ್ತರಿದ್ದ ಭೃಂಗಿಯ ಚರ್ಮವ ಕಿತ್ತೀಡಾಡಿಸಿದವನು
ಮತ್ತೆ ಕೆಲಂಬರ ಬಲ್ಲನೆ?
ಇದನರಿತು ಬಿಡದಿರು ಬಿಡದಿರು. ಚೆನ್ನಮಲ್ಲಿಕಾರ್ಜುನನಿಂತಹ ಸಿತಗನವ್ವಾ.
426
ಹುಟ್ಟಿದೆ ಶ್ರೀಗುರುವಿನ ಹಸ್ತದಲ್ಲಿ,
ಬೆಳೆದೆನು ಅಸಂಖ್ಯಾತರ ಕರುಣದೊಳಗೆ.
ಭಾವವೆಂಬ ಹಾಲು, ಸುಜ್ಞಾನವೆಂಬ ತುಪ್ಪ,
ಪರಮಾರ್ಥವೆಂಬ ಸಕ್ಕರೆಯನಿಕ್ಕಿದರು ನೋಡಾ.
ಇಂತಪ್ಪ ತ್ರಿವಿಧಾಮೃತವನು ದಣಿಯಲೆರೆದು ಸಲಹಿದಿರೆನ್ನ.
ವಿವಾಹವ ಮಾಡಿದಿರಿ, ಸಯವಪ್ಪ ಗಂಡಂಗೆ ಕೊಟ್ಟಿರಿ,
ಕೊಟ್ಟ ಮನೆಗೆ ಕಳುಹಲೆಂದು
ಅಸಂಖ್ಯಾತರೆಲ್ಲರೂ ನೆರೆದು ಬಂದಿರಿ.
ಬಸವಣ್ಣ ಮೆಚ್ಚಲು ಒಗತನವ ಮಾಡುವೆ.
ಚೆನ್ನಮಲ್ಲಿಕಾರ್ಜುನನ ಕೈವಿಡಿದು
ನಿಮ್ಮ ತಲೆಗೆ ಹೂವ ತಹೆನಲ್ಲದೆ ಹುಲ್ಲ ತಾರೆನು.
ಅವಧರಿಸಿ, ನಿಮ್ಮಡಿಗಳೆಲ್ಲರೂ ಮರಳಿ ಬಿಯಂಗೈವುದು, ಶರಣಾರ್ಥಿ.
427
ಹುಟ್ಟು ಹೊರೆಯ ಕಟ್ಟಳೆಯ ಕಳೆದನವ್ವಾ.
ಹೊನ್ನು ಮಣ್ಣಿನ ಮಾಯೆಯ ಮಾಣಿಸಿದನವ್ವಾ.
ಎನ್ನ ತನುವಿನ ಲಜ್ಜೆಯನಿಳುಹಿ, ಎನ್ನ ಮನದ ಕತ್ತಲೆಯ ಕಳೆದ
ಚೆನ್ನಮಲ್ಲಿಕಾರ್ಜುನಯ್ಯನೊಳಗಾದವಳ ಏನೆಂದು ನುಡಿಸುವಿರವ್ವಾ ?
428
ಹೂವು ಕಂದಿದಲ್ಲಿ ಪರಿಮಳವನರಸುವರೆ ?
ಕಂದನಲ್ಲಿ ಕುಂದನರಸುವರೆ ?
ಎಲೆ ದೇವ, ಸ್ನೇಹವಿದ್ದ ಠಾವಿನೊಳು ದ್ರೋಹವಾದ ಬಳಿಕ
ಮರಳಿ ಸದ್ಗುಣವನರಸುವರೆ ?
ಎಲೆ ದೇವ, ಬೆಂದ ಹುಣ್ಣಿಗೆ ಬೇಗೆಯನಿಕ್ಕುವರೆ ?

Downloaded from: **http://www.lingayatreligion.com**

ಕೇಳಯ್ಯಾ, ಶ್ರೀಶೈಲ ಚೆನ್ನಮಲ್ಲಿಕಾರ್ಜುನಾ ಹೊಳೆಯಿಳಿದ ಬಳಿಕ
ಅಂಬಿಗಂಗೇನುಂಟು ?
429
ಹೆಣ್ಣು ಹೆಣ್ಣಾದಡೆ ಗಂಡಿನಸೂತಕ.
ಗಂಡು ಗಂಡಾದಡೆ ಹೆಣ್ಣಿನಸೂತಕ.
ಮನದಸೂತಕ ಹಿಂಗಿದಡೆ
ತನುವಿನ ಸೂತಕಕ್ಕೆ ತೆರಹುಂಟೆ ?
ಅಯ್ಯಾ, ಮೊದಲಿಲ್ಲದ ಸೂತಕಕ್ಕೆ ಮರುಳಾಯಿತ್ತು ಜಗವೆಲ್ಲ.
ಎನ್ನ ದೇವ ಚೆನ್ನಮಲ್ಲಿಕಾರ್ಜುನನೆಂಬ ಗರುವಂಗೆ ಜಗವೆಲ್ಲ ಹೆಣ್ಣು ನೋಡಾ
ಅಯ್ಯಾ.
430
ಹೆದರದಿರು ಮನವೆ, ಬೆದರದಿರು ತನುವೆ,
ನಿಜವನರಿತು ನಿಶ್ಚಿಂತನಾಗಿರು.
ಫಲವಾದ ಮರನ ಕಲ್ಲಲಿ ಇಡುವುದೊಂದು ಕೋಟಿ,
ಎಲವದಮರನ ಇಡುವರೊಬ್ಬರ ಕಾಣೆ.
ಭಕ್ತಿಯುಳ್ಳವರ ಬೈವರೊಂದುಕೋಟಿ,
ಭಕ್ತಿಯಿಲ್ಲದವರ ಬೈವರೊಬ್ಬರ ಕಾಣೆ.
ನಿಮ್ಮ ಶರಣರ ನುಡಿಯೆ ಎನಗೆ ಗತಿ, ಸೋಪಾನ, ಚೆನ್ನಮಲ್ಲಿಕಾರ್ಜುನಾ.
431
ಹೊನ್ನು ಮುರಿದಡೆ ಬೆಸಸಬಹುದಲ್ಲದೆ,
ಮುತ್ತು ಒಡೆದಡೆ ಬೆಸಸಬಹುದೆ ?
ಮನ ಮುರಿದಡೆ ಮನಕೊಬ್ಬರೊಡೆಯರುಂಟೆ ?
ಚೆನ್ನಮಲ್ಲಿಕಾರ್ಜುನ ಸಾಕ್ಷಿಯಾಗಿ ಬೇಟವುಳ್ಳಲ್ಲಿ ಬೆರೆಸೆ ಘನ.
432
ಹೊಳೆವ ಕೆಂಜೆಡೆಗಳ, ಮಣಿಮಕುಟದ, ಒಪ್ಪುವ ಸುಲಿಪಲ್ಗಳ,
ನಗೆಮೊಗದ, ಕಂಗಳ ಕಾಂತಿಯ,
ಈರೇಳುಭುವನವ ಬೆಳಗುವ ದಿವ್ಯಸ್ವರೂಪನ ಕಂಡೆ ನಾನು.
ಕಂಡೆನ್ನ ಕಂಗಳ ಬರ ಹಿಂಗಿತ್ತೆನಗೆ.
ಗಂಡಗಂಡರೆಲ್ಲರ ಹೆಂಡಿರಾಗಿ ಆಳುವ
ಗರುವನ ಕಂಡೆ ನಾನು.
ಜಗದಾದಿ ಶಕ್ತಿಯೊಳು ಬೆರಸಿ ಮಾತನಾಡುವ ಪರಮಗುರು ಚೆನ್ನಮಲ್ಲಿಕಾರ್ಜುನನ
ನಿಲವ ಕಂಡು ಬದುಕಿದೆನು
433
ಹೊಳೆ ಕೆಂಜೆಡೆಯ ಮೇಲೆ ಎಳೆವೆಳದಿಂಗಳು,
ಫಣಿಮಣಿ ಕರ್ಣಕುಂಡಲ ನೋಡವ್ವಾ ;
ರುಂಡಮಾಲೆಯ ಕೊರಳವನ ಕಂಡಡೆ ಒಮ್ಮೆ ಬರಹೇಳವ್ವಾ ?
ಗೋವಿಂದನ ನಯನ ಉಂಗುಟದ ಮೇಲಿಪ್ಪುದು, ಚೆನ್ನಮಲ್ಲಿಕಾರ್ಜುನದೇವನ
ಕುರುಹವ್ವಾ.
434

Downloaded from: **http://www.lingayatreligion.com**

ಹೋದೆನೂರಿಗೆ, ಇದ್ದೆ ನಾನಲ್ಲಿ,
ಹೋದಡೆ ಮರಳಿತ್ತ ಬಾರೆನವ್ವಾ.
ಐವರು ಭಾವದಿರು, ಐವರು ನಗೆವೆಣ್ಣು
ಈ ಐವರು ಕೂಡಿ ಎನ್ನ ಕಾಡುವರು
ಬೈವರು ಹೊಯ್ವರು ಮಿಗೆ ಕೇಡನುಡಿವರು.
ಇವರೈವರ ಕಾಟಕ್ಕೆ ನಾನಿನ್ನಾರೆ ಕಂಡವ್ವಾ.
ಅತ್ತೆ ಮಾವ ಮೈದುನ ನಗೆವೆಣ್ಣು,
ಚಿತ್ತವನೊರೆದು ನೋಡುವ ಗಂಡ.
ಕತ್ತಲೆಯಾದಡೆ ಕರೆದನ್ನುವ ನೀಡವ್ವಾ,
ಅತ್ತಿಗೆ ಹತ್ತೆಂಟ ನುಡಿವಳಮ್ಮಮ್ಮ ತಾಯೆ.
ಉಪಮಾತೀತರು ಬಂಧುಬಳಗಂಗಳು.
ಶ್ರೀಶೈಲ ಚೆನ್ನಮಲ್ಲಿಕಾರ್ಜುನ ಒಲಿದಡೆ ಮರಳಿ ಬಾರೆನಮ್ಮ ತಾಯೆ.

Reference:

ಸಮಗ್ರ ವಚನ ಸಂಪುಟ -5, (೧೫ ಸಮಗ್ರ ವಚನ ಸಂಪುಟಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು)

Downloaded from: **http://www.lingayatreligion.com**